ಮೈಸೂರು ಮಿತ್ರ

ಮೈಸೂರು-ಮಂಡ್ಯ-ಚಾಮರಾಜನಗರ-ಕೊಡಗು-ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ನವೆಂಬರ್ 27 ಬುಧವಾರ 2024

45

ಸಂಪುಟ: 45 | ಸಂಚಿಕೆ: 220 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695 ಸುದ್ದಿ
ಜಾಹೀರಾತಿಗಾಗಿ-ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಮುಡಾ ನಿವೇಶನ ಹಂಚಿಕೆ ಹಗರಣದ ಸಿಬಿಐ ತನಿಖೆ ಬೇಡಿಕೆ

ಡಿ.10ಕ್ಕೆ ವಿಚಾರಣೆ ಮುಂದೂಡಿದ ಹೈಕೋರ್ಟ್

- ಲೋಕಾಯುಕ್ತ ತನಿಖೆಗೆ ಸ್ನೇಹಮಯಿ ಕೃಷ್ಣ ಆಕ್ಷೇಪ
- ಈ ಸಂಸ್ಥೆ ಸರ್ಕಾರದ ಅಧೀನದಲ್ಲಿ ಬರುವುದರಿಂದ ನಿಷ್ಪಕ್ಷಪಾತ ತನಿಖೆ ಅನುಮಾನ
- ಈ ಮಧ್ಯೆ 'ಸದ್ಯದ ಸ್ಥಿತಿ' ತನಿಖಾ ವರದಿ ಸಲ್ಲಿಸದ ಲೋಕಾಯುಕ್ತ





ಸ್ನೇಹಮಯಿ ಕೃಷ್ಣ



ಬೆಂಗಳೂರು, ನ.26(ಕೆಎಂಶಿ)- **ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ (ಮುಡಾ) ವತಿಯಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಕುಟುಂಬ ಪಡೆದಿರುವ 14 ಬಿಡಿ ನಿವೇಶನ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸುವಂತೆ ಕೋರಿ ಸ್ನೇಹಮಯಿ ಕೃಷ್ಣ ಸಲ್ಲಿಸಿದ್ದ ಅರ್ಜಿ ವಿಚಾರಣೆಯನ್ನು ರಾಜ್ಯ ಹೈಕೋರ್ಟ್ ಡಿಸೆಂಬರ್ 10ಕ್ಕೆ ಮುಂದೂಡಿದೆ.**

ಪ್ರಕರಣ ಮುಂದೂಡಿದ ಹಿನ್ನೆಲೆಯಲ್ಲಿ ಲೋಕಾಯುಕ್ತರ ತನಿಖೆಯ 'ಸದ್ಯದ ಸ್ಥಿತಿ' (ಸ್ಟೇಟಸ್ ರಿಪೋರ್ಟ್) ತನಿಖಾ ವರದಿಯನ್ನು ಇಂದು ಸಲ್ಲಿಸಲಿಲ್ಲ. ಹಗರಣಕ್ಕೆ ಸಂಬಂಧಿಸಿದಂತೆ ಜಮೀನು ಮಾಲೀಕ ದೇವರಾಜ್ ಸಲ್ಲಿಸಿದ್ದ ಎರಡು ಅರ್ಜಿಗಳ ವಿಚಾರಣೆಯನ್ನು ವಿಭಾಗೀಯ ಪೀಠ ಡಿಸೆಂಬರ್ 5ಕ್ಕೆ ಕೈಗೆತ್ತಿಕೊಳ್ಳಲಿದೆ.

ರಾಜ್ಯಪಾಲರ ಪ್ರಾಸಿಕ್ಯೂಷನ್ ಆದೇಶವನ್ನು ನ್ಯಾಯಾಲಯ ಎತ್ತಿಹಿಡಿದಿರುವುದು ಹಾಗೂ ಬಿಡಿ ನಿವೇಶನಗಳಿಗೆ ಸಂಬಂಧಿಸಿದಂತೆ ಲೋಕಾಯುಕ್ತ ತನಿಖೆ ಪ್ರಶ್ನಿಸಿ ದೇವರಾಜು, ವಿಭಾಗೀಯ ಪೀಠದ ಮೊರೆ ಹೋಗಿದ್ದಾರೆ. ಸ್ನೇಹಮಯಿ ಕೃಷ್ಣ ಸಲ್ಲಿಸಿದ್ದ ಅರ್ಜಿ ವಿಚಾರಣೆಯನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಪೀಠ ಕೈಗೆತ್ತಿಕೊಳ್ಳುತ್ತಿದ್ದಂತೆ, ದೇವರಾಜ ಪರ ಹಿರಿಯ ವಕೀಲ ದುಷ್ಯಂತ ದವೆ ಮನವಿ ಮಾಡಿ, ತಮ್ಮ ಎರಡು ಆದೇಶಗಳನ್ನು ಪ್ರಶ್ನಿಸಿ ಮೇಲ್ಮನವಿ ಸಲ್ಲಿಸಿದ್ದೇವೆ. ಆ ಎರಡೂ ಅರ್ಜಿಗಳ ವಿಚಾರಣೆಯನ್ನು ವಿಭಾಗೀಯ ಪೀಠ ಡಿಸೆಂಬರ್ 5ಕ್ಕೆ ಮುಂದೂಡಿದೆ. ಆದ್ದರಿಂದ ಈ ಅರ್ಜಿ ವಿಚಾರಣೆಯನ್ನು ಡಿಸೆಂಬರ್ 9ಕ್ಕೆ ಮುಂದೂಡಲು ಮನವಿ ಮಾಡಿದರು. ಈ ಸಂದರ್ಭದಲ್ಲಿ ಸ್ನೇಹಮಯಿ ಕೃಷ್ಣ ಪರ ವಕೀಲ ಕೆ.ಜಿ.ರಾಘವನ್, ಮೇಲ್ಮನವಿ ಹಿನ್ನೆಲೆಯಲ್ಲಿ ಅರ್ಜಿ ವಿಚಾರಣೆ ಮುಂದೂಡಬಾರದೆಂದು ಮನವಿ ಮಾಡಿದರು. ● 6ನೇ ಪುಟಕ್ಕೆ

ಕೆಟ್ಟವರ ಕೈಗೆ ಸಂವಿಧಾನ ಹೋದರೆ ಕೆಟ್ಟ ಪರಿಣಾಮ

- ಮುಖ್ಯಮಂತ್ರಿ ಸಿದ್ದರಾಮಯ್ಯ ಮನವರಿಕೆ
- ಸಂವಿಧಾನ ವಿರೋಧಿಗಳ ಬಗ್ಗೆ ಎಚ್ಚರವಿರಬೇಕು
- ಸಂವಿಧಾನ ಬದಲಿಸುವ ಪ್ರಯತ್ನ ನಡೆಯುತ್ತಲೇ ಇದೆ



ಬೆಂಗಳೂರಲ್ಲಿ ಮಂಗಳವಾರ ಸಂವಿಧಾನ ಅಂಗೀಕಾರಗೊಂಡ 75ನೇ ವರ್ಷದ ದಿನೋತ್ಸವ ಉದ್ಘಾಟಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು,ನ.26(ಕೆಎಂಶಿ)- ಜಾತಿ ವ್ಯವಸ್ಥೆಯಿಂದ ಅಸಮಾನತೆ-ಮನುಷ್ಯ ತಾರತಮ್ಯ ಸೃಷ್ಟಿಯಾಗಿದೆ. ಸಂವಿಧಾನ ವಿರೋಧಿಗಳು ಮತ್ತು ಮನುಸ್ಮೃತಿ ಕುರಿತು ಎಚ್ಚರ ವಹಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ಕರೆ ನೀಡಿದ್ದಾರೆ.

ಸಂವಿಧಾನ ಅಂಗೀಕಾರಗೊಂಡ 75ನೇ ವರ್ಷದ ದಿನೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ನಾನು ಮುಖ್ಯಮಂತ್ರಿ ಆಗಿದ್ದೇ ಸಂವಿಧಾನ ಬಲದಿಂದ, ವಿಶ್ವದ ದೀರ್ಘಕಾಲದ ಸಂವಿಧಾನ ನಮ್ಮದಾಗಿದೆ. ಸಂವಿಧಾನ ಜಾರಿ ಸಭೆಯಲ್ಲಿ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ನೀಡಿದ ಎಚ್ಚರಿಕೆಯನ್ನು ನಾವ್ಯಾರೂ ಮರೆಯಬಾರದು ಎಂದರು. ಎಷ್ಟೇ ಒಳ್ಳೆ ಸಂವಿಧಾನ ನಮ್ಮದಾಗಿದ್ದರೂ, ಕೆಟ್ಟವರ ಕೈಗೆ ಹೋದರೆ ಪರಿಣಾಮವೂ ಕೆಟ್ಟದಾಗಿರುತ್ತದೆ ಎಂಬ ಎಚ್ಚರಿಕೆ ನೀಡಿದ್ದಾರೆ. ಸಂವಿಧಾನ ಮೌಲ್ಯಗಳನ್ನು ಪಾಲಿಸುವವರ ಕೈಯ್ಯಲ್ಲಿ ಇದ್ದಾಗ ಮಾತ್ರ ಸಾರ್ಥಕತೆ ಬರುತ್ತದೆ ಎಂಬುದು ಡಾ.ಬಾಬಾ ಸಾಹೇಬರ ನಂಬಿಕೆಯಾಗಿತ್ತು. ಸಂವಿಧಾನದ ಮೌಲ್ಯಗಳನ್ನು ವಿರೋಧಿಸುವವರ ಕೈಗೆ ಅಧಿಕಾರ ಹೋಗದಂತೆ ಎಚ್ಚರಿಕೆ ವಹಿಸಬೇಕು. ಆರ್ಥಿಕ, ಸಾಮಾಜಿಕ ಅಸಮಾನತೆ ಸಮಾಜಕ್ಕೆ ಕಾಲಿಡುತ್ತಿದ್ದೇವೆ, ರಾಜಕೀಯ ಸ್ವಾತಂತ್ರ್ಯದ ಜೊತೆಗೆ ಆರ್ಥಿಕ ಸ್ವಾತಂತ್ರ್ಯವನ್ನೂ ಒದಗಿಸಿಕೊಳ್ಳಬೇಕಿದೆ, ಸಂವಿಧಾನ ಅರ್ಥ ಮಾಡಿಕೊಳ್ಳುವುದು, ಪಾಲಿಸುವುದು ಎಂದರೆ ಸಾಮಾಜಿಕ ನ್ಯಾಯ, ಸಮಾನತೆ, ಭ್ರಾತೃತ್ವ ಪಾಲಿಸಬೇಕು.

ದೇಶದಲ್ಲಿ ಸಂವಿಧಾನ ವಿರೋಧಿಗಳೂ ಇದ್ದಾರೆ ಎಂಬ ಎಚ್ಚರಿಕೆ ಇರಬೇಕು, ಸಂವಿಧಾನ ಜಾರಿಗೆ ಹಿಂದೂ ಮಹಾಸಭಾದ ಸಾವರ್ಕರ್, ಗೋಳ್ವಾಲ್ಕರ್ ವಿರೋಧಿಸಿದ್ದರು, ಬಿಜೆಪಿಯ ಮಾತೃ ಪಕ್ಷ ಆರ್‌ಎಸ್‌ಎಸ್ ● 6ನೇ ಪುಟಕ್ಕೆ

ಸಂವಿಧಾನ ರಕ್ಷಣೆ ವಿಷಯದಲ್ಲಿ ಕಾಂಗ್ರೆಸ್‌ನದು ಬರೀ ಕಪಟ ನಾಟಕ

- ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ವಾಗ್ದಾಳಿ
- ಅತೀ ಹೆಚ್ಚು ಬಾರಿ ಸಂವಿಧಾನ ದುರುಪಯೋಗಪಡಿಸಿಕೊಂಡಿದ್ದ ಕಾಂಗ್ರೆಸ್
- ತುರ್ತು ಪರಿಸ್ಥಿತಿ ಹೇರುವ ಹೇಯ ಕೃತ್ಯ ಮಾಡಿದ್ದೇ ಕಾಂಗ್ರೆಸ್



ಬೆಂಗಳೂರಲ್ಲಿ ಮಂಗಳವಾರ ಸಂವಿಧಾನ ಅಂಗೀಕಾರಗೊಂಡ 75ನೇ ವರ್ಷದ ದಿನೋತ್ಸವ ಉದ್ಘಾಟಿಸಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ

ಬೆಂಗಳೂರು,ನ.26(ಕೆಎಂಶಿ)- ಸ್ವಾತಂತ್ರ್ಯ ಬಂದಾಗಿನಿಂದ ದೇಶದ ಆಡಳಿತ ಚುಕ್ಕಾಣಿ ಹಿಡಿದ ಕಾಂಗ್ರೆಸ್ ಪಕ್ಷ ಅನೇಕ ಬಾರಿ ಸಂವಿಧಾನಕ್ಕೆ ತಿದ್ದುಪಡಿ ಮಾಡಿತಲ್ಲದೆ, ಸಂವಿಧಾನ ದುರುಪಯೋಗಪಡಿಸಿಕೊಂಡು ದೇಶದಲ್ಲಿ ತುರ್ತು ಪರಿಸ್ಥಿತಿ ಹೇರುವ ಹೇಯ ಕೃತ್ಯ ನಡೆಸಿತ್ತು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಇಂದಿಲ್ಲಿ ಟೀಕಿಸಿದ್ದಾರೆ.


ಸಂವಿಧಾನ ಸನ್ಮಾನ ಅಭಿಯಾನ ಉದ್ಘಾಟಿಸಿ ಮಾತನಾಡಿದ ಅವರು, ಕಾಂಗ್ರೆಸ್‌ನ ಈ ದುಷ್ಕೃತ್ಯವನ್ನು ದೇಶದ ಜನ ಮರೆತಿಲ್ಲ. ಈ ಹಿಂದೆ ಕಾನೂನು ದಿನವನ್ನಾಗಿ ಆಚರಿಸಲಾಗುತ್ತಿತ್ತು, ಸಂವಿಧಾನ ಸಮರ್ಪಣಾ ದಿನವಾಗಿ ಆಚರಿಸುವ ಅಭಿಲಾಷೆ ಪ್ರಧಾನಿ ನರೇಂದ್ರ ಮೋದಿ ಅವರದು ಎಂದರು.

ಇಂದಿನಿಂದ ಜನವರಿ 26ರವರೆಗೆ 2 ತಿಂಗಳು ದೇಶಾದ್ಯಂತ ಸಂವಿಧಾನ ಸನ್ಮಾನ ಅಭಿಯಾನ ಆಚರಿಸಲಾಗುತ್ತಿದೆ. ಸಂವಿಧಾನ ಒಂದು ಧರ್ಮಗ್ರಂಥ, ಸಂವಿಧಾನಕ್ಕೆ ಅವಹೇಳನ ಮಾಡಿದ ಕಾಂಗ್ರೆಸ್ಸಿಗರು ಇತಿಹಾಸ ಮರೆಮಾಚುವ ಕೆಲಸವನ್ನು ನಿರಂತರವಾಗಿ ಮಾಡುತ್ತಾ ಬಂದಿದ್ದು, ಹಲವು ದಶಕಗಳಿಂದ ಸಂವಿಧಾನದ ರಕ್ಷಕರು, ಸಂವಿಧಾನ ಪ್ರತಿಪಾದಕರೆಂಬ ಕಪಟ ನಾಟಕ ಆಡುತ್ತಾ ಬಂದಿದ್ದಾರೆ.

ಕಾಂಗ್ರೆಸ್ ಪಕ್ಷ ಸಂವಿಧಾನಕ್ಕೆ ಧಕ್ಕೆ ತರುವ ಕೆಲಸ ಮಾಡಿದೆ, ಸಂವಿಧಾನಕ್ಕೆ ಗೌರವ ತರುವ ದೇಶದ ಪ್ರತಿಯೊಬ್ಬ ಪ್ರಜೆ ಗೌರವದಿಂದ ಕಾಣುವ ಮತ್ತು ಪಾಲಿಸುವಂತೆ ಮಾಡುವಲ್ಲಿ ಬಿಜೆಪಿ ಶ್ರಮವಹಿಸಿದೆ, ಈ ಆಚರಣೆ ಕೇವಲ ನವೆಂಬರ್ 26ಕ್ಕೆ ಸೀಮಿತವಾಗಬಾರದು.

ಡಾ.ಅಂಬೇಡ್ಕರ್ ಅವರ ಪರಿಶ್ರಮ, ಬೆವರಿನ ಫಲವಾಗಿ ಸಮಾನತೆ, ಸ್ವಾವಲಂಬನೆ, ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಸಂವಿಧಾನದ ● 2ನೇ ಪುಟಕ್ಕೆ

ಶಾಲಾ-ಕಾಲೇಜುಗಳಲ್ಲಿ ಸಂವಿಧಾನದ ಪೀಠಿಕೆ ಓದುವುದು ಕಡ್ಡಾಯ



ಬೆಂಗಳೂರು: ರಾಜ್ಯದ ಎಲ್ಲಾ ಶಾಲಾ-ಕಾಲೇಜುಗಳಲ್ಲಿ ಸಂವಿಧಾನದ ಪೀಠಿಕೆ ಓದುವುದನ್ನು ಕಡ್ಡಾಯ ಮಾಡಿದ್ದೇವೆ. ಎಲ್ಲ ಮಕ್ಕಳಿಗೂ ಸಂವಿಧಾನ ಅರ್ಥವಾಗಬೇಕು. ಹೀಗಾಗಿ ಶಾಲೆಗಳಲ್ಲೇ ಸಂವಿಧಾನ ಪೀಠಿಕೆ ಓದಿಸುತ್ತಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಸಂವಿಧಾನ ಅಂಗೀಕಾರವಾಗಿ ಇಂದಿಗೆ 75 ವರ್ಷ ಆಯ್ತು. ಈ ದಿನವನ್ನು ನಾವು ಸಂವಿಧಾನ ದಿನ ಎಂದು ಆಚರಣೆ ಮಾಡುತ್ತಿದ್ದೇವೆ. ಕೇಂದ್ರ, ರಾಜ್ಯ ಮತ್ತು ಸ್ಥಳೀಯ ಸಂಸ್ಥೆಗಳು ಸಂವಿಧಾನದಡಿಯಲ್ಲೇ ನಡೆಯಬೇಕು ಎಂದರು. ಸಂವಿಧಾನ ಜಾರಿಗೆ ಬಂದು ಮುಂದಿನ ವರ್ಷ ಜನವರಿಗೆ 75 ವರ್ಷ ತುಂಬಲಿದೆ. ದೀರ್ಘಕಾಲದ ಶಾಂತಿಯಲ್ಲಿರುವ ಸಂವಿಧಾನ ಎಂದರೆ ಅದು ಭಾರತದ ಸಂವಿಧಾನ. ಸಂವಿಧಾನ ಎಷ್ಟೇ ಚೆನ್ನಾಗಿದ್ದರೂ ಒಳ್ಳೆಯವರ ಕೈಯ್ಯಲ್ಲಿ ಇದ್ದರೆ ಒಳ್ಳೆಯದಾಗುತ್ತದೆ. ಕೆಟ್ಟವರ ಕೈಯಲ್ಲಿ ಇದ್ದರೆ ಕೆಟ್ಟದಾಗುತ್ತೆ ಅಂತ ಬಿ.ಆರ್. ಅಂಬೇಡ್ಕರ್ ಅವರು ಹೇಳಿದ್ದಾರೆ ಎಂದು ಸಿಎಂ ತಿಳಿಸಿದರು.

ಬೆಳಗಾವಿಯಿಂದ ಮಕ್ಕಳ ಪ್ರವಾಸಕ್ಕೆ ಕರೆತಂದಿದ್ದ ಸಾರಿಗೆ ಬಸ್ ಉರುಳಿ ಬಿದ್ದು

10ಕ್ಕೂ ಅಧಿಕ ಮಕ್ಕಳಿಗೆ ಗಾಯ

- ಮೈಸೂರು-ಬೆಂಗಳೂರು ಹೆದ್ದಾರಿ ಮೈಸೂರು ಫೌಂಟೇನ್ ಸರ್ಕಲ್ ಬಳಿ ದುರಂತ
- ಅದೃಷ್ಟವಶಾತ್ ಯಾವುದೇ ಹೆಚ್ಚಿನ ಹಾನಿ ಇಲ್ಲ: ಗಾಯಗೊಂಡ ಮಕ್ಕಳಿಗೆ ಚಿಕಿತ್ಸೆ
- ರೋಡ್ ಡಿವೈಡರ್ ಹತ್ತಿ ಪಕ್ಕದ ಪಥಕ್ಕೆ ಉರುಳಿದ ಬಸ್: ಆಜುಬಾಜಲ್ಲಿ ಯಾವುದೇ ವಾಹನಗಳಿಲ್ಲದ ಕಾರಣ ಹೆಚ್ಚಿನ ಅನಾಹುತ ಸಂಭವಿಸಿಲ್ಲ

ಮೈಸೂರು, ನ.26(ಎಸ್‌ಬಿಡಿ)- ಶಾಲಾ ಮಕ್ಕಳ ಪ್ರವಾಸಕ್ಕೆ ಕರೆತಂದಿದ್ದ ಸಾರಿಗೆ ಸಂಸ್ಥೆ ಬಸ್, ಚಾಲಕನ ನಿಯಂತ್ರಣ ತಪ್ಪಿ ಡಿವೈಡರ್‌ಗೆ ಡಿಕ್ಕಿ ಹೊಡೆದು ಪಲ್ಟಿಯಾಗಿರುವ ಘಟನೆ ಮೈಸೂರಿನಲ್ಲಿ ಮಂಗಳವಾರ ರಾತ್ರಿ ಸಂಭವಿಸಿದ್ದು, ಘಟನೆಯಲ್ಲಿ 10ಕ್ಕೂ ಹೆಚ್ಚು ಮಕ್ಕಳು ಗಾಯಗೊಂಡಿದ್ದಾರೆ.

ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಬೆಳಗಾವಿ ಜಿಲ್ಲೆ, ಖಾನಾಪುರ ಘಟಕದ ಬಸ್ ಮೈಸೂರಿನ ಫೌಂಟೇನ್ ವೃತ್ತದಿಂದ ಎಲ್‌ಐಸಿ ವೃತ್ತದ ಕಡೆಗೆ ಸಂಚರಿಸುವಾಗ ಚಾಲಕನ ನಿಯಂತ್ರಣ ತಪ್ಪಿ ಡಿವೈಡರ್ ಮೇಲತ್ತಿ, ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದು ಪಕ್ಕದ ರಸ್ತೆಗೆ ಪಲ್ಟಿಯಾಗಿದೆ. ಘಟನೆಯಲ್ಲಿ ಬಸ್‌ನಲ್ಲಿದ್ದ ಖಾನಾಪುರ ಶಾಂತಿ ನಿಕೇತನ ಪಬ್ಲಿಕ್ ಶಾಲೆಯ ಮಕ್ಕಳು ಗಾಯಗೊಂಡಿದ್ದು, ಅದೃಷ್ಟವಶಾತ್ ಹೆಚ್ಚಿನ ಅಪಾಯ ಸಂಭವಿಸಿಲ್ಲ. ಸದ್ಯ ಬಸ್ ಪಲ್ಟಿಯಾದ ವೇಳೆ ಹಿಂದೆ-ಮುಂದೆ, ಆಜು-ಬಾಜು ಬೇರೆ ಯಾವುದೇ ವಾಹನಗಳಿರಲಿಲ್ಲ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ● 2ನೇ ಪುಟಕ್ಕೆ



ಶಾಲಾ ಮಕ್ಕಳನ್ನು ಪ್ರವಾಸಕ್ಕೆ ಕರೆತಂದಿದ್ದ ಸಾರಿಗೆ ಸಂಸ್ಥೆ ಬಸ್, ಡಿವೈಡರ್ ಮೇಲತ್ತಿ ಪಲ್ಟಿಯಾಗಿರುವುದು. ಕೆಲವೇ ಹೊತ್ತಿನಲ್ಲಿ ಕ್ರೇನ್ ಮೂಲಕ ಬಸ್ ಅನ್ನು ಮೇಲೆತ್ತಲಾಯಿತು.

ಮುಡಾ, ಖಾಸಗಿಯವರು ಅಭಿವೃದ್ಧಿಪಡಿಸಿದ 240 ಬಡಾವಣೆ

ನಾಳೆಯೊಳಗೆ ಆಯಾಯ ವ್ಯಾಪ್ತಿಯ ಸ್ಥಳೀಯ ಸಂಸ್ಥೆಗಳಿಗೆ ಹಸ್ತಾಂತರ

ಮುಡಾದಲ್ಲಿ ಇನ್ನು ಮುಂದೆ ಖಾತೆ ಮಾಡುವ- ಕಂದಾಯ ನಿಗದಿಪಡಿಸುವ ಪ್ರಶ್ನೆಯೇ ಇಲ್ಲ: ಆಯುಕ್ತ ಎ.ಎನ್.ರಘುನಂದನ್



ಮೈಸೂರು, ನ. 26(ಆರ್‌ಕೆ)- ನಗರ ಸ್ಥಳೀಯ ಸಂಸ್ಥೆಗಳಿಗೆ ಮೈಸೂರಿನ 940 ವಸತಿ ಬಡಾವಣೆಗಳನ್ನು ಹಸ್ತಾಂತರಿಸಲು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ತಯಾರಿ ನಡೆಸುತ್ತಿದೆ.

ಇತ್ತೀಚೆಗಷ್ಟೇ ಜಿಲ್ಲಾಧಿಕಾರಿ ಜಿ. ಲಕ್ಷ್ಮೀಕಾಂತ ರೆಡ್ಡಿ ಮುಡಾ, ನಗರಪಾಲಿಕೆ, ಪಟ್ಟಣ ಪಂಚಾಯ್ತಿ ಹಾಗೂ ನಗರಸಭೆ ಅಧಿಕಾರಿಗಳೊಂದಿಗೆ ಮುಡಾ ಹಾಗೂ ಖಾಸಗಿ ಬಡಾವಣೆಗಳ ಹಸ್ತಾಂತರ ಸಂಬಂಧ ಸಭೆ ಮಾಡಿ ಚರ್ಚಿಸಿದಾಗ ಮುಡಾ ವ್ಯಾಪ್ತಿ ಈಗ 940ಕ್ಕೂ ಅಧಿಕ ಬಡಾವಣೆಗಳಿದ್ದು, ಅವುಗಳ ನಿವೇಶನಗಳಿಗೆ ಖಾತಾ, ಕಂದಾಯ, ನಕ್ಷೆ ಅನುಮೋದನೆ, ಸಿಆರ್ ನೀಡುವುದೇ ಒಂದು ದೊಡ್ಡ ಕೆಲಸವಾಗಿದೆ ಎಂಬುದು ಕಂಡುಬಂದಿತ್ತು. ಬಡಾವಣೆಗಳಿಗೆ ನಕ್ಷೆ ಅನುಮೋದನೆ ಹೊರತುಪಡಿಸಿ ಮುಡಾ ಬೇರೆ ಕೆಲಸ ಮಾಡಬಾರದು. ಮೂಲಸೌಕರ್ಯಗಳೊಂದಿಗೆ ಸಂಪೂರ್ಣವಾಗಿ ಅಭಿವೃದ್ಧಿಗೊಂಡಿರುವ ಬಡಾವಣೆಗಳನ್ನು ಆಯಾ ವ್ಯಾಪ್ತಿಯ ನಗರಸಭೆ, ಪಟ್ಟಣ ಪಂಚಾಯ್ತಿಗಳಿಗೆ ಹಸ್ತಾಂತರಿಸುವಂತೆ ಜಿಲ್ಲಾಧಿಕಾರಿಗಳು ಮುಡಾ ಅಧಿಕಾರಿಗಳಿಗೆ ತಾಕೀತು ಮಾಡಿದ್ದರು.

ಮೊದಲ ಹಂತದಲ್ಲಿ 240 ಬಡಾವಣೆಗಳು: ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ಮೊದಲ ಹಂತದಲ್ಲಿ ಸಂಪೂರ್ಣ ಅಭಿವೃದ್ಧಿಗೊಂಡಿರುವ 240 ಬಡಾವಣೆಗಳ ಹಸ್ತಾಂತರಕ್ಕೆ ಪ್ರಕ್ರಿಯೆ ನಡೆಸಿರುವ ಮುಡಾ ಆಯುಕ್ತ ಎ.ಎನ್. ರಘುನಂದನ್, ಎನ್‌ಓಸಿಯೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಅನುಮತಿಗಾಗಿ ನಿರೀಕ್ಷಿಸುತ್ತಿದ್ದಾರೆ. ಮುಡಾ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ಜಿ. ಲಕ್ಷ್ಮೀಕಾಂತ ರೆಡ್ಡಿ, ಇಂದು ಬೆಂಗಳೂರಿನಲ್ಲಿ ನಗರಾಭಿವೃದ್ಧಿ ಮತ್ತು ಪೌರಾಡಳಿತ ಇಲಾಖೆಗಳ ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿದ್ದಾರೆ. ಸರ್ಕಾರ ಅನುಮೋದನೆ ನೀಡಲಿದ್ದು, ನವೆಂಬರ್ 28ರೊಳಗಾಗಿ 240 ವಸತಿ ಬಡಾವಣೆಗಳನ್ನು ಆಯಾ ಸ್ಥಳೀಯ ಸಂಸ್ಥೆಗಳಿಗೆ ಮುಡಾ ಹಸ್ತಾಂತರಿಸಲಿದೆ.

ಡಿಸೆಂಬರ್ 15ರೊಳಗೆ 700 ಬಡಾವಣೆಗಳು: ಉಳಿದ 700 ಬಡಾವಣೆಗಳ ಹಸ್ತಾಂತರಕ್ಕೂ ಪ್ರಕ್ರಿಯೆ ತೀವ್ರಗತಿಯಲ್ಲಿ ನಡೆಯುತ್ತಿದ್ದು, ಡಿ.15ರೊಳಗೆ ಹಸ್ತಾಂತರಗೊಳಿಸುವ ನಿರೀಕ್ಷೆ ಇದೆ. ಈಗಾಗಲೇ ದಾಖಲೆಗಳು, ನಕ್ಷೆಗಳ ಪರಿಶೀಲನೆ ಕಾರ್ಯ ನಡೆಯುತ್ತಿದೆ.

ಮುಡಾದಲ್ಲಿ ಖಾತಾ ಇಲ್ಲ: 940 ವಸತಿ ಬಡಾವಣೆಗಳ ಹಸ್ತಾಂತರ ಪ್ರಕ್ರಿಯೆ ನಡೆಸುತ್ತಿರುವುದರಿಂದ ಮುಡಾದಲ್ಲಿ ನಿವೇಶನ, ಮನೆಗಳ ಖಾತಾ, ಕಂದಾಯಗಳಂತಹ ಸೇವೆಯನ್ನು ಸ್ಥಗಿತಗೊಳಿಸಲಾಗಿದ್ದು, ಇನ್ನು ಮುಂದೆ ಪ್ರಾಧಿಕಾರದಲ್ಲಿ ● 6ನೇ ಪುಟಕ್ಕೆ

ನಕ್ಷೆ ಅನುಮೋದನೆಗಷ್ಟೇ ಮುಡಾ ಸೀಮಿತ

ಮೈಸೂರು, ನ. 26(ಆರ್‌ಕೆ)- ಇನ್ನು ಮುಂದೆ ಹೊಸ ಬಡಾವಣೆಗಳಿಗೆ ನಕ್ಷೆ ಅನುಮೋದನೆಗಷ್ಟೇ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಸೀಮಿತವಾಗಿರಲಿದೆ.

ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ ಹಾಗೂ ಕರ್ನಾಟಕ ಟೌನ್ ಅಂಡ್ ಕಂಟ್ರಿ ಪ್ಲಾನ್ ಆ್ಯಕ್ಟ್ ಪ್ರಕಾರ ನಗರಾಭಿವೃದ್ಧಿ ಪ್ರಾಧಿಕಾರಗಳು ಕೇವಲ ಬಡಾವಣೆಗಳ ನಕ್ಷೆ ಅನುಮೋದನೆ ಹಾಗೂ ನಗರಗಳ ಅಭಿವೃದ್ಧಿ ಯೋಜನೆಗಳನ್ನು ಮಾತ್ರ ಕೈಗೊಳ್ಳಬೇಕು. ಕರ್ನಾಟಕ ರಾಜ್ಯದಲ್ಲಿರುವ 32 ನಗರಾಭಿವೃದ್ಧಿ ಪ್ರಾಧಿಕಾರಗಳಲ್ಲೆಲ್ಲೂ ಖಾತಾ-ಕಂದಾಯ ಮಾಡುತ್ತಿಲ್ಲ. ಅಲ್ಲಿ ಕೇವಲ ಹೊಸ ಬಡಾವಣೆಗಳ ನಕ್ಷೆಗಳಿಗೆ ಅನುಮೋದನೆಯನ್ನು ಮಾತ್ರ ನೀಡಲಾಗುತ್ತಿದೆ. ಉಳಿದ ಸೇವೆಯನ್ನು ನಗರಪಾಲಿಕೆ ಹಾಗೂ ಸ್ಥಳೀಯ ಸಂಸ್ಥೆಗಳೇ ನೀಡುತ್ತಿದ್ದು, ಆ ಬಡಾವಣೆಗಳನ್ನು ಸ್ಥಳೀಯ ಸಂಸ್ಥೆಗಳೇ ನಿರ್ವಹಿಸುತ್ತವೆ. ಆದರೆ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಲ್ಲಿ ಮಾತ್ರ 1980ರಿಂದಲೂ ಬಡಾವಣೆಗಳಿಗೆ ನಕ್ಷೆ ಅನುಮೋದನೆ ಜೊತೆಗೆ ನಿವೇಶನಗಳ ಖಾತಾ ನೋಂದಣಿ, ವರ್ಗಾವಣೆ, ಪೌತಿ ಖಾತೆ, ಕಂದಾಯ ವಸೂಲಿ, ಕಟ್ಟಡ ಪೂರ್ಣಗೊಂಡ ವರದಿ (ಸಿಆರ್) ಸೇರಿದಂತೆ ಇನ್ನಿತರ ಸೇವೆಗಳನ್ನು ಒದಗಿಸುತ್ತಾ ಬಂದಿದೆ. ನಾಲ್ವಡಿ ಕೃಷ್ಣರಾಜ ಒಡೆಯರ್ ಮೈಸೂರು ನಗರವನ್ನು ಯೋಜನಾಬದ್ಧವಾಗಿ ಅಭಿವೃದ್ಧಿಪಡಿಸಿ ಮೂಲಭೂತ ಸೌಲಭ್ಯದೊಂದಿಗೆ ಅಭಿವೃದ್ಧಿಪಡಿಸಿದ ಬಡಾವಣೆಗಳಲ್ಲಿ ಸೂರಿಲ್ಲದವರಿಗೆ ನಿಯಮಾನುಸಾರ ನಿವೇಶನ, ● 2ನೇ ಪುಟಕ್ಕೆ



ಎ.ಎನ್.ರಘುನಂದನ್

ಒಂದೆರಡು 'ಗ್ಯಾರಂಟಿ' ಕೈ ಬಿಡಿ: 'ಕೈ' ಶಾಸಕ ಗವಿಯಪ್ಪ

ಎಚ್ಚರಿಕೆ ಕೊಟ್ಟ ಡಿಸಿಎಂ ಡಿ.ಕೆ.ಶಿವಕುಮಾರ್!



ಗವಿಯಪ್ಪ



ಡಿಕೆಶಿ

ಬೆಂಗಳೂರು: ಗ್ಯಾರಂಟಿ ಯೋಜನೆಗಳಿಂದಾಗಿ ಕ್ಷೇತ್ರಕ್ಕೆ ಬರುತ್ತಿದ್ದ ಅನುದಾನ ಕಡಿತವಾಗಿದ್ದು, ಒಂದೆರಡು ಗ್ಯಾರಂಟಿ ಯೋಜನೆಗಳನ್ನು ಕೈ ಬಿಡಬೇಕು ಎಂದು ಸಿಎಂ ಸಿದ್ದರಾಮಯ್ಯ ಅವರ ಬಳಿ ಮನವಿ ಮಾಡುತ್ತೇನೆ ಎಂದು ಕಾಂಗ್ರೆಸ್ ಶಾಸಕರೊಬ್ಬರು ನೀಡಿರುವ ಹೇಳಿಕೆ ಇದೀಗ ವೈರಲ್ ಆಗುತ್ತಿದೆ.

ವಿಜಯನಗರ ಜಿಲ್ಲೆಯ ಹೊಸಪೇಟೆ ಕಾಂಗ್ರೆಸ್ ಶಾಸಕ ಹೆಚ್.ಆರ್. ಗವಿಯಪ್ಪ ಇಂತಹುದೊಂದು ಪ್ರಸ್ತಾಪ ಮುಂದಿಟ್ಟಿದ್ದು, ಗ್ಯಾರಂಟಿ ಸ್ಕೀಂಗಳಿಂದಾಗಿ ಕ್ಷೇತ್ರಗಳಿಗೆ ಅನುದಾನ ಬರುತ್ತಿಲ್ಲ ಎಂದು ಬೇಸರ ಹೊರಹಾಕಿದ್ದಾರೆ. ಹೊಸಪೇಟೆಯ ಇಪ್ಪಿತೇರಿ ಮಾಗಾಣಿಯಲ್ಲಿ ನಡೆದ ಭೂಮಿಪೂಜೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗ್ಯಾರಂಟಿಗಳಿಂದ ಆಶ್ರಯ ಮನೆಗಳು ಬರುತ್ತಿಲ್ಲ. ಶಕ್ತಿ ಯೋಜನೆ ಸೇರಿದಂತೆ ಇನ್ನೆರಡು ಗ್ಯಾರಂಟಿಗಳು ಕಡಿಮೆ ಮಾಡಲು ಮುಖ್ಯ ಮಂತ್ರಿಗಳಿಗೆ ಹೇಳುತ್ತೇವೆ. ಅವರೇನು ತೀರ್ಮಾನ ಮಾಡುತ್ತಾರೆ ನೋಡೋಣ ಎಂದು ಹೇಳಿದರು. ಎರಡು ಗ್ಯಾರಂಟಿಗಳನ್ನು ರದ್ದು ಮಾಡುವುದರಿಂದ ಅನುದಾನ ಸರಿಯಾಗುತ್ತದೆ. ಗ್ಯಾರಂಟಿಗಳಿಂದ ಆಶ್ರಯ ಮನೆಗಳು ಬರ್ತಿಲ್ಲ. ಬಸ್‌ನಲ್ಲಿ ಓಡಾಡೋದು ಸೇರಿದಂತೆ ಇನ್ನೆರಡು ಗ್ಯಾರಂಟಿಗಳು ಕಡಿಮೆ ಮಾಡೋಕೆ ಸಿಎಂಗೆ ಹೇಳ್ತೀವಿ. ಒಂದೆರಡು ಗ್ಯಾರಂಟಿ ಗಳು ತೆಗೆಯಿರಿ ಅಂತಾ ಸಿಎಂ ಸಿದ್ದರಾಮಯ್ಯ ಅವರಿಗೆ ಹೇಳ್ತೀವಿ. ಅವರೇನು ತೀರ್ಮಾನ ಮಾಡ್ತಾರೆ ನೋಡೋಣ ಎಂದು ಹೇಳಿರುವ ● 6ನೇ ಪುಟಕ್ಕೆ

ಜೆಎಸ್‌ಎಸ್ ವಿಜ್ಞಾನ, ತಂತ್ರಜ್ಞಾನ ವಿವಿಗೆ ಸಿಐಐ ಎಕ್ಸಲೆನ್ಸ್ ಪ್ರಶಸ್ತಿ



ಮೈಸೂರಿನ ಜೆಎಸ್‌ಎಸ್ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾನಿಲಯವು ಎಸ್ಟೀಮ್ 2024ರಲ್ಲಿ ಮಹಿಳೆಯರಿಗಾಗಿ ಶ್ರೇಷ್ಠತೆಯ ಸಿಐಐ ಪ್ರಶಸ್ತಿ ಲಭಿಸಿದೆ.

ಮೈಸೂರು, ನ. 26– ಮೈಸೂರಿನ ಜೆಎಸ್‌ಎಸ್ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾನಿಲಯವು ಎಸ್ಟೀಮ್ 2024 ರಲ್ಲಿ ಮಹಿಳೆಯರಿಗಾಗಿ ಶ್ರೇಷ್ಠತೆಯ ಸಿಐಐ ಪ್ರಶಸ್ತಿ ಪಡೆದಿದೆ.

ವಿಜ್ಞಾನ ಕ್ಷೇತ್ರಗಳಲ್ಲಿ ವೈವಿಧ್ಯತೆ ಮತ್ತು ತಂತ್ರಜ್ಞಾನ ಎಂಜಿನಿಯರಿಂಗ್ ಮತ್ತು ಗಣಿತ ಕ್ಷೇತ್ರಗಳಲ್ಲಿ ಸೇರ್ಪಡೆಯಾಗಿದೆ. ನವದೆಹಲಿಯ ಇಂಡಿಯಾ ಹ್ಯಾಬಿಟಾಟ್ ಸೆಂಟರ್‌ನಲ್ಲಿ ನಡೆದ ಪ್ರಶಸ್ತಿ ವಿತರಣೆ ಸಮಾರಂಭವು ಸ್ಟೆಮ್‌ನಲ್ಲಿ ಲಿಂಗ ಸಮಾನತೆ ಹೆಚ್ಚಿಸಲು ಬದ್ಧವಾಗಿರುವ ಉದ್ಯಮದ ನಾಯಕರು ಮತ್ತು ದಾರ್ಶನಿಕರನ್ನು ಒಟ್ಟುಗೂಡಿಸಿತು. ಡಾ.ವಾಣಿಶ್ರೀ ಅರುಣ್, ಡಾ.ಪುಷ್ಪಾ ತುಪ್ಪದ್, ಡಾ.ಸಿಂಧು ಭರತ್, ಜೆಎಸ್‌ಎಸ್ ವಿಜ್ಞಾನ ಮತ್ತು ತಂತ್ರಜ್ಞಾನ ವಿವಿಯನ್ನು ಪ್ರತಿನಿಧಿಸಿದರು. ಎನ್‌ಐಟಿಐ ಆಯೋಗದ ಸದಸ್ಯ ಡಾ.ವಿ.ಕೆ.ಸಾರಸ್ವತ್, ಸಿಐಐ ಅಧ್ಯಕ್ಷೆ ಡಾ.ವೈಶಾಲಿ ನಿಗಮ್ ಸಿನ್ಹಾ, ಐಎನ್‌ಎಸ್‌ಎ ಕಾರ್ಯನಿರ್ವಾಹಕ ನಿರ್ದೇಶಕ ಡಾ.ಬ್ರಜೇಶ್ ಪಾಂಡೆ, ಪ್ರಧಾನ ವೈಜ್ಞಾನಿಕ ಸಲಹೆಗಾರ ಡಾ.ಅಜಯ್ ಕುಮಾರ್ ಸೂದ್, ಡಿಎಸ್‌ಟಿಯ ಹಿರಿಯ ಸಲಹೆಗಾರ ಡಾ.ಅಖಿಲೇಶ್ ಗುಪ್ತಾ, ಸಿಐಐನ ಉಪಮಹಾನಿರ್ದೇಶಕ ಡಾ.ಅಮಿತಾ ಸರ್ಕಾರ್ ಪ್ರಶಸ್ತಿ ಸ್ವೀಕರಿಸಿದರು.

ಕಂಡಾಯ ಮೆರವಣಿಗೆ



ಮೈಸೂರಿನ ಅಶೋಕಪುರಂನ 7ನೇ ಕ್ರಾಸ್‌ನಲ್ಲಿ ಕಡೇ ಕಾರ್ತಿಕ ಸೋಮವಾರದ ಪ್ರಯುಕ್ತ ಶ್ರೀ ಘನನೀಲ ಸಿದ್ದಪ್ಪಾಜಿ ಕಂಡಾಯ ಮೆರವಣಿಗೆಯಲ್ಲಿ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಭಾಗವಹಿಸಿದ್ದರು. ಮುಖಂಡರಾದ ಗುರು,ಪ್ರಸಾದ್, ಅವಿನಾಶ್, ಮಂಜು, ಸುರೇಶ್, ಹರಿದಾಸ್ ಮತ್ತಿತರರು ಉಪಸ್ಥಿತರಿದ್ದರು.

ಮಹಾಬೋಧಿ ಮಹಾವಿಹಾರದ ಆಡಳಿತ ಬೌದ್ಧರಿಗೆ ನೀಡುವಂತೆ ಆಗ್ರಹಿಸಿ
ಮೈಸೂರಲ್ಲಿ ಬುದ್ಧ ಅನುಯಾಯಿಗಳ ಪ್ರತಿಭಟನೆ

ಮೈಸೂರು, ನ.26(ಜಿಎ)–ಬಿಹಾರದ ಬುದ್ಧಗಯಾದಲ್ಲಿರುವ ಮಹಾಬೋಧಿ ಮಹಾವಿಹಾರದ ಆಡಳಿತವನ್ನು ಸಂಪೂರ್ಣವಾಗಿ ಬೌದ್ಧರಿಗೆ ನೀಡಬೇಕು ಎಂದು ಒತ್ತಾಯಿಸಿ ಬುದ್ಧ ಅನುಯಾಯಿಗಳು ಮಂಗಳವಾರ ಮೈಸೂರು ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿದರು.

ಸಿದ್ದಾರ್ಥ ನಗರದಲ್ಲಿರುವ ಬುದ್ಧ ವೃತ್ತದಲ್ಲಿ ಬುದ್ಧರ ಪ್ರತಿಮೆಗೆ ಪುಷ್ಪಾರ್ಚನೆ ಮಾಡಿ ಬುದ್ಧ ವಿಹಾರಗಳು, ಆಲ್ ಇಂಡಿಯಾ ಬುದ್ಧಿಸ್ಟ್ ಫೋರಂ, ಬೆಸ್ಟ್ ಬೋಧಿ ಸತ್ವ ಶೈಕ್ಷಣಿಕ ಮತ್ತು ಆಧ್ಯಾತ್ಮಿಕ ಟ್ರಸ್ಟ್, ಕರ್ನಾಟಕ ಬುದ್ಧಧಮ್ಮ ಸಮಿತಿಗಳ ಒಕ್ಕೂಟದ ಸದಸ್ಯರು ಸಂವಿಧಾನದ ಪೀಠಿಕೆಯನ್ನು ಬೋಧಿಸಿದ ನಂತರ ಮೆರವಣಿಗೆ ಮೂಲಕ ಜಿಲ್ಲಾಧಿಕಾರಿ ಕಚೇರಿಗೆ ತೆರಳಿದರು.

'ಬೌದ್ಧ ಧಮ್ಮ ನಮ್ಮದು', 'ಬುದ್ಧಗಯಾ ನಮ್ಮದು' ಎಂಬ ಘೋಷಣೆ ಕೂಗಿ ಪ್ರತಿಭಟನೆ ನಡೆಸಲಾಯಿತು. ನಂತರ ಹೆಚ್ಚುವರಿ ಜಿಲ್ಲಾಧಿಕಾರಿ ಮೂಲಕ ಮುಖ್ಯಮಂತ್ರಿ, ಪ್ರಧಾನ ಮಂತ್ರಿಗೆ ಮನವಿ ಪತ್ರ ಸಲ್ಲಿಸಲಾಯಿತು.



ಬುದ್ಧ ಅನುಯಾಯಿಗಳು ಬುದ್ಧಗಯಾದಲ್ಲಿರುವ ಮಹಾಬೋಧಿ ಮಹಾವಿಹಾರದ ಆಡಳಿತವನ್ನು ಸಂಪೂರ್ಣವಾಗಿ ಬೌದ್ಧರಿಗೆ ನೀಡಬೇಕು ಎಂದು ಒತ್ತಾಯಿಸಿ ಮೈಸೂರಿನ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿದರು.

ಈ ವೇಳೆ ಮಾಜಿ ಮೇಯರ್ ಪುರುಷೋತ್ತಮ್ ಮಾತನಾಡಿ, ಟೆಂಪಲ್ ಆಕ್ಟ್ 1949ರ ಪ್ರಕಾರ ಬುದ್ಧಗಯಾ ವಿಹಾರವನ್ನು ಬೌದ್ಧರು ನಿರ್ವಹಣೆ ಮಾಡಲು ಅಧಿಕಾರವಿಲ್ಲ, ಹೀಗಾಗಿ ಈ ಬುದ್ಧ ವಿಹಾರಗಳು ಹಿಂದೂಗಳ ನಿಯಂತ್ರಣದಲ್ಲಿದೆ. ಇದು ಬೌದ್ಧಧರ್ಮ ಮತ್ತು ಅಂಬೇಡ್ಕರ್ ಅನುಯಾಯಿಗಳ ಹಾಗೂ ಭಾರತದ ಮೂಲ ನಿವಾಸಿಗಳಿಗೆ ಮಾಡುತ್ತಿರುವ ವಂಚನೆಯಾಗಿದ್ದು, ಬೌದ್ಧರಿಗೆ ತಮ್ಮ ಧಾರ್ಮಿಕ ಕ್ಷೇತ್ರವನ್ನು ಸ್ವತಂತ್ರವಾಗಿ ನಿರ್ವಹಿಸುವ ಅವಕಾಶಕ್ಕಾಗಿ ಕಲಂ 3, 26 ಮತ್ತು 25ನ್ನು ಜಾರಿಗೊಳಿಸಲು ಅಡ್ಡಿಯಾಗಿರುವ ಬಿ.ಟಿ.ಆಕ್ಟ್ 1949ನ್ನು ರದ್ದುಪಡಿಸಿ ಮಹಾಬೋಧಿ ಮಹಾ ವಿಹಾರದ ಆಡಳಿತವನ್ನು ಸಂಪೂರ್ಣವಾಗಿ ಬೌದ್ಧರಿಗೆ ನೀಡಬೇಕು' ಎಂದು ಒತ್ತಾಯಿಸಿದರು.

ಪ್ರೊ.ಕೆ.ಎಸ್.ಭಗವಾನ್ ಮಾತನಾಡಿ, 'ಅಂಬೇಡ್ಕರ್ ದೇಶವನ್ನು ಹೊಸದಾಗಿ ಕಟ್ಟಬೇಕೆಂದು ಸಂವಿಧಾನವನ್ನು ನೀಡಿದರು. ಭಾರತದ ಮೂಲ ನಿವಾಸಿಗಳಿಗೆ ಬೌದ್ಧ ಧರ್ಮದ ಮಾರ್ಗವನ್ನು ತೋರಿಸಿಕೊಟ್ಟರು. ಆದರೆ ಇಂದು ಪುರೋಹಿತಶಾಹಿವರ್ಗ, ಬ್ರಾಹ್ಮಣರು ಬುದ್ಧಗಯಾ ಮಹಾವಿಹಾರದಲ್ಲಿ ಆಡಳಿತ ನಡೆಸುತ್ತಿರುವುದು ಶೋಚನಿಯ' ಎಂದರು.

ಪ್ರತಿಭಟನೆಯಲ್ಲಿ ಚಿಂತಕ ಆರ್.ಮಹದೇವಪ್ಪ, ಸಿದ್ದಾರ್ಥ ಬುದ್ಧ ವಿಹಾರದ ಚಂದ್ರಮಣಿ ಬಂತೇಜಿ, ಸಾಹಿತಿ ಸಿದ್ದಸ್ವಾಮಿ, ಮಲೆಯೂರು ಸೋಮಯ್ಯ, ಹೋರಾಟಗಾರ ಚೋರನಹಳ್ಳಿ ಶಿವಣ್ಣ, ಆರ್.ನಟರಾಜು, ಎಚ್.ಶಿವರಾಜು, ಎಂ.ಸಾವಕಯ್ಯ, ರಾಜು ಹಂಪಾಪುರ, ನಿಸರ್ಗ ಸಿದ್ದರಾಜು, ಕೆ.ಎಂ.ಪುಟ್ಟು, ಹರಕುಮಾರ್, ಈರೇಶ್ ನಗರ್ಲೆ, ಡಾ.ಜಗನ್ನಾಥ್, ಮಹಾದೇವ ಸ್ವಾಮಿ, ಪುಟ್ಟಸ್ವಾಮಿ, ಗೋವಿಂದರಾಜು, ಪಲ್ಲವಿ, ಅಂತರಸಂತೆ ಮಂಚಯ್ಯ, ರೂಪೇಶ್, ಪುನೀತ್, ವಿಜಯ ಕುಮಾರ್, ಸಚಿನ್ ಉಪಸ್ಥಿತರಿದ್ದರು.

ನ.29ರಿಂದ ಮೈಸೂರಲ್ಲಿ ಎರಡು ದಿನ ರಾಷ್ಟ್ರೀಯ ವಿಚಾರ ಸಂಕಿರಣ

ಮೈಸೂರು, ನ.26(ಜಿಎ)–ಕರ್ನಾಟಕ ರಾಜ್ಯ ಮುಕ್ತ ವಿವಿಯ ಇಂಗ್ಲಿಷ್ ಅಧ್ಯಯನ ವಿಭಾಗ ಮತ್ತು ಮನೋ ವಿಜ್ಞಾನ ಅಧ್ಯಯನ ವಿಭಾಗದ ಸಹಯೋಗದೊಂದಿಗೆ ನ.29 ಮತ್ತು 30ರಂದು ವಿವಿಯ ಕಾವೇರಿ ಸಭಾಂಗಣದಲ್ಲಿ 'ಪ್ರಿಸ್ಮ್ಸ್ ಆಫ್ ಸೈಕಾಲಜಿ ಇನ್ ದಿ ಲಿಟರರಿ ರೀಮ್' ವಿಷಯ ಕುರಿತು ಎರಡು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣ ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಸಮೂಹ ಸಂವಹನ–ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥ ಶೈಲೇಶ್‌ರಾಜ್‌ಅರಸ್ ಈ ವಿಷಯ ತಿಳಿಸಿ, ನ.29ರಂದು ಬೆಳಗ್ಗೆ 10 ಗಂಟೆಗೆ ಗುಜರಾತ್‌ನ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ರಾಜ್ಯ ಮುಕ್ತ ವಿವಿಯ ಕುಲಪತಿ ಪ್ರೊ.ಅಮಿ ಉಪಾಧ್ಯಾಯ ಕಾರ್ಯಕ್ರಮ ಉದ್ಘಾಟಿಸುವರು. ವೆಲ್ಲೂರಿನ ಎಐಟಿ ವಿವಿ ಇಂಗ್ಲಿಷ್ ಅಧ್ಯಯನ ವಿಭಾಗದ ಪ್ರೊ. ಅಜಂತಾ ಸರ್ಕಾರ್ ಪ್ರಧಾನ ಭಾಷಣ ಮಾಡುವರು. ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ಅಧ್ಯಕ್ಷತೆ ವಹಿಸುವರು. ನ.30ರಂದು ಸಂಜೆ 4.30ಕ್ಕೆ ಸಮಾರೋಪ ಸಮಾರಂಭ ನಡೆಯಲಿದೆ. ತಿರುಪತಿ ವೆಂಕಟೇಶ್ವರ ವಿವಿ ವಿಶ್ರಾಂತ ಕುಲಪತಿ ಪ್ರೊ.ವಿ.ಶ್ರೀಕಾಂತರೆಡ್ಡಿ ಸಮಾರೋಪ ಭಾಷಣ ಮಾಡುವರು. ವಿಚಾರ ಸಂಕಿರಣದಲ್ಲಿ ಸಾಹಿತ್ಯ–ಮನೋ ವಿಜ್ಞಾನ ಹಾಗೂ ಇಂಗ್ಲಿಷ್ ವಿಭಾಗದ ವಿಷಯ ಪರಿಣತರು ಮಾತನಾಡುವರು. ಅಲ್ಲದೆ, ವಿಚಾರ ಸಂಕಿರಣದಲ್ಲಿ ಮಂಡನೆಯಾಗುತ್ತಿರುವ ವಿದ್ವತ್ಪೂರ್ಣವಾದ ಮತ್ತು ವೈಜ್ಞಾನಿಕ ಹಿನ್ನೆಲೆಯುಳ್ಳ 75 ಲೇಖನಗಳಲ್ಲಿ ಲ್ಯಾಂಗ್ಲಿಟ್ ಎಂಬ ಅಂತಾರಾಷ್ಟ್ರೀಯ ನಿಯತಕಾಲಿಕದಲ್ಲಿ ಪ್ರಕಟಿಸಲಾಗುವುದು ಎಂದರು. ಸುದ್ದಿಗೋಷ್ಠಿಯಲ್ಲಿ ಡಾ.ಎಸ್.ಶ್ರೀಕಾಂತ್, ಡಾ.ವೀರೇಂದ್ರ ಉಪಸ್ಥಿತರಿದ್ದರು.

ನ.29ರಂದು ಕನ್ನಡ ರಾಜ್ಯೋತ್ಸವ ಆಚರಣೆ

ಮೈಸೂರು, ನ.26(ಜಿಎ)–ಕರ್ನಾಟಕ ರಾಜ್ಯ ರಿಯಲ್ ಎಸ್ಟೇಟ್ ವೆಲ್ಫೇರ್ ಅಸೋಸಿಯೇಷನ್ ವತಿಯಿಂದ ನ.29ರಂದು ನಗರದ ಚಾಮುಂಡಿಪುರಂ ವೃತ್ತದಲ್ಲಿ ಕನ್ನಡ ರಾಜ್ಯೋತ್ಸವ ಹಮ್ಮಿಕೊಳ್ಳಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಅಸೋಸಿಯೇಷನ್‌ನ ಪ್ರಧಾನ ಕಾರ್ಯದರ್ಶಿ ಹೆಚ್.ವಿ.ನಾಗರಾಜ್ ಈ ವಿಷಯ ತಿಳಿಸಿ, ಅಂದು ಬೆಳಗ್ಗೆ 7ಗಂಟೆಯಿಂದ 11 ಗಂಟೆವರೆಗೆ ಅಲ್ಲಿ ಆರೋಗ್ಯ ತಪಾಸಣೆ, ಸಂಜೆ 5.30ಕ್ಕೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವವರಿಗೆ ಸನ್ಮಾನ ಮತ್ತ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು.

ಕರ್ನಾಟಕ ರಾಜ್ಯ ರಿಯಲ್ ಎಸ್ಟೇಟ್ ವೆಲ್ಫೇರ್ ಅಸೋಸಿಯೇಷನ್ ರಿಯಲ್ ಎಸ್ಟೇಟ್ ಚಟುವಟಿಕೆಯಲ್ಲಿರುವವರ ಹಿತರಕ್ಷಣೆ ಹಾಗೂ ಕ್ಷೇಮಾಭಿವೃದ್ಧಿಗಾಗಿ ಸ್ಥಾಪಿಸಿದ್ದು, ರಿಯಲ್ ಎಸ್ಟೇಟ್ ಏಜೆಂಟರು ಎದುರಿಸುತ್ತಿರುವ ಸಮಸ್ಯೆ ಬಗೆಹರಿಸಿ, ಅಂತಹ ಬಡ ವರ್ಗಕ್ಕೆ ಸೇರಿದವರ ಮಕ್ಕಳಿಗೆ ನೆರವು ನೀಡಿಕೆಯೊಡನೆ ಸಮಾಜದಲ್ಲಿ ಉತ್ತಮ ಕೆಲಸ ಮಾಡುವ ಉದ್ದೇಶ ಹೊಂದಿದೆ ಎಂದರು. ಗೋಷ್ಠಿಯಲ್ಲಿ ಗೌರವಾಧ್ಯಕ್ಷ ಭಾನುಮೋಹನ್, ಅಧ್ಯಕ್ಷ ಮಹೇಶ್, ನಾಗರಾಜ್, ನಾಗೇಶ್ ಉಪಸ್ಥಿತರಿದ್ದರು.

ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ

ಮೈಸೂರು,ನ.26–ಮೈಸೂರಿನ ಲಕ್ಷ್ಮೀಪುರಂನಲ್ಲಿರುವ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ನ.28ರಂದು ಬೆಳಗ್ಗೆ 10ರಿಂದ ರಾತ್ರಿ 8ರವರೆಗೆ ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಮಾಹಿತಿಗೆ ದೂ. 0821–4259259 ಸಂಪರ್ಕಿಸಿ.

ರೈತ ಮುಖಂಡ ಜಗಜಿತ್ ಸಿಂಗ್ ದಲೈವಾಲ್ ಬಂಧನ ಖಂಡಿಸಿ ಮೈಸೂರು ಡಿಸಿ ಕಚೇರಿ ಮುಂಭಾಗ ಪ್ರತಿಭಟನೆ



ರೈತ ಮುಖಂಡ ಜಗಜಿತ್ ಸಿಂಗ್ ದಲೈವಾಲ್ ಬಂಧನ ಖಂಡಿಸಿ ಸಂಯುಕ್ತ ಕಿಸಾನ್ ಮೋರ್ಚಾ (ರಾಜಕಿಯೇತರ) ಹಾಗೂ ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ಸದಸ್ಯರು ಮೈಸೂರಿನ ಡಿಸಿ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿದರು.

ಮೈಸೂರು,ನ.26(ಜಿಎ)–ರೈತ ಮುಖಂಡ ಜಗಜಿತ್ ಸಿಂಗ್ ದಲೈವಾಲ್ ಬಂಧನ ಖಂಡಿಸಿ ಸಂಯುಕ್ತ ಕಿಸಾನ್ ಮೋರ್ಚಾ (ರಾಜಕಿಯೇತರ) ಹಾಗೂ ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ಸದಸ್ಯರು ಮಂಗಳವಾರ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿದರು.

ದೆಹಲಿ ಗಡಿಯಲ್ಲಿ ಹೋರಾಟ ನಡೆಸುತ್ತಿದ್ದ ಜಗಜಿತ್ ಸಿಂಗ್ ದಲೈವಾಲ್ ಅವರನ್ನು ಮಧ್ಯರಾತ್ರಿ 2 ಗಂಟೆಗೆ 200 ಜನ ಪೊಲೀಸ್ ಸರ್ಪಗಾವಲಿನಲ್ಲಿ ಬಂಧಿಸಲಾಗಿದೆ. ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಖಾತರಿ ಕಾನೂನು ಜಾರಿಗಾಗಿ ಹೋರಾಡುತ್ತಿರುವ ಮುಖಂಡರನ್ನು ಬಂಧಿಸುವ ಮೂಲಕ ಸರ್ಕಾರ ದಬ್ಬಾಳಿಕೆ ನೀತಿ ಅನುಸರಿಸಿದೆ. ಕಾರ್ಪೊರೇಟ್ ಕಂಪನಿಗಳ ಪರವಾಗಿ ನಿಲ್ಲುವ ಕೇಂದ್ರ ಸರ್ಕಾರ, ರೈತರ ಪರವಾಗಿ ಯಾಕೆ ಕೆಲಸ ಮಾಡುತ್ತಿಲ್ಲ ಎಂದು ಪ್ರಶ್ನಿಸಿದರು.

ಪ್ರಧಾನಿ ನರೇಂದ್ರ ಮೋದಿ ಚುನಾವಣೆ ಸಮಯದಲ್ಲಿ ರೈತರ ಸಮಸ್ಯೆಗಳನ್ನು ಬಗೆಹರಿಸುತ್ತೇನೆ ಎಂಎಸ್‌ಪಿ ಕಾಯ್ದೆ, ಸ್ವಾಮಿನಾಥನ್ ಕಾಯ್ದೆ ಜಾರಿಗೆ ತರುತ್ತೇನೆ ಎಂದು ಭರವಸೆ ನೀಡಿದ್ದರು. ದೆಹಲಿ, ಮಹಾರಾಷ್ಟ್ರ, ಹರಿಯಾಣ, ಛತ್ತೀಸ್‌ಗಢ, ರಾಜಸ್ಥಾನದಲ್ಲಿ ಮತ ಪಡೆಯಲು ಸುಳ್ಳು ಹೇಳಿದ ಅವರು, ಅಧಿಕಾರಕ್ಕೆ ಬಂದ ಬಳಿಕ ಯಾವುದೇ ಕಾಯ್ದೆ ಜಾರಿಗೊಳಿಸಿಲ್ಲ. ಇದು ರೈತರಿಗೆ ಮಾಡಿದ ಅನ್ಯಾಯ ಎಂದು ಕಿಡಿಕಾರಿ, ಎಂಎಸ್‌ಪಿ ಬೆಲೆ ಕಾಯ್ದೆ ಜಾರಿ, ರೈತರ ಸಾಲಮನ್ನಾ ಆಗದಿದ್ದರೆ ರೈತರು ದೇಶಾದ್ಯಂತ ಹೋರಾಟ ಸಂಘಟಿಸಬೇಕಾಗುತ್ತದೆ' ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಸಂಘದ ಪದಾಧಿಕಾರಿಗಳಾದ ಬರಡನಪುರ ನಾಗರಾಜ್, ಕಿರಗಸೂರ್ ಸೋಮಶೇಖರ್, ರೂಪಾ, ಮಾರ್ಬಳ್ಳಿ ನೀಲಕಂಠಪ್ಪ, ಲಕ್ಷ್ಮೀಪುರ ವೆಂಕಟೇಶ್, ಕುರುಬೂರು ಸಿದ್ದೇಶ್, ಸಾತಗಳ್ಳಿ ಬಸವರಾಜ್, ವರಕೋಡು ನಾಗೇಶ್, ಕಾಟೂರು ಮಹದೇವಸ್ವಾಮಿ, ಕಾಟೂರು ನಾಗೇಶ್, ಕಿರಗಸೂರು ಪ್ರಸಾದ ನಾಯಕ್, ಪರಶಿವಮೂರ್ತಿ, ಗೌರಿಶಂಕರ್, ಕೋಟೆ ಸುನೀಲ್, ವಾಜಮಂಗಳ ಮಹದೇವ ನಾಯಕ್, ಕುರುಬೂರು ಗುರುಸ್ವಾಮಿ, ರವಿ, ಕುಮಾರ್, ರಾಜೇಶ್ ಪಾಲ್ಗೊಂಡಿದ್ದರು.

ಒಂದನೇ ಪುಟದಿಂದ

ಕಾಂಗ್ರೆಸ್‌ನದು ಬರೀ ಕಪಟ ನಾಟಕ

ಮೂಲಕ ಕೊಡಲಾಗಿದೆ, ಸಂವಿಧಾನ ಪ್ರಜಾಪ್ರಭುತ್ವ ವ್ಯವಸ್ಥೆಗೆ ಒಂದು ಧರ್ಮಗ್ರಂಥ ಇದ್ದಂತೆ. ನಮ್ಮೆಲ್ಲರ ನೇತೃತ್ವದಲ್ಲಿ ಸಂವಿಧಾನಕ್ಕೆ ಗೌರವ ಕೊಡುವ ಕೆಲಸ ಆಗಬೇಕಿದೆ, ಸಂವಿಧಾನ ರಕ್ಷಿಸುವ ಕರ್ತವ್ಯ ಪ್ರತಿಯೊಬ್ಬ ಭಾರತೀಯರದು ಎಂದರು.

ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮಾತನಾಡಿ, ಸ್ವಾತಂತ್ರ್ಯಾನಂತರದಲ್ಲಿ ಸಂವಿಧಾನ ರಚನೆ ದೊಡ್ಡ ಸವಾಲಾಗಿತ್ತು, ಸಂವಿಧಾನ ಸಮಿತಿ ಎಲ್ಲ ಆಯಾಮಗಳಲ್ಲಿ ಚರ್ಚೆ ನಡೆಸಿ, ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಮಾನವೀಯ ತತ್ವಗಳನ್ನು ಸೇರಿಸಿದ್ದರಿಂದ ನಮ್ಮ ಸಂವಿಧಾನ ವಿಶ್ವದಲ್ಲೇ ಅತ್ಯಂತ ಶ್ರೇಷ್ಠ ಸಂವಿಧಾನ ಎನಿಸಿದೆ ಎಂದರು. ವಿಧಾನಪರಿಷತ್‌ನಲ್ಲಿನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ಸರ್ವರಿಗೂ ಸಮಾನ ಅವಕಾಶ ನೀಡುವ ಸಂವಿಧಾನವನ್ನು ಡಾ.ಅಂಬೇಡ್ಕರ್ ನೀಡಿದ್ದು, ಸಾರ್ವಕಾಲಿಕ, ಸದಾ ಪ್ರಸ್ತುತ, ಸಂವಿಧಾನ ಕುರಿತು ಅಪಸ್ವರ ಬರಬಾರದು ಎಂದರು.

10ಕ್ಕೂ ಅಧಿಕ ಮಕ್ಕಳಿಗೆ ಗಾಯ

ಶಾಂತಿನಿಕೇತನ ಪಬ್ಲಿಕ್ ಶಾಲೆಯ ಮಕ್ಕಳನ್ನು ಎರಡು ಬಸ್‌ಗಳಲ್ಲಿ ಸೋಮವಾರ ರಾತ್ರಿ ಪ್ರವಾಸಕ್ಕೆ ಕರೆತರಲಾಗಿತ್ತು. ಇಂದು ಮೈಸೂರಿನ ಪ್ರೇಕ್ಷಣೀಯ ಸ್ಥಳಗಳಿಗೆ ಭೇಟಿ ನೀಡಿ, ರಾತ್ರಿ ವಾಸ್ತವ್ಯಕ್ಕೆ ಬನ್ನಿಮಂಟಪದ ಹೋಟೆಲ್‌ವೊಂದಕ್ಕೆ ತೆರಳುವಾಗ ರಾತ್ರಿ 7.30ರ ಸಮಯದಲ್ಲಿ ಈ ಅವಘಡ ಸಂಭವಿಸಿದೆ. ಕೂಡಲೇ ನರಸಿಂಹರಾಜ ಸಂಚಾರ ಠಾಣೆ ಪೊಲೀಸರು, ಎಲ್‌ಐಸಿ ವೃತ್ತದಿಂದ ಫೌಂಟೇನ್ ವೃತ್ತದವರೆಗೆ ಸಂಚಾರವನ್ನು ನಿರ್ಬಂಧಿಸಿ, ಗಾಯಗೊಂಡಿದ್ದ ಮಕ್ಕಳನ್ನು ಆಸ್ಪತ್ರೆಗೆ ಕಳುಹಿಸಿದ್ದಾರೆ. ಬಳಿಕ ಪಲ್ಟಿಯಾದ ಬಸ್ ಕ್ರೇನ್ ಮೂಲಕ ಮೇಲೆತ್ತಿ, ಬನ್ನಿಮಂಟಪ ಡಿಪೋ ಬಳಿ ಸಾಗಿಸಲಾಗಿದೆ.

ಸ್ಥಳಕ್ಕೆ ದೌಡಾಯಿಸಿ ಬಂದು ಪರಿಶೀಲನೆ ನಡೆಸಿದ ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್, ಘಟನೆ ಬಗ್ಗೆ ಪ್ರತಿಕ್ರಿಯಿಸಿ, ಮಕ್ಕಳು ಪ್ರವಾಸಕ್ಕೆ ಬಂದಿದ್ದ ಸಾರಿಗೆ ಬಸ್ ಪಲ್ಟಿಯಾಗಿದೆ. ತಕ್ಷಣವೇ ನಮ್ಮ ಪೊಲೀಸರು ಸೂಕ್ತ ಕ್ರಮ ವಹಿಸಿದ್ದಾರೆ. ಬಸ್‌ನಲ್ಲಿದ್ದ 35 ಮಕ್ಕಳಲ್ಲಿ ಸುಮಾರು 11 ಮಂದಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಅವರಿಗೆ ವಿವಿಧ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಲಾಗುತ್ತಿದೆ ಎಂದು ತಿಳಿಸಿದರು. ಸಂಚಾರ ವಿಭಾಗದ ಎಸಿಪಿ ಪರಶುರಾಮಪ್ಪ, ನರಸಿಂಹರಾಜ ಸಂಚಾರ ಠಾಣೆ ಇನ್ಸ್‌ಪೆಕ್ಟರ್ ರೇಖಾಬಾಯಿ, ನರಸಿಂಹರಾಜ ಕಾನೂನು–ಸುವ್ಯವಸ್ಥೆ ಠಾಣೆ ಇನ್ಸ್‌ಪೆಕ್ಟರ್ ಲಕ್ಷ್ಮೀಕಾಂತ ತಳವಾರ್, ಸಬ್‌ಇನ್ಸ್‌ಪೆಕ್ಟರ್‌ಗಳು ಹಾಗೂ ಸಿಬ್ಬಂದಿ ಸ್ಥಳದಲ್ಲೇ ಇದ್ದು ಸೆಸ್ಕ್ ಸಿಬ್ಬಂದಿ ಮೂಲಕ ತುಂಡಾಗಿದ್ದ ವಿದ್ಯುತ್ ಕಂಬವನ್ನು ತೆರವುಗೊಳಿಸಿ, ಅಲ್ಲಿನ ವಿದ್ಯುತ್ ವೈರ್‌ಗಳನ್ನು ಸರಿಪಡಿಸಿದರು.

ಕೆಎಸ್‌ಆರ್‌ಟಿಸಿ ಮೈಸೂರು ಗ್ರಾಮಾಂತರ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿ ಬಿ.ಶ್ರೀನಿವಾಸ್, ವಿಭಾಗೀಯ ಸಂಚಲನಾಧಿಕಾರಿ ದಿನೇಶ್, ಬಸ್ ಸ್ಟ್ಯಾಂಡ್ ಇನ್‌ಚಾರ್ಜ್ ಹೇಮಂತ್ ಕುಮಾರ್, ಮತ್ತೋರ್ವ ಅಧಿಕಾರಿ ರಘು ಸ್ಥಳಕ್ಕೆ ತೆರಳಿ, ಅಪಘಾತಕ್ಕೀಡಾಗಿದ್ದ ಬಸ್ ಅನ್ನು ಬನ್ನಿಮಂಟಪ ಡಿಪೋಗೆ ಸಾಗಿಸಲು ಕ್ರಮ ವಹಿಸಿದರು. ಘಟನೆ ಬಗ್ಗೆ ಪ್ರತಿಕ್ರಿಯಿಸಿದ ವಿಭಾಗೀಯ ನಿಯಂತ್ರಣಾಧಿಕಾರಿ ಶ್ರೀನಿವಾಸ್, ಚಾಲಕ ಹಾಗೂ 10 ಮಕ್ಕಳಿಗೆ ಸಣ್ಣ–ಪುಟ್ಟ ಗಾಯಗಳಾಗಿದ್ದು, ಮೂರು ಖಾಸಗಿ ಆಸ್ಪತ್ರೆಗಳಿಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಯಾರಿಗೂ ಗಂಭೀರ ಗಾಯಗಳಾಗಿಲ್ಲ, ಎಲ್ಲರೂ ಚೇತರಿಸಿಕೊಳ್ಳುತ್ತಿದ್ದಾರೆ ಎಂದು ಮಾಹಿತಿ ನೀಡಿದರು.


ಅವೈಜ್ಞಾನಿಕ ಡಿವೈಡರ್...

ಚಾಲಕನ ಅಜಾಗರೂಕ ಚಾಲನೆಯಿಂದ ಅಪಘಾತ ಸಂಭವಿಸಿದೆ ಎನ್ನಲಾಗುತ್ತಿದೆ. ಆದರೆ ಅವೈಜ್ಞಾನಿಕ ಡಿವೈಡರ್‌ನಿಂದಾಗಿಯೇ ಆಗಾಗ ಅಪಘಾತ ಸಂಭವಿಸುತ್ತವೆ ಎಂದು ಸಾರ್ವಜನಿಕರು ಬೇಸರ ವ್ಯಕ್ತಪಡಿಸಿದ್ದಾರೆ. ಫೌಂಟೇನ್ ವೃತ್ತದಿಂದ ಎಲ್‌ಐಸಿ ವೃತ್ತದ ಕಡೆಗೆ ಸ್ವಲ್ಪ ದೂರದವರೆಗೆ ರಸ್ತೆ ಮಟ್ಟಕ್ಕಿಂತ ಅರ್ಧ ಅಡಿ ಎತ್ತರದ ಡಿವೈಡರ್ ಇದೆ. ಮುಂದಕ್ಕೆ ಎತ್ತರವಾದ ಕಾಂಕ್ರೀಟ್ ಡಿವೈಡರ್ ಇಡಲಾಗಿದೆ. ಆದರೆ ಅದರಲ್ಲಿ ಯಾವುದೇ ಪ್ರತಿಫಲಕ ಅಳವಡಿಸಿಲ್ಲ. ಪರಿಣಾಮ ಚಾಲಕರಿಗೆ ತಕ್ಷಣಕ್ಕೆ ಡಿವೈಡರ್ ಗೋಚರಿಸುವುದಿಲ್ಲ. ಪರಿಣಾಮ ಆಗಾಗ್ಗೆ ಸಣ್ಣ–ಪುಟ್ಟ ಅಪಘಾತಗಳಾಗುತ್ತಿರುತ್ತವೆ. ಇಂದು ದೊಡ್ಡ ಅವಘಡವೇ ಸಂಭವಿಸಿದೆ. ಆದರೆ ಅದೃಷ್ಟವಶಾತ್ ಹೆಚ್ಚಿನ ಅಪಾಯ ಸಂಭವಿಸಿಲ್ಲ. ಈಗಲಾದರೂ ಪೊಲೀಸರು, ಅಪಘಾತ ತಪ್ಪಿಸುವ ನಿಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಜನ ಮನವಿ ಮಾಡಿದ್ದಾರೆ.

ನಕ್ಷೆ ಅನುಮೋದನೆಗಷ್ಟೇ ಮುಡಾ ಸೀಮಿತ

ಮನೆ ಮಂಜೂರು ಮಾಡಿಕೊಡಬೇಕೆಂಬ ಮಹದುದ್ದೇಶದಿಂದ ಸಿಐಟಿಬಿ (ನಗರ ಅಭಿವೃದ್ಧಿ ವಿಶ್ವಸ್ಥ ಮಂಡಳಿ)ಯನ್ನು ಸ್ಥಾಪಿಸಿದ್ದರು. ರಾಜರ ಮಹದಾಸೆಯಂತೆ ಬಡಾವಣೆ ಅಭಿವೃದ್ಧಿಗೊಳಿಸುತ್ತಿದ್ದ ಸಂಸ್ಥೆಯು, ನಂತರ ಪ್ರಾಧಿಕಾರವಾಗಿ ಪರಿವರ್ತನೆಗೊಂಡು ಕಾರ್ಯನಿರ್ವಹಿಸುತ್ತಿದೆಯಾದರೂ, ಸ್ಥಳೀಯ ಸಂಸ್ಥೆಗಳು ಮಾಡುವ ಕೆಲಸಗಳನ್ನು ಮಾಡುತ್ತಾ ಬಂದಿವೆ. ಕಂದಾಯ, ಆಸ್ತಿ ತೆರಿಗೆ ವಸೂಲಿ ಮಾಡುತ್ತಿದೆಯಾದರೂ, ಆ ಬಡಾವಣೆಗಳ ಸ್ವಚ್ಛತೆ, ರಸ್ತೆ, ನೀರು, ವಿದ್ಯುತ್ ಸಂಪರ್ಕ, ಉದ್ಯಾನವನಗಳ ನಿರ್ವಹಣೆಗೆ ಮುಡಾದಲ್ಲಿ ಸೌಲಭ್ಯಗಳಿಲ್ಲ. ಆ ಸೇವೆಗಳನ್ನು ಮೈಸೂರು ಮಹಾನಗರ ಪಾಲಿಕೆಯೇ ನಿರ್ವಹಿಸಬೇಕಾದ ಪರಿಸ್ಥಿತಿ ಇತ್ತು. ಕಂದಾಯವನ್ನು ಮುಡಾಗೆ ಪಾವತಿಸಿ, ಸೇವೆಯನ್ನು ಪಾಲಿಕೆ ಒದಗಿಸಬೇಕಾಗಿತ್ತು ಕೆಲವು ಬಡಾವಣೆಗಳಲ್ಲಿ ಮುಡಾ ಮತ್ತು ಪಾಲಿಕೆಯೂ ಮೂಲ ಸೌಕರ್ಯ ಅಭಿವೃದ್ಧಿ ಮತ್ತು ನಿರ್ವಹಣೆ ಮಾಡದಿರುವುದರಿಂದ ಅಲ್ಲಿನ ನಿವಾಸಿಗಳು ಪರದಾಡುವಂತಾಗಿತ್ತು. ಇದೀಗ ಸ್ಥಳೀಯ ಸಂಸ್ಥೆಗಳಿಗೆ ಹಸ್ತಾಂತರಿಸುತ್ತಿರುವುದರಿಂದ ಕಂದಾಯ ಕಟ್ಟಿಸಿಕೊಂಡು ನಿರ್ವಹಿಸುವಂತಾಗಲಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

27.11.2024 ಬುಧವಾರ, ಮಳೆ ನಕ್ಷತ್ರ: ಅನೂರಾಧ, 19.11.2024 ರಿಂದ 01.12.2024 ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಕಾರ್ತಿಕ ಮಾಸ, ಕೃಷ್ಣ ಪಕ್ಷ, ತಿಥಿ: ದ್ವಾದಶಿ, ನಕ್ಷತ್ರ: ಚಿತ್ತ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಪಾರ್ಕಿನ್‌ಸನ್ಸ್ ಕಾಯಿಲೆ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ರಿಂದ.

■ **ನವ ಕರ್ನಾಟಕ ಪಬ್ಲಿಕೇಷನ್ ಪ್ರೈವೇಟ್ ಲಿಮಿಟೆಡ್ :** ಕನ್ನಡ ರಾಜ್ಯೋತ್ಸವದ ಪ್ರಯುಕ್ತ ವಿಶೇಷ ರಿಯಾಯಿತಿ ಪುಸ್ತಕ ಮಾರಾಟ, ಸ್ಥಳ: ಚಾಮರಾಜ ಜೋಡಿ ರಸ್ತೆ, ರಾಮಸ್ವಾಮಿ ಸರ್ಕಲ್ ಬೆಳಗ್ಗೆ 9.30 ರಿಂದ.

■ **ಜಗದ್ಗುರು ಶ್ರೀ ವೀರ ಸಿಂಹಾಸನ ಮಹಾಸಂಸ್ಥಾನ ಮಠ (ಶ್ರೀ ಸುತ್ತೂರು ಕ್ಷೇತ್ರ, ಮೈಸೂರು ಜಿಲ್ಲೆ):** ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳ ಕರ್ತೃ ಗದ್ದುಗೆ, ಶ್ರೀ ಮಹದೇಶ್ವರ ಸನ್ನಿಧಿ, ಶ್ರೀ ವೀರಭದ್ರೇಶ್ವರ ಮತ್ತು ಶ್ರೀ ಸೋಮೇಶ್ವರ ದೇವಸ್ಥಾನಗಳು, ಕಾರ್ತಿಕ ಮಾಸದ ವಿಶೇಷ ಪೂಜಾ ಕಾರ್ಯಕ್ರಮ, ಸ್ಥಳ: ಮಠದ ಆವರಣ, ಬೆಳಗ್ಗೆಯಿಂದ.

■ **ರಾಮ್‌ಸನ್ಸ್ ಪ್ರತಿಷ್ಠಾನ:** ಬೊಂಬೆ ಮನೆ ದಸರೆಯ ಬೊಂಬೆ ಪ್ರದರ್ಶನ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆಯ ಮೇಲೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10 ಗಂಟೆಯಿಂದ.

■ **ಕರ್ನಾಟಕ ದಲಿತ ಸಂಘರ್ಷ ಸಮಿತಿ :** ಶಾಸಕ ಜಿ.ಟಿ. ದೇವೇಗೌಡರ ಹುಟ್ಟುಹಬ್ಬದ ಅಂಗವಾಗಿ ಅಭಿನಂದನಾ ಸಮಾರಂಭ, ಸ್ಥಳ: ಏಕಲವ್ಯನಗರ, ಬೆಳಗ್ಗೆ 10ಕ್ಕೆ.

■ **ಶ್ರೀ ವೀರಭದ್ರೇಶ್ವರಸ್ವಾಮಿ ಹಾಗೂ ಶ್ರೀ ಚಾಮರಾಜೇಶ್ವರಸ್ವಾಮಿ ದೇವಸ್ಥಾನ ಟ್ರಸ್ಟ್ :** ಕಾರ್ತಿಕ ಮಾಸದ ವಿಶೇಷ ಪೂಜಾ ಮಹೋತ್ಸವ, ಪ್ರತಿನಿತ್ಯ ಬೆಳಗ್ಗೆ ರುದ್ರಾಭಿಷೇಕ, ಸಂಜೆ 7ಕ್ಕೆ ಪ್ರಾಕಾರೋತ್ಸವ, ಸ್ಥಳ: ದೇವಸ್ಥಾನದ ಆವರಣ, ಡಿ. ಬನುಮಯ್ಯ ರಸ್ತೆ, ಕೆ.ಆರ್. ಮೊಹಲ್ಲಾ.

■ **ವಿದ್ಯಾವರ್ಧಕ ಪದವಿಪೂರ್ವ ಕಾಲೇಜು :** ಬೆಳಗ್ಗೆ 8.30ಕ್ಕೆ ದಿವಂಗತ ಹೆಚ್. ಕೆಂಪೇಗೌಡ, ದಿವಂಗತ ಆರ್. ನಂಜಯ್ಯ ಮತ್ತು ದಿವಂಗತ ಹೆಚ್.ಬಿ. ನರಸೇಗೌಡರ ಸ್ಮರಣಾರ್ಥ ಜಿಲ್ಲಾ ಮಟ್ಟದ ಥ್ರೋಬಾಲ್, ಕಬಡ್ಡಿ ಮತ್ತು ವಾಲಿಬಾಲ್ ಪಂದ್ಯಾವಳಿ, ಅಧ್ಯಕ್ಷತೆ : ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪಗೌಡ, ಉದ್ಘಾಟನೆ : ಕರ್ನಾಟಕ ರಾಜ್ಯ ದೈಹಿಕ ಶಿಕ್ಷಣ ಉಪನ್ಯಾಸಕರ ಸಂಘದ ಉಪಾಧ್ಯಕ್ಷ ಕೆ.ಎಂ. ಕಾಂತರಾಜು, ಮುಖ್ಯ ಅತಿಥಿಗಳು : ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಪಿ.ವಿಶ್ವನಾಥ್, ಗೌರವ ಅತಿಥಿಗಳು : ಹೆಚ್.ಕೆ. ರಮೇಶ್, ಎನ್. ಮಹೇಶ್, ನಹುಲ; ಸಂಜೆ 4ಕ್ಕೆ ಸಮಾರೋಪ ಸಮಾರಂಭ, ಅಧ್ಯಕ್ಷತೆ : ವಿದ್ಯಾವರ್ಧಕ ಸಂಘದ ಕೋಶಾಧ್ಯಕ್ಷ ಶ್ರೀಶೈಲ ರಾಮಣ್ಣವರ್, ಅತಿಥಿಗಳು : ಖೇಲೋ ಇಂಡಿಯಾ ಕಬಡ್ಡಿ ಆಟಗಾರ ವಿನೋದ್‌ಗೌಡ, ಬಹುಮಾನ ವಿತರಣೆ : ವಿದ್ಯಾವರ್ಧಕ ಪದವಿಪೂರ್ವ ಕಾಲೇಜಿನ ಮುಖ್ಯಸ್ಥ ಎಸ್. ಶಿವಲಿಂಗಯ್ಯ, ಆಡಳಿತ ಮಂಡಳಿ ಸದಸ್ಯ ಅಬ್ದುಲ್ ಜಮೀಲ್, ಸ್ಥಳ: ಬೇಡನ್ ಪೊವೆಲ್ ಸ್ಕೂಲ್ ಕ್ರೀಡಾ ಮೈದಾನ.

■ **ಶರಣ ಸಾಹಿತ್ಯ ಪರಿಷತ್ತು, ಮೈಸೂರು ನಗರ ಘಟಕ, ಪ್ರಮತಿ ಹಿಲ್‌ವ್ಯೂ ಅಕಾಡೆಮಿ :** ದತ್ತಿ ಕಾರ್ಯಕ್ರಮ, ವಚನ ವಾಚನ, ವ್ಯಾಖ್ಯಾನ ಸ್ಪರ್ಧೆ ಮತ್ತು ಉಪನ್ಯಾಸ, ಉದ್ಘಾಟನೆ : ಸಾಹಿತಿ ಪ್ರೊ. ಚಂದ್ರಶೇಖರಯ್ಯ, ಬಹುಮಾನ ವಿತರಣೆ : ಪ್ರಮತಿ ಹಿಲ್‌ವ್ಯೂ ಅಕಾಡೆಮಿ ಕೋಶಾಧಿಕಾರಿ ಎಸ್. ಫಣಿರಾಜ್, ಅಧ್ಯಕ್ಷತೆ : ಶರಣ ಸಾಹಿತ್ಯ ಪರಿಷತ್ತು, ಮೈಸೂರು ನಗರ ಘಟಕದ ಅಧ್ಯಕ್ಷ ಮ.ಗು. ಸದಾನಂದಯ್ಯ, ಸ್ಥಳ: ಪ್ರಮತಿ ಹಿಲ್‌ವ್ಯೂ ಅಕಾಡೆಮಿ, ಕುವೆಂಪುನಗರ, ಬೆಳಗ್ಗೆ 10ಕ್ಕೆ

■ **ಕಾಂಗರೂ ಕೇರ್ ಫರ್ಟಿಲಿಟಿ :** ಉದ್ಘಾಟನಾ ಸಮಾರಂಭ, ಸ್ಥಳ: 384, ನ್ಯೂ ಕಾಳಿದಾಸ ರಸ್ತೆ, ವಿಜಯನಗರ 1ನೇ ಹಂತ, ಬೆಳಗ್ಗೆ 10.30ಕ್ಕೆ.

■ **ಶ್ರೀ ನಟರಾಜ ಪ್ರತಿಷ್ಠಾನ, ಕನ್ನಡ ಸಾಹಿತ್ಯ ಕಲಾಕೂಟ, ಸ್ಪಂದನಾ ಸಾಂಸ್ಕೃತಿಕ ಪರಿಷತ್ತು :** ಬೆಳಗ್ಗೆ 10.30ಕ್ಕೆ ಹಿರಿಯ ಲೇಖಕ ಸಾತನೂರು ದೇವರಾಜ್ ಅವರ ಸಾಹಿತ್ಯ ಕುರಿತು ರಾಜ್ಯಮಟ್ಟದ ವಿಚಾರ ಸಂಕಿರಣ, ಸಂವಾದ ಹಾಗೂ ಅಭಿನಂದನಾ ಸಮಾರಂಭ, ಸಾನ್ನಿಧ್ಯ : ಶ್ರೀ ನಟರಾಜ ಪ್ರತಿಷ್ಠಾನದ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಉದ್ಘಾಟನೆ : ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಎನ್.ಕೆ. ಲೋಕನಾಥ್, ಅಧ್ಯಕ್ಷತೆ : ವಿಶೇಷ ಅಧಿಕಾರಿ ಪ್ರೊ.ಎಸ್. ಶಿವರಾಜಪ್ಪ, ಪ್ರಾಸ್ತಾವಿಕ ನುಡಿ : ಕನ್ನಡ ಸಾಹಿತ್ಯ ಕಲಾಕೂಟದ ಅಧ್ಯಕ್ಷ ಎಂ.ಚಂದ್ರಶೇಖರ್; ಮಧ್ಯಾಹ್ನ 2ಕ್ಕೆ ಸಮಾರೋಪ, ಸಂವಾದ ಮತ್ತು ಅಭಿನಂದನಾ ಸಮಾರಂಭ, ಅಭಿನಂದಿಸುವವರು : ಮಂಡ್ಯ ಕರ್ನಾಟಕ ಸಂಘದ ಅಧ್ಯಕ್ಷ ಪ್ರೊ.ಬಿ. ಜಯಪ್ರಕಾಶ್ ಗೌಡ, ಅಭಿನಂದಿತರು : ಸಾಹಿತಿ ಸಾತನೂರು ದೇವರಾಜ್, ಅಧ್ಯಕ್ಷತೆ : ವಿಶೇಷ ಅಧಿಕಾರಿ ಪ್ರೊ.ಎಸ್. ಶಿವರಾಜಪ್ಪ, ಮುಖ್ಯ ಅತಿಥಿಗಳು: ಮೈಸೂರು ವಿಶ್ವವಿದ್ಯಾನಿಲಯದ ಪ್ರಸಾರಾಂಗದ ವಿಶ್ರಾಂತ ನಿರ್ದೇಶಕ ಪ್ರೊ.ಕೆ.ಟಿ. ವೀರಪ್ಪ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ವಾತ್ಸಲ್ಯ ಬಿ.ಇಡಿ. ಕಾಲೇಜಿನ ಪ್ರಾಂಶುಪಾಲ ಡಾ. ಮಹೇಶ್ ದಳಪತಿ, ಸ್ಥಳ: ಶ್ರೀ ನಟರಾಜ ಸಭಾ ಭವನ, ಶಂಕರ ಮಠದ ರಸ್ತೆ.

■ **ಕರ್ನಾಟಕ ಸುಗಮ ಸಂಗೀತ ಪರಿಷತ್ತು, ಮೈಸೂರು ಜಿಲ್ಲಾ ಘಟಕ :** ಅಣ್ಣಾವ್ರು ಹಾಡಿರುವ ಪ್ರಸಿದ್ಧ ಭಾವಗೀತೆಗಳು ಕನ್ನಡವೇ ಸತ್ಯ, ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ, ಉದ್ಘಾಟನೆ : ವಿಧಾನಪರಿಷತ್ ಸದಸ್ಯ ಡಾ.ಡಿ. ತಿಮ್ಮಯ್ಯ, ಅಧ್ಯಕ್ಷತೆ : ಪರಿಷತ್ ಅಧ್ಯಕ್ಷ ಡಾ.ನಾಗರಾಜ ವಿ. ಭೈರಿ, ಪ್ರಧಾನ ಭಾಷಣ: ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ನಾ. ದಾಮೋದರ ಶೆಟ್ಟಿ, ಪ್ರಶಸ್ತಿ ಪ್ರದಾನ: ಸಂಗೀತ ವಿವಿ ಕುಲಪತಿ ಡಾ. ನಾಗೇಶ್ ವಿ. ಬೆಟ್ಟಕೋಟೆ, ಕನ್ನಡ ಧ್ವಜಾರೋಹಣ : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಎಂ.ಡಿ. ಸುದರ್ಶನ್, ಗಾಯಕರಿಗೆ ಸನ್ಮಾನ: ಸುಗಮ ಸಂಗೀತ ಗಾಯಕ ಶ್ರೀನಗರ ಶ್ರೀನಿವಾಸ ಉಡುಪ, ಸ್ಥಳ: ನಾದಬ್ರಹ್ಮ ಸಂಗೀತ ಸಭಾ, ಸಂಜೆ 4ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ವಾದ್ಯ ವೈಭವ–ಸಂಗೀತ ವಾದ್ಯಗಳ ಪರಿಚಯ ಮಾಲಿಕೆ, ಪ್ರಸ್ತುತಿ: ಚೈತ್ರಿಕಾ. ಎಸ್., 6.40 ಅರಿವಿನ ಶಿಖರ:ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಎ.ಎಸ್. ನಾಗಲಕ್ಷ್ಮೀ, ಡಾ. ಪಿ.ಎಸ್. ಮುರಳೀಧರ್, ವ್ಯಾಖ್ಯಾನ–ಡಾ. ಬಿ.ವಿ. ವಸಂತಕುಮಾರ್, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಚಿತ್ರಗೀತೆಗಳು, 9.00 ವೃತ್ತಿ ಮಾರ್ಗದರ್ಶನ, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ಬಿಸ್ಮಿಲ್ಲಾ ಖಾನ್–ಶಹನಾಯಿ ವಾದನ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.35 ಆಯುಷ್‌ವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, 12.40 ದೇವರನಾಮ, 12.45 ಜನಪದ ಸಂಗೀತ, 1.00 ಸಕ್ಕರೆ ನಾಡಿನ ಅಕ್ಕರೆಯ ಲೇಖಕರು, ಲೇಖನ ಹಾಗೂ ಪ್ರಸ್ತುತಿ : ಶಭಾನ ಮತ್ತು ಕೀರ್ತಿ. ಎಸ್. ಬೈಂದೂರು, ಪರಿಕಲ್ಪನೆ : ಅಬ್ದುಲ್ ರಶೀದ್, 1.20 ಭಾವಗೀತೆಗಳು, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಬಾಂಬೆ ಜಯಶ್ರೀ – ಹಾಡುಗಾರಿಕೆ, 4.00 ಮಹಿಳಾರಂಗ–ರಾಜ್ಯೋತ್ಸವ ತಿಂಗಳ ವಿಶೇಷ ಸಂಚಿಕೆ–ಮಹಿಳಾ ಸಾಧಕಿಯರೊಂದಿಗೆ ಸಂವಾದ. ಭಾಗವಹಿಸುತ್ತಾರೆ: ಹವ್ಯಾಸಿ ಪತ್ರಕರ್ತೆ ಶೀಲಾ ಭಟ್, ಪ್ರಸ್ತುತಿ : ಸಹನಾ, 4.45 ಹಿಂದಿ ಪಾಠ–ಶಾಂತಾ. ಡಿ. ಕಿಣಿ, 6.50 ಕೃಷಿರಂಗ : ಸೂರ್ಯಕಾಂತಿ ಬೇಸಾಯ ಈ ಕುರಿತು ಮಡಿಕೇಹಳ್ಳಿ ಗ್ರಾಮದ ದಿವ್ಯಶ್ರೀ ಅವರೊಂದಿಗೆ ಸಂದರ್ಶನ. ಸಂದರ್ಶಕರು : ಎನ್.ಕೇಶವಮೂರ್ತಿ, 7.45 ಕನ್ನಡ ಚಿತ್ರಗೀತೆಗಳು, 9.30 ಕ್ರೀಡಾಲೋಕ, 10.00 ಜನಪದ ಸಂಗೀತ, 10.30 ಸವಿನೆನಪು

ಮೈಸೂರು ಮಿತ್ರ ಬುಧವಾರ 27 ನವೆಂಬರ್ 2024

ಜೆಡಿಎಸ್‌ನಲ್ಲಿ ಮುಂದುವರೆದ ಬಿನ್ನಾಭಿಪ್ರಾಯದ ಬೇಗುದಿ...!

ಜಿ.ಟಿ.ದೇವೇಗೌಡರು ಬಯಸಿದರೆ ಪಕ್ಷದಿಂದ ದೂರ... ದೂರ...

● ಮಾಜಿ ಸಚಿವ ಸಾ.ರಾ.ಮಹೇಶ್ ಬೇಸರದ ನುಡಿ ● ಜಿಟಿಡಿಗೆ ವಿಪಕ್ಷ ನಾಯಕ ಸ್ಥಾನ ಕೈ ತಪ್ಪಲು ನಾ ಕಾರಣನಲ್ಲ ● ಹಾಗಾದರೆ 2007ರಲ್ಲಿ ಅವರು ಪಕ್ಷ ಬಿಡಲು ನಾನು ಕಾರಣನೆ ● ಪಕ್ಷದ ವೇದಿಕೆಯಲ್ಲಿ ಸಮಸ್ಯೆ ಪರಿಹರಿಸಿಕೊಳ್ಳಲಿ: ತಪ್ಪಾಗಿದ್ದರೆ ಕಪಾಲಕ್ಕೆ ಹೊಡೆದು ಬುದ್ಧಿ ಹೇಳಲಿ

ಮೈಸೂರು, ನ.26(ಬಿಎಲ್‌ಯು)– ಪಕ್ಷದಲ್ಲಿ ನಾನು ಇರುವುದು ಬೇಡ, ಯಾವುದೇ ಕಾರ್ಯ ಚಟುವಟಿಕೆಯಲ್ಲಿ ಭಾಗಿಯಾಗುವುದು ಬೇಡವೆಂದು ಶಾಸಕ ಜಿ.ಟಿ.ದೇವೇಗೌಡರು ಸಲಹೆ ನೀಡಿದರೆ ಪಕ್ಷದಿಂದ ದೂರ ಉಳಿಯಲು ನಾನು ಸಿದ್ಧ ಎಂದು ಜೆಡಿಎಸ್ ಕಾರ್ಯಾಧ್ಯಕ್ಷರೂ ಆದ ಮಾಜಿ ಸಚಿವ ಸಾ.ರಾ. ಮಹೇಶ್ ಸ್ಪಷ್ಟಪಡಿಸಿದ್ದಾರೆ.

ನಗರದ ರಾಮವಿಲಾಸ ರಸ್ತೆಯ ತಮ್ಮ ಕಚೇರಿಯಲ್ಲಿ ಇಂದು ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಪಕ್ಷದ ಕಾರ್ಯ ಚಟುವಟಿಕೆಯಿಂದ ದೂರವಾದರೂ ಪಕ್ಷಕ್ಕೆ ನಿಷ್ಠೆಯಿಂದ ಇರುತ್ತೇನೆ. ಬದುಕಿರುವ ತನಕ ಹೆಚ್.ಡಿ.ದೇವೇಗೌಡರು ಹಾಗೂ ಹೆಚ್.ಡಿ.ಕುಮಾರಸ್ವಾಮಿ ಪರವಾಗಿ ಮತ ಹಾಕುತ್ತೇನೆ ಎಂದರು.

ನನ್ನಿಂದಲೇ ಅಸಮಾಧಾನವಿದ್ದರೆ ದೂರಾಗ್ತೇನೆ: ಪಕ್ಷದಲ್ಲಿ ಅಸಮಾಧಾನವಾಗುವ ಎಲ್ಲಾ ವಿಚಾರಕ್ಕೆ ನನ್ನನ್ನೆ ಟಾರ್ಗೆಟ್ ಮಾಡುವುದಾದರೆ ಪಕ್ಷದ ಚಟುವಟಿಕೆಗಳಿಂದ ದೂರ ಉಳಿಯಲು ನಾನು ಸಿದ್ಧ. ನನ್ನಿಂದ ಬೇಸರವಾದರೆ ಪಕ್ಷದಲ್ಲಿ ಇರುವುದು ಬೇಡವೆಂದು ಹೇಳಲಿ ಎಂದು ಕೈಮುಗಿದು ಕೇಳಿಕೊಳ್ಳುತ್ತೇನೆ ಎಂದರು.

ಏನೇ ಸಮಸ್ಯೆ ಇದ್ದರೂ ಜಿ.ಟಿ.ದೇವೇಗೌಡರು ಪಕ್ಷದ ವೇದಿಕೆಯಲ್ಲಿ ಚರ್ಚೆ ಮಾಡಲಿ. ನಮ್ಮಿಂದ ತಪ್ಪಾಗಿದ್ದರೆ ಕಪಾಲಕ್ಕೆ ಹೊಡೆದು ಬುದ್ಧಿ ಹೇಳಲಿ. ಅದು ಬಿಟ್ಟು ಮಾಧ್ಯಮಗಳ ಮುಂದೆ ಪಕ್ಷದ ಆಂತರಿಕ ವಿಚಾರಗಳನ್ನು ಪ್ರಸ್ತಾಪಿಸುವುದು ಎಷ್ಟು ಸರಿ ಎಂದು ಸಾ.ರಾ.ಮಹೇಶ್ ಪ್ರಶ್ನಿಸಿದರು.



ಪತ್ರಕರ್ತರೊಂದಿಗೆ ಮಾತನಾಡಿದ ಜೆಡಿಎಸ್ ಕಾರ್ಯಾಧ್ಯಕ್ಷರೂ ಆದ ಮಾಜಿ ಸಚಿವ ಸಾ.ರಾ.ಮಹೇಶ್. ಚಿತ್ರದಲ್ಲಿ ಪಾಲಿಕೆ ಮಾಜಿ ಸದಸ್ಯ ಕೆ.ಟಿ.ಚೆಲುವೇಗೌಡ ಇದ್ದಾರೆ.

ವಿಧಾನಪರಿಷತ್ ಚುನಾವಣೆಯಲ್ಲಿ ಜಿ.ಟಿ.ದೇವೇಗೌಡರು ಲಕ್ಷ್ಮಣ ಸವದಿಗೆ ಮತ ಹಾಕಿದರು. ಸ್ಥಳೀಯ ಸಂಸ್ಥೆಗಳಿಂದ ನಡೆದ ವಿಧಾನಪರಿಷತ್ ಚುನಾವಣೆಯಲ್ಲಿ ಸಿ.ಎನ್.ಮಂಜೇಗೌಡರ ಪರವಾಗಿ ಕೆಲಸ ಮಾಡಲಿಲ್ಲ. ಆದರೂ ಜಿ.ಟಿ. ದೇವೇಗೌಡರ ಬಗ್ಗೆ ಪಕ್ಷದಲ್ಲಿ ಯಾರೂ ಆಕ್ಷೇಪ ಎತ್ತಲಿಲ್ಲ. ಅದರ ಬದಲು ಅವರ ಮನೆಗೆ ಹೋಗಿ ಸಮಾಧಾನಪಡಿಸಲಾಗಿದೆ ಎಂದು ಸಾ.ರಾ.ಮಹೇಶ್ ಹೇಳಿದರು.

ಹೆಚ್.ಡಿ.ದೇವೇಗೌಡರು ಫೋನ್ ಮಾಡಿದರೂ ಸಂಪರ್ಕಕ್ಕೆ ಸಿಗಲಿಲ್ಲ: ಇತ್ತೀಚಿಗೆ ಹೆಚ್.ಡಿ.ದೇವೇಗೌಡರು ಮೈಸೂರಿಗೆ ಬಂದ ಸಂದರ್ಭದಲ್ಲಿ ಕೂಡ ಫೋನ್ ಮೂಲಕ ಸಂಪರ್ಕಿಸಲು ಯತ್ನಿಸಿದರು. ಆದರೆ ಜಿ.ಟಿ.ದೇವೇಗೌಡರು ಸಂಪರ್ಕಕ್ಕೆ ಸಿಗಲಿಲ್ಲ. ಅಷ್ಟೆ ಅಲ್ಲದೆ ಚನ್ನಪಟ್ಟಣ ಚುನಾವಣಾ ಪ್ರಚಾರಕ್ಕೆ ಆಹ್ವಾನ ಕೂಡ ನೀಡಿದ್ದರು. ಆದರೆ ಜಿ.ಟಿ.ದೇವೇಗೌಡರಿಂದ ಸಕಾರಾತ್ಮಕ ಪ್ರತಿಕ್ರಿಯೆ ಬರಲಿಲ್ಲ ಎಂದರು. ವಿರೋಧ ಪಕ್ಷದ ನಾಯಕ ಸ್ಥಾನವನ್ನು ನಾನು ತಪ್ಪಿಸಿದೆ, ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ನಾನು ಬಿ ಫಾರಂ ಕೊಡುತ್ತೇನೆ ಎಂದಿದ್ದೆ ಎಂದೆಲ್ಲಾ ಸತ್ಯಕ್ಕೆ ದೂರವಾದ ವಿಚಾರ ಹೇಳಿದ್ದಾರೆ. ಮಾಜಿ ಸಚಿವನಾದ ನನ್ನ ಮಾತನ್ನು ಅವರು ಕೇಳುತ್ತಾರೆಯೇ? ಎಂದು ಪ್ರಶ್ನಿಸಿದ ಸಾ.ರಾ.ಮಹೇಶ್, ಜಿ.ಟಿ.ದೇವೇಗೌಡರಿಗೆ ಜೆಡಿಎಸ್ ಶಾಸಕಾಂಗ ಪಕ್ಷದ ಸ್ಥಾನ ಸಿಗದಿರಲು ನನ್ನ ಪಾತ್ರವಿಲ್ಲ ಎಂದು ಸ್ಪಷ್ಟನೆ ನೀಡಿದರು.

ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷರಾಗಿ ಜಿ.ಟಿ.ದೇವೇಗೌಡರನ್ನು ಆಯ್ಕೆ ಮಾಡಲಾಗಿದೆ. ಹಾಗೊಂದು ವೇಳೆ ಜಿ.ಟಿ.ದೇವೇಗೌಡರ ಬಗ್ಗೆ ನನಗೆ ದ್ವೇಷ ಇದ್ದರೆ ಆ ಸ್ಥಾನವನ್ನು ತಪ್ಪಿಸಬಹುದಿತ್ತಲ್ಲವೆ ಎಂದು ಮರು ಪ್ರಶ್ನಿಸಿದರು.

ನಾನು ಚುನಾವಣೆಯಲ್ಲಿ ಸೋತ ವಿಚಾರ ಪ್ರಸ್ತಾಪಿಸಿದ್ದಾರೆ. ಹಾಗಾದರೆ ಹುಣಸೂರಿನಲ್ಲಿ ಜಿ.ಟಿ.ದೇವೇಗೌಡರು ಸೋತಿಲ್ಲವೆ? ಎಂದು ಪ್ರಶ್ನಿಸಿದ ಸಾ.ರಾ.ಮಹೇಶ್, ಕೊಡಗಿನಲ್ಲಿ ನಾನು ಜಿಲ್ಲಾ ಉಸ್ತುವಾರಿ ಸಚಿವನಾಗಿದ್ದಾಗ ಜಿಲ್ಲಾ ಪಂಚಾಯತ್‌ನ ಕನಿಷ್ಠ ಒಂದು ಸ್ಥಾನ ಗೆಲ್ಲಿಸಿದ್ದಾರಾ ಎಂದು ನನ್ನನ್ನು ಪ್ರಶ್ನಿಸಿದ್ದಾರೆ. ಆದರೆ ಅಂದು ಜಿಲ್ಲಾ ಪಂಚಾಯತ್ ಹಾಗೂ ತಾಲೂಕು ಪಂಚಾಯತ್ ಚುನಾವಣೆಯೇ ನಡೆಯಲಿಲ್ಲ ಎಂದರು. ನಾನು ಈ ಮಟ್ಟಕ್ಕೆ ಬರಲು ಜೆಡಿಎಸ್ ಕಾರಣ. ಜೆಡಿಎಸ್ ಇಲ್ಲದಿದ್ದರೆ ನಾನು ರಿಝೀರೊ. ಜೆಡಿಎಸ್ ಪಕ್ಷವಿಲ್ಲವೆಂದರೆ ಅಸ್ತಿತ್ವವೇ ಇಲ್ಲ ಎಂದು ಸಾ.ರಾ.ಮಹೇಶ್ ಹೇಳಿದರು.

ಜೆಡಿಎಸ್ ಖರೀದಿಸಲು ಯಾರಿಂದಲೂ ಸಾಧ್ಯವಿಲ್ಲ

ಹೆಚ್.ಡಿ.ದೇವೇಗೌಡರು ಹಾಗೂ ಹೆಚ್.ಡಿ.ಕುಮಾರಸ್ವಾಮಿ ಇರುವ ತನಕ ಪ್ರಾದೇಶಿಕ ಪಕ್ಷ ಜೆಡಿಎಸ್ ಅನ್ನು ಯಾರೂ ಖರೀದಿ ಮಾಡಲು ಆಗುವುದಿಲ್ಲ ಎಂದು ಮಾಜಿ ಸಚಿವ ಸಾ.ರಾ.ಮಹೇಶ್ ವಿರೋಧಿಗಳಿಗೆ ತಿರುಗೇಟು ನೀಡಿದರು.

ಪಕ್ಷವೇ ಇರಬಹುದು, ಸಾರ್ವಜನಿಕ ಜೀವನವೇ ಇರಬಹುದು ಅಥವಾ ವೈಯಕ್ತಿಕ ಜೀವನವಿರಬಹುದು. ಸೋಲು– ಗೆಲುವು, ಏಳು–ಬೀಳು ಇದ್ದೇ ಇರುತ್ತದೆ. ಕೆಳಗಿದ್ದವರು ಮೇಲೆ ಬಂದೆ ಬರುತ್ತಾರೆ, ಇದರಿಂದ ಯಾರೂ ಕೂಡ ಕೆಳಗಿದ್ದವರ ಬಗ್ಗ ಗೇಲಿ ಮಾಡಬಾರದು ಎಂದು ಚನ್ನಪಟ್ಟಣ ಉಪ ಚುನಾವಣೆಯಲ್ಲಿ ಜೆಡಿಎಸ್ ಸೋಲಿನ ಕುರಿತ ಕೆಲವರ ಮಾತನ್ನು ಉಲ್ಲೇಖಿಸಿ ಹೇಳಿದರು.

ಚನ್ನಪಟ್ಟಣ ಚುನಾವಣೆಯಲ್ಲಿ ಸಿ.ಪಿ.ಯೋಗೇಶ್ವರ್ ಅವರನ್ನು ಎನ್‌ಡಿಎ ಅಭ್ಯರ್ಥಿಯಾಗಿ ಮಾಡಲು ಹೆಚ್.ಡಿ.ಕುಮಾರಸ್ವಾಮಿ ಅವರು ಬಿಜೆಪಿ ರಾಷ್ಟ್ರಾಧ್ಯಕ್ಷ ಜೆ.ಪಿ.ನಡ್ಡಾ ಜೊತೆ ಚರ್ಚೆ ಮಾಡುತ್ತಿದ್ದರು. ಅಷ್ಟರಲ್ಲಿ ಆತುರಕ್ಕೆ ಬಿದ್ದ ಯೋಗೇಶ್ವರ್ ಬಿಜೆಪಿ ತ್ಯಜಿಸಿದರು. ಇದರಿಂದ ಅನಿವಾರ್ಯವಾಗಿ ನಿಖಿಲ್ ಸ್ಪರ್ಧೆ ಮಾಡಬೇಕಾಗಿಯಿತು ಎಂದು ತಿಳಿಸಿದರು. ಈಗ ನಿಖಿಲ್ ಸೋತಿರಬಹುದು. ಆದರೆ ಮುಂದೆ ಜನರು ಆಶೀರ್ವಾದ ಮಾಡುತ್ತಾರೆ. ಪ್ರಾದೇಶಿಕ ಪಕ್ಷ ಜೆಡಿಎಸ್ ಮುಗಿದೆ ಹೋಯಿತು, ಮುಗಿಸಿ ಬಿಟ್ಟೇವು ಎಂಬ ಭ್ರಮೆ ಬೇಡ. ಜೆಡಿಎಸ್‌ಗೆ ಇನ್ನು ಶಕ್ತಿ ಇದೆ, ದೇವೇಗೌಡರು ಹಾಗೂ ಕುಮಾರಸ್ವಾಮಿ ಇರುವ ತನಕ ಈ ಪಕ್ಷವನ್ನು ಯಾರೂ ಏನು ಮಾಡಲು ಆಗುವುದಿಲ್ಲ ಎಂದು ಸಾ.ರಾ.ಮಹೇಶ್ ತಿರುಗೇಟು ನೀಡಿದರು.

ಸಿ.ಎಂ.ಇಬ್ರಾಹಿಂ ಸವಕಲು ನಾಣ್ಯ

ಜೆಡಿಎಸ್ ಬಗ್ಗೆ ಟೀಕೆ ಮಾಡುತ್ತಿರುವ ಮಾಜಿ ಕೇಂದ್ರ ಸಚಿವ ಸಿ.ಎಂ. ಇಬ್ರಾಹಿಂ ಸವಕಲು ನಾಣ್ಯ ಎಂದು ಮಾಜಿ ಸಚಿವ ಸಾ.ರಾ.ಮಹೇಶ್ ಲೇವಡಿ ಮಾಡಿದರು. ಮಾತು ಬರುತ್ತದೆ ಎಂದು ಇಬ್ರಾಹಿಂ ತೋಚುವುದನ್ನೆಲ್ಲಾ ಹೇಳುವುದಲ್ಲ. ಇನ್ನು ಮುಂದೆ ಮಾತನಾಡಬೇಕಾದರೆ ಭಾಷೆ ಮೇಲೆ ಹಿಡಿತವಿರಬೇಕು ಎಂದು ಎಚ್ಚರಿಕೆ ನೀಡಿದರು.

ಒಂದು ಚುನಾವಣೆಯಲ್ಲಿ ಜೆಡಿಎಸ್ ಸೋತಿದೆ. ಹಾಗೆಂದ ಮಾತ್ರಕ್ಕೆ ಶಕ್ತಿ ಹೀನವಾಗಿದೆ ಎಂದರ್ಥವಲ್ಲ. ಬೆಂಕಿ ಬಿದ್ದ ಮನೆಯಲ್ಲಿ ಗಳ ಇರಿಯಬಾರದು ಎಂದು ಹೇಳಿದರು. ಎರಡು ಗ್ಯಾರಂಟಿ ಯೋಜನೆ ಕೈ ಬಿಡುವ ಬಗ್ಗೆ ಶಾಸಕ ಗವಿಯಪ್ಪ ಆಗ್ರಹಿಸಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಸಾ.ರಾ.ಮಹೇಶ್, ಗ್ಯಾರಂಟಿಗಾಗಿ ಹಣ ಸರಿದೂಗಿಸಲು ಸಾಧ್ಯವಾಗದೆ ರಾಜ್ಯ ಕಾಂಗ್ರೆಸ್ ಸರ್ಕಾರ ಸಾವಿರಾರು ಕೋಟಿ ಸಾಲಕ್ಕಾಗಿ ಬೇಡಿಕೆ ಸಲ್ಲಿಸಿದೆ ಎಂದು ಆರೋಪಿಸಿದರು.

ಮಹಾರಾಷ್ಟ್ರದ ವಿವಾದಿತ ಐಪಿಎಸ್ ಅಧಿಕಾರಿ ರಶ್ಮಿ ಶುಕ್ಲಾ ಡಿಜಿಪಿಯಾಗಿ ಮರು ನೇಮಕ



ಮುಂಬೈ: ಮಹಾರಾಷ್ಟ್ರ ವಿಧಾನಸಭಾ ಚುನಾವಣೆ ಮುಗಿದನುತು ವಿವಾದಿತ ಐಪಿಎಸ್ ಅಧಿಕಾರಿ ರಶ್ಮಿ ಶುಕ್ಲಾ ಅವರನ್ನು ಪೊಲೀಸ್ ಮಹಾನಿರ್ದೇಶಕರಾಗಿ (DGP) ಮರುನೇಮಕಗೊಳಿಸಿ ರಾಜ್ಯ ಗೃಹ ಇಲಾಖೆ ಸೋಮವಾರ ಸಂಜೆ ಆದೇಶ ಹೊರಡಿಸಿದೆ.

ಚುನಾವಣೆಗೆ ಮುನ್ನ ಭಾರತೀಯ ಚುನಾವಣಾ ಆಯೋಗದ ನಿರ್ದೇಶನದ ಮೇರೆಗೆ ಶುಕ್ಲಾ ಅವರನ್ನು ಡಿಜಿಪಿ ಹುದ್ದೆಯಿಂದ ವಜಾಗೊಳಿಸಿದ ನಂತರ ಸಂಜಯ್ ಕುಮಾರ್ ವರ್ಮಾ ಅವರು ಡಿಜಿಪಿಯಾಗಿ ಕಾರ್ಯನಿರ್ವಹಿಸುತ್ತಿದ್ದರು. ಶುಕ್ಲಾ ಅವರನ್ನು ಚುನಾವಣೆಯಿಂದ ದೂರವಿಡಬೇಕು ಎಂದು ಕಾಂಗ್ರೆಸ್ ಒತ್ತಾಯಿಸಿತ್ತು

ಭಾರತೀಯ ಪೊಲೀಸ್ ಸೇವೆಯ ಹಿರಿಯ ಅಧಿಕಾರಿಯಾಗಿರುವ ವರ್ಮಾ ಅವರು ಚುನಾವಣಾ ಪ್ರಕ್ರಿಯೆ ಮುಗಿಯುವವರೆಗೆ ಡಿಜಿಪಿಯಾಗಿ ಇರಬೇಕಿತ್ತು. ಆದರೆ ಚುನಾವಣೆ ವೇಳೆ ಶುಕ್ಲಾ ಅವರನ್ನು ಕಡ್ಡಾಯ ರಜೆಯ ಮೇಲೆ ಕಳುಹಿಸಲಾಗಿತ್ತು.

ಚುನಾವಣಾ ಪ್ರಕ್ರಿಯೆ ಪೂರ್ಣಗೊಂಡು ಚುನಾವಣಾ ಫಲಿತಾಂಶ ಪ್ರಕಟವಾದ ಹಿನ್ನೆಲೆಯಲ್ಲಿ ಮಾದರಿ ನೀತಿ ಸಂಹಿತೆ ಸೋಮವಾರ ಮುಕ್ತಾಯಗೊಂಡಿದೆ ಎಂದು ಗೃಹ ಇಲಾಖೆ ಆದೇಶದಲ್ಲಿ ತಿಳಿಸಲಾಗಿದೆ.

ನೀತಿ ಸಂಹಿತೆ ಸ್ಥಗಿತ ಹಿನ್ನೆಲೆಯಲ್ಲಿ ಸರ್ಕಾರ ಶುಕ್ಲಾ ಅವರ ಕಡ್ಡಾಯ ರಜೆ ಅವಧಿಯನ್ನು ಕೊನೆಗೊಳಿಸಿದ್ದು, ಡಿಜಿಪಿಯಾಗಿ ಮುಂದುವರೆಯಲು ಅವರಿಗೆ ಸೂಚಿಸಲಾಗಿದೆ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ನೇತೃತ್ವದ ಮಹಾಯುತಿ ಒಕ್ಕೂಟವು ಭರ್ಜರಿ ಬಹುಮತದೊಂದಿಗೆ ಅಧಿಕಾರವನ್ನು ಉಳಿಸಿಕೊಂಡಿದೆ.

ನಿಂಗಯ್ಯನ ಕೆರೆ ಅಂಗನವಾಡಿ ಕೇಂದ್ರದಲ್ಲಿ ಸಂವಿಧಾನ ದಿನಾಚರಣೆ



ನಿಂಗಯ್ಯನ ಕೆರೆ ಅಂಗನವಾಡಿ ಕೇಂದ್ರದಲ್ಲಿ ಸಂವಿಧಾನ ದಿನ ಆಚರಿಸಲಾಯಿತು.

ಮೈಸೂರು, ನ.26–ಮೈಸೂರಿನ ನಿಂಗಯ್ಯನ ಕೆರೆ ಅಂಗನವಾಡಿ ಕೇಂದ್ರದಲ್ಲಿ ಸಂವಿಧಾನ ದಿನ ಆಚರಿಸಲಾಯಿತು. ಕಾರ್ಯಕ್ರಮವನ್ನು ಕುಂಬಾರಕೊಪ್ಪಲಿನ ಪಿಯು ಕಾಲೇಜಿನ ಪ್ರಾಂಶುಪಾಲ ಶಿವಕುಮಾರ್ ಉದ್ಘಾಟಿಸಿ ಮಾತನಾಡಿ, ಭಾರತೀಯ ಸಂವಿಧಾನ ದೇಶದ ಬೆನ್ನೆಲುಬು ಹಾಗೂ ವಿಶ್ವದಲ್ಲೇ ಅತಿ ದೊಡ್ಡ ಲಿಖಿತ ಸಂವಿಧಾನವಾಗಿದೆ. ಈ ದಿನವನ್ನು ಡಾ.ಬಿ.ಆರ್.ಅಂಬೇಡ್ಕರ್ ಅವರ ಗೌರವಾರ್ಥವಾಗಿ ಆಚರಿಸಲಾಗುತ್ತಿದೆ. ದೇಶದ ಯುವ ಪೀಳಿಗೆಯಲ್ಲಿ ಸಂವಿಧಾನದ ಮೌಲ್ಯಗಳು ಹಾಗೂ ಮಹತ್ವದ ಬಗ್ಗೆ ಗೌರವ ಭಾವನೆಯನ್ನು ಮೂಡಿಸುವ ಉದ್ದೇಶವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ನಗರಪಾಲಿಕೆ ರೆವಿನ್ಯೂ ಅಧಿಕಾರಿ ಸಗೀರ್, ಪಿಕೆಟಿಬಿ ಆಸ್ಪತ್ರೆ ಆಪ್ತ ಸಮಾಲೋಚಕ ನಾಗೇಂದ್ರ ಪ್ರಸಾದ್, ಸಮುದಾಯ ಆರೋಗ್ಯ ಕೇಂದ್ರದ ಶಿವಣ್ಣ, ನಗರಪಾಲಿಕೆ ಮಾಜಿ ಸದಸ್ಯ ಕೆಂಪರಾಜು, ಅಂಗನವಾಡಿ ಕಾರ್ಯಕರ್ತೆ ಮಂಗಳ, ಸಹಾಯಕಿ ಸರೋಜಾ, ಸ್ತ್ರೀ ಶಕ್ತಿ ಸ್ವಸಹಾಯ ಸಂಘದ ಪ್ರತಿನಿಧಿ ಮಂಜುಳಾ, ಬಾಲವಿಕಾಸ ಸಮಿತಿ ಅಧ್ಯಕ್ಷೆ ಸವಿತಾ ಹಾಗೂ ಅಂಗನವಾಡಿ ಮಕ್ಕಳು ಭಾಗವಹಿಸಿದ್ದರು.

ಪ್ರಪಂಚದಲ್ಲೇ ಕನ್ನಡ ಭಾಷೆ ಅತ್ಯಂತ ಸುಂದರ ಭಾಷೆ

ಮೈಸೂರು, ನ.26(ಎಸ್‌ಪಿಎನ್)–ಪ್ರಪಂಚದಲ್ಲೇ ಕನ್ನಡ ಭಾಷೆ ಅತ್ಯಂತ ಸುಂದರ ಭಾಷೆ ಎಂಬ ಕೀರ್ತಿ ಇದೆ. ಇಂತಹ ಭಾಷೆಯನ್ನು ಉಳಿಸಿಕೊಳ್ಳುವುದು ನಮ್ಮ ಆದ್ಯ ಕರ್ತವ್ಯ ಎಂದು ಉದ್ಯಮಿ ರಂಗರಾವ್ ಕೃಷ್ಣ ಅಭಿಪ್ರಾಯಪಟ್ಟರು.

ಮೈಸೂರು ಡಿ.ದೇವರಾಜ ಅರಸು ರಸ್ತೆಯ ಮೈಸೂರು ವಾಣಿಜ್ಯ ಮತ್ತು ಕೈಗಾರಿಕೆ ಸಂಸ್ಥೆ ಆವರಣದಲ್ಲಿ 69ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನ ದೊರಕಿದೆ. ಆದಿಕವಿ ಪಂಪ, ರನ್ನ ಸೇರಿದಂತೆ ಹಳೆಗನ್ನಡದ ಕವಿಗಳು ಕನ್ನಡ ಸಾಹಿತ್ಯ ಶ್ರೀಮಂತಗೊಳ್ಳಲು ತಮ್ಮದೇ ಆದ ಸಾಹಿತ್ಯಿಕ ಕೊಡುಗೆ ನೀಡಿದ್ದಾರೆ ಎಂದರು.

ಜಗತ್ತಿನ ಇತರೆ ಭಾಷೆಗಳಂತೆ ಕನ್ನಡ ಭಾಷೆ ಮತ್ತಷ್ಟು ಶ್ರೀಮಂತಗೊಳ್ಳಬೇಕಾದರೆ, ಕನ್ನಡ ಸಾಹಿತ್ಯ ಬೇರೆಬೇರೆ ಭಾಷೆಗಳಿಗೂ ಅನುವಾದ ವಾಗಬೇಕು. ಇದರಿಂದ ಕನ್ನಡ ಮತ್ತಷ್ಟು ಶ್ರೀಮಂತ ಗೊಳ್ಳುತ್ತದೆ, ಅಲ್ಲದೆ, ಪ್ರಪಂಚದ ಇತರೆ ಭಾಷೆಗಳಿಗಿಂತ ಕನ್ನಡ ಅತ್ಯಂತ ಸುಂದರ ಭಾಷೆ ಎಂಬ ಹೆಗ್ಗಳಿಕೆ ಇರುವುದು ಸಂತೋಷದ ಸಂಗತಿ. ಅಂತೆಯೇ ಕೈಗಾರಿಕಾ ಕ್ಷೇತ್ರದ ನನ್ನ ಸೇವೆಯನ್ನು ಗುರುತಿಸಿ ಮೈಸೂರು ವಾಣಿಜ್ಯ ಮತ್ತು ಕೈಗಾರಿಕೆ ಸಂಸ್ಥೆ ಗೌರವಿಸುತ್ತಿರುವುದು ಸಂತೋಷದ ಸಂಗತಿ ಎಂದರು.



ಮೈಸೂರು ವಾಣಿಜ್ಯ ಮತ್ತು ಕೈಗಾರಿಕೆ ಸಂಸ್ಥೆ ವತಿಯಿಂದ ನಡೆದ 69ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದ ಸಾಧಕರನ್ನು ಸನ್ಮಾನಿಸಲಾಯಿತು.

ಮುಖ್ಯಅತಿಥಿಗಳಾಗಿ ಭಾಗವಹಿಸಿದ್ದ ಕಸಾಪ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್ ಮಾತನಾಡಿ, ದೇಶ–ವಿದೇಶಗಳಲ್ಲಿ ಕನ್ನಡಿಗರು ನೆಲೆಸಿದ್ದಾರೆ. ಅಲ್ಲೆಲ್ಲ ಕನ್ನಡದ ಕಂಪನ್ನು ಪಸರಿಸಲು ಕ್ರಮಕೈಗೊಳ್ಳಬೇಕು. 15 ವರ್ಷಗಳ ಹಿಂದೆ ಇಟಲಿ ದೇಶದ ಪ್ರಜೆಯೊಬ್ಬರು ಭಾರತಕ್ಕೆ ಹಿಂದಿ ಕಲಿಯಲು ಬಂದಿದ್ದರು. ಅವರು ಬರುತ್ತಿದ್ದ ವಿಮಾನದಲ್ಲಿ ಕನ್ನಡಿಗರೊಬ್ಬರು ಪರಿಚಯವಾಗಿ, ಅವರು ಓದುತ್ತಿದ್ದ ಕನ್ನಡದ ಪುಸ್ತಕದ ಬಗ್ಗೆ ವಿಚಾರಿಸಿದ್ದಾರೆ ಎಂದರು.

ನಂತರ ಅವರು, ಅವರೊಂದಿಗೆ ಮಾತನಾಡಿದ ನಂತರ ಇಟಲಿ ಪ್ರಜೆ, ಹಿಂದಿ–ಕಲಿಯುವ ಬದಲು ಕನ್ನಡ ಕಲಿಯಲು ಮೈಸೂರಿನ ಭಾರತೀಯ ಭಾಷಾ ಸಂಸ್ಥಾನಕ್ಕೆ ಆಗಮಿಸಿ, ಕನ್ನಡ ಕಲಿತ ಪ್ರಸಂಗವನ್ನು ವಿವರಿಸಿದರು. ಹೊರದೇಶದವರಿಗೆ ನಮ್ಮ ಕನ್ನಡ ಕಲಿಯುವ ಅಭಿಮಾನ ತೋರುತ್ತಾರೆ. ಇಲ್ಲಿನವರು ಕನ್ನಡವನ್ನು ತಿರಸ್ಕಾರ ಮನೋಭಾವದಿಂದ ನೋಡುತ್ತಿದ್ದಾರೆ ಎಂದು ಬೇಸರ ಹೊರಹಾಕಿದರಲ್ಲದೆ, ವ್ಯಾಪಾರಸ್ಥರು, ಉದ್ಯಮ ಕ್ಷೇತ್ರ ಸೇರಿದಂತೆ ಇತರೆ ಕ್ಷೇತ್ರಗಳಲ್ಲಿ ಕೆಲಸ ಮಾಡುತ್ತಿರುವ ಕನ್ನಡಿಗರನ್ನು ಮೈಸೂರು ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಗುರುತಿಸಿ ಗೌರವಿಸುತ್ತಿರುವುದು ಹೆಮ್ಮೆಯ ವಿಷಯ ಎಂದರು.

ವಿವಿಧ ಕ್ಷೇತ್ರದ ಸಾಧಕರಿಗೆ ಸನ್ಮಾನ: ಅಖಿಲ ಭಾರತ ಅಗರಬತ್ತಿ ತಯಾರಕರ ಸಂಘದ (ಎಐಎಎಂಎ)ಮೈಸೂರು ವಲಯ ಅಧ್ಯಕ್ಷ, ಉದ್ಯಮಿ ರಂಗರಾವ್ ಕೃಷ್ಣ ವರ್ಷ ಅಸೋಸಿಯೇಟ್ ಪ್ರೈ(ಲಿ)ನ ವಿ.ಎನ್.ನಿಧಿಶ್ರೀ, ಕಾವೇರಿ ಫಾಸ್ಟ್‌ಫುಡ್‌ನ ಪ್ರಭಾಕರ್, ದೇವರಾಜ ಮಾರುಕಟ್ಟೆಯ ದಿನಸಿ ವರ್ತಕ ಆನಂದ್ ಕುಮಾರ್, ಮೈಸೂರು ಧಾನ್ಯ ವರ್ತಕರ ಸಂಘದ ಅಧ್ಯಕ್ಷ ಎಂ.ಬಿ.ಬಸವರಾಜು, ಲೆಕ್ಕಪರಿಶೋಧಕ ನೀರಜ್ ಮಿತ್ರನ್ ಅವರನ್ನು ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ಹಿರಿಯ ಸಾಹಿತಿ ಡಾ.ಸಿ.ಪಿ.ಕೃಷ್ಣಕುಮಾರ್(ಸಿಪಿಕೆ), ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣ ಗೌಡ, ಮೈಸೂರು ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಕೆ.ಬಿ. ಲಿಂಗರಾಜು, ಉಪಾಧ್ಯಕ್ಷ ಆರ್.ಆನಂದ್, ಕಾರ್ಯದರ್ಶಿ ಎ.ಕೆ.ಕಾರ್ಯದರ್ಶಿ ಎ.ಕೆ. ಶಿವಾಜಿರಾವ್, ಖಜಾಂಚಿ ಎಸ್.ಜೆ. ಅಶೋಕ್, ಜಂಟಿ ಕಾರ್ಯದರ್ಶಿ ವಿನೋದ್ ಜೈನ್, ವಸಂತಕುಮಾರಿ ಸೇರಿದಂತೆ ಇತರರಿದ್ದರು.

ಡಿ.5ರಂದು ಹಾಸನದಲ್ಲಿ ಆಯೋಜಿಸಿರುವ 'ಸ್ವಾಭಿಮಾನಿ ಸಮಾವೇಶ'ದಲ್ಲಿ

ಮೈಸೂರು ಜಿಲ್ಲೆಯಿಂದ 50 ಸಾವಿರದಿಂದ ಲಕ್ಷದವರೆಗೆ ಜನ ಸೇರಿಸಲು ಪೂರ್ವಭಾವಿ ಸಭೆಯಲ್ಲಿ ಚರ್ಚೆ

ಮೈಸೂರು,ನ.26(ಪಿಎಂ)– ಮುಖ್ಯಮಂತ್ರಿ ಸಿದ್ದರಾಮಯ್ಯರವರನ್ನು ಬೆಂಬಲಿಸಿ ವಿವಿಧ ಪ್ರಗತಿಪರ ಸಂಘಟನೆಗಳು ಹಾಗೂ ಇತರೆ ಎಲ್ಲಾ ವರ್ಗಗಳ ಒಕ್ಕೂಟಗಳ ವತಿಯಿಂದ ಡಿ.5ರಂದು ಹಾಸನದಲ್ಲಿ ಆಯೋಜಿಸಿರುವ 'ಸ್ವಾಭಿಮಾನಿ ಸಮಾವೇಶ'ದಲ್ಲಿ ಮೈಸೂರು ಜಿಲ್ಲೆಯಿಂದ 50 ಸಾವಿರದಿಂದ ಲಕ್ಷದವರೆಗೆ ಜನರನ್ನು ಸೇರಿಸುವ ಸಂಬಂಧ ಸಂಘಟನಾತ್ಮಕವಾಗಿ ಕೆಲಸ ಮಾಡಬೇಕೆಂಬ ಅಭಿಪ್ರಾಯ ವ್ಯಕ್ತವಾದವು.

ಮೈಸೂರಿನ ದೇವರಾಜ ಮೊಹಲ್ಲಾದ ದಿವಾನ್ಸ್ ರಸ್ತೆಯಲ್ಲಿರುವ ಯಾದವ (ಗೊಲ್ಲ) ಸಮುದಾಯ ಭವನದಲ್ಲಿ ಪ್ರಗತಿಪರ ಸಂಘಟನೆಗಳ ವತಿಯಿಂದ ಮಂಗಳವಾರ ಹಮ್ಮಿಕೊಂಡಿದ್ದ ಸಮಾವೇಶದ ಪೂರ್ವಭಾವಿ ಸಭೆಯಲ್ಲಿ ಮೈಸೂರು ನಗರ, ಜಿಲ್ಲೆಯಿಂದ 50 ಸಾವಿರದಿಂದ ಲಕ್ಷದವರೆಗೆ ಜನರನ್ನು ಸಮಾವೇಶದಲ್ಲಿ ಸೇರಿಸಲು ಚರ್ಚೆ ಮಾಡಲಾಯಿತು.

ಮಾಜಿ ಮೇಯರ್ ಅನಂತು ಮಾತನಾಡಿ, ಸಿದ್ದರಾಮಯ್ಯನವರು ಶುದ್ಧ ಹಸ್ತರಾಗಿದ್ದಾರೆ. ಆದಾಗ್ಯೂ ಅವರ ಮೇಲೆ ಇಲ್ಲಸಲ್ಲದ ಆರೋಪ ಮಾಡುತ್ತಿದ್ದು, ಸಿದ್ದರಾಮಯ್ಯನವರ ಬೆಂಬಲಕ್ಕೆ ನಾವಿದ್ದೇವೆ ಎಂಬ ಸಂದೇಶ ರವಾನಿಸಬೇಕಿದೆ. ಅದಕ್ಕಾಗಿ ಮೈಸೂರು ನಗರ ಮತ್ತು ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯ ಜನರನ್ನು ಸಮಾವೇಶಕ್ಕೆ ಕರೆದೊಯ್ಯಬೇಕಿದೆ. ಆ ಮೂಲಕ ಸಿದ್ದರಾಮಯ್ಯನವರ ಶಕ್ತಿಯನ್ನು ಬಿಜೆಪಿ ಮತ್ತು ಜೆಡಿಎಸ್‌ನವರಿಗೆ ತೋರಿಸಬೇಕಿದೆ ಎಂದು ತಿಳಿಸಿದರು.

ಮಾಜಿ ಮೇಯರ್ ಆರೀಫ್ ಹುಸೇನ್ ಮಾತನಾಡಿ, ಸಿದ್ದರಾಮಯ್ಯನವರಿಗೆ ಕೆಟ್ಟ ಹೆಸರು ತರಲು ಬಹಳ ಕಷ್ಟಪಟ್ಟು ಬಿಜೆಪಿ ಮತ್ತು ಜೆಡಿಎಸ್‌ನವರು ಪ್ರಯತ್ನಿಸುತ್ತಿದ್ದಾರೆ. ಇಂತಹ ಕುತಂತ್ರಕ್ಕೆ ಉಪಚುನಾವಣೆಯಲ್ಲಿ ಜನ ತಕ್ಕಪಾಠ ಕಲಿಸಿದ್ದಾರೆ. ಆ ಮೂಲಕ ಸಿದ್ದರಾಮಯ್ಯನವರಿಗೆ ಬೆಂಬಲ ಸೂಚಿಸಿದ್ದಾರೆ. ಸಿದ್ದರಾಮಯ್ಯನವರು ಯಾವುದೇ ಒಂದು ವರ್ಗಕ್ಕೆ ಸೀಮಿತವಲ್ಲ. ಸಮಾವೇಶ ಯಶಸ್ವಿಗೊಳಿಸುವ ನಿಟ್ಟಿನಲ್ಲಿ ನಮ್ಮ ಭಾಗದಿಂದ ಹೆಚ್ಚಿನ ಜನರನ್ನು ಕರೆದೊಯ್ಯಲಿದ್ದೇವೆ ಎಂದರು.



ಪೂರ್ವಭಾವಿ ಸಭೆಯಲ್ಲಿ ಸಮಾವೇಶದ ಪೋಸ್ಟರ್ ಅನ್ನು ಬಿಡುಗಡೆ ಮಾಡಲಾಯಿತು.

ವಿ.ಶ್ರೀನಿವಾಸ ಪ್ರಸಾದ್ ಸಹೋದರ ವಿ.ರಾಮಸ್ವಾಮಿ ಮಾತನಾಡಿ, ನಾವೆಲ್ಲರೂ ಒಗ್ಗಟ್ಟಿನಿಂದ ಪ್ರಾಮಾಣಿಕವಾಗಿ ಜವಾಬ್ದಾರಿ ನಿಭಾಯಿಸಿ ಸಮಾವೇಶ ಯಶಸ್ವಿಗೊಳಿಸಬೇಕು. ಸಮಾವೇಶದ ಮೂಲಕ ಸಿದ್ದರಾಮಯ್ಯನವರ ಕೈಯನ್ನು ಮತ್ತಷ್ಟು ಬಲಪಡಿಸಬೇಕು. ಉಪಚುನಾವಣೆ ಫಲಿತಾಂಶ ಸಿದ್ದರಾಮಯ್ಯನವರ ವರ್ಚಸ್ಸು ಅನ್ನು ಮತ್ತಷ್ಟು ಹೆಚ್ಚಿಸಿದೆ ಎಂದು ಹೇಳಿದರು.

ದಸಂಸ ಮುಖಂಡ ದೇವಗಳ್ಳಿ ಸೋಮಶೇಖರ್ ಮಾತನಾಡಿ, ಸಿದ್ದರಾಮಯ್ಯನವರ ವಿರುದ್ಧ ಸುಳ್ಳನ್ನು 10 ಬಾರಿ ಹೇಳಿ ಅದನ್ನೇ ಸತ್ಯವೆಂದು ಬಿಂಬಿಸುವ ಪ್ರಯತ್ನ ನಡೆಯುತ್ತಿದೆ. ಸಿದ್ದರಾಮಯ್ಯನವರು ಪ್ರಜಾಪ್ರಭುತ್ವದ ಧ್ವನಿಯಾಗಿದ್ದಾರೆ. ಆ ಧ್ವನಿ ಉಳಿಸಿಕೊಳ್ಳುವ ಮೂಲಕ ಶೋಷಿತ ಸಮುದಾಯಗಳ ಅಸ್ತಿತ್ವ ಉಳಿಸಬೇಕಿದೆ. ಜನರು ಸ್ವಯಂಪ್ರೇರಿತವಾಗಿ ಸಮಾವೇಶಕ್ಕೆ ಬರಲು ತಯಾರಿದ್ದಾರೆ. ಆದರೆ ಕರೆದುಕೊಂಡು ಹೋಗುವ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ಮಾಡಬೇಕಿದೆ ಎಂದರು.

2 ಲಕ್ಷ ಜನ ಸೇರಿಸಬೇಕೆಂಬ ಗುರಿ: ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯ್ ಕುಮಾರ್ ಮಾತನಾಡಿ, ಇದು ಕಾಂಗ್ರೆಸ್ ಬ್ಯಾನರ್‌ನಲ್ಲಿ ನಡೆಯುತ್ತಿರುವ ಸಮಾವೇಶವಲ್ಲ. ಮೂರು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಜಯಭೇರಿ ಭಾರಿಸಿದ್ದು, ಇದರ ಹಿಂದಿರುವ ಸತ್ಯವೆಂದರೆ ಸಿದ್ದರಾಮಯ್ಯ ನಿಷ್ಕಳಂಕರು ಎಂಬುದಾಗಿದೆ. ಜೊತೆಗೆ ಕಾಂಗ್ರೆಸ್ ಸರ್ಕಾರದ ಸಚಿವರು ಪ್ರಾಮಾಣಿಕರು ಮತ್ತು ದಕ್ಷವಾಗಿ ಆಡಳಿತ ನಡೆಸುತ್ತಿದ್ದಾರೆ ಎಂಬುದರ ಪ್ರತಿಬಿಂಬವಾಗಿದೆ. ಸಮಾವೇಶದಲ್ಲಿ 2 ಲಕ್ಷ ಜನ ಸೇರಿಸಬೇಕೆಂಬ ಗುರಿ ಹೊಂದಲಾಗಿದೆ ಎಂದರು.

ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಮಾತನಾಡಿ, ಸಿದ್ದರಾಮಯ್ಯನವರು ಕೇವಲ ಒಂದು ವರ್ಗಕ್ಕೆ ಸೇರಿದವರಲ್ಲ. ಏಳು ಕೋಟಿ ಕರ್ನಾಟಕದ ಜನತೆಗೆ ಸೇರಿದವರು. ಕರ್ನಾಟಕ ಮತ್ತು ಕಾಂಗ್ರೆಸ್‌ನ ಆಸ್ತಿ. ಅವರಿಗೆ ದುರುದ್ದೇಶದಿಂದ ಕಳಂಕ ತಂದಿದ್ದು, ಈ ಹಿನ್ನೆಲೆಯಲ್ಲಿ ಇವತ್ತಿಗಾಗಲೇ ಕನಿಷ್ಠ ಮೈಸೂರು ಜಿಲ್ಲೆಯಲ್ಲಿ ದೊಡ್ಡ ಚಳವಳಿ ಮೂಲಕ ಭಾರಿ ಆಕ್ರೋಶ ವ್ಯಕ್ತವಾಗಬೇಕಿತ್ತು. ಆಗದೇ ಇರುವುದು ನನಗೆ ನೋವು ತಂದಿದೆ ಎಂದು ಬೇಸರ ವ್ಯಕ್ತಪಡಿಸಿದರು. ಸಮಾವೇಶದ ಮೂಲಕ ರಾಜ್ಯದಲ್ಲಿ ಇನ್ನು ಕನಿಷ್ಠ 10 ವರ್ಷಗಳ ಕಾಲ ರಾಜ್ಯದಲ್ಲಿ ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ಇರಲಿದೆ ಎಂಬ ಸಂದೇಶ ರವಾನಿಸಬೇಕಿದೆ ಎಂದರು.

ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ರಾಜ್ಯಾಧ್ಯಕ್ಷ ಕೆ.ಎಸ್.ಶಿವರಾಮು ಮಾತನಾಡಿ, ಬಿಜೆಪಿ, ಜೆಡಿಎಸ್ ಸೇರಿದಂತೆ ಪಟ್ಟಭದ್ರ ಹಿತಾಸಕ್ತಿಗಳು ಸಿದ್ದರಾಮಯ್ಯನವರನ್ನು ಮುಖ್ಯಮಂತ್ರಿ ಸ್ಥಾನದಿಂದ ಇಳಿಸಲು ಷಡ್ಯಂತ್ರ ಮಾಡುತ್ತಿವೆ. ಶೋಷಿತ ಸಮುದಾಯಗಳ ಶ್ರೇಯೋಭಿವೃದ್ಧಿಗಾಗಿ ಅವರು ಮುಖ್ಯಮಂತ್ರಿಯಾಗಿ ಮುಂದುವರೆಯಬೇಕಿದೆ. ಅವರು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿದರೆ ಈ ಸಮುದಾಯಗಳಿಗೆ ನಷ್ಟವಾಗಲಿದೆ. ಈ ಸಮಾವೇಶ ನಮ್ಮ ಸಮುದಾಯಗಳ ಅಸ್ತಿತ್ವದ ಪ್ರಶ್ನೆಯಾಗಿದೆ ಎಂದು ಹೇಳಿದರು.

ಕರ್ನಾಟಕ ಪ್ರದೇಶ ಕುರುಬರ ಸಂಘದ ಮಾಜಿ ಅಧ್ಯಕ್ಷ ಬಿ.ಸುಬ್ರಹ್ಮಣ್ಯ ಮಾತನಾಡಿ, ಸ್ವಾಭಿಮಾನಿ ಸಮಾವೇಶದಲ್ಲಿ ಮೈಸೂರು ನಗರ ಮತ್ತು ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಜನರನ್ನು ಕರೆದೊಯ್ಯಬೇಕಿದೆ. ಈ ನಿಟ್ಟಿನಲ್ಲಿ ಇಲ್ಲಿ ನೆರೆದಿರುವ ಪ್ರತಿಯೊಬ್ಬರು ಸಹಕಾರ ನೀಡಬೇಕೆಂದು ಕೋರುವೆ. ಪ್ರಗತಿಪರ ಸಂಘಟನೆಗಳು ಈ ಸಮಾವೇಶ ಆಯೋಜಿಸಿದ್ದು, ಇದರಲ್ಲಿ ಸಿದ್ದರಾಮಯ್ಯನವರ ಯಾವ ಪಾತ್ರವೂ ಇಲ್ಲ. ಸಮಾವೇಶದಲ್ಲಿ ಮೈಸೂರು ನಗರ ಮತ್ತು ಜಿಲ್ಲೆಯಿಂದ ಕನಿಷ್ಠ ಲಕ್ಷ ಜನ ಕರೆದೊಯ್ಯಬೇಕಿದೆ ಎಂದರು.

ಜಿಪಂ ಮಾಜಿ ಅಧ್ಯಕ್ಷ ಬಿ.ಎಂ.ರಾಮು, ಮಾಜಿ ಮೇಯರ್‌ಗಳಾದ ಚಿಕ್ಕಣ್ಣ, ಪುಷ್ಪಲತಾ ಚಿಕ್ಕಣ್ಣ, ಕಾಂಗ್ರೆಸ್ ಮುಖಂಡರಾದ ಎಂ.ಶಿವಣ್ಣ, ಎನ್.ಭಾಸ್ಕರ್, ಕೆಆರ್ ಸಹಕಾರ ಬ್ಯಾಂಕ್ ಅಧ್ಯಕ್ಷ ಬಸಪ್ಪ ಬಸವರಾಜು, ವಿವಿಧ ಸಂಘಟನೆಗಳ ಮುಖಂಡರಾದ ಯೋಗೀಶ್ ಉಪ್ಪಾರ್, ದ್ಯಾವಪ್ಪನಾಯಕ, ಡಿ.ನಾಗಭೂಷಣ್ ಮತ್ತಿತರರು ಸಭೆಯಲ್ಲಿ ಪಾಲ್ಗೊಂಡಿದ್ದರು.

ಕಂದಾಯ ಇಲಾಖೆ ನ್ಯಾಯಿಕ ಕೋರ್ಟ್‌ಗಳಲ್ಲಿ ದಾಖಲಾಗುವ ಪ್ರಕರಣದ

ಉಭಯ ಪಕ್ಷಕಾರರ ಹೆಸರು, ಪಿನ್‌ಕೋಡ್, ವಿಳಾಸ ನಮೂದಿಸಲು ಸೂಚನೆ

ಮೈಸೂರು, ನ.26(ಎಸ್‌ಪಿಎನ್)– ರಾಜ್ಯದ ಕಂದಾಯ ಇಲಾಖೆಯಡಿ ಬರುವ ಎಲ್ಲಾ ಆಡಳಿತಾತ್ಮಕ ಹಾಗೂ ಅರೆ ನ್ಯಾಯಿಕ ನ್ಯಾಯಾಲಯಗಳಲ್ಲಿ ದಾಖಲಾಗುವ ಪ್ರಕರಣಗಳಲ್ಲಿ ಉಭಯ ಪಕ್ಷಕಾರರ ಹೆಸರು ಹಾಗೂ ಪಿನ್‌ಕೋಡ್ ಒಳಗೊಂಡಂತೆ ಪೂರ್ಣ ವಿಳಾಸ ನಮೂದಿಸುವಂತೆ ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿ ರಾಜೇಂದರ್ ಕುಮಾರ್ ಕಟಾರಿಯಾ ಸುತ್ತೋಲೆ ಹೊರಡಿಸಿದ್ದಾರೆ.

ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು, ಉಪ ವಿಭಾಗಾಧಿಕಾರಿಗಳು, ತಹಶೀಲ್ದಾರರ ನ್ಯಾಯಾಲಯಗಳಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ಮತ್ತು ಇತರೆ ಕಾಯ್ದೆಗಳ ಅಡಿಯಲ್ಲಿ ದಾಖಲಾಗುವ ಅರ್ಜಿಗಳು ಮತ್ತು ಮೇಲ್ಮನವಿಯಂತಹ ಅರೆ ನ್ಯಾಯಿಕ ಪ್ರಕರಣಗಳಲ್ಲಿ ಶಾಸನಬದ್ಧ ಪ್ರಾಧಿಕಾರಗಳು ಕಾನೂನಿನ್ವಯ ಅರೆ ನ್ಯಾಯಿಕ ಅಧಿಕಾರವನ್ನು ಚಲಾಯಿಸಿ ಆದೇಶಿಸುವಂತೆ ಸೂಚಿಸಿದ್ದಾರೆ.

ಕಲಬುರಗಿ ಹೈಕೋರ್ಟ್ ಪೀಠದಲ್ಲಿ ರಾಯಚೂರು ಉಪ ವಿಭಾಗದ ಉಪ ವಿಭಾಗಾಧಿಕಾರಿ ಅವರು, ಪ್ರಕರಣ ಸಂಖ್ಯೆ:ಆರ್‌ಆರ್‌ಟಿ/ಅಪಿಲ್/162/2022ರಲ್ಲಿ ದಿನಾಂಕ:15.06.2023 ರಂದು ಹೊರಡಿಸಿರುವ ಆದೇಶವನ್ನು ವಜಾಗೊಳಿಸುವಂತೆ ಕೋರಿ ದಾಖಲಿಸಿರುವ ರಿಟ್ ಅರ್ಜಿ ಸಂ:202133/2024ರ ಪ್ರಕರಣದಲ್ಲಿ ವಿಚಾರಣೆ ನಡೆಸಿ ದಿ:26.09.2024ರಂದು ನ್ಯಾಯಾಲಯವು ಈ ಆದೇಶ ನೀಡಿದೆ.

ಈ ಆದೇಶದಂತೆ ಕಂದಾಯ ಇಲಾಖೆ ಬರುವ ಎಲ್ಲಾ ಅರೆ ನ್ಯಾಯಿಕ ನ್ಯಾಯಾಲಯಗಳಲ್ಲಿ ದಾಖಲಾಗುವ ಪ್ರಕರಣಗಳ ಕೇಸ್ ಟೈಟಲ್‌ನಲ್ಲಿ ಪ್ರಕರಣಗಳು ದಾಖಲಾಗುವಾಗ ಉಭಯ ಪಕ್ಷದಾರರ ಹೆಸರು, ಪಿನ್‌ಕೋಡ್ ಒಳಗೊಂಡ ಪೂರ್ಣ ವಿಳಾಸ, ಮೊಬೈಲ್, ದೂರವಾಣಿ ಸಂಖ್ಯೆ, ಇ–ಮೇಲ್ ವಿಳಾಸವನ್ನು ಸಂಗ್ರಹಿಸಿ ದಾಖಲಿಸುವುದು ಹಾಗೂ ಸದರಿ ಪ್ರಕರಣಗಳಲ್ಲಿ ಹೊರಡಿಸಲಾಗುವ ಆದೇಶಗಳಲ್ಲಿಯೂ(ಕೇಸ್ ಟೈಟಲ್)ಸಹ ಪೂರ್ಣ ವಿಳಾಸವನ್ನು ಕಡ್ಡಾಯವಾಗಿ ನಮೂದು ಮಾಡಲು ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ.

ಅರ್ಧವಾರ್ಷಿಕ ಪರೀಕ್ಷೆಯ ಮೌಲ್ಯಮಾಪನ: ರಾಜ್ಯದ ಮನವಿಗೆ 'ಸುಪ್ರೀಂ' ನಕಾರ

ನವದೆಹಲಿ: 2024–25ನೇ ಶೈಕ್ಷಣಿಕ ವರ್ಷದಲ್ಲಿ ಎಸ್ಸೆಸ್ಸೆಲ್ಸಿಗೆ ನಡೆಸಿದ ಪರೀಕ್ಷೆಯ ಅರ್ಧವಾರ್ಷಿಕ ಮೌಲ್ಯಮಾಪನಕ್ಕೆ ಅನುಮತಿ ವಿಷಯದಲ್ಲಿ ಅಕ್ಟೋಬರ್ 21 ರಂದು ನೀಡಿದ ಆದೇಶವನ್ನು ಮಾರ್ಪಡಿಸುವಂತೆ ಕರ್ನಾಟಕ ಸರ್ಕಾರ ಮಾಡಿದ ಮನವಿಯನ್ನು ಸುಪ್ರೀಂ ಕೋರ್ಟ್ ಮಂಗಳವಾರ ತಿರಸ್ಕರಿಸಿದೆ.

ನ್ಯಾಯಮೂರ್ತಿಗಳಾದ ಬೇಲಾ ಎಂ. ತ್ರಿವೇದಿ ಮತ್ತು ಸತೀಶ್ ಚಂದ್ರ ಶರ್ಮಾ ಅವರ ಪೀಠವು ರಾಜ್ಯ ಸರ್ಕಾರ ಸಲ್ಲಿಸಿದ ಅರ್ಜಿಯನ್ನು ಪರಿಗಣಿಸಲು ನಿರಾಕರಿಸಿತು. ಈ ಮೌಲ್ಯಮಾಪನವು ವಿದ್ಯಾರ್ಥಿಯ ಒಟ್ಟಾರೆ ಫಲಿತಾಂಶದ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ ಎಂದು ಪೀಠ ಅಭಿಪ್ರಾಯಪಟ್ಟಿತು.

8, 9 ಮತ್ತು 10ನೇ ತರಗತಿಗಳಿಗೆ ಅರ್ಧ ವಾರ್ಷಿಕ ಮೌಲ್ಯಾಂಕನ (ಬೋರ್ಡ್) ಪರೀಕ್ಷೆಗಳನ್ನು ನಡೆಸಿದ್ದ ಕರ್ನಾಟಕ ಸರ್ಕಾರವನ್ನು ಪೀಠವು ಅಕ್ಟೋಬರ್ 21ರಂದು ತರಾಟೆಗೆ ತೆಗೆದುಕೊಂಡಿತ್ತು. ಮುಂದಿನ ಆದೇಶದವರೆಗೆ ಬೋರ್ಡ್ ನಡೆಸದಂತೆ ಅಥವಾ ಈಗಾಗಲೇ ನಡೆದಿರುವ ಪರೀಕ್ಷೆಗಳ ಫಲಿತಾಂಶಗಳನ್ನು ಪ್ರಕಟಿಸದಂತೆ ನಿರ್ಬಂಧ ವಿಧಿಸಿತ್ತು.

ಕರ್ನಾಟಕ ಹೈಕೋರ್ಟ್‌ನ ತೀರ್ಪಿನ ವಿರುದ್ಧ ಅನುದಾನರಹಿತ ಮಾನ್ಯತೆ ಪಡೆದ ಶಾಲೆಗಳ ಒಕ್ಕೂಟ ಸಲ್ಲಿಸಿದ ಮೇಲ್ಮನವಿಯ ವಿಚಾರಣೆ ನಡೆಸಿದ್ದ ಪೀಠವು, 'ವಿದ್ಯಾರ್ಥಿಗಳ ಕತ್ತು ಹಿಸುಕುವ ಕೆಲಸ ಮಾಡಬೇಡಿ ಎಂದು ಕಟುವಾಗಿ ಹೇಳಿತ್ತು.

ನಕ್ಕರೆ ಅದೇ ಸ್ವರ್ಗ

ಹುಡುಗಿ : ನಿನಗೆ ಒಂದು ವಿಷಯ ಗೊತ್ತಾ, ನಾನು ಈ ಸಾರಿ ಎಕ್ಸಾಮ್‌ನಲ್ಲಿ ಫೇಲ್ ಆದ್ರೆ ನಮ್ಮ ಅಪ್ಪ ನನ್ನ ಆಟೋ ಓಡಿಸೋನಿಗೆ ಕೊಟ್ಟು ಮದುವೆ ಮಾಡ್ತಾರಂತೆ.

ಹುಡುಗ : ಹೆದರಬೇಡ ಬೇಬಿ! ನಾನು ಎಕ್ಸಾಮ್‌ನಲ್ಲಿ ಫೇಲ್ ಆದ್ರೆ ನಮ್ಮಪ್ಪ ನನಗೆ ಆಟೋ ಕೊಡಿಸ್ತಾರಂತೆ...

ಮೈಸೂರು ಮಿತ್ರ

ಬುಧವಾರ, 27 ನವೆಂಬರ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ..........

ತೆರೆದ ಮನಸ್ಸಿನಿಂದ ಎಲ್ಲವನ್ನೂ ಕೇಳಿಸಿಕೊಳ್ಳಬೇಕು , ನಮಗೆ ಅಗತ್ಯವೆನಿಸಿದ್ದನ್ನು ಮಾತ್ರ ಉಳಿಸಿಕೊಳ್ಳಬೇಕು. –ಜೆ.ಜೆ. ಗ್ರೀನ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಬಾಯಲೆಲ್ಲಾ ವೇದಾಂತ, ಮಾಡುವುದೆಲ್ಲಾ ರಾದ್ಧಾಂತ.

ನಿಮ್ಮ ಪತ್ರಗಳು

ಚಿನ್ನದ ರಥದ ಬದಲು ಬೆಟ್ಟದ ತಾಯಿ ಚಾಮುಂಡೇಶ್ವರಿಗೇಕೆ ಚಿನ್ನದ ಗೋಪುರ ಮಾಡಬಾರದು?

ಮಾನ್ಯರೇ,

ಸೋಮವಾರ (ನ.25)'ಮೈಸೂರು ಮಿತ್ರ'ನ ಮುಖಪುಟದಲ್ಲಿ ಚಾಮುಂಡಿ ಬೆಟ್ಟದ ಶ್ರೀ ಚಾಮುಂಡೇಶ್ವರಿ ದೇವಾಲಯಕ್ಕೆ ಚಿನ್ನದ ರಥ ಮಾಡಿಸುವ ಪ್ರಸ್ತಾವನೆಯ ಸುದ್ದಿ ಪ್ರಕಟವಾಗಿದೆ. ಚಾಮುಂಡಿಬೆಟ್ಟದ ಮೇಲಿರುವ ಶ್ರೀ ಚಾಮುಂಡೇಶ್ವರಿ ದೇವಸ್ಥಾನಕ್ಕೆ ಚಿನ್ನದ ರಥವನ್ನು ಕಲ್ಪಿಸುವ ಐದು ವರ್ಷಗಳ ಹಿಂದಿನ (2019) ಈ ಪ್ರಸ್ತಾವನೆಯನ್ನು ಇತ್ತೀಚೆಗೆ ನಡೆದ ಸಭೆಯಲ್ಲಿ ಮತ್ತೆ ಪ್ರಸ್ತಾಪಿಸಲಾಗಿದೆ ಎಂದು ವರದಿ ಹೇಳಿದೆ. ಪ್ರಸ್ತಾವನೆ ಪ್ರಕಾರ ರಥಕ್ಕೆ 7 ಕೋಟಿ ರೂ.ಗೂ ಅಧಿಕ ವೆಚ್ಚವಾಗಲಿದೆ.



ಅಷ್ಟಕ್ಕೂ ಈ ರಥವನ್ನು ವರ್ಷದಲ್ಲಿ ಎರಡು ಅಥವಾ ಮೂರು ಬಾರಿ ಮಾತ್ರ ಬಳಸಿ, ನಂತರ ಸಾರ್ವಜನಿಕ ವೀಕ್ಷಣೆಗೂ ಅವಕಾಶ ನೀಡದೆ ಮುಚ್ಚಿ ಸುರಕ್ಷಿತ ಸ್ಥಳದಲ್ಲಿ ಇರಿಸಲಾಗುತ್ತದೆ. ಹಾಗಾಗಿ 7 ಕೋಟಿ ರೂ. ವೆಚ್ಚದ ರಥವನ್ನು ಕೆಲವೇ ಸಂದರ್ಭಗಳಿಗೆ ಸೀಮಿತಗೊಳಿಸಿದಂತಾಗುತ್ತದೆ. ಆದರೆ, ಚಿನ್ನದ ರಥದ ಬದಲಿಗೆ, ಅಧಿಕಾರಿಗಳು ನಗರದ ಎಲ್ಲಾ ದಿಕ್ಕಿನಿಂದ ಗೋಚರಿಸುವ ಚಾಮುಂಡೇಶ್ವರಿ ದೇವಸ್ಥಾನದ ಭವ್ಯವಾದ ಗೋಪುರಕ್ಕೆ ಚಿನ್ನದ ಮೆರಗು ನೀಡಲು ಅದೇ ಪ್ರಮಾಣದ ಚಿನ್ನವನ್ನು ಬಳಸಲು ಪರಿಗಣಿಸಬಹುದು.

ರಾತ್ರಿ ವೇಳೆ ಗೋಪುರವನ್ನು ಫ್ಲಡ್‌ಲೈಟ್‌ಗಳಿಂದ ಬೆಳಗಿಸಿದಾಗ, ಅದರ ಸೌಂದರ್ಯವು ನಿಜಕ್ಕೂ ದಿವ್ಯವಾಗಿರುತ್ತದೆ ಮತ್ತು ದ್ವಿಗುಣಗೊಳ್ಳುತ್ತದೆ. ನೋಡುಗರ ಕಣ್ಣಿಗೆ ಹಬ್ಬವನ್ನು ಉಂಟು ಮಾಡುತ್ತದೆ. ಅಷ್ಟಕ್ಕೂ, ಚಾಮುಂಡೇಶ್ವರಿಯು ಸ್ತ್ರೀ ದೇವತೆಯಾಗಿರುವುದರಿಂದ, ಆಕೆಯ ವೈಭವ ಪ್ರದರ್ಶಿಸಲು ಗೋಪುರಕ್ಕೆ ಚಿನ್ನದ ಮೆರಗು ನೀಡುವುದರಿಂದ ದೇವಿಯು ಪ್ರಸನ್ನಳಾಗಬಹುದು.

ಪ್ರಪಂಚದಲ್ಲಿ ನಾನಾ ಕಡೆ ಮಸೀದಿ, ಗುರುದ್ವಾರಗಳು ಮತ್ತು ಮಂದಿರಗಳ ಗೋಪುರಗಳಿಗೆ ಚಿನ್ನದ ಲೇಪನವಿರುವ ಸಾಕಷ್ಟು ಉದಾಹರಣೆಗಳಿವೆ. ಅಮೃತಸರದ ಗೋಲ್ಡನ್ ಟೆಂಪಲ್, ಡೋಮ್ ಆಫ್ ದಿ ರಾಕ್, ಜೆರುಸಲೇಂನ ಮಸೀದಿ, ವೆಲ್ಲೂರಿನ ಶ್ರೀ ಲಕ್ಷ್ಮೀ ನಾರಾಯಣಿ ಗೋಲ್ಡನ್ ಟೆಂಪಲ್, ಶ್ರೀ ಕಾಶಿ ವಿಶ್ವನಾಥ ದೇವಸ್ಥಾನ ಇನ್ನೂ ಅನೇಕ ದೇವಸ್ಥಾನಗಳು ಸುವರ್ಣ ವೈಭವವನ್ನು ಹೊಂದಿದ್ದು, ಇವುಗಳಲ್ಲಿ ನಮ್ಮ ಚಾಮುಂಡೇಶ್ವರಿ ದೇವಿಯ ಗೋಪುರವೂ ಒಂದಾಗಲಿ.

–ಡಾ.ಕೆ.ಬಿ.ಗಣಪತಿ,
ಸಂಸ್ಥಾಪಕ ಸಂಪಾದಕರು,
'ಮೈಸೂರು ಮಿತ್ರ', ಮೈಸೂರು, 26.11.2024

ಬಿಪಿಎಲ್ ಕಾರ್ಡ್: ಅಮಾಯಕರ ದುರ್ಬಳಕೆ

ಮಾನ್ಯರೆ,

ರಾಜ್ಯದಲ್ಲಿ ಸುಮಾರು 11 ಲಕ್ಷ ಬಿಪಿಎಲ್ ಪಡಿತರ ಚೀಟಿಗಳನ್ನು ರದ್ದುಗೊಳಿಸಲಾಗುತ್ತಿದೆ ಎಂಬ ಸುದ್ದಿಗೆ ಪ್ರತಿಯಾಗಿ ಅನರ್ಹರು ಅಂದರೆ ಆದಾಯ ತೆರಿಗೆ ಪಾವತಿಸುತ್ತಿರುವವರು, ಸರ್ಕಾರಿ ನೌಕರಿ ಹೊಂದಿರುವವರು, ಇತ್ಯಾದಿ ಬಡತನ ರೇಖೆಗಿಂತ ಮೇಲಿರುವವರನ್ನು ಪರಿಶೀಲಿಸಿದ ನಂತರ ಅವರು ಪಡೆದಿರುವ ಬಿಪಿಎಲ್ ಪಡಿತರ ಚೀಟಿಗಳನ್ನು ಎಪಿಎಲ್ ಆಗಿ ಪರಿವರ್ತಿಸಲಾಗಿದೆ ರದ್ದುಗೊಳಿಸಿಲ್ಲವೆಂದು ಮುಖ್ಯಮಂತ್ರಿಗಳು ಸ್ಪಷ್ಟೀಕರಣ ನೀಡಿದ್ದಾರೆ.

ಕೆಲವೊಂದು ದೃಶ್ಯ ಮಾಧ್ಯಮಗಳಲ್ಲಿ ಬಿಪಿಎಲ್ ಪಡಿತರ ಚೀಟಿಯ ಸೌಲಭ್ಯ ರದ್ದು ಗೊಂಡಿರುವ ಕೆಲವು ಕುಟುಂಬಗಳು ನೆಲಸಿರುವ ವಸತಿಯ ವೀಡಿಯೋದೊಂದಿಗೆ ಅವರ ಆರ್ಥಿಕ ಸ್ಥಿತಿಗತಿಯ ವಾಸ್ತವವನ್ನು ಪ್ರಸಾರ ಮಾಡುತ್ತಿರುವುದು ಕಂಡುಬಂದಿದೆ. ಅಲ್ಲಿ ಕುಟುಂಬದ ಸದಸ್ಯರು ನೀಡುತ್ತಿರುವ ಕಾರಣವನ್ನು ಗಮನಿಸಿದಾಗ ಪ್ರಮುಖವಾಗಿ ಅವರು ಕಾರು ಹೊಂದಿದ್ದು, ಈಗ ಮಾರಾಟ ಮಾಡಿರುವುದಾಗಿ ತಿಳಿಸಿದ್ದಾರೆ ಹಾಗೂ ಕಂಡುಬರುತ್ತಿರುವ ಮತ್ತೊಂದು ಕಾರಣ ಆದಾಯ ತೆರಿಗೆ ಪಾವತಿದಾರರಾಗಿರುವುದು. ಕೆಲವೊಮ್ಮೆ ಯುವಕರು ಐಷಾರಾಮಿ ಜೀವನಕ್ಕಾಗಿ ಕುಟುಂಬದ ಆರ್ಥಿಕ ಪರಿಸ್ಥಿತಿ ಸರಿ ಇಲ್ಲದಿದ್ದರೂ ಇ.ಎಂ.ಐ. ಸೌಲಭ್ಯದಲ್ಲಿ ಕಾರು ಸಿಗುವುದರಿಂದ ಕಾರು ಖರೀದಿಸಿ ನಂತರ ಇ.ಎಂ.ಐ. ಕಟ್ಟಲಾಗದೇ ಮಾರಾಟ ಮಾಡಿರುವ ಸಂಭವಗಳು ಇರುತ್ತವೆ. ಅಂತಹ ಪ್ರಕರಣಗಳನ್ನು ಗಮನಿಸಬೇಕು. ಕೆಲವೊಮ್ಮೆ ಕಾನೂನು ನಿಬಂಧನೆ ಮತ್ತು ತೆರಿಗೆ ಉಳಿಸುವ ದೃಷ್ಟಿಯಿಂದ ಕೆಲವೊಂದು ಉದ್ಯಮಿಗಳು ಅಥವಾ ಸಿರಿವಂತರು ಬೇನಾಮಿಯಾಗಿ ತಮ್ಮ ಕೆಲಸಗಾರರ ಹೆಸರಲ್ಲಿ ಆದಾಯ ತೆರಿಗೆ ನೋಂದಣಿ ಹೊಂದಿರುವಂತಹ ಹಾಗೂ ವಾಹನಗಳನ್ನು ಹೊಂದಿರುವಂತಹ ಪ್ರಕರಣಗಳು ಇರಬಹುದು.

ಗ್ರಾಮ ಪಂಚಾಯಿತಿ, ತಾಲೂಕು ಪಂಚಾಯಿತಿ ಮುಂತಾದ ಸ್ಥಳೀಯ ಸಂಸ್ಥೆಗಳ ಸದಸ್ಯರು ಸರ್ಕಾರದ ಗುತ್ತಿಗೆ ಕಾರ್ಯವನ್ನು ನಿರ್ವಹಿಸಲು ನಿರ್ಬಂಧ ಇರುವುದರಿಂದ ಅಂತಹ ಸಂದರ್ಭದಲ್ಲಿ ಇವರು ಕೆಲವೊಂದು ಕೂಲಿಕಾರ್ಮಿಕರ ಹೆಸರಲ್ಲಿ ಜಿಎಸ್‌ಟಿ ನೋಂದಣಿ ಹೊಂದಿ ತಾವೇ ಕಾಮಗಾರಿಯನ್ನು ನಿರ್ವಹಿಸಿ ಅವರ ಬ್ಯಾಂಕ್ ಖಾತೆಯನ್ನು ನಿರ್ವಹಿಸುವ ಸಂಭವಗಳಿರುತ್ತವೆ. ಈ ವಾಸ್ತವ ಬಾಧಿತ ವ್ಯಕ್ತಿಗೂ ತಿಳಿದಿರುವುದಿಲ್ಲ. ಸಾಲ ಪಡೆದು ಸಣ್ಣದಾಗಿ ಮನೆಯಲ್ಲಿಯೇ ವ್ಯವಹಾರ ನಿರ್ವಹಿಸಲು ಉದ್ದೇಶಿಸುವರಿಗೆ ಬ್ಯಾಂಕ್‌ನವರು ಕರೆಂಟ್ ಅಕೌಂಟ್ ತೆರೆಯಲು ಸೂಚಿಸಲಿದ್ದು ಕರೆಂಟ್ ಅಕೌಂಟ್ ತೆರೆಯಲು ಜಿಎಸ್‌ಟಿ ನೋಂದಣಿ ಕೇಳುವುದರಿಂದ ಆ ಉದ್ದೇಶಕ್ಕಾಗಿ ಅವರ ವಹಿವಾಟು ಜಿಎಸ್‌ಟಿ ನೋಂದಣಿ ಮಿತಿಯಲ್ಲಿಲ್ಲದಿದ್ದರೂ ಜಿಎಸ್‌ಟಿ ನೋಂದಣಿ ಹೊಂದುವವರಿರುತ್ತಾರೆ. ಇಂತಹ ಪರಿಸ್ಥಿತಿಯಲ್ಲಿ ನಿಜವಾಗಿಯೂ ಅರ್ಹವಿರುವ ಬಡ ಕೂಲಿಕಾರ್ಮಿಕರು ಸರ್ಕಾರಿ ಸೌಲಭ್ಯದಿಂದ ವಂಚನೆಗೊಳಗಾಗುವ ಸಂಭವ ಇರುತ್ತದೆ.

ಈ ಹಿನ್ನೆಲೆಯಲ್ಲಿ ಇಲಾಖೆಯವರು ಜಾಲತಾಣದಲ್ಲಿ ದೊರೆಯುವ ಆಧಾರದ ಮೇಲೆ ಬಿಪಿಎಲ್ ಕಾರ್ಡ್ ರದ್ದುಪಡಿಸುತ್ತಿರುವ ಸಂಭವವಿದೆ. ಹಾಗಾಗಿ ಟಿ.ವಿ. ಮಾಧ್ಯಮಗಳಲ್ಲಿ ತೋರಿಸುತ್ತಿರುವ ಹಿಂದಿನ ವಾಸ್ತವತೆ ಇದಾಗಿರಬಹುದು. ಅರ್ಹ ಬಡವರು ಸೌಲಭ್ಯ ವಂಚಿತರಾಗದಂತೆ ಸರ್ಕಾರ ಮೇಲಿನ ಸಮಸ್ಯೆಗಳ ಪರಿಹಾರಕ್ಕಾಗಿ ಚಿಂತನೆ ಮಾಡುವುದು ಅವಶ್ಯಕ. ಹಾಗೂ ರಾಜಕೀಯ ಒತ್ತಡದಿಂದ ಅಧಿಕಾರಿಗಳ ಕುಮ್ಮಕ್ಕಿನಿಂದ ಅಥವಾ ಸುಳ್ಳು ಮಾಹಿತಿಯ ಆಧಾರದಲ್ಲಿ ಅನರ್ಹರು ಬಿಪಿಎಲ್ ಕಾರ್ಡ್ ಹೊಂದಿದ್ದರೆ ಅಂತಹವುಗಳನ್ನು ಯಾವುದೇ ಒತ್ತಡಕ್ಕೆ ಮಣಿಯದೆ ರದ್ದುಪಡಿಸಿ ಅರ್ಹರಿಗೆ ಅನ್ಯಾಯವಾಗದಂತೆ ತಡೆಯುವುದರ ಜೊತೆಗೆ ರಾಜ್ಯದ ರಾಜಸ್ವದ ದುರುಪಯೋಗವನ್ನು ತಡೆಗಟ್ಟಬೇಕು.

–ಕೆ.ಎಂ.ನಾಗರಾಜು, ವಿಜಯನಗರ 1ನೇ ಹಂತ, ಮೈಸೂರು



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ಶ್ರೀವಿಜಯನ ಕವಿರಾಜಮಾರ್ಗ

ಶ್ರೀ ವಿಜಯರ ಕವಿಮಾರ್ಗಂ
ಭಾವಿಪ ಕವಿಜನದ ಮನಕೆ ಕನ್ನಡಿಯುಂ ಕೈ
ದೀವಿಗೆಯು ಮಾದುವದರಿಂ
ಶ್ರೀ ವಿಜಯರ್ ದೇವರವರನೇ ವಣ್ಣಿಪುದೋ॥
(ದುರ್ಗಸಿಂಹನ ಪಂಚತಂತ್ರ)

ಕನ್ನಡದಲ್ಲಿ ಉಪಲಬ್ಧವಾದ ಗ್ರಂಥಗಳಲ್ಲಿ ಪ್ರಾಚೀನವಾದ ಗ್ರಂಥ ಕವಿರಾಜಮಾರ್ಗ. ಇದು ಕವಿಗಳ ರಾಜಮಾರ್ಗವೂ ಕವಿರಾಜರ ಮಾರ್ಗವೂ ಆಗಿದೆ. ಈ ಗ್ರಂಥವು ಹುಟ್ಟುವುದಕ್ಕೆ ಮುನ್ನವೂ ಕನ್ನಡದಲ್ಲಿ ಕವಿಗಳೂ ಗ್ರಂಥಗಳೂ ಇದ್ದುದರಲ್ಲಿ ಸಂಶಯವಿಲ್ಲ. ಕವಿರಾಜ ಮಾರ್ಗದಲ್ಲೇ ಹೇಳಿರುವಂತೆ–

ಪರಮ ಶ್ರೀ ವಿಜಯ ಕವೀ–
ಶ್ವರ ಪಂಡಿತ ಚಂದ್ರ ಲೋಕ ಪಾಲಾದಿಗಳಾ
ನಿರತಿಶಯವಸ್ತುವಿಸ್ತರ
ವಿರಚನೆ ಲಕ್ಷ್ಯಂ ತದಾದ್ಯಕಾವ್ಯಕ್ಕೆಂದುಂ॥ (I–32)

ಎಂಬುದರಿಂದ ಪರಮಶ್ರೀವಿಜಯ, ಕವೀಶ್ವರ, ಪಂಡಿತ ಚಂದ್ರ, ಲೋಕಪಾಲ ಮೊದಲಾದ ಕವಿಗಳಿದ್ದರೆಂಬುದು ವಿದಿತವಾಗುತ್ತದೆ. ಆದರೆ ದುರ್ದೈವದಿಂದ ಅವರ ಕೃತಿಗಳು ಇಂದು ಉಳಿದಿಲ್ಲ.

ಶ್ರೀವಿಜಯನೆಂಬ ಕವಿ ಅಮೋಘವರ್ಷ ನೃಪತುಂಗನೆಂಬ ರಾಷ್ಟ್ರಕೂಟ ಸಾಮ್ರಾಟನ ಆಶ್ರಯದಲ್ಲಿದ್ದವನು. ಅಮೋಘವರ್ಷನು ಕ್ರಿ.ಶ. ಒಂಬತ್ತನೆಯ ಶತಮಾನದಲ್ಲಿ (814 ರಿಂದ 879) ಆಳಿದ ಚಕ್ರವರ್ತಿ. ಕವಿರಾಜಮಾರ್ಗದಲ್ಲಿ ಮೂರು ಪರಿಚ್ಛೇದಗಳಿವೆ. ದೋಷಾದೋಷಾನುವರ್ಣನ ನಿರ್ಣಯಂ, ಶಬ್ದಾಲಂಕಾರ ವರ್ಣನ ನಿರ್ಣಯಂ, ಅರ್ಥಾಲಂಕಾರ ಪ್ರಕರಣಂ ಎಂದು ಪರಿಚ್ಛೇದಗಳ ಶೀರ್ಷಿಕೆಗಳು. ಇವುಗಳ ಕೊನೆಯಲ್ಲಿ 'ಇದು ಪರಮಶ್ರೀ ನೃಪತುಂಗ ದೇವಾನುಮತಮಪ್ಪ ಕವಿರಾಜ ಮಾರ್ಗದೊಳ್ ದೋಷಾದೋಷಾನು ವರ್ಣನ ನಿರ್ಣಯಂ ಪ್ರಥಮ ಪರಿಚ್ಛೇದಂ' ಇತ್ಯಾದಿ ಸಮಾಪ್ತಿ ವಾಕ್ಯಗಳು ಕಂಡು ಬರುವುದರಿಂದ ನೃಪತುಂಗನಿಗೆ ಒಪ್ಪಿಗೆಯಾಗುವ ಸಿದ್ಧಾಂತಗಳನ್ನು ಇಲ್ಲಿ ಕವಿ ಶ್ರೀ ವಿಜಯನು ನಿರೂಪಿಸಿದ್ದಾನೆ ಎಂಬುದು ಸ್ಪಷ್ಟ.

ಚಾರು ಶ್ರೀ ನೃಪತುಂಗ ವಿ
ಚಾರಕ್ರಮ ಮಾರ್ಗಗಣನೆಯೊಳ್ ಪರಮಾಲಂ–
ಕಾರವಿಭಾಗಂ ವಿವಿಧಾ–
ಕಾರಂ ಶಬ್ದಾರ್ಥಭೇದದಿಂದೆರಡಕ್ಕುಂ (II–2)

ಮುಂತಾದ ಕೆಲವು ಪದ್ಯಗಳಲ್ಲೂ ಈ ಅಂಶವು ಸ್ಫುಟವಾಗಿ ಹೇಳಲ್ಪಟ್ಟಿದೆ.

ಶ್ರೀ ವಿಜಯನು ದಂಡಿಯ ಕಾವ್ಯಾದರ್ಶವನ್ನು ಆಧಾರವಾಗಿಟ್ಟುಕೊಂಡು ಕವಿರಾಜ ಮಾರ್ಗವನ್ನು ರಚಿಸಿದ್ದಾನೆನ್ನುವುದು ಎರಡು ಗ್ರಂಥಗಳನ್ನೂ ಅಧ್ಯಯನ ಮಾಡಿದವರಿಗೆ ಅರಿವಾಗುತ್ತದೆ. ಆದರೆ–

ಪ್ರಣುತ ಗುಣಸೂರಿ ನಾರಾ–
ಯಣ ಭಾರವಿ ಕಾಳಿದಾಸಮಾಘಾದಿಗಳೀ
ಗಣಿದದೊಳೆ ಮಹಾಕಾವ್ಯ
ಪ್ರಣಯಮನಾಗಿಸಿದರಮಳಕವಿ ವೃಷಭರ್ಕಳ್ ॥ (I–31)

ಎಂದು ಅನೇಕ ಪ್ರಾಚೀನ ಕವಿಗಳನ್ನು ಸ್ಮರಿಸಿದ್ದರೂ ದಂಡಿಯ ಹೆಸರನ್ನು ಹೇಳದಿರುವುದು ಆಶ್ಚರ್ಯ. ಗ್ರಂಥದಲ್ಲಿರುವ ಅನೇಕ ಲಕ್ಷಣ ಪದ್ಯಗಳೂ ಲಕ್ಷ್ಯಗಳೂ ದಂಡಿಯ ಶ್ಲೋಕಗಳ ಪ್ರತಿಫಲನದಂತಿವೆ. ಉದಾಹರಣೆ–

ಅಸಾವುದಯಮಾರೂಢ:
ಕಾಂತಿಮಾನ್ ರಕ್ತಮಂಡಲ:
ರಾಜಾ ಹರತಿ ಲೋಕಸ್ಯ
ಹೃದಯಂ ಮೃದುಲೈಃ ಕರೈಃ ॥ (ದಂಡಿಯ ಕಾವ್ಯಾದರ್ಶ)

ಉದಯಾರೂಢಂ ಕಾಂತ್ಯಾ–
ಸ್ಪದನಮರಕ್ತಾತ್ಮ ಮಂಡಳಂ ಕುಮುದಕರಂ
ಮೃದುತರಕರಂಗಳಿಂದತಿ
ಮುದಮಂ ಲೋಕಕ್ಕೆ ಪಡೆಗುಮಿಂತೀ ರಾಜಂ ॥ (ಕವಿರಾಜಮಾರ್ಗ)

ಇಲ್ಲಿ ಶ್ಲೇಷಕ್ಕಾಗಿ ಬಳಸಲ್ಪಟ್ಟಿರುವ ಪದಗಳೆಲ್ಲ ಸಂಸ್ಕೃತ ಪದಗಳೇ. ಉದಯ = ಅಭ್ಯುದಯ, ಉದಯಪರ್ವತ; ರಕ್ತ ಮಂಡಲಃ = ಕೆಂಪು ಬಿಂಬ, ಅನುರಾಗವುಳ್ಳ ಪ್ರಜೆಗಳಿಂದ ಕೂಡಿದವನು; ರಾಜ= ದೊರೆ, ಚಂದ್ರ. ಕರ = ತೆರಿಗೆ, ಕಿರಣ.

ಇಂತಹ ಅನೇಕ ಪದ್ಯಗಳಲ್ಲಿ ಶ್ರೀ ವಿಜಯನು ದಂಡಿಗೆ ಋಣಿ. ಅವನು ದಂಡಿಯು ಹೇಳಿಲ್ಲದ, ಕನ್ನಡಕ್ಕೆ ವಿಶಿಷ್ಟವಾದ ಅನೇಕ ವಿಚಾರಗಳನ್ನೂ ಹೇಳಿದ್ದಾನೆ.

ನುತಶಬ್ದಾಲಂಕಾರದೊಳ್
ಅತಿಶಯಮೀ ಕನ್ನಡಕ್ಕೆ ಸತತಂ ಪ್ರಾಸಂ
ಕೃತಕೃತ್ಯಮಲ್ಲವಲ್ಲಭ
ಮತದಿಂದದರ ಪ್ರಪಂಚಮೀ ತೆರನಕ್ಕುಂ॥

ಎಂಬುದು ಅದರಲ್ಲೊಂದು. ದ್ವಿತೀಯಾಕ್ಷರಪ್ರಾಸ ಕನ್ನಡ ಮುಂತಾದ ದ್ರಾವಿಡ ಭಾಷೆಗಳಲ್ಲಿ ಕಂಡು ಬರುತ್ತದೆ. ಅದು ಆರು ವಿಧವಾಗಿರುತ್ತದೆ.

ವಿನುತ ಪ್ರಾಸಂ ಶಾಂತೋ–
ಪನತಂ ವರ್ಗೋದಿತಂ ಸಮೀಪಗತಂ ಮ–
ತ್ತನುಗತಮಂತಗತಂ ಸಂ–
ಜನಿತವಿಭೇದೋಕ್ತಿಯಿಂದ ಮಿಂತಾರು ತೆರಂ

ಎಂದರೆ 1) ವಿನುತಪ್ರಾಸ, ಶಾಂತಪ್ರಾಸ, ವರ್ಗಪ್ರಾಸ, ಸಮೀಪ ಪ್ರಾಸ, ಅನುಗತಪ್ರಾಸ, ಅಂತಪ್ರಾಸ ಎಂದು ಪ್ರಾಸದಲ್ಲಿ ಆರು ಪ್ರಕಾರಗಳನ್ನು ಹೇಳಿರುವುದು ಶ್ರೀ ವಿಜಯನ ವೈಶಿಷ್ಟ್ಯ.

ಕನ್ನಡಿಗರಲ್ಲಿ ಶ್ರೀ ವಿಜಯನಿಗಿದ್ದ ಅಭಿಮಾನ

ಪದನರಿದು ನುಡಿಯಲುಂ ನುಡಿ–
ದುದನರಿದಾರಯಲು ಮಾರ್ಪರಾ ನಾಡವರ್ಗಳ್
ಚದುರರ್ ನಿಜದಿಂ ಕುರಿತೋ–
ದದೆಯುಂ ಕಾವ್ಯಪ್ರಯೋಗ ಪರಿಣಮತಮತಿಗಳ್ ॥ (I-38)

ಹದವನ್ನು ಅರಿತು ಮಾತನಾಡಲು, ನುಡಿದುದನ್ನು ಅರಿತು ನಡೆದುಕೊಳ್ಳಲು ಕನ್ನಡ ನಾಡಿನವರು ಸಮರ್ಥರು. ಚತುರರಾದ ಅವರು ಉದ್ದೇಶಪೂರ್ವಕವಾಗಿ ಓದದಿದ್ದರೂ ಕಾವ್ಯ ರಚನೆಯಲ್ಲಿ ಪ್ರವೀಣರು.

ಕುರಿತವರಲ್ಲದೆ ಮತ್ತಂ
ಪೆರರುಂ ತಂತಮ್ಮ ನುಡಿಯೊಳೆಲ್ಲರ್ ಜಾಣರ್ ।
ಕಿರುವಕ್ಕಳ್ ಮಾಮೂಗರುಮ್
ಅರಿಪಲ್ಕರಿವರ್ ವಿವೇಕಮಂ ಮಾತುಗಳಂ । (I-39)

ಕಲಿತವರೇ ಅಲ್ಲದೆ ಬೇರೆಯವರೂ ತಮ್ಮ ತಮ್ಮ ಮಾತಿನಲ್ಲಿ ಜಾಣರು. ಚಿಕ್ಕ ಮಕ್ಕಳೂ ಮೂಗರೂ ಕೂಡ ವಿವೇಕವನ್ನು ಒಳ್ಳೆಯ ಮಾತನ್ನೂ ತಿಳಿಸಲು ಶಕ್ತರು. ಹೀಗೆ ಕವಿರಾಜ ಮಾರ್ಗಕಾರನು ಕನ್ನಡಿಗರನ್ನು ಅಭಿಮಾನದಿಂದ ಹೊಗಳಿದ್ದಾನೆ.

ನೃಪತುಂಗ ಮಹಾರಾಜನನ್ನಂತೂ ಅನೇಕ ವಿಶೇಷಣಗಳಿಂದ ಶ್ರೀ ವಿಜಯನು ಬಣ್ಣಿಸಿದ್ದಾನೆ. ನೀತಿ ನಿರಂತರ, ಉದಾರ, ಕೃತ್ಯಮಲ್ಲ, ಅಪ್ರತಿಹತ ವಿಕ್ರಮ, ಅತಿಶಯ ಧವಳ, ವಿವೇಕ ಬೃಹಸ್ಪತಿ, ನರಲೋಕ ಚಂದ್ರ, ಅಖಿಳಧರಾವಲ್ಲಭ ಇತ್ಯಾದಿಗಳು ಅವನು ಕಲ್ಪಿಸಿರುವ ವಿಶೇಷಣಗಳು. ಇವು ಶ್ರೀ ವಿಜಯನ ರಾಜಭಕ್ತಿಯನ್ನು ತೋರಿಸುತ್ತವೆ.

ಕ್ರಿಸ್ತಶಕ ಒಂಬತ್ತನೇ ಶತಮಾನದಲ್ಲಿದ್ದ ಆನಂದವರ್ಧನನು ಧ್ವನಿ ಎಂಬ ಕಾವ್ಯತತ್ತ್ವವನ್ನು ಬೆಳಕಿಗೆ ತಂದು ಕಾವ್ಯದ ಆತ್ಮ ಧ್ವನಿ ಎಂಬ ಸಿದ್ಧಾಂತವನ್ನು ಮಂಡಿಸಿದನು. ಅದೇ ಕಾಲದಲ್ಲಿದ್ದ ಶ್ರೀ ವಿಜಯನು ಧ್ವನಿಯೆಂಬುದೂ ಒಂದು ಅಲಂಕಾರ ಮಾತ್ರ ಎಂದಿರುವುದು ಸೋಜಿಗವನ್ನುಂಟು ಮಾಡುತ್ತದೆ.

ಧ್ವನಿಯೆಂಬುದಲಂಕಾರಂ
ಧ್ವನಿಯಿಸುಗುಂ ಶಬ್ದದಿಂದಮರ್ಥದೆ ದೂಷ್ಯಂ
ನೆನೆವುದಿದನಿಂತು ಕಮಲದೊಳ್
ಅನಿಮಿಷಯುಗನೊಪ್ಪಿ ತೋರ್ಪದಂತಿದು ಚೋದ್ಯಂ ॥

ಕರ್ನಾಟಕದ ಆನಂದವರ್ಧನರೆಂದೇ ಪ್ರಖ್ಯಾತರಾಗಿದ್ದ ಡಾ. ಕೆ. ಕೃಷ್ಣಮೂರ್ತಿಗಳು ಈ ಶ್ಲೋಕದ ಅರ್ಥವನ್ನು ವಿವರಿಸಿ ಹೀಗೆಂದಿದ್ದಾರೆ –

"ಧ್ವನ್ಯಾಲೋಕವನ್ನು ಬರೆದ ಕಾಶ್ಮೀರಕ ಆನಂದವರ್ಧನನ ಸಮಕಾಲೀನನಾದ ಕರ್ನಾಟಕದ ಲಕ್ಷಣಕಾರನೊಬ್ಬನು 'ಧ್ವನಿ'ಯನ್ನು ಹೆಸರಿಸಿರುವುದೇ ಒಂದು ಹೆಮ್ಮೆಯ ಸಂಗತಿ. ಯಾರು ಏನೆಂದು ವಾದಿಸಿದರೂ ಧ್ವನ್ಯಾಲೋಕಕ್ಕೆ ಮುಂಚೆ ಕಾವ್ಯ ಲಕ್ಷಣ ಪ್ರಕ್ರಿಯೆಯಾದ 'ಧ್ವನಿ' ಸಮಾಮ್ನಾತಪೂರ್ವವಾಗಿದ್ದುದಕ್ಕೆ ಒಂದೇ ಒಂದು ಆಧಾರವೂ ಸಿಕ್ಕಿಲ್ಲ. ವೈಯಾಕರಣರ ಸ್ಫೋಟವಾದದಲ್ಲಿ ವ್ಯಂಜಕವರ್ಣಗಳಿಗೆ 'ಧ್ವನಿ' ಎಂಬ ಹೆಸರಷ್ಟೇ ಸಿಕ್ಕುತ್ತದೆ. ಇದನ್ನು ವಿಸ್ತರಿಸಿಯೇ ಧ್ವನಿಯೆಂಬ ಕಾವ್ಯ ಲಕ್ಷಣ ಪ್ರಸ್ತುತವಾಯಿತೆಂಬ ಆನಂದ ವರ್ಧನನ ಸ್ಪಷ್ಟೋಕ್ತಿಯಿದೆ. ಪುಸ್ತಕ ರೂಪದಲ್ಲಿ ಪ್ರಕಟವಾಗದಿದ್ದರೂ 'ಧ್ವನಿ'ಯೆಂಬ ಕಾವ್ಯತತ್ತ್ವದ ಪ್ರಚಾರ ಮುಖೋದ್ಗತವಾಗಿ ಸಹೃದಯರ ಮಂಡಲಿಗಳಲ್ಲಿ ನಡೆಯುತ್ತಿತ್ತು ಎಂಬ ಊಹೆ ಅಭಿನವಗುಪ್ತನದಾಗಿದೆ. ಇದಕ್ಕೆ ಪ್ರಬಲ ಸಮರ್ಥನೆಯನ್ನು ನೀಡುವಂತಿದೆ. ಕವಿರಾಜ ಮಾರ್ಗದ ಪ್ರಸ್ತುತ ಉಲ್ಲೇಖ."
(ಕವಿರಾಮ ಮಾರ್ಗಂ ಪು.210)

ಕವಿರಾಜಮಾರ್ಗವು ಲಕ್ಷಣ ಗ್ರಂಥವಾದರೂ, ಅದರಲ್ಲಿರುವ ಲಕ್ಷ್ಯ ಪದ್ಯಗಳು ಶ್ರೀ ವಿಜಯನ ಕವಿತಾಶಕ್ತಿಗೆ ಸಾಕ್ಷಿಗಳಾಗಿವೆ.

ಧವಳಾಪಾಂಗಂ ಕೇಕಾ
ರವಮುಖರಂ ಹರಿತ ಶಾಬಲಾಂಕಕಳಾಪಂ
ನವಿಲಾದಂ ಸೊಗುಯಿಸುಗುಂ
ಸುವಿನೀಲಾಯತಗಳಂ ಪಯೋದಾಗಮದೊಳ್ ॥ (III–7)

(ಮಳೆಗಾಲದ ಆರಂಭದಲ್ಲಿ ನವಿಲುಗಳು ಸೊಗಸಾಗಿ ಕಾಣಿಸುತ್ತಿದೆ. ಅವುಗಳ ಕಣ್ನೋಟಗಳು ಬೆಳ್ಳಗಿವೆ. ಅವು ಜೋರಾಗಿ ಕೇಕೆ ಹಾಕುತ್ತಿವೆ. ಹಸಿರು ಬಣ್ಣದಿಂದ ಮಿಶ್ರವಾದ ರೆಕ್ಕೆ ಪುಕ್ಕಗಳು ಶೋಭಿಸುತ್ತಿವೆ. ಅವುಗಳ ಕುತ್ತಿಗೆಗಳು ನೀಲಿ ಬಣ್ಣದವಾಗಿದ್ದು ಉದ್ದವಾಗಿವೆ.)

ಅರೆಮುಚ್ಚಿ ಕಣ್ಗಳಂ ವನ
ಕರಿ ಮೆಲ್ಲದೆ ಲಲಿತಸಲ್ಲಕೀ ಪಲ್ಲವಮಂ
ಸ್ಮರವಶದಿಂರ್ದುದು ನಿಜ
ಕರೇಣು ಪೇಚಕ ನಿರೂಪಿತಾಯತ ಹಸ್ತಂ (III–8)

(ಕಾಡಾನೆ ಕಣ್ಣುಗಳನ್ನು ಅರ್ಧ ಮುಚ್ಚಿಕೊಂಡಿದೆ. ತನಗೆ ಇಷ್ಟವಾದ ಸಲ್ಲಕೀ ಎಂಬ ಸ್ವಾದ ಚಿಗುರನ್ನೂ ಮೆಲ್ಲದೆ ಕಾಮವಶವಾಗಿದೆ. ಹೆಣ್ಣಾನೆಯ ಬಾಲದ ಮೇಲೆ ತನ್ನ ಉದ್ದವಾದ ಸೊಂಡಿಲನ್ನಿಟ್ಟು ನೇವರಿಸುತ್ತಿದೆ.

ಈ ಪದ್ಯಗಳಲ್ಲಿ ಸುಂದರ ಸ್ವಭಾವೋಕ್ತಿಯು ಸಹಜ ಸುಭಗವಾಗಿ ಮೂಡಿದೆ. ಗ್ರಂಥಕಾರನ ಕವಿತ್ವ ಪಡಿಮೂಡಿದೆ. ಕವಿರಾಜ ಮಾರ್ಗ ನಮ್ಮ ಆದಿಮ ಲಕ್ಷಣ ಗ್ರಂಥವೆಂದು ಹೇಳಿಕೊಳ್ಳಲು ಎಲ್ಲಾ ಕನ್ನಡಿಗರೂ ಹೆಮ್ಮೆಪಡಬಹುದು.

ಜೆಎಸ್‌ಎಸ್ 29ನೇ ಸಂಗೀತ ಸಮ್ಮೇಳನದ ಅಧ್ಯಕ್ಷರಾಗಿ ಪ್ರೊ.ಡಾ.ರಾ.ವಿಶ್ವೇಶ್ವರನ್

ಮೈಸೂರು,ನ.26–ಮೈಸೂರಿನ ಜೆಎಸ್‌ಎಸ್ ಸಂಗೀತ ಸಭಾ ಟ್ರಸ್ಟ್ ಪ್ರತಿ ವರ್ಷ ಡಿಸೆಂಬರ್ 2ರಿಂದ 6ರವರೆಗೆ ನಡೆಸುವ ಡಾ. ಶ್ರೀ ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಸಂಸ್ಮರಣಾ 29ನೇ ಸಂಗೀತ ಸಮ್ಮೇಳನದ ಅಧ್ಯಕ್ಷರಾಗಿ ಮೈಸೂರಿನ ವೈಣಿಕ ವಿದ್ವಾನ್ ಪ್ರೊ. ರಾ.ವಿಶ್ವೇಶ್ವರನ್ ಆಯ್ಕೆಯಾಗಿದ್ದಾರೆ ಎಂದು ಸಂಗೀತ ಸಭೆಯ ಉಪಾಧ್ಯಕ್ಷರಾದ ಮೈಸೂರು ಎಂ.ನಾಗರಾಜ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

1931ರಲ್ಲಿ ಮೈಸೂರಿನಲ್ಲಿ ಬಿ. ರಾಮಯ್ಯ ಮತ್ತು ವರಲಕ್ಷ್ಮಿ ಅವರ ಸುಪುತ್ರರಾಗಿ ಜನಿಸಿದ ಇವರು ಕರ್ನಾಟಕ ಶಾಸ್ತ್ರೀಯ ಸಂಗೀತ ಗಾಯಕರಾಗಿ, ಗೋಟುವಾದ್ಯ ವಾದನ, ವೀಣಾ ವಾದನ ವಿದ್ವಾಂಸರಾಗಿ, 250ಕ್ಕೂ ಹೆಚ್ಚು ತ್ರಿಭಾಷಾ ರಚನೆಗಳ ವಾಗ್ಗೇಯಕಾರರಾಗಿ, ಸಂಗೀತಶಾಸ್ತ್ರ, ಶಿಕ್ಷಣ ಬೋಧನೆ ಪ್ರಾತ್ಯಕ್ಷಿಕೆ, ಉಪನ್ಯಾಸ, ಹಲವು ಶಾಸ್ತ್ರಗ್ರಂಥಗಳ ರಚನೆಕಾರರೂ ಆಗಿ ಸಂಗೀತ ಕ್ಷೇತ್ರದಲ್ಲಿ ಅತ್ಯಂತ ಶ್ರೇಷ್ಠರೆನಿಸಿದ್ದಾರೆ. ಇವರು ಕಳೆದ 75ಕ್ಕೂ ಹೆಚ್ಚು ವರ್ಷಗಳಿಂದ ಗಾಯಕರು, ವೈಣಿಕರಾಗಿ ದೇಶ–ವಿದೇಶಗಳಲ್ಲಿ ಸಾವಿರಾರು ಕಛೇರಿಗಳನ್ನು ನೀಡಿ, ಜನ ಮನ್ನಣೆಯೊಂದಿಗೆ ವಿಮರ್ಶಕರಿಂದಲೂ ಅಪಾರ ಶ್ಲಾಘನೆ ಗಳಿಸಿದ್ದಾರೆ. ಜೊತೆಗೆ ಅತ್ಯಂತ ಹಿರಿಯ ಅಗ್ರಶ್ರೇಣಿಯ ವಿದ್ವಾಂಸರೆನಿಸಿದ್ದಾರೆ. ಮೈಸೂರು ವಿಶ್ವವಿದ್ಯಾನಿಲಯದ ಲಲಿತಕಲೆಗಳ ಕಾಲೇಜಿನ ಸಂಗೀತ ವಿಭಾಗದ ಪ್ರಾಧ್ಯಾಪಕರಾಗಿ, ಮುಖ್ಯಸ್ಥರಾಗಿ ನಿವೃತ್ತರಾಗಿರುವ ಇವರು ದೇಶದ



ಹಲವು ವಿಶ್ವವಿದ್ಯಾನಿಲಯಗಳ ವಿವಿಧ ಮಂಡಳಿಗಳ ತಜ್ಞಸದಸ್ಯರಾಗಿ ಹಲವು ಸಂಗೀತ ಸಮ್ಮೇಳನಗಳ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿರುವ ಅನುಭವಿಗಳು.

ಅಮೆರಿಕಾದ 'ನಾವಿಕ' ವಿಶ್ವಕನ್ನಡ ಸಮ್ಮೇಳನದಲ್ಲಿ ಕನ್ನಡರತ್ನ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಟಿ.ಚೌಡಯ್ಯ ಪ್ರಶಸ್ತಿ, ರಾಜ್ಯ ಸಂಗೀತ ವಿದ್ವಾನ್ ಪ್ರಶಸ್ತಿ, ಮದ್ರಾಸಿನ ಶ್ರೀ ಕೃಷ್ಣಗಾನ ಸಭೆಯಿಂದ 'ಸಂಗೀತ ಚೂಡಾಮಣಿ' ಪ್ರಶಸ್ತಿ, ಆಂಧ್ರ ಮ್ಯೂಸಿಕ್ ಅಕಾಡೆಮಿಯಿಂದ 'ಸಂಗೀತ ವಿದ್ಯಾನಿಧಿ' ಪ್ರಶಸ್ತಿ, ಸೋಸಲೆ ಮಠದಿಂದ 'ಸಂಗೀತ ಸಾರ್ವಭೌಮ, ಬೆಂಗಳೂರು' ಗಾಯನ ಸಮಾಜದಿಂದ 'ನಾದಶ್ರೀ' ಮುಂತಾದ ಪ್ರಶಸ್ತಿಗಳಲ್ಲದೆ 25 ರಾಷ್ಟ್ರೀಯ ಹಾಗೂ 26 ರಾಜ್ಯಗಳಲ್ಲಿನ ಹಲವು ಪ್ರಶಸ್ತಿಗಳಿಗೆ ಭಾಜನರಾದ ಹೆಗ್ಗಳಿಕೆ ಇವರದ್ದು. ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ವಿಶ್ವವಿದ್ಯಾನಿಲಯದ ಪ್ರಪ್ರಥಮ 'ಡಾಕ್ಟರ್ ಆಫ್ ಮ್ಯೂಸಿಕ್' ಗೌರವ ಡಾಕ್ಟರೇಟ್ ಪಡೆದ ಖ್ಯಾತಿಯೂ ಇವರದ್ದಾಗಿದೆ. 2024ರಲ್ಲಿ ಕೇಂದ್ರ ಸಂಗೀತ ನಾಟಕ ಅಕಾಡೆಮಿಯ 'ಅಕಾಡೆಮಿ ರತ್ನ' ಸರ್ವೋಚ್ಛ ಪ್ರಶಸ್ತಿಯೂ ಇವರಿಗೆ ಲಭಿಸಿದೆ.

ಡಿ.2ರಿಂದ ಐದು ದಿನಗಳ ಕಾಲ ಸರಸ್ವತಿಪುರಂ ಜೆಎಸ್‌ಎಸ್ ಮಹಿಳಾ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ನಡೆಯಲಿರುವ ರಾಷ್ಟ್ರೀಯ ಸಂಗೀತ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಡಿ.6ರ ಸಂಜೆ ಸಮ್ಮೇಳನಾಧ್ಯಕ್ಷರಾದ ಡಾ. ರಾ.ವಿಶ್ವೇಶ್ವರನ್ ಅವರಿಗೆ 'ಸಂಗೀತ ವಿದ್ಯಾನಿಧಿ' ಪ್ರಶಸ್ತಿಯೊಂದಿಗೆ ಚಿನ್ನದ ಪದಕವನ್ನು ನೀಡಿ, ಗೌರವಿಸಲಾಗುವುದು.

ಮೈಸೂರಲ್ಲಿ ವಿ.ಅಪೂರ್ವ–ವಿ.ಪಲ್ಲವಿ ಸಂಗೀತ ಕಾರ್ಯಕ್ರಮ



ಸಾಗರ್ ಭರತ್‌ರಾಜ್



ಪ್ರಸಾದ್ ಕಾಮತ್

ಮೈಸೂರು,ನ.26–ಮೈಸೂರಿನ ಗಾಯನ ಸಭಾ ವತಿಯಿಂದ ನ.29ರಂದು ಅಪೂರ್ವ–ಪಲ್ಲವಿ ಸಹೋದರಿಯರ ಸಂಗೀತ ಕಾರ್ಯಕ್ರಮವನ್ನು ಗಾನಭಾರತಿಯ 'ವೀಣೆ ಶೇಷಣ್ಣ ಭವನ'ದಲ್ಲಿ ಸಂಜೆ 6 ಗಂಟೆಗೆ ಆಯೋಜಿಸಲಾಗಿದೆ. ಶನಿವಾರ ನ.30ರಂದು ಸಂಜೆ 6 ಗಂಟೆಗೆ ಕೇರ್ಗಳ್ಳಿಯ 'ನಿನಾದ'ದಲ್ಲಿ ('ನಿನಾದ ಗೃಹ ಸಂಗೀತ', ರಿಶಭ್ ಸಿದ್ಧಿ ಲೇಔಟ್, ಕೇರ್ಗಳ್ಳಿ) ಇವರಿಬ್ಬರ ಕಾರ್ಯಕ್ರಮ ನಡೆಯಲಿದೆ.

ಈ ಎರಡೂ ಕಾರ್ಯಕ್ರಮಗಳಲ್ಲಿ ಸಾಗರ್ ಭರತ್‌ರಾಜ್ ಮತ್ತು ಪ್ರಸಾದ್ ಕಾಮತ್ ತಬಲಾ ಮತ್ತು ಹಾರ್ಮೋನಿಯಂನಲ್ಲಿ ಸಾಥ್ ನೀಡಲಿದ್ದಾರೆ. ವಿ.ಅಪೂರ್ವ ಗೋಖಲೆ ಮತ್ತು ವಿ.ಪಲ್ಲವಿ ಜೋಶಿ, ಗ್ವಾಲಿಯರ್ ಘರಾಣೆಯ ಶ್ರೇಷ್ಠ ಗುರುಗಳೂ, ವಯೋಲಿನ್ ವಾದಕರೂ ಆಗಿದ್ದ ಪಂ.ಗಜಾನನ್ ಬುವಾ ಜೋಶಿ ಅವರ ಮೊಮ್ಮಕ್ಕಳು. ಬಾಲ್ಯದಿಂದಲೇ ಪರಂಪರಾಗತ ಶೈಲಿಯಲ್ಲಿ ಶಿಸ್ತುಬದ್ಧವಾಗಿ ಕಲಿತು ನಂತರದಲ್ಲಿ ತಮ್ಮ ಅತ್ತೆ ಡಾ.ಸುಚೇತಾ ಭಿಡಕರ್ ಮತ್ತು ಚಿಕ್ಕಪ್ಪ ಪಂ.ಮಧುಕರ್ ಜೋಶಿ ಇವರಲ್ಲಿ ಕಲಿಕೆ ಮುಂದುವರಿಸಿದರು. ಬಳಿಕ ಅದೇ ಪರಂಪರೆಯ



ಪಂ.ಉಲ್ಲಾಸ್ ಕಶಾಲ್‌ಕರ್, ಪಂ.ಅರುಣ್ ಕಶಾಲ್‌ಕರ್ ಬಳಿ ಹೆಚ್ಚಿನ ಅಭ್ಯಾಸ ಮಾಡಿದ್ದಾರೆ. ಅಪೂರ್ವ ಅವರು ಮುಂದೆ ಸಿತಾರ್ ವಾದಕರೂ, ಉತ್ತಮ ವಾಗ್ಗೇಯಕಾರರೂ ಆದ ಪಂ.ಶಂಕರ್ ಅಭ್ಯಂಕರ್, ವಿ.ಮಾಣಿಕ್ ಭಿಡೆ ಹಾಗೂ ಆಗ್ರಾ ಘರಾಣೆಯ ಶ್ರೇಷ್ಠ ಗುರುಗಳಾದ ಪಂ.ಯಶವಂತ ಮಹಾಲೆಯವರ ಮಾರ್ಗದರ್ಶನದಲ್ಲಿ ಪ್ರಾವೀಣ್ಯತೆ ಗಳಿಸಿದ್ದಾರೆ.

ಇವರು ವಾಣಿಜ್ಯ ಪದವೀಧರರಾದರೂ, ಮುಂಬೈ ವಿಶ್ವವಿದ್ಯಾಲಯದಿಂದ ಸಂಗೀತದಲ್ಲಿ ಎಂ.ಎ. ಪಡೆದಿದ್ದಾರೆ. ಅವರು, ಭಾರತ ಸರಕಾರದ ಸಂಸ್ಕೃತಿ ಸಚಿವಾಲಯದ ಫೆಲೋಶಿಪ್, ಸುರ್ ಸಿಂಗರ್ ಸಂಸದ್, ಮುಂಬೈ ಅವರಿಂದ 'ಸೂರ್‌ಮಣಿ' ಎಂಬ ಬಿರುದು, ಮ್ಯೂಸಿಕ್ ಫೋರಮ್, ಮುಂಬೈನಿಂದ ವಿದ್ಯಾಸಾಗರ್ ಪ್ರಶಸ್ತಿ, ಆಚಾರ್ಯ ಎಸ್.ಎನ್. ರಾತಾಂಜನ್‌ಕರ್ ಮತ್ತು ಪಂ. ಕೆ.ಜಿ.ಗಿಂಡೆ ಪ್ರಶಸ್ತಿ, ಆಕಾಶವಾಣಿಯ (ಆಲ್ ಇಂಡಿಯಾ ರೇಡಿಯೋ) 'ಎ' ಶ್ರೇಣಿಯನ್ನು ಪಡೆದಿದ್ದಾರೆ. ಅವರು 2006ರಲ್ಲಿ ಚೀನಾಕ್ಕೆ ಸಾಂಸ್ಕೃತಿಕ ನಿಯೋಗದಲ್ಲಿ ಭಾರತವನ್ನು ಪ್ರತಿನಿಧಿಸಿದ್ದರು. ಕರ್ನಾಟಕ ಸರ್ಕಾರದಿಂದ 2014ರ ಪಂಡಿತ್ ಬಸವರಾಜ ರಾಜಗುರು ಯುವ ಪುರಸ್ಕಾರ ಪಡೆದಿದ್ದಾರೆ. 2018ರಲ್ಲಿ ಪಂ. ರಾಮ್ ಮರಾಠೆ ಯುವ ಪುರಸ್ಕಾರವನ್ನೂ ಪಡೆದ ಅವರು, ದೇಶದ ಎಲ್ಲಾ ಪ್ರತಿಷ್ಠಿತ ವೇದಿಕೆಗಳಲ್ಲಿ ಸಂಗೀತ ಕಾರ್ಯಕ್ರಮ ನೀಡಿದ್ದಾರೆ.

ವಿ.ಪಲ್ಲವಿ ಜೋಶಿಯವರು 5ನೆಯ ವಯಸ್ಸಿನಿಂದಲೇ ತಮ್ಮ ಅಜ್ಜನಿಂದ ಕಲಿಕೆ ಆರಂಭಿಸಿ, ಮುಂದೆ ಮಧುಕರ್ ಜೋಶಿ ಮತ್ತು ಸುಚೇತಾ ಭಿಡ್‌ಕರ್ ಅವರ ಬಳಿ ಕಲಿಕೆ ಮುಂದುವರಿಸಿದ್ದಾರೆ. ಸಂಗೀತದಲ್ಲಿ ಎಂ.ಎ ಪಡೆದು ದೇಶ–ವಿದೇಶಗಳಲ್ಲೂ ಕಾರ್ಯಕ್ರಮ ನೀಡಿದ್ದಾರೆ. 2023ರಲ್ಲಿ ಸಹೋದರಿಯರಿಬ್ಬರೂ ಅಮೆರಿಕಾದಲ್ಲಿ ಹಲವಾರು ಕಛೇರಿಗಳಲ್ಲಿ ಭಾಗಿಯಾಗಿದ್ದಾರೆ. ಪುಣೆಯ ಸವೈ ಗಂಧರ್ವ ಉತ್ಸವ್, ಗ್ವಾಲಿಯರ್‌ನ ತಾನ್‌ಸೇನ್ ಮಹೋತ್ಸವ್, ದೇವಾಸದಲ್ಲಿನ ಕುಮಾರ್ ಗಂಧರ್ವ ಸಂಗೀತ ಮಹೋತ್ಸವ್, ಫಸ್ಟ್ ಎಡಿಷನ್ ಆರ್ಟ್ಸ್ ಕಾರ್ಯಕ್ರಮಗಳು, ಪಂಚಮ್ ನಿಷಾಧ್ , ಐಐಸಿ ದೆಹಲಿ, ಕೆಜಿ ಗಿಂಡೆ ಸಂಸ್ಕೃತಿ ಕಾರ್ಯಕ್ರಮ, ಡೋವರ್‌ಲೇಮ್ ಸಂಗೀತ ಕಾರ್ಯಕ್ರಮ, ಎನ್‌ಸಿಪಿಎ ಮುಂಬೈ ಇವು ಕೆಲವು ಮುಖ್ಯವಾದ ಹೆಸರುಗಳು. ಇವಲ್ಲದೆ ಅಮೆರಿಕಾ, ಸಿಂಗಾಪುರ್, ಯುರೋಪ್‌ಗಳಲ್ಲೂ ಕಾರ್ಯಕ್ರಮ ನೀಡಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಜಿ.ಟಿ.ದೇವೇಗೌಡರ ಹುಟ್ಟುಹಬ್ಬ ಆಚರಣೆ...






ಮೈಸೂರಿನ ಎಂಪ್ರೋ ಪ್ಯಾಲೇಸ್ ಹೋಟೆಲ್‌ನಲ್ಲಿ ಮಂಗಳವಾರ ಸಂಜೆ ಚಾಮುಂಡೇಶ್ವರಿ ಕ್ಷೇತ್ರದ ಶಾಸಕರೂ ಆದ ಮಾಜಿ ಸಚಿವ ಜಿ.ಟಿ.ದೇವೇಗೌಡರ 74ನೇ ಹುಟ್ಟುಹಬ್ಬ ಆಚರಿಸಲಾಯಿತು. ಇದೇ ವೇಳೆ ಜಿ.ಟಿ.ದೇವೇಗೌಡರ ಕುಟುಂಬವನ್ನು ಅವರ ಅಭಿಮಾನಿಗಳು ಅಭಿನಂದಿಸುತ್ತಿರುವುದನ್ನು ಮತ್ತೊಂದು ಚಿತ್ರದಲ್ಲಿ ಕಾಣಬಹುದು. 3ನೇ ಚಿತ್ರದಲ್ಲಿ ಜಿ.ಟಿ.ದೇವೇಗೌಡರ ಅಭಿಮಾನಿಗಳಾದ ರಾಜೇಂದ್ರ, ಕಾಂತರಾಜು, ಸುರೇಶ್‌ಗೌಡ, ರಾಮು, ಬಸವರಾಜು, ಮಂಜುಗೌಡ, ನಂದಿನಿ ಲೇಔಟ್ ಕುಮಾರ್, ಶಿವಣ್ಣ, ಮಿರ್ಲೆ ರಾಜೀವ್, ಮಿರ್ಲೇ ನಂದೀಶ್ ಮೊದಲಾದವರು ಜಿ.ಟಿ.ದೇವೇಗೌಡರಿಗೆ ಹೂಗುಚ್ಛ ನೀಡಿ ಅಭಿನಂದಿಸುತ್ತಿರುವುದನ್ನು ಕಾಣಬಹುದು. ಕೊನೆ ಚಿತ್ರದಲ್ಲಿ ಮುಡಾ ಮಾಜಿ ಅಧ್ಯಕ್ಷ ವಿಜಯಕುಮಾರ್, ಜಿ.ಟಿ.ದೇವೇಗೌಡರನ್ನು ಅಭಿನಂದಿಸುತ್ತಿರುವುದನ್ನು ನೋಡಬಹುದು.

ಇಲ್ಲಿವರೆಗೆ ಸಂವಿಧಾನಕ್ಕೆ 106 ತಿದ್ದುಪಡಿಯಾಗಿದ್ದರೆ; ಅದರಲ್ಲಿ ಬರೀ ಕಾಂಗ್ರೆಸ್ಸೇ 75 ಬಾರಿ ತಿದ್ದುಪಡಿ ಮಾಡಿದೆ

ನಿವೃತ್ತ ಐಎಎಸ್ ಅಧಿಕಾರಿ ಲಕ್ಷ್ಮಿನಾರಾಯಣ್ ವಿಷಾದ



ಮೈಸೂರಿನ ಖಾಸಗಿ ಕಲ್ಯಾಣ ಮಂಟಪದಲ್ಲಿ ಬಿಜೆಪಿ ಆಯೋಜಿಸಿದ್ದ ಸಂವಿಧಾನದ ಸನ್ಮಾನ ಅಭಿಯಾನ ಕಾರ್ಯಕ್ರಮ ನಡೆಯಿತು.

ಮೈಸೂರು, ನ.26(ಬಿಎಲ್‌ಯು)– ಭಾರತದ ಸಂವಿಧಾನದಲ್ಲಿ ಇಲ್ಲಿವರೆಗೆ ಆಗಿರುವ 106 ತಿದ್ದುಪಡಿಯಲ್ಲಿ ಕಾಂಗ್ರೆಸ್ ಪಕ್ಷ ಒಂದೇ 75 ಬಾರಿ ತಿದ್ದುಪಡಿ ಮಾಡಿದೆ ಎಂದು ನಿವೃತ್ತ ಐಎಎಸ್ ಅಧಿಕಾರಿ ಲಕ್ಷ್ಮಿನಾರಾಯಣ್ ತಿಳಿಸಿದರು.

ನಗರದ ಖಾಸಗಿ ಕಲ್ಯಾಣ ಮಂಟಪದಲ್ಲಿ ಬಿಜೆಪಿ ಆಯೋಜಿಸಿದ್ದ ಸಂವಿಧಾನದ ಸನ್ಮಾನ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ 75 ಬಾರಿ ತಿದ್ದುಪಡಿ ಮಾಡಿದ್ದರೆ, ಕಾಂಗ್ರೇಸೇತರ ಸರ್ಕಾರಗಳು ಉಳಿದ 31 ತಿದ್ದುಪಡಿ ಮಾಡಿವೆ ಎಂದರು.

ಸಂವಿಧಾನ ದಿನಾಚರಣೆ ನಗರ ಮಾತ್ರವಲ್ಲದೆ ಇಂದು ಗ್ರಾಮ ಪಂಚಾಯತ್ ಮಟ್ಟದಲ್ಲೂ ನಡೆಯುತ್ತಿದೆ. ಸಂವಿಧಾನದ ಮಹತ್ವ ಅರಿತಿರುವ ಪ್ರಧಾನಿ ನರೇಂದ್ರ ಮೋದಿ ಅವರು ಸಂವಿಧಾನವನ್ನು ಧರ್ಮ ಗ್ರಂಥ ಎಂದು ನೂರು ಬಾರಿ ಹೇಳಿದ್ದಾರೆ. ಈ ಮೂಲಕ ನರೇಂದ್ರ ಮೋದಿ ಅವರು ಎಂದೂ ಸಂವಿಧಾನದ ವಿರುದ್ಧ ಮಾತನಾಡಿಲ್ಲ ಎಂದು ಸ್ಪಷ್ಟಪಡಿಸಿದರು.

ಮೋದಿ ಅವರಿಂದ ಸಂವಿಧಾನ ಸಂಕಷ್ಟದಲ್ಲಿದೆ ಎಂದು ಕಾಂಗ್ರೆಸ್ ಸೇರಿದಂತೆ ಆ ಪಕ್ಷದ ಕೆಲವು ನಾಯಕರು ಆರೋಪಿಸುತ್ತಾರೆ. ಆದರೆ ಸಾಮಾಜಿಕ ಬದಲಾವಣೆ ಮಾಡುತ್ತಿರುವ ಮೋದಿ ಸರ್ಕಾರದ ಜನಪರ ಕಾರ್ಯವನ್ನು ಜನರು ಮೆಚ್ಚಿದ್ದಾರೆ. ಕಾಂಗ್ರೆಸ್ ಸೇರಿದಂತೆ ಇತರೆ ಪಕ್ಷದವರು ಏನೇ ಹೇಳಿದರೂ ಜನರು ವಿದ್ಯಾವಂತರಾಗಿದ್ದು, ಅವರ ಮಾತನ್ನು ನಂಬುವುದಿಲ್ಲ ಎಂದು ತಿಳಿಸಿದರು.

ಈ ವೇಳೆ ಮಾತನಾಡಿದ ಮಾಜಿ ಮೇಯರ್ ಶಿವಕುಮಾರ್, ಇಂದಿರಾ ಗಾಂಧಿ ಅವರು ತುರ್ತು ಪರಿಸ್ಥಿತಿ ಜಾರಿ ಮಾಡಿ ಸಂವಿಧಾನಕ್ಕೆ ಅವಮಾನ ಮಾಡಿದರು. ಅಂಬೇಡ್ಕರ್ ಅವರನ್ನು ಎರಡು ಬಾರಿ ಸೋಲಿಸಿದ ಕೀರ್ತಿ ಕಾಂಗ್ರೆಸ್‌ಗೆ ಸೇರುತ್ತದೆ. ಇದನ್ನೆಲ್ಲಾ ಮರೆತ ರಾಹುಲ್ ಗಾಂಧಿ ಸಂವಿಧಾನದ ಪುಸ್ತಕ ಹಿಡಿದುಕೊಂಡು ಸಂವಿಧಾನ ಉಳಿಸುತ್ತೇವೆ ಎನ್ನುತ್ತಾರೆ ಎಂದು ಗೇಲಿ ಮಾಡಿದರು.

ತರುವಾಯ ಮಾತನಾಡಿದ ಮೈಲ್ಯಾಕ್ ಮಾಜಿ ಅಧ್ಯಕ್ಷ ಫಣೀಶ್, ಎರಡು ತಿಂಗಳಿಂದ ಮೂಲೆ ಮೂಲೆಗೆ ಹೋಗಿ ಬಿಜೆಪಿ ಅಂಬೇಡ್ಕರ್ ಬಗ್ಗೆ ಜನರಿಗೆ ಪರಿಚಯ ಮಾಡುತ್ತಿದೆ. ಆದರೆ ಈ ಕಾರ್ಯವನ್ನು ಕಾಂಗ್ರೆಸ್‌ನವರು ಏಕೆ ಮಾಡಲಿಲ್ಲ ಎಂದು ಪ್ರಶ್ನಿಸಿದರು. ಶಾಸಕ ಟಿ.ಎಸ್.ಶ್ರೀವತ್ಸ, ನಗರ ಬಿಜೆಪಿ ಅಧ್ಯಕ್ಷ ನಾಗೇಂದ್ರ, ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ವಸ್ತುಪ್ರದರ್ಶನ ಪ್ರಾಧಿಕಾರದ ಮಾಜಿ ಅಧ್ಯಕ್ಷ ಹೇಮಂತ್‌ಗೌಡ ಹಾಗೂ ಇತರರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಗಾಂಧೀಜಿ, ಅಂಬೇಡ್ಕರ್ ಅವರಿಗೆ ಆದ ಅವಮಾನ ದೇಶದ ಸ್ವಾತಂತ್ರ್ಯ ಹೋರಾಟಕ್ಕೆ ನಾಂದಿಯಾಯ್ತು...

- ಸಂವಿಧಾನ ತಜ್ಞ ಡಾ.ಕೆ.ಎಲ್.ಚಂದ್ರಶೇಖರ್ ಐಜೂರಿ ಅಭಿಮತ
- ಗಾಂಧೀಜಿಯವರ ಅವಮಾನಕ್ಕೆ ಕ್ಷಮೆ ಕೇಳಲಾಯ್ತು! ಆದರೆ ಅಂಬೇಡ್ಕರ್ ಅವಮಾನಕ್ಕೆ ಇನ್ನೂ ಕ್ಷಮೆ ಕೇಳಿಲ್ಲ!!



ಮೈಸೂರಿನ ಕಾಂಗ್ರೆಸ್ ಕಚೇರಿಯಲ್ಲಿ ಸಂವಿಧಾನ ದಿನ ಆಚರಿಸಲಾಯಿತು. ಸಂವಿಧಾನ ತಜ್ಞ ಡಾ.ಕೆ.ಎಲ್.ಚಂದ್ರಶೇಖರ್ ಐಜೂರಿ, ಡಾ.ಬಿ.ಜೆ.ವಿಜಯ್‌ಕುಮಾರ್, ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ ಇನ್ನಿತರರನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು,ನ.26(ಎಂಟಿವೈ)– ರಾಷ್ಟ್ರಪಿತ ಮಹಾತ್ಮಗಾಂಧೀಜಿ ಹಾಗೂ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರಿಗೆ ಆದ ಅವಮಾನ– ಈ ಎರಡು ಘಟನೆಗಳಿಂದ ಭಾರತದಲ್ಲಿ ಸ್ವಾತಂತ್ರ್ಯ ಹೋರಾಟ ಆರಂಭವಾಗಲು ಕಾರಣ ಎಂದು ಸಂವಿಧಾನ ತಜ್ಞ ಡಾ.ಕೆ.ಎಲ್. ಚಂದ್ರಶೇಖರ್ ಐಜೂರಿ ತಿಳಿಸಿದ್ದಾರೆ.

ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಮಂಗಳವಾರ ಆಯೋಜಿಸಿದ್ದ 'ಸಂವಿಧಾನ ದಿನಾಚರಣೆ' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಭಾರತದ ಸ್ವಾತಂತ್ರ್ಯದ ಹೋರಾಟ ಸೃಷ್ಟಿಯಾಗಲು ಎರಡು ಅವಮಾನಗಳು ಕಾರಣವಾದವು. 1893ರ ಜೂ.7ರಂದು ಮಹಾತ್ಮ ಗಾಂಧೀಜಿಯವರಿಗೆ ಆಫ್ರಿಕಾದ ರೈಲಿನಲ್ಲಿ ಆದ ಅವಮಾನ ಹಾಗೂ 1901ರಲ್ಲಿ ಸತಾರದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರಿಗೆ ಎತ್ತಿನಗಾಡಿಯವನು ಮಾಡಿದ ಅವಮಾನ. ಈ ಎರಡು ಅವಮಾನಗಳು ಭಾರತದ ಸ್ವಾತಂತ್ರ್ಯದ ಚಳುವಳಿಯ ದಿಕ್ಕನ್ನೇ ಬದಲಿಸಿದವು. ಗಾಂಧಿಯವರಿಗೆ ಆದ ಅವಮಾನಕ್ಕೆ ಕ್ಷಮೆ ಕೇಳಿದ್ದಾರೆ. ಆದರೆ ಅಂಬೇಡ್ಕರ್ ಅವರಿಗೆ ಆದ ಅವಮಾನಕ್ಕೆ ಇಂದಿಗೂ ಕ್ಷಮೆ ಕೇಳಲಿಲ್ಲ ಎಂದು ವಿಷಾದಿಸಿದರು.

ಸಂವಿಧಾನ ರಚನಾ ಸಭೆಗೆ ಅಂಬೇಡ್ಕರ್ ಅವರು ನೇರವಾಗಿ ಆಯ್ಕೆಯಾಗಲಿಲ್ಲ. ಪಟ್ಟಭದ್ರ ಹಿತಾಸಕ್ತಿಗಳು ಅವರನ್ನು ಒಪ್ಪಿಕೊಳ್ಳಲಿಲ್ಲ. ಅಂಬೇಡ್ಕರ್ ಅವರ ಜಾತಿ ತಿಳಿದು ಸಂವಿಧಾನ ರಚನಾ ಸಮಿತಿ ಸದಸ್ಯರು ಗೈರು ಹಾಜರಾಗುತ್ತಿದ್ದರು. ಆಗ ಅಂಬೇಡ್ಕರ್ ಅವರಿಗೆ ಮುಕ್ತ ಅವಕಾಶ ದೊರೆತಂತಾಗಿ ಬಹು ಜಾಗರೂಕತೆಯಿಂದ ಪ್ರತಿಯೊಬ್ಬ ಪ್ರಜೆಗೂ ಅನ್ವಯವಾಗುವಂತಹ ಸಂವಿಧಾನವನ್ನು ರಚಿಸುವಲ್ಲಿ ಯಶಸ್ವಿಯಾದರು ಎಂದರು.

ಭಾರತ ಸಂವಿಧಾನದ ಪೀಠಿಕೆಯಲ್ಲಿರುವ ಭ್ರಾತೃತ್ವ, ಸಮಾಜವಾದಿ, ಜಾತ್ಯಾತೀತ, ಪ್ರಜಾಸತ್ತಾತ್ಮಕ ಅಂಶಗಳು ಭಾರತದ ಜನತೆಗೆ ಅತೀ ಅವಶ್ಯವಾಗಿಬೇಕಾದ ಪೂರಕ ವಾತಾವರಣವನ್ನು ನಿರ್ಮಿಸಲಿದೆ. ಇದನ್ನು ಅರಿತು ದಕ್ಷಿಣ ಆಫ್ರಿಕಾ ಸಂವಿಧಾನದಲ್ಲಿ ಶೇ.60ರಷ್ಟು ಭಾರತ ಸಂವಿಧಾನ ಅಂಶಗಳೇ ಇವೆ. ನರೇಂದ್ರ ಮೋದಿ ಪ್ರಧಾನ ಮಂತ್ರಿಯಾಗಲು ಸಹಾಯ ಮಾಡಿದ್ದು ಸಂವಿಧಾನ. ಭಾರತದಲ್ಲಿ 5000 ಜಾತಿಗಳಿದ್ದು, ಎಲ್ಲವನ್ನು ಸರಿದೂಗಿಸುವ ಏಕೈಕ ಶಕ್ತಿ ಸಂವಿಧಾನಕ್ಕೆ ಮಾತ್ರ ಇದೆ ಎಂದು ಹೇಳಿದರು.

ಇದೇ ವೇಳೆ ಗ್ರಾಮಾಂತರ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್ ಮಾತನಾಡಿ, ಭಾರತದ ಸಂವಿಧಾನ ದೇಶದ ಕಟ್ಟ ಕಡೆಯ ಪ್ರಜೆಗೂ ಆರ್ಥಿಕ, ರಾಜಕೀಯ, ಧಾರ್ಮಿಕ, ಸಾಮಾಜಿಕ, ಶೈಕ್ಷಣಿಕ ಭದ್ರತೆಯನ್ನು ಕೊಟ್ಟ ಪವಿತ್ರ ಗ್ರಂಥ. ಆದ್ದರಿಂದ ಕಾಂಗ್ರೆಸ್ ಪಕ್ಷ ಸ್ವಾತಂತ್ರ್ಯೋತ್ತರದಿಂದ ಇಲ್ಲಿಯವರೆಗೂ ರಾಷ್ಟ್ರೀಯ ಕಾಂಗ್ರೆಸ್‌ನ ಆತ್ಮವೇ ಆಗಿದೆ. 1976ರಲ್ಲಿ ಶ್ರೀಮತಿ ಇಂದಿರಾ ಗಾಂಧಿಯವರು ಪೀಠಿಕೆಗೆ 42ನೇ ಸಂವಿಧಾನಾತ್ಮಕ ತಿದ್ದುಪಡಿಯನ್ನು ಜಾತ್ಯತೀತ ಪದವನ್ನು ಸೇರಿಸಿದ್ದಾರೆ. ಭಾರತದ ಸಂವಿಧಾನದಲ್ಲಿ ಇರುವ ಅಂಶಗಳು ಭಾರತ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಸಿದ್ಧಾಂತಗಳಾಗಿವೆ. ಡಾ.ಅಂಬೇಡ್ಕರ್ ಅವರ ಜ್ಞಾನದ ಪ್ರತೀಕವಾದ ನಮ್ಮ ಸಂವಿಧಾನ ಪ್ರಪಂಚದ ವಿವಿಧ ದೇಶಗಳು ಅಳವಡಿಸಿಕೊಂಡಿವೆ ಎಂದರು.

ಕಾರ್ಯಕ್ರಮದಲ್ಲಿ ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ರಾಜ್ಯ ಗ್ಯಾರಂಟಿ ಸಮಿತಿಯ ಉಪಾಧ್ಯಕ್ಷೆ ಡಾ.ಪುಷ್ಪ ಅಮರನಾಥ್, ಪ್ರಧಾನ ಕಾರ್ಯದರ್ಶಿಗಳಾದ ಎಂ.ಶಿವಣ್ಣ, ಶಿವಪ್ರಸಾದ್ ಉತ್ತನಹಳ್ಳಿ ಶಿವಣ್ಣ, ಮಾಜಿ ಮೇಯರ್‌ಗಳಾದ ಪುಷ್ಪಲತಾ ಚಿಕ್ಕಣ್ಣ, ಮೋದಾಮಣಿ, ಮಾಜಿ ಉಪಮೇಯರ್ ಪುಷ್ಪವಲ್ಲಿ, ಮುಖಂಡರಾದ ಸುಧಾ ಮಹದೇವಯ್ಯ, ಕಮಲಾ ಅನಂತರಾಮು, ಡೈರಿ ವೆಂಕಟೇಶ್, ಭಾಸ್ಕರ್, ಈಶ್ವರ್ ಚಕ್ಕಡಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.



ಮೈಸೂರಿನ ವಿಜಯನಗರ ಎರಡನೇ ಹಂತದಲ್ಲಿರುವ ಸಮರ್ಥನಂ ಅಂಗವಿಕಲರ ಸಂಸ್ಥೆಯಲ್ಲಿ ಸಂವಿಧಾನ ದಿನ ಆಚರಿಸಲಾಯಿತು. ಸಮರ್ಥನಂ ಅಂಗವಿಕಲರ ಸಂಸ್ಥೆಯ ಮೈಸೂರು ವಿಭಾಗೀಯ ಮುಖ್ಯಸ್ಥ ಶಿವರಾಜು, ಸಮರ್ಥನಂ ಸಂಸ್ಥೆಯ ಉನ್ನತ ಶಿಕ್ಷಣ ವಿಭಾಗದ ಸಂಯೋಜಕಿ ಚೈತ್ರಕುಮಾರಿ, ವಿಕಲಚೇತನ ಶಾಲೆಯ ಮುಖ್ಯೋಪಾಧ್ಯಾಯರಾದ ಭ್ರಮಾರಂಭ, ವಿಶೇಷ ಶಿಕ್ಷಕರಾದ ಪದ್ಮ, ವಿದ್ಯಾವತಿ, ಬೃಂದಬಾಯಿ, ಮಂಜುಳಾ, ಮಹಾದೇವ ಮತ್ತಿತರರು ಭಾಗವಹಿಸಿದ್ದರು.

ಸಂವಿಧಾನ ದಿನಾಚರಣೆ ಪ್ರಯುಕ್ತ ಬೃಹತ್ ಉಚಿತ ಆರೋಗ್ಯ ತಪಾಸಣೆ



ಮೈಸೂರಿನ ಶ್ರೀ ಛಾಯಾದೇವಿ ಶಿಕ್ಷಣ ಸಂಸ್ಥೆಯಲ್ಲಿ ಸಂವಿಧಾನ ದಿನದ ಪ್ರಯುಕ್ತ ಬೃಹತ್ ಉಚಿತ ಆರೋಗ್ಯ ತಪಾಸಣೆ ಶಿಬಿರ ಏರ್ಪಡಿಸಲಾಗಿತ್ತು.

ಮೈಸೂರು,ನ.26–ಮೈಸೂರಿನ ಆಯುಷ್ ಇಲಾಖೆ ಸರ್ಕಾರಿ ಆಯುರ್ವೇದ ಸಂಶೋಧನಾ ಸಂಸ್ಥೆ ಸಹಯೋಗದೊಂದಿಗೆ ಶ್ರೀ ಛಾಯಾದೇವಿ ಶಿಕ್ಷಣ ಸಂಸ್ಥೆಯಲ್ಲಿ ಸಂವಿಧಾನ ದಿನಾಚರಣೆ ಪ್ರಯುಕ್ತ ಬೃಹತ್ ಉಚಿತ ಆರೋಗ್ಯ ತಪಾಸಣೆ ಶಿಬಿರ ಏರ್ಪಡಿಸಲಾಗಿತ್ತು.

ಅಖಿಲ ಕರ್ನಾಟಕ ಫೆಡರೇಷನ್ ಆಫ್ ಪೆಟ್ರೋಲಿಯಂ ಟ್ರೇಡರ್ಸ್ ಅಧ್ಯಕ್ಷ ಕೆ.ಎಂ. ಬಸವೇಗೌಡ ಶಿಬಿರ ಉದ್ಘಾಟಿಸಿದರು. ನಿವೃತ್ತ ಡಿಸಿಎಫ್ ಆರ್.ಉದಯಕುಮಾರ್, ಸರ್ಕಾರಿ ಆಯುರ್ವೇದ ಸಂಶೋಧನಾ ಸಂಸ್ಥೆ ಸಹಾಯಕ ನಿರ್ದೇಶಕ ಡಾ.ಲಕ್ಷ್ಮಿನಾರಾಯಣ್ ಶಣೈ ಉಪಸ್ಥಿತರಿದ್ದರು. 9ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ ಪ್ರಯುಕ್ತ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗಾಗಿ ರಸಪ್ರಶ್ನೆ ಮತ್ತು ಪ್ರಬಂಧ ಸ್ಪರ್ಧೆ ಹಾಗೂ ಆಯುರ್ವೇದಕ್ಕೆ ಸಂಬಂಧಪಟ್ಟಂತೆ ಸ್ಲೋಗನ್ ಬರವಣಿಗೆ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು. ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ಮತ್ತು ಪ್ರಶಸ್ತಿ ಪತ್ರಗಳನ್ನು ವಿತರಿಸಲಾಯಿತು. ವೈದ್ಯರಾದ ಡಾ.ಕೃಪಾ, ಭಾರತ್ ಕ್ಯಾನ್ಸರ್ ಹಾಸ್ಪಿಟಲ್, ಮೈಸೂರು ಹಾಗೂ ಡಾ.ಪ್ರತಿಮಾ ಎಚ್.ಎನ್.ವಂದೇ ವೆಲ್ನೆಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಅವರು ಪೋಷಕರಿಗೆ, ಶಾಲಾ ವಿದ್ಯಾರ್ಥಿಗಳಿಗೆ, ಪ್ರಶಿಕ್ಷಣಾರ್ಥಿಗಳಿಗೆ ವೈದ್ಯಕೀಯ ತಪಾಸಣೆ ನಡೆಸಿದರು. ಸಂಸ್ಥೆಯ ಅಧ್ಯಕ್ಷ ಡಾ.ಭಾನುಪ್ರಕಾಶ್, ಕಾಲೇಜಿನ ಪ್ರಾಂಶುಪಾಲ ಡಾ.ಆಂಥೋಣಿ ಪೌಲ್‌ರಾಜ್, ಪ್ರಶಿಕ್ಷಣಾರ್ಥಿಗಳ ಪೋಷಕರು, ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

48ನೇ ಅಂತರರಾಷ್ಟ್ರೀಯ ನಿರಂತರ ಕಲೆಮನೆ ಉತ್ಸವ



ಅಂತರರಾಷ್ಟ್ರೀಯ ನಿರಂತರ ಕಲೆಮನೆ ಉತ್ಸವದಲ್ಲಿ ಕಲಾವಿದರು ಪಾಲ್ಗೊಂಡಿದ್ದರು.

ಮೈಸೂರು,ನ.26–ಮೈಸೂರಿನ ಕುಮಾರ್ ಪ್ರದರ್ಶಕ ಕಲೆಗಳ ಕೇಂದ್ರವು ಕಲೆಮನೆ ಸಭಾಂಗಣದಲ್ಲಿ 48ನೇ ಅಂತರರಾಷ್ಟ್ರೀಯ ನಿರಂತರ ಕಲೆಮನೆ ಉತ್ಸವವನ್ನು ಅತ್ಯಂತ ಯಶಸ್ವಿಯಾಗಿ ನಡೆಸಿಕೊಟ್ಟಿತು.

ಇದೇ ಸಂದರ್ಭದಲ್ಲಿ 'ಕರ್ನಾಟಕ ರಾಜ್ಯೋತ್ಸವ' ಪ್ರಶಸ್ತಿ ಹಾಗೂ 'ಕರ್ನಾಟಕ ಕಲಾಶ್ರೀ' ಪ್ರಶಸ್ತಿ ಪುರಸ್ಕೃತರಾದ ಡಾ.ಪದ್ಮಾ ಶೇಖರ್, ವಿದುಷಿ ಲಲಿತಾ ರಾವ್ ಎಂ.ಕೋರೆ, ವಿದ್ವಾನ್ ಟಿ. ರವೀಂದ್ರ ಶರ್ಮ ಅವರಿಗೆ ಅಭಿನಂದನಾ ಕಾರ್ಯಕ್ರಮವನ್ನು ಮಹಾರಾಜ ಕಾಲೇಜಿನ ನಿವೃತ್ತ ಪ್ರಾಧ್ಯಾಪಕ ನಂಜರಾಜ ಅರಸ್ ಮತ್ತು ಸಾಂಸ್ಕೃತಿಕ ಕಾರ್ಯಕ್ರಮವನ್ನು ಡಾ.ಕೃಷ್ಣಮೂರ್ತಿ ಭಟ್, ವಿದುಷಿ ಶ್ವೇತಾ ಪ್ರಸನ್ನ, ವಿದ್ವಾನ್ ದರ್ಶನ್, ವಿದುಷಿ ಲಕ್ಷ್ಮಿ ವಿಶ್ವನಾಥನ್, ಮತ್ತು ವಿದುಷಿ ಕ್ಷಮ ಖಟ್ವಾರ್ ನಡೆಸಿಕೊಟ್ಟರು. ಸುಮಾರು 40ಕ್ಕಿಂತ ಹೆಚ್ಚು ಕಲಾವಿದರು ಈ ಉತ್ಸವದಲ್ಲಿ ಭಾಗವಹಿಸಿದ್ದರು.

ಜ್ಞಾನೋದಯ ಪಿಯು ಕಾಲೇಜಿನ ವಿದ್ಯಾರ್ಥಿನಿಯರಿಂದ ಉತ್ತಮ ಸಾಧನೆ!!



ಶರಧಿ ಶಾಸ್ತ್ರಿ ರಿವಾ ಮಾನ್ಯ

ಮೈಸೂರು,ನ.26–ಮೈಸೂರಿನ ಸರಸ್ವತಿಪುರಂನಲ್ಲಿರುವ ಜ್ಞಾನೋದಯ ಪದವಿ ಪೂರ್ವ ಕಾಲೇಜಿನ ಪ್ರಥಮ ಪಿಯು ವಿದ್ಯಾರ್ಥಿನಿ ಕು.ಶರಧಿ ಶಾಸ್ತ್ರಿ ಪಶ್ಚಿಮ ಬಂಗಾಳದ ಕೊಲ್ಕತ್ತಾದಲ್ಲಿ ಸ್ಕೂಲ್ ಗೇಮ್ಸ್ ಫೆಡರೇಷನ್ ಆಫ್ ಇಂಡಿಯಾ ನಡೆಸಿದ ರಾಷ್ಟ್ರ ಮಟ್ಟದ ಚೆಸ್ ಸ್ಪರ್ಧೆಯಲ್ಲಿ ಕರ್ನಾಟಕವನ್ನು ಪ್ರತಿನಿಧಿಸುವ ಮೂಲಕ ಆರನೇ ಸ್ಥಾನ ಪಡೆದು ರಾಜ್ಯ ಹಾಗೂ ಕಾಲೇಜಿಗೆ ಕೀರ್ತಿ ತಂದಿದ್ದಾರೆ. ವಿದ್ಯಾರ್ಥಿನಿಯರ ಈ ಸಾಧನೆಗೆ ಪದವಿ ಪೂರ್ವ ಶಿಕ್ಷಣ ಇಲಾಖೆ ಇತ್ತೀಚೆಗೆ ಕಂಚಿನ ಪದಕ ನೀಡಿ ಗೌರವಿಸಿತು. ಹಾಗೆಯೇ ಕಾಲೇಜಿನ ಮತ್ತೋರ್ವ ವಿದ್ಯಾರ್ಥಿನಿ ರಿವಾ ಮಾನ್ಯ ಪದವಿ ಪೂರ್ವ ಇಲಾಖೆಯು ನಡೆಸಿದ 68 ಕೆಜಿ ಮೇಲ್ಪಟ್ಟ ರಾಜ್ಯಮಟ್ಟದ ಕರಾಟೆ (ಕುಮಿತೆ) ಸ್ಪರ್ಧೆಯಲ್ಲಿ ಭಾಗವಹಿಸಿ ಪ್ರಥಮ ಬಹುಮಾನ ಪಡೆದು ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ಕರ್ನಾಟಕವನ್ನು ಪ್ರತಿನಿಧಿಸಲಿದ್ದಾರೆ.

75ನೇ ವರ್ಷದ ಸಂವಿಧಾನ ಸಮರ್ಪಣಾ ದಿನ



ಮೈಸೂರಿನ ಭೀಮ ಬಳಗದಿಂದ 75ನೇ ವರ್ಷದ ಸಂವಿಧಾನ ಸಮರ್ಪಣಾ ದಿನ ಆಚರಿಸಲಾಯಿತು. ಕುವೆಂಪುನಗರ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಎಲ್.ಅರುಣ್, ಸಾರಿಗೆ ಇಲಾಖೆ ನಿವೃತ್ತ ಜಂಟಿ ನಿರ್ದೇಶಕ ಹೆಚ್.ವಿ.ತಿಮ್ಮಯ್ಯ, ಬಳಗದ ಉಪಾಧ್ಯಕ್ಷ ಜೆ.ಶ್ರೀಧರ್, ಪುರುಷೋತ್ತಮ್, ಕೆ.ಬಸವರಾಜು, ಎನ್.ರವೀಂದ್ರ, ಈ.ಬಾಲರಾಜು, ಮೋಹನ್, ಜಗದೀಶ್, ಜಿ.ವಿಶ್ವನಾಥ್, ಎಂ.ಡಿ.ಶ್ರೀನಿವಾಸ್ ಮತ್ತಿತರರಿದ್ದರು.



ಮೈಸೂರಿನ ಅನಂತಗೀತ ವಿದ್ಯಾಲಯದಲ್ಲಿ ಸಂವಿಧಾನ ದಿನ ಆಚರಿಸಲಾಯಿತು. ಸಂವಿಧಾನ ಪೀಠಿಕೆ ಓದುವ ಮೂಲಕ ಪ್ರತಿಜ್ಞೆಯನ್ನು ಸ್ವೀಕರಿಸಿದರು. ಶಾಲೆಯ ಮುಖ್ಯ ಶಿಕ್ಷಕ ಲೋಕೇಶ್, ಶಿಕ್ಷಕರು, ವಿದ್ಯಾರ್ಥಿಗಳು ಈ ವೇಳೆ ಹಾಜರಿದ್ದರು.

ಕಾವ್ಯಶ್ರೀಗೆ ಪಿಹೆಚ್.ಡಿ ಪದವಿ



ಮೈಸೂರು: ಕಾವ್ಯಶ್ರೀ ಹೆಚ್.ಎ ಅವರು ಡಾ.ಎಸ್.ಜೆ ಮಂಜುನಾಥ್ ಅವರ ಮಾರ್ಗದರ್ಶನದಲ್ಲಿ ವಿಜ್ಞಾನ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾ ಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಹೆಚ್.ಡಿ ಪದವಿಗೆ ಅಂಗೀಕರಿಸಿದೆ.

ಸಂವಿಧಾನ ಸಮರ್ಪಣಾ ದಿನ



ಸಂವಿಧಾನ ಸಮರ್ಪಣಾ ದಿನದ ಅಂಗವಾಗಿ ಮೈಸೂರಿನ ಟೌನ್‌ಹಾಲ್ ಮುಂಭಾಗ ವಿರುವ ಡಾ.ಅಂಬೇಡ್ಕರ್ ಪ್ರತಿಮೆಗೆ ಕರ್ನಾಟಕ ದಲಿತ ಸಂಘರ್ಷ ಸಮಿತಿಯಿಂದ ಮಾಲಾರ್ಪಣೆ ಮಾಡಲಾಯಿತು. ಸಮಿತಿ ಜಿಲ್ಲಾಧ್ಯಕ್ಷ ಶಂಕರ್, ನಾಗರಾಜು, ಸ್ವಾಮಿ, ರಾಚಪ್ಪ, ಶ್ರೀನಿವಾಸ್, ಮಹದೇವಸ್ವಾಮಿ ರಾಯನಹಳ್ಳಿ ಸ್ವಾಮಿ ಇನ್ನಿತರರಿದ್ದರು.

ಮಹಾಜನ ಪ್ರೌಢಶಾಲೆಯಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆ



ಮೈಸೂರಿನ ಮಹಾಜನ ಪ್ರೌಢಶಾಲೆಯಲ್ಲಿ ಬಡವರ ಬಂಧು ಅಭಿಮಾನಿಗಳ ಸಂಘ, ಪಡುವಾರಹಳ್ಳಿ ವತಿಯಿಂದ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಶಾಸಕ ಕೆ.ಹರೀಶ್‌ಗೌಡ, ಮಾಜಿ ಕಾರ್ಪೊರೇಟರ್ ಭಾಗ್ಯ ಮಾದೇಶ್ ಇನ್ನಿತರರಿದ್ದರು.

ಮೈಸೂರು, ನ. 26– ಮೈಸೂರಿನ ಮಹಾಜನ ಪ್ರೌಢಶಾಲೆಯಲ್ಲಿ ಬಡವರ ಬಂಧು ಅಭಿಮಾನಿಗಳ ಸಂಘ ಪಡುವಾರಹಳ್ಳಿ ವತಿಯಿಂದ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಸಂಘದ ವತಿಯಿಂದ ಬಡ ಮಕ್ಕಳಿಗೆ ಪುಸ್ತಕ ವಿತರಣೆ, ವಯೋವೃದ್ಧರಿಗೆ ಸೀರೆ ವಿತರಣೆ ಹಾಗೂ ವಿಡೋ ಪೆನ್ಷನ್ ಆದೇಶದ ಪ್ರತಿ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಶಾಸಕ ಹರೀಶ್‌ಗೌಡ ಮಾತನಾಡಿ, ಇಂತಹ ದಿನಗಳಲ್ಲಿ ಈ ರೀತಿ ಒಳ್ಳೆಯ ಕೆಲಸ ಮಾಡುವುದು ತುಂಬಾ ಒಳ್ಳೆಯದು. ಇದು ಯಾವಾಗಲೂ ಹೀಗೆ ಮುಂದುವರೆಯಲಿ ಹಾಗೂ ಕನ್ನಡ ಕಲಿಯದೆ ಇದ್ದವರಿಗೆ ಕನ್ನಡ ಕಲಿಸಲಿ ಎಂದು ತಿಳಿಸಿದರು.

ನಗರಪಾಲಿಕೆ ಮಾಜಿ ಸದಸ್ಯೆ ಭಾಗ್ಯ ಮಾದೇಶ್ ಮಾತನಾಡಿ, ಬಡವರ ಬಂಧು ಸಂಘದ ವತಿಯಿಂದ ನಡೆಸುವ ಎಲ್ಲಾ ಕಾರ್ಯಕ್ರಮಗಳು ವಿಭಿನ್ನವಾಗಿರುತ್ತವೆ. ಇದು ಹೀಗೆ ಮುಂದುವರೆಯಲಿ. ಕನ್ನಡ ರಾಜ್ಯೋತ್ಸವದ ದಿನದಂದು ಬಡ ಮಕ್ಕಳಿಗೆ ಪುಸ್ತಕ ನೀಡುವುದು, ವಯಸ್ಸಾದ ತಾಯಂದಿರಿಗೆ ಸೀರೆ ನೀಡುವುದು ಒಳ್ಳೆಯ ಕೆಲಸಗಳು, ಇಂತಹ ಕೆಲಸಗಳು ಇವರಿಂದ ಯಾವಾಗಲೂ ಆಗುತ್ತಿರಲಿ ಎಂದು ಆಶಿಸಿದರು.

ಕೋ–ಆಪರೇಟಿವ್ ಸೊಸೈಟಿ ಗಾಂಧಿ ಚೌಕ ನಿರ್ದೇಶಕರಾದ ಎಸ್.ಆರ್., ಸಂಘದ ಅಧ್ಯಕ್ಷ ಪಡುವಾರಹಳ್ಳಿ ಪಾಪಣ್ಣ, ಸುಣ್ಣದಕೇರಿ ರಮೇಶ್, ವಕೀಲರಾದ ಮಹದೇವ್, ಕನ್ನಡ ವೇದಿಕೆ ಅಧ್ಯಕ್ಷ ಬಾಲಕೃಷ್ಣ, ಮಹಾಜನ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಎಸ್.ಸುಜಾತ, ಶಾಲೆಯ ಸಹ ಶಿಕ್ಷಕರಾದ ಇಂದ್ರಾಂಜಲಿ, ಸುಪ್ರೀಯ, ಶೃತಿ, ಕೃಷ್ಣ, ನಿತೀನ್, ಪುರುಷೋತ್ತಮ್, ಸುರೇಶ್, ಮಾದೇಶ್, ದೇವೇಗೌಡ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಬೈಕಿಗೆ ಬೊಲೆರೋ ವಾಹನ ಡಿಕ್ಕಿ

ಓರ್ವ ಸಾವು, ಮತ್ತೊಬ್ಬರಿಗೆ ಗಂಭೀರ ಗಾಯ

ದೇವಸ್ಥಾನದಿಂದ ಪ್ರಸಾದ ತೆಗೆದುಕೊಂಡು ಹೋಗುತ್ತಿದ್ದಾಗ ದುರಂತ



ಕೆ.ಆರ್.ಪೇಟೆ: ಬೊಲೆರೋ ವಾಹನವೊಂದು ಬೈಕಿಗೆ ಡಿಕ್ಕಿ ಹೊಡೆದ ಪರಿಣಾಮ ವ್ಯಕ್ತಿಯೊಬ್ಬರು ಸಾವನ್ನಪ್ಪಿ, ಮತ್ತೊಬ್ಬರು ಗಂಭೀರವಾಗಿ ಗಾಯಗೊಂಡಿರುವ ಘಟನೆ ಜಲಸೂರು-ಬೆಂಗಳೂರು ಹೈವೆಯಲ್ಲಿ ಸಂಭವಿಸಿದೆ.

ತಾಲೂಕಿನ ವಳಗೆರೆಮೆಣಸ ಗ್ರಾಮದ ಲೇಟ್ ಚಿಕ್ಕೇಗೌಡರ ಮಗ ರಮೇಶ್(63) ಮೃತದುರ್ದೈವಿ. ಇದೇ ಗ್ರಾಮದ ಜಯರಾಮ್ ತೀವ್ರವಾಗಿ ಗಾಯಗೊಂಡಿದ್ದು, ಅವರನ್ನು ಮೈಸೂರಿನ ಆಸ್ಪತ್ರೆಗೆ ದಾಖಲು ಮಾಡಲಾಗಿದೆ

ವಳಗೆರೆಮೆಣಸ ಗ್ರಾಮದಲ್ಲಿ ನಡೆಯುತ್ತಿದ್ದ ತಂದ್ರಿದೇವಿ ಅಮ್ಮನವರ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ, ಮನೆಗೆ ಪ್ರಸಾದ ತೆಗೆದುಕೊಂಡು ಸ್ನೇಹಿತ ಜಯರಾಂ ಬೈಕಿನಲ್ಲಿ ರಮೇಶ್ ತೆರಳುತ್ತಿದ್ದರು. ಈ ವೇಳೆ ಅತಿ ವೇಗದಿಂದ ಸಂತೇಬಾಚಹಳ್ಳಿ ಕಡೆಯಿಂದ ಬಂದ ಬೊಲೆರೋ ವಾಹನ ಬೈಕಿಗೆ ಡಿಕ್ಕಿ ಹೊಡೆಯಿತು. ಇದರಿಂದ ರಮೇಶ್ ಮತ್ತು ಬೈಕಿನ ಚಾಲಕ ಜಯರಾಂ ಗಂಭೀರವಾಗಿ ಗಾಯಗೊಂಡರು.

ತೀವ್ರವಾಗಿ ಗಾಯಗೊಂಡಿದ್ದ ರಮೇಶ್ ಸ್ಥಳದಲ್ಲಿಯೇ ಮೃತಪಟ್ಟರು. ಜಯರಾಮ್ ಅವರಿಗೆ ಗಂಭೀರ ಸ್ವರೂಪದ ಗಾಯಗಳಾಗಿದ್ದು, ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಕೆ.ಆರ್.ಆಸ್ಪತ್ರೆಗೆ ದಾಖಲು ಮಾಡಲಾಗಿದ್ದು, ಸಾವು ಬದುಕಿನ ನಡುವೆ ಹೋರಾಟ ನಡೆಸುತ್ತಿದ್ದಾರೆ

ಮೃತ ರಮೇಶ್ ಪತ್ನಿ ಗೌರಮ್ಮ, ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಘಟನಾ ಸ್ಥಳಕ್ಕೆ ಕೆಆರ್.ಪೇಟೆ ಟೌನ್ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಸುಮಾ ರಾಣಿ ಭೇಟಿ ನೀಡಿ ಪರಿಶೀಲನೆ ನಡೆಸಿ, ಅಪಘಾತ ನಡೆಸಿದ ಬೊಲೆರೋ ವಾಹನದ ಚಾಲಕ ಮತ್ತು ವಾಹನವನ್ನು ವಶಕ್ಕೆ ಪಡೆದು, ಮೃತರ ಪತ್ನಿ ಗೌರಮ್ಮ ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಿಸಿ ಮುಂದಿನ ತನಿಖೆ ಕೈಗೊಂಡಿದ್ದಾರೆ.

ಚಲುವನ ಸನ್ನಿಧಿಗೆ ತೆಲಂಗಾಣದ ಸೀತಾಸಮೇತ ರಾಮಚಂದ್ರ ದೇವಾಲಯದ ರಥ ಆಗಮನ



ಮೇಲುಕೋಟೆ: ಶ್ರೀಚೆಲುವನಾರಾಯಣ ಸ್ವಾಮಿಯ ದಿವ್ಯ ಸನ್ನಿಧಿಗೆ ತೆಲಂಗಾಣದ ಭದ್ರಾಚಲಂನ ಸೀತಾಸಮೇತ ರಾಮಚಂದ್ರಪ್ರಭು ದೇವಾಲಯದ ರಥ ಆಗಮಿಸಿ ಭಕ್ತರಿಗೆ ದರ್ಶನ ನೀಡಿತು. ತೆಲಂಗಾಣ ರಾಜ್ಯದ ಗೋದಾವರಿ ನದಿ ತಟದಲ್ಲಿರುವ ಭದ್ರಾಚಲಂ ಕ್ಷೇತ್ರದ ಶ್ರೀವೈಷ್ಣವಸೀತಾ ಸಮೇತ ಶ್ರೀರಾಮಚಂದ್ರ ಪ್ರಭುವಿನ ದೇವಾಲಯ ಶ್ರೀರಾಮಚಂದ್ರನಿಗೆ ಮುಡಿಪಾದ ಶ್ರೀವೈಷ್ಣವ ದೇವಾಲಯವಾಗಿದೆ. ಆಚಾರ್ಯರಾಮಾನುಜರ ಸಿದ್ಧಾಂತದ ರೀತ್ಯ ದೇವಾಲಯದಲ್ಲಿ ಪೂಜಾ ಕೈಂಕರ್ಯ ನಡೆಯುತ್ತಾ ಬಂದಿದ್ದು ರಾಮಾನುಜರ ಕರ್ಮಭೂಮಿ ಮೇಲುಕೋಟೆಗೂ ಭದ್ರಾಚಲಂಗೂ ಅವಿನಾಭಾವ ಸಂಪರ್ಕವಿದೆ. ಭದ್ರಾಚಲಂ ರಾಮದಾಸರು ದೇವಾಲಯವನ್ನು ನಿರ್ಮಿಸಿ ಕರ್ನಾಟಕ ಶಾಸ್ತ್ರೀಯ ಸಂಗೀತದ ಭೀಷ್ಮಸ್ಥಾನವಾದ ಸಾವಿರಾರು ಮೇರು ಕೀರ್ತನೆಗಳನ್ನು ರಚಿಸಿ ಶ್ರೀರಾಮನಿಗೆ ಅರ್ಪಿಸಿದ್ದರು.

ಇಂತಹ ಮಹತ್ವವಾದ ದೇವಾಲಯದಿಂದ ಸಾಂಪ್ರದಾಯಿಕ ಶೈಲಿಯಲ್ಲಿ ನಿರ್ಮಿಸಲಾದ ಪ್ರಚಾರ ರಥದೊಂದಿಗೆ ಆಗಮಿಸಿದ ಅಧಿಕಾರಿಗಳು ಮತ್ತು ಅರ್ಚಕರು ಮೇಲುಕೋಟೆಗೆ ಆಗಮಿಸಿ ಚೆಲುವನಾರಾಯಣ ಸ್ವಾಮಿ ದೇವಾಲಯದಿಂದ ಪೂಜೆ ಮಾಡಿಸಿ ಭಕ್ತರಿಗೆ ರಾಮಚಂದ್ರನ ದರ್ಶನ ಮಾಡಿಸಿದರು. ರಥದ ಜೊತೆಗೆ ಆಗಮಿಸಿದ್ದ ಭದ್ರಾಚಲಂ ದೇಗುಲದ ಸಿಇಒ ಮತ್ತು ಅರ್ಚಕರು ಚೆಲುವನಾರಾಯಣಸ್ವಾಮಿ ಮತ್ತು ಬೆಟ್ಟದೊಡೆಯ ಯೋಗನರಸಿಂಹನ ದರ್ಶನ ಪಡೆದರು.

ಪುಟ್ಟರಾಜು ನಿಧನ



ಕೆ.ಆರ್.ಪೇಟೆ: ತಾಲೂಕಿನ ನಗರೂರು ಗ್ರಾಮದ ಕಾಳಪ್ಪನ ನಿಂಗಣ್ಣ ಅವರ ಮಗ ಪುಟ್ಟರಾಜು (50) ಮಂಗಳವಾರ ರಾತ್ರಿ ನಿಧನರಾಗಿದ್ದಾರೆ. ಮೃತರು ಪತ್ನಿ ಶಶಿಕಲಾ, ಓರ್ವ ಪುತ್ರ, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ನ.27 ರಂದು ಬೆಳಿಗ್ಗೆ 11 ಗಂಟೆಗೆ ಸ್ವಗ್ರಾಮ ನಗರೂರು ಗ್ರಾಮದ ಜಮೀನಿನಲ್ಲಿ ನಡೆಯಲಿದೆ.

ಮಂಡ್ಯದಲ್ಲಿ ಎರಡು ದಿನಗಳ ಕೃಷಿ ಮೇಳಕ್ಕೆ ಚಾಲನೆ

ಪ್ರತಿಯೊಬ್ಬ ರೈತರು ಕೃಷಿ ಮೇಳದಲ್ಲಿ ಭಾಗವಹಿಸಿ ಲಾಭವನ್ನು ಪಡೆದುಕೊಳ್ಳಬೇಕು



ವಿ.ಸಿ.ಫಾರಂ ವಲಯ ಕೃಷಿ ಸಂಶೋಧನಾ ಕೇಂದ್ರದಲ್ಲಿ ಆಯೋಜಿಸಲಾಗಿದ್ದ ಕೃಷಿ ಮೇಳವನ್ನು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಕುಲಪತಿ ಡಾ.ಎಸ್.ವಿ.ಸುರೇಶ್ ಗಣ್ಯರ ಸಮ್ಮುಖದಲ್ಲಿ ಉದ್ಘಾಟಿಸಿದರು.

ಮಂಡ್ಯ,ನ.26– ಪ್ರತಿ ವರ್ಷದಂತೆ ಈ ವರ್ಷವೂ ಕೃಷಿ ಮೇಳವನ್ನು ಮಂಡ್ಯದಲ್ಲಿ 2 ದಿನಗಳ ಕಾಲ ಹಮ್ಮಿಕೊಳ್ಳಲಾಗಿದ್ದು, ಪ್ರತಿಯೊಬ್ಬ ರೈತರು ಕೃಷಿ ಮೇಳದಲ್ಲಿ ಭಾಗವಹಿಸಿ ಮೇಳದ ಲಾಭವನ್ನು ಪಡೆದುಕೊಳ್ಳಬೇಕು ಎಂದು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಕುಲಪತಿ ಡಾ.ಎಸ್.ವಿ.ಸುರೇಶ್ ತಿಳಿಸಿದರು.

ಮಂಗಳವಾರ ತಾಲೂಕಿನ ವಿ.ಸಿ.ಫಾರಂ ವಲಯ ಕೃಷಿ ಸಂಶೋಧನಾ ಕೇಂದ್ರದಲ್ಲಿ ಆಯೋಜಿಸಲಾಗಿದ್ದ ಕೃಷಿ ಮೇಳವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕೃಷಿ ಮೇಳದ ಆಚರಣೆಯ ಸಂದರ್ಭದಲ್ಲಿ ರೈತರಿಗೆ ಉಪಯುಕ್ತವಾದ ಮಾಹಿತಿಯನ್ನು ಒದಗಿಸಲಾಗುತ್ತದೆ. ಕೃಷಿ ವಿಶ್ವವಿದ್ಯಾನಿಲಯದಲ್ಲಿ ಕೃಷಿ ಚಟುವಟಿಕೆಗಳ ಮೇಲೆ ನಡೆಯುತ್ತಿರುವ ಸಂಶೋಧನ ಚಟುವಟಿಕೆಗಳು ಹಾಗೂ ಕೃಷಿ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳುವ ಬಗ್ಗೆ ಕೃಷಿ ಮೇಳದಲ್ಲಿ ರೈತರ ಗಮನ ಸೆಳೆಯಲಾಗುತ್ತದೆ. ಜೊತೆಗೆ ಕೃಷಿ ಸಂಶೋಧನಾ ಕೇಂದ್ರದಲ್ಲಿ ಬಿಡುಗಡೆಯಾದ ತಳಿಯ ಪರಿಚಯ ಮಾಡುವುದು ಮೇಳದ ಉದ್ದೇಶವಾಗಿದೆ ಎಂದರು.

ಬೆಂಗಳೂರಿನಲ್ಲಿ ನಡೆಯುವ ಕೃಷಿ ಮೇಳಕ್ಕೆ ಸಾರ್ವಜನಿಕರು ಹೆಚ್ಚು ಸಂಖ್ಯೆಯಲ್ಲಿ ಭಾಗವಹಿಸುತ್ತಾರೆ. ಆದರೆ ಮಂಡ್ಯದಲ್ಲಿ ನಡೆಯುವ ಕೃಷಿ ಮೇಳಕ್ಕೆ ನಿಜವಾದ ರೈತರು ಹೆಚ್ಚಾಗಿ ಭಾಗವಹಿಸುವುದರಿಂದ ಕೃಷಿ ಮೇಳವು ಬಹಳ ವಿಶಿಷ್ಟವಾಗಿದೆ. ಕೃಷಿ ಮೇಳವು ನೇರವಾಗಿ ಕೃಷಿಕರನ್ನು ತಲುಪುವುದು ಜಿಲ್ಲೆಯಲ್ಲಿ ಮಾತ್ರ ಸಾಧ್ಯ ಜೊತೆಗೆ ಈ ಮೇಳವೂ ಕೃಷಿ ವಿಶ್ವವಿದ್ಯಾನಿಲಯಗಳಿಗೆ ಸೇತುವೆಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಪ್ರಮುಖ ಬೆಳೆಗಳಾದ ಭತ್ತ, ರಾಗಿ, ಕಬ್ಬು ಹಾಗೂ ಮೆಕ್ಕೆಜೋಳ ಬೆಳೆಯ ಹೊಸ ತಳಿಗಳನ್ನು ಕಂಡುಹಿಡಿಯುವಲ್ಲಿ ಸಾಕಷ್ಟು ಸಂಶೋಧನೆ ಕೃಷಿ ಸಂಶೋಧನಾ ಕೇಂದ್ರದಲ್ಲಿ ನಡೆಯುತ್ತಿದೆ. ಈ ರೀತಿಯ ಸಂಶೋಧನೆಗಳಲ್ಲಿ ರೈತರಿಗೆ ಹೆಚ್ಚು ಆಸಕ್ತಿ ಇದೆ ಆದ್ದರಿಂದ ಕೃಷಿ ವಸ್ತುಪ್ರದರ್ಶನದ ಜೊತೆಗೆ ಸಾಕಷ್ಟು ಬೆಳೆ ಪ್ರಾತ್ಯಕ್ಷಿಕೆಗಳನ್ನು ಹಾಗೂ ಕೃಷಿಯಲ್ಲಿನ ನ್ಯೂನತೆಗಳನ್ನು ಸರಿಪಡಿಸುವ ಬಗೆಯನ್ನು ಮೇಳದಲ್ಲಿ ಆಯೋಜಿಸಲಾಗಿದೆ. ಭತ್ತದಲ್ಲಿನ ಬೆಂಕಿ ರೋಗ, ಕಬ್ಬು ಬೆಳೆಯಲ್ಲಿ ಕಂಡು ಬರುವ ರೋಗವನ್ನು ಹೋಗಲಾಡಿಸಲು ಅಗತ್ಯವಾಗಿ ಬಳಸಬೇಕಾದ ಸಸ್ಯ ಸಂರಕ್ಷಣಾ ಕ್ರಮವನ್ನು ರೈತರು ಅವಶ್ಯಕ ತಿಳಿದುಕೊಳ್ಳಬೇಕು ಎಂದು ತಿಳಿಸಿದರು.

ಕೃಷಿ ಸಚಿವರ ವಿಶೇಷ ಅಧಿಕಾರಿ ಎ.ಬಿ. ಪಾಟೀಲ್ ಮಾತನಾಡಿ, ಕೃಷಿ ಸಂಶೋಧನೆಯಲ್ಲಿ ರಾಷ್ಟ್ರ ಪ್ರಶಸ್ತಿಗೆ ಅರ್ಹವಾದ ಹೆಗ್ಗಳಿಕೆಗೆ ಪಾತ್ರವಾಗಿರುವುದು ಮಂಡ್ಯ ಜಿಲ್ಲೆ. ಸಮೃದ್ಧ ಬಾಳ್ವೆಗೆ ಸಮಗ್ರ ಕೃಷಿ ಎಂಬ ಧ್ಯೇಯವಾಕ್ಯದೊಂದಿಗೆ ಬೃಹತ್ ಕೃಷಿಮೇಳವನ್ನು ಆಚರಿಸಲಾಗುತ್ತಿರುವುದು ಬಹಳ ಸಂತೋಷದ ವಿಷಯವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದಿಂದ ಕಳೆದ ವರ್ಷ ಬಿಡುಗಡೆಯಾಗಿರುವ ಹೊಸ ತಳಿಗಳು, ತಂತ್ರಜ್ಞಾನ ಹಾಗೂ ಕಿರುಹೊತ್ತಿಗೆಗಳನ್ನು ಅನಾವರಣಗೊಳಿಸಲಾಯಿತು.

ಕಾರ್ಯಕ್ರಮದಲ್ಲಿ ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ವ್ಯವಸ್ಥಾಪನ ಮಂಡಳಿಯ ಸದಸ್ಯರುಗಳಾದ ಡಾ.ಹೆಚ್.ಎಲ್. ಹರೀಶ್, ಡಾ.ಟಿ.ಕೆ.ಪ್ರಭಾಕರ ಶೆಟ್ಟಿ, ಎನ್.ದಿನೇಶ್, ಡಾ.ಎಂ.ಚಂದ್ರೇಗೌಡ, ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಕುಲ ಸಚಿವ ಡಾ.ಕೆ.ಸಿ.ನಾರಾಯಣಸ್ವಾಮಿ, ಸಂಶೋಧನಾ ನಿರ್ದೇಶಕ ಡಾ.ಎಚ್.ಎಸ್. ಶಿವರಾಮು, ವಿಸ್ತರಣಾ ನಿರ್ದೇಶಕ ಡಾ.ವೈ ಎನ್.ಶಿವಲಿಂಗಯ್ಯ, ಮಂಡ್ಯ ವಿ.ಸಿ.ಫಾರಂ ಕೃಷಿ ಮಹಾವಿದ್ಯಾಲಯ ಡೀನ್ ಡಾ.ಪಿ.ಎಸ್. ಫಾತಿಮಾ, ಸಂಶೋಧನಾ ಕೇಂದ್ರದ ಸಹ ಸಂಶೋಧನಾ ನಿರ್ದೇಶಕ ಡಾ.ಎನ್.ಶಿವಕುಮಾರ್, ಸಹ ವಿಸ್ತರಣಾಧಿಕಾರಿ ನಿರ್ದೇಶಕರಾದ ಡಾ.ರಂಗನಾಥ್, ರಘುಪತಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಅಶೋಕ್, ಗಾಣದಾಳು ಗ್ರಾ.ಪಂ. ಅಧ್ಯಕ್ಷ ಕುಳ್ಳೇಗೌಡ, ಸಂಶೋಧನಾ ಕೇಂದ್ರದ ಸಹ ವಿಸ್ತರಣಾ ನಿರ್ದೇಶಕ ಡಾ.ಶಿವಕುಮಾರ್, ರೈತ ಮುಖಂಡರು ಸುನಂದಾ ಜಯರಾಂ, ಬೋರೇಗೌಡ, ಕ್ಯಾತನಹಳ್ಳಿ ಶಂಕರ್, ಚಾಮರಾಜನಗರ ಕೃಷಿ ಕಾಲೇಜಿನ ಡೀನ್ ದೊರೆಸ್ವಾಮಿ, ಹಾಸನ ಕೃಷಿ ಕಾಲೇಜಿನ ಡೀನ್ ಮುನಿಸ್ವಾಮಿಗೌಡ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಸಂವಿಧಾನ ಪ್ರತಿಯೊಬ್ಬ ಭಾರತೀಯ ಪ್ರಜೆಯ ಎದೆಯ ಧ್ವನಿ



ಮಂಡ್ಯ,ನ.26– ಸಂವಿಧಾನ ಎಂಬುವುದು ಪ್ರತಿಯೊಬ್ಬ ಭಾರತೀಯ ಪ್ರಜೆಯ ಧೈರ್ಯ ಹಾಗೂ ಎದೆಯ ಧ್ವನಿ ಇದ್ದಂತೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದರು.

ಮಂಗಳವಾರ ನಗರದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು (ಕಲ್ಲು ಕಟ್ಟಡ) ಆವರಣದಲ್ಲಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್, ಮೈ ಭಾರತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಸಮಾಜ ಕಲ್ಯಾಣ ಇಲಾಖೆ, ನೆಹರು ಯುವ ಕೇಂದ್ರ, ನಗರಸಭೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಅನನ್ಯ ಹಾರ್ಟ್ ಹಾಗೂ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು (ಕಲ್ಲು ಕಟ್ಟಡ) ಇವರುಗಳು ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಸಂವಿಧಾನ ದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ, ಮಾತನಾಡಿದರು.

ನಮ್ಮ ಸಂವಿಧಾನವನ್ನು ಪ್ರತಿಯೊಬ್ಬರೂ ಕೂಡ ಅತ್ಯಂತ ಆತ್ಮ ಪೂರ್ವಕವಾಗಿ ಆತ್ಮ ಗೌರವವನ್ನು ಹೊಂದಿ ಆರಾಧಿಸಬೇಕು. ಹಾಗಾಗಿ ಪ್ರತಿಯೊಬ್ಬ ಪ್ರಜೆಯಲ್ಲಿಯೂ ಕೂಡ ಸಂವಿಧಾನದ ಬಗ್ಗೆ ಅತ್ಯಂತ ಪ್ರೀತಿ, ವಿಶ್ವಾಸ, ಗೌರವ ಇರಬೇಕು. ಭಾಷೆಗಳ ಆಧಾರದಲ್ಲಿ ಭೌಗೋಳಿಕ ಆಧಾರದಲ್ಲಿ ಭಾವನಾತ್ಮಕ ಸಂಕೇತವಾಗಿರುವಂತಹ ಜನವರಿ 26 ಗಣರಾಜ್ಯ ದಿನವೂ ಎಷ್ಟು ಪವಿತ್ರವಾದ ಹಾಗೂ ಪ್ರಾಮುಖ್ಯವಾದ ದಿನವೋ ಅದೇ ರೀತಿ ನವೆಂಬರ್ 26ರ ಸಂವಿಧಾನ ದಿನವು ಕೂಡ ನಮಗೆ ಅಷ್ಟೇ ಪವಿತ್ರ ಹಾಗೂ ಪ್ರಾಮುಖ್ಯವಾದ ದಿನ ಎಂದು ಹೇಳಿದರು.

ದೇವಸ್ಥಾನಗಳಲ್ಲಿ, ನಮ್ಮ ಮನೆಗಳಲ್ಲಿ ಹೇಗೆ ದೇವರನ್ನು ಪೂಜಿಸುತ್ತೀವೋ ಅದೇ ರೀತಿ ಸಂವಿಧಾನವನ್ನು ನಮ್ಮ ಮನೆಗಳಲ್ಲಿ ಇಟ್ಟುಕೊಂಡು ಪೂಜಿಸಿ ಆರಾಧಿಸಬೇಕು. ಸಂವಿಧಾನದಲ್ಲಿ ಮೂಲಭೂತ ಹಕ್ಕುಗಳು, ಕರ್ತವ್ಯಗಳು ಇವೇ ಆದರೆ ನಮ್ಮ ಪ್ರಜೆಗಳು ಮೂಲಭೂತ ಹಕ್ಕುಗಳಿಗೆ ಹೆಚ್ಚು ಪ್ರಾಮುಖ್ಯತೆ ಕೊಡುತ್ತಾರೆ ಮೂಲಭೂತ ಕರ್ತವ್ಯಗಳನ್ನು ಯಾರು ಸರಿಯಾಗಿ ನಿಭಾಯಿಸದಿದ್ದರೆ ನಿಜಕ್ಕೂ ಇದು ಬೇಸರದ ಸಂಗತಿ. ಮೊದಲು ಪ್ರತಿಯೊಬ್ಬ ಭಾರತೀಯ ಪ್ರಜೆಯು ಕೂಡ ಮೂಲಭೂತ ಕರ್ತವ್ಯಗಳನ್ನು ನಿಭಾಯಿಸಬೇಕು ಎಂದರು.

ಶಂಭುಲಿಂಗೇಶ್ವರ ಜಾತ್ರಾ ಮಹೋತ್ಸವ



ಶ್ರೀರಂಗಪಟ್ಟಣ ತಾಲೂಕು ಪಾಲಹಳ್ಳಿ ಗ್ರಾಮದಲ್ಲಿ ಶಂಭುಲಿಂಗೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಹಾಗೂ ದೇವಸ್ಥಾನದ ಬಳಿ ಕೊಂಡೋತ್ಸವ ವಿಜೃಂಭಣೆಯಿಂದ ನೆರವೇರಿತು. ಈ ಜಾತ್ರಾ ಮಹೋತ್ಸವದಲ್ಲಿ ಅಪಾರ ಸಂಖ್ಯೆಯಲ್ಲಿ ಭಕ್ತರು ಭಾಗವಹಿಸಿದ್ದರು.

ಒಂದನೇ ಪುಟದಿಂದ

ಮುಂದೂಡಿದ ಹೈಕೋರ್ಟ್

ಮೇಲ್ಮನವಿಗೂ ಈ ಪ್ರಕರಣದ ವಿಚಾರಣೆಗೂ ಸಂಬಂಧವಿಲ್ಲ ಎಂದು ನ್ಯಾಯಮೂರ್ತಿಗಳು ಅಭಿಪ್ರಾಯ ವ್ಯಕ್ತಪಡಿಸಿದರಾದರೂ, ಪದೇ ಪದೆ ದೇವರಾಜು ಪರ ವಕೀಲರ ಮನವಿಗೆ ಸ್ಪಂದಿಸಿ ವಿಚಾರಣೆಯನ್ನು ಡಿಸೆಂಬರ್ 10ಕ್ಕೆ ಮುಂದೂಡಿದರು.

ಲೋಕಾಯುಕ್ತ ತನಿಖೆಯನ್ನೇ ಪ್ರಶ್ನಿಸಿ ಭೂಮಾಲಿಕರು ಮೇಲ್ಮನವಿ ಸಲ್ಲಿಸಿರುವುದರಿಂದ ಇಂದು ಅವರು ತಮ್ಮ ವರದಿಯನ್ನು ಪೀಠಕ್ಕೆ ಸಲ್ಲಿಸಲಿಲ್ಲ. ಕಳೆದ ವಿಚಾರಣೆ ವೇಳೆ ಮುಡಾಗೆ ಸಂಬಂಧಿಸಿದಂತೆ ಲೋಕಾಯುಕ್ತ ತನಿಖಾ ಮಧ್ಯಂತರ ವರದಿಯನ್ನು ನವೆಂಬರ್ 26ಕ್ಕೆ ಸಲ್ಲಿಸುವಂತೆ ಪೀಠ ಸೂಚಿಸಿತ್ತು. ಆದರೆ, ಲೋಕಾಯುಕ್ತರು ತನಿಖಾ ವರದಿ ಸಲ್ಲಿಸಲು ತಮ್ಮ ವಕೀಲರ ಮೂಲಕ ಮತ್ತಷ್ಟು ಸಮಯ ಕೋರುವ ಸಿದ್ಧತೆಯಲ್ಲಿದ್ದರು. ಈ ವೇಳೆಗೆ ನ್ಯಾಯಮೂರ್ತಿಗಳು ವಿಚಾರಣೆಯನ್ನು ಮುಂದೂಡುವ ಸಂದರ್ಭದಲ್ಲಿ ಲೋಕಾಯುಕ್ತ ವರದಿಯನ್ನೂ ಅಂದೇ ಸಲ್ಲಿಸುವಂತೆ ಆದೇಶಿಸಿದರು. ಲೋಕಾಯುಕ್ತ ತನಿಖೆಯ ವಿಶ್ವಾಸಾರ್ಹತೆ ಪ್ರಶ್ನಿಸಿ ಸ್ನೇಹಮಯಿ ಕೃಷ್ಣ ಹೈಕೋರ್ಟ್ ಮೆಟ್ಟಿಲೇರಿರುವುದಲ್ಲದೆ, ಪ್ರಕರಣದ ಸತ್ಯಾಸತ್ಯತೆ ಅರಿಯಲು ಸಿಬಿಐಗೆ ವಹಿಸುವಂತೆ ಅವರು ಮನವಿ ಮಾಡಿದ್ದರು. ಸರ್ಕಾರದ ಅಧೀನದಲ್ಲಿ ಲೋಕಾಯುಕ್ತ ಸಂಸ್ಥೆ ಇರುವುದರಿಂದ ನಮಗೆ ಈ ತನಿಖೆಯಿಂದ ನ್ಯಾಯ ಸಿಗುವ ವಿಶ್ವಾಸವಿಲ್ಲದ ಹಿನ್ನೆಲೆಯಲ್ಲಿ ಸಿಬಿಐಗೆ ವಹಿಸಲು ಹೈಕೋರ್ಟ್‌ಗೆ ಮನವಿ ಮಾಡಿಕೊಂಡಿದ್ದಾರೆ.

ಕೆಟ್ಟ ಪರಿಣಾಮ

ಸಹಾ ಸಂವಿಧಾನ ಜಾರಿಯನ್ನು ವಿರೋಧಿಸಿತ್ತು.

ಡಾ. ಬಾಬಾ ಸಾಹೇಬರ ಸಂವಿಧಾನ ಜಾರಿಗೆ ಮುನ್ನ ಮನುಷ್ಯ–ಮನುಷ್ಯರನ್ನು ತಾರತಮ್ಯದಿಂದ ಶೋಷಿಸುವ, ಅಸಮಾನತೆ ಆಚರಿಸುವ, ಅನಾಗರಿಕ ವ್ಯವಸ್ಥೆ ಮತ್ತು ಶೂದ್ರರು, ದಲಿತರು, ಮಹಿಳೆಯರಿಗೆ ಶಿಕ್ಷಣ ವಿರೋಧಿಸುವ ಅಲಿಖಿತ ಮನುಸ್ಮೃತಿ ಪದ್ಧತಿಗಳು ಭಾರತದಲ್ಲಿ ಜಾರಿಯಲ್ಲಿತ್ತು, ಸಂವಿಧಾನ ವಿರೋಧಿಗಳು ಮತ್ತೆ ಮನುಸ್ಮೃತಿ ಜಾರಿಗೆ ಹುನ್ನಾರ ನಡೆಸುತ್ತಿದ್ದಾರೆ ಎಂದರು.

ಚರಿತ್ರೆ, ಇತಿಹಾಸ, ಮರೆಯಬಾರದು, ಎಲ್ಲರಿಗೂ ಸಾಮಾಜಿಕ, ಆರ್ಥಿಕ ಸ್ವಾತಂತ್ರ್ಯ ಸಿಕ್ಕಾಗ ಮಾತ್ರ ನಮಗೆ ದೊರೆತಿರುವ ಸ್ವಾತಂತ್ರ್ಯ ಸಫಲವಾಗಲು ಸಾಧ್ಯ ಎಂಬುದಾಗಿ ಡಾ.ಅಂಬೇಡ್ಕರ್ ಹೇಳಿದ್ದರು, ವಿಶ್ವದ ಎಲ್ಲಾ ಸಂವಿಧಾನಗಳ ಅಧ್ಯಯನ ನಡೆಸಿ ಅತ್ಯುನ್ನತವಾದ ಭಾರತ ಸಂವಿಧಾನ ರಚಿಸಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಮಂತ್ರಿಮಂಡಲದಲ್ಲಿದ್ದ ಅನಂತ ಕುಮಾರ ಹೆಗ್ಡೆ, ನಾವು ಅಧಿಕಾರಕ್ಕೆ ಬಂದಿರುವುದೇ ಸಂವಿಧಾನ ಬದಲಿಸಲು ಎಂಬುದಾಗಿ ಸಾರ್ವಜನಿಕವಾಗಿ ಒಪ್ಪಿಕೊಂಡಿದ್ದರು. ಆದರೆ, ಮೋದಿ ಅವರಾಗಲೀ, ಬಿಜೆಪಿಯವರಾಗಲೀ ಇದನ್ನು ವಿರೋಧಿಸಲಿಲ್ಲ, ಅವರನ್ನು ಮಂತ್ರಿಸ್ಥಾನದಿಂದ ಇಳಿಸಲಿಲ್ಲ, ಆದ್ದರಿಂದ ಅನಂತ ಕುಮಾರ ಹೆಗ್ಡೆ ಅವರ ಮಾತಿಗೆ ಅವರೆಲ್ಲರ ಸಮ್ಮತಿ ಇತ್ತು ಅಂತಲೇ ಅರ್ಥ, ಇದನ್ನು ದೇಶದ ಜನತೆ ಸರಿಯಾಗಿ ಅರ್ಥಮಾಡಿಕೊಳ್ಳಬೇಕು ಎಂದರು.

ಸಂವಿಧಾನದ ಧ್ಯೇಯೋದ್ದೇಶಗಳನ್ನು ನಾವು ಸರಿಯಾಗಿ ಅರ್ಥ ಮಾಡಿಕೊಳ್ಳಬೇಕು, ಯಾವುದೇ ಸರ್ಕಾರ. ಯಾವುದೇ ಪಕ್ಷ ಅಧಿಕಾರಕ್ಕೆ ಬಂದಾಗ ಸಂವಿಧಾನದ ಪ್ರಕಾರವೇ ನಡೆದುಕೊಳ್ಳಬೇಕು. ನಮ್ಮ ಸರ್ಕಾರ ಸಹಾ ಸಂವಿಧಾನದ ಆಶಯಗಳನ್ನು ಈಡೇರಿಸುವ ದಿಕ್ಕಿನಲ್ಲಿ ಹಲವು ಭಾಗ್ಯಗಳನ್ನು ಜಾರಿ ಮಾಡಿದೆ, ಆರ್ಥಿಕ, ಸಾಮಾಜಿಕ ಸ್ವಾತಂತ್ರ್ಯ ನೀಡುವ ಕಾರ್ಯಕ್ರಮಗಳನ್ನು ರೂಪಿಸಿ, ಜಾರಿ ಮಾಡಿದ್ದೇವೆ. ಜಗದ್ಗುರು ಬಸವಣ್ಣ 850 ವರ್ಷಗಳ ಹಿಂದೆಯೇ ಜಾತಿ ವ್ಯವಸ್ಥೆ ವಿರುದ್ಧ ಕರೆ ನೀಡಿದ್ದರು, ಆದರೆ, ಇವತ್ತಿಗೂ ಜಾತಿ ವ್ಯವಸ್ಥೆ ಹೋಗಿಲ್ಲ, ಆದ್ದರಿಂದ ಮಕ್ಕಳನ್ನು ಜಾತ್ಯತೀತರಾಗಿ ಬೆಳೆಸುವುದೇ ಸಂವಿಧಾನಕ್ಕೆ ನಾವು ಸಲ್ಲಿಸುವ ಅತ್ಯುನ್ನತ ಗೌರವ ಎಂದರು.

ಸ್ಥಳೀಯ ಸಂಸ್ಥೆಗಳಿಗೆ ಹಸ್ತಾಂತರ

ಖಾತೆ ಮಾಡುವುದಿಲ್ಲ ಎಂದು ಆಯುಕ್ತ ಎ.ಎನ್. ರಘುನಂದನ್ 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ಹಸ್ತಾಂತರಿಸುವವರೆಗೆ: ಮುಡಾದಿಂದ ಅಭಿವೃದ್ಧಿಗೊಳಿಸಿದ ಬಡಾವಣೆಗಳಿಗೆ ಸ್ಥಳೀಯ ಸಂಸ್ಥೆಗಳಿಗೆ ಹಸ್ತಾಂತರಿಸುವವರೆಗೆ ಮಾತ್ರ ಅಲ್ಲಿನ ನಿವೇಶನಗಳಿಗೆ ಖಾತಾ–ಕಂದಾಯ ಮಾಡಲಾಗುತ್ತದೆ ಎಂದು ಅವರು ಮಾಹಿತಿ ನೀಡಿದರು.

ನಿರ್ವಹಣೆ ಸ್ಥಳೀಯ ಸಂಸ್ಥೆಗಳದ್ದೇ: ಒಮ್ಮೆ ಹಸ್ತಾಂತರವಾದ ಬಡಾವಣೆಗಳ ಕಂದಾಯ, ಆಸ್ತಿ, ಇತರ ತೆರಿಗೆ ಪಾವತಿಸಿಕೊಳ್ಳುವ ಅವಕಾಶ ಸ್ಥಳೀಯ ಸಂಸ್ಥೆಗಳಿಗಿರುವುದರಿಂದ ಆ ಬಡಾವಣೆಯ ಸ್ವಚ್ಛತೆ, ಕುಡಿಯುವ ನೀರು ಪೂರೈಕೆ, ಒಳಚರಂಡಿ ರಸ್ತೆ, ಉದ್ಯಾನವನ ಸೇರಿದಂತೆ ನಾಗರಿಕರಿಗೆ ಮೂಲ ಸೌಲಭ್ಯದೊಂದಿಗೆ ನಿರ್ವಹಣೆ ಜವಾಬ್ದಾರಿಯೂ ಅವರದ್ದೇ ಆಗಿರುತ್ತದೆ ಎಂದು ಮುಡಾ ಆಯುಕ್ತರು ತಿಳಿಸಿದ್ದಾರೆ.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಅಭಿವೃದ್ಧಿಪಡಿಸಿರುವ 17 ವಸತಿ ಬಡಾವಣೆಗಳ ಹಸ್ತಾಂತರಕ್ಕೂ ಪ್ರಕ್ರಿಯೆ ಆರಂಭಗೊಂಡಿದ್ದು, ಸರ್ಕಾರಕ್ಕೆ ಪತ್ರ ಬರೆಯಲಾಗಿದೆ. ಅಲ್ಲಿಯವರೆಗೆ ಅಲ್ಲಿನ ನಿವೇಶನಗಳ ಖಾತಾ–ಕಂದಾಯವನ್ನು ಮುಡಾದಲ್ಲೇ ಮಾಡಲಾಗುವುದು ಎಂದು ರಘುನಂದನ್ ತಿಳಿಸಿದರು.

'ಕೈ' ಶಾಸಕ ಗವಿಯಪ್ಪ

ವಿಡಿಯೋ ವೈರಲ್ ಆಗುತ್ತಿದೆ. ಇನ್ನು ಗವಿಯಪ್ಪ ಅವರ ಈ ಹೇಳಿಕೆಯಿಂದ ರಾಜ್ಯದಲ್ಲಿ ಅಭಿ ವೃದ್ಧಿ ಕಾರ್ಯಗಳಿಗೆ ಅನುದಾನವಿಲ್ಲ ಎಂದು ಆರೋಪ ಮಾಡ್ತಿದ್ದ ವಿರೋಧ ಪಕ್ಷದ ನಾಯಕರಿಗೆ ಆಹಾರವಾದಂತಾ ಗಿದ್ದು, ಈ ಹೇಳಿಕೆಯನ್ನು ಗಂಭೀರ ವಾಗಿ ಪರಿಗಣಿಸಿರುವ ಡಿಸಿಎಂ ಡಿಕೆ ಶಿವಕುಮಾರ್, ಶಾಸಕ ಗವಿಯಪ್ಪ ಅವರಿಗೆ ಎಚ್ಚರಿಕೆ ನೀಡಿದ್ದಾರೆ. ಅಲ್ಲದೆ ಶಾಸಕ ಗವಿಯಪ್ಪ ಅವರು ಈ ರೀತಿ ಹೇಳಿಕೆ ನೀಡಬಾರದಿತ್ತು. ಅವರಿಗೆ ಪಕ್ಷದ ವತಿಯಿಂದ ಶೋಕಾಸ್ ನೋಟಿಸ್ ನೀಡುತ್ತೇವೆ. ಯಾವುದೇ ಕಾರಣಕ್ಕೂ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವ ಪ್ರಶ್ನೆಯೇ ಇಲ್ಲ. ನಾವು ಕರ್ನಾಟಕದ ಜನತೆಗೆ ನೀಡಿದ್ದ ಮಾತಿಗೆ ಬದ್ಧರಾಗಿದ್ದೇವೆ. ಯಾರೂ ಕೂಡ ಈ ಬಗ್ಗೆ ಚಕಾರ ಎತ್ತಬಾರದು. ಬಿಪಿಎಲ್ ಕಾರ್ಡ್ ವಿಚಾರವಾಗಿ ಅನ್ನಭಾಗ್ಯ ಯೋಜನೆಗೆ ಯಾರು ಅರ್ಹರಲ್ಲವೋ ಅವರನ್ನು ಪತ್ತೆ ಮಾಡಿ ತೆಗೆದು ಹಾಕುತ್ತೇವೆ. ಆದರೆ ಓರ್ವ ಕಾಂಗ್ರೆಸ್ ಶಾಸಕನಾಗಿ ಪಕ್ಷದ ಯೋಜನೆಗಳ ಬಗ್ಗೆ ನಕಾರಾತ್ಮಕವಾಗಿ ಮಾತನಾಡಬಾರದು ಎಂದು ಹೇಳಿದರು.

ಗವಿಯಪ್ಪ ವಿರುದ್ಧ ಕ್ಷೇತ್ರದಲ್ಲೇ ಅಸಮಾಧಾನ!: ನಮ್ಮ ಕ್ಷೇತ್ರಕ್ಕೆ ಸರ್ಕಾರದಿಂದ ಯಾವುದೇ ಅನುದಾನ ಬರುತ್ತಿಲ್ಲ. ಇದಕ್ಕೆ ಸ್ಥಳೀಯ ಕಾಂಗ್ರೆಸ್ ಮುಖಂಡರೇ ಶಾಸಕರ ವಿರುದ್ಧ ಅಸಮಾಧಾನ ಹೊರಹಾಕಿದ್ದರು. ಶಾಸಕ ಹೆಚ್.ಆರ್. ಗವಿಯಪ್ಪ ಹೊಸಪೇಟೆ ಪಾಲಿಗೆ ಶಾಪವಾಗಿದ್ದಾರೆ ಎಂದು ಹುಡಾ ಅಧ್ಯಕ್ಷ ಇಮಾಮ್ ನಿಯಾಜಿ ಕಿಡಿಕಾರಿದ್ದರು. ವಿಜಯನಗರ ಕ್ಷೇತ್ರಕ್ಕೆ ಅಂದಾಜು 150 ಕೋಟಿ ರೂಪಾಯಿ ಅನುದಾನ ಬಂದರೂ ಶಾಸಕ ಗವಿಯಪ್ಪ ಸುಳ್ಳು ಹೇಳುತ್ತಾರೆ ಎಂದು ಇಮಾಮ್ ನಿಯಾಜಿ ಅಸಮಾಧಾನ ಹೊರಹಾಕಿದ್ದರು.

ಪಕ್ಷದ ನಿರ್ಧಾರ ಧಿಕ್ಕರಿಸಿದ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ಕ್ರಮಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ವರಿಷ್ಠರಲ್ಲಿ ಮನವಿ

■ ಪಕ್ಷದ ರಾಜ್ಯ ಉಸ್ತುವಾರಿ ರಾಧಾಮೋಹನ್‌ದಾಸ್ ಅವರಿಗೆ ಪತ್ರ ■ ಒಗ್ಗಟ್ಟಿಗೆ ಅಡ್ಡಿಯಾಗಿರುವವರಿಗೆ ಸಹಕಾರ ಬೇಡ



ವಿಜಯೇಂದ್ರ



ರಾಧಾಮೋಹನ್‌ದಾಸ್

ಬೆಂಗಳೂರು,ನ.26(ಕೆಎಂಶಿ)– ಪಕ್ಷದ ತೀರ್ಮಾನ ವಿರೋಧಿಸಿ ಹೋರಾಟ ನಡೆಸುತ್ತಿರುವ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ತಂಡದ ವಿರುದ್ಧ ಕ್ರಮ ಜರುಗಿಸುವಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವರಿಷ್ಠರಲ್ಲಿ ಮನವಿ ಮಾಡಿದ್ದಾರೆ. ರಾಜ್ಯದ ಉಸ್ತುವಾರಿ ಹೊಣೆ ಹೊತ್ತ ರಾಧಾಮೋಹನ್ ದಾಸ್ ಅವರಿಗೆ ಈ ನಾಯಕರ ನಡವಳಿಕೆ, ವರ್ತನೆ, ಹೇಳಿಕೆಗಳು ಹಾಗೂ ವಕ್ಫ್ ವಿಚಾರದಲ್ಲಿ ಪ್ರತ್ಯೇಕ ಪಾದಯಾತ್ರೆ ಕೈಗೊಂಡಿರುವುದರ ವಿರುದ್ಧ ಕಿಡಿಕಾರಿ, ಪಕ್ಷದ ಶಿಸ್ತು ಉಳಿಸುವಂತೆ ಕೋರಿದ್ದಾರೆ.

ಇದೇ ವೇಳೆ ಕಾರ್ಯಕರ್ತರಿಗೆ ಎರಡು ಪುಟಗಳ ಪತ್ರ ಬರೆದು, ಪಕ್ಷದಲ್ಲಿ ಅಭಿಪ್ರಾಯ ವ್ಯಕ್ತಪಡಿಸಲು ಮುಕ್ತ ಅವಕಾಶವಿದೆ. ಅದೇ ರೀತಿ ಶಿಸ್ತು, ಸಂಯಮಗಳು ಎಲ್ಲೆ ಮೀರದಂತೆ ನೋಡಿಕೊಳ್ಳುವ ವ್ಯವಸ್ಥೆಯೂ ನಮ್ಮಲ್ಲಿದೆ ಎಂದಿದ್ದಾರೆ.

ಬಸನಗೌಡ ಪಾಟೀಲ್ ಯತ್ನಾಳ್ ತಂಡದ ಬಗ್ಗೆ ಹೆಸರು ಪ್ರಸ್ತಾಪಿಸದೆ, ಪಕ್ಷದ ಸಂಘಟನೆಗೆ ಎಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡೋಣ, ಒಗ್ಗಟ್ಟಿನಿಂದ ಹೊರಗೆ ಕೆಲಸ ಮಾಡುವವರಿಗೆ ಸಹಕಾರ ಬೇಡ.

ಉಪಚುನಾವಣೆ ಫಲಿತಾಂಶಗಳು ಪಕ್ಷ ಸಂಘಟನೆ, ಸಾಮರ್ಥ್ಯ ಹಾಗೂ ಪ್ರಭಾವ ಬಿಂಬಿಸುವ ಅಳತೆಗೋಲಾಗಿರುವುದಿಲ್ಲ. ಸ್ಥಳೀಯ ಸಮಸ್ಯೆಗಳು ಹಾಗೂ ಸರ್ಕಾರದ ಪ್ರಭಾವವನ್ನು ಆಧರಿಸಿ ಉಪಚುನಾವಣಾ ಫಲಿತಾಂಶಗಳು ಹೊರಹೊಮ್ಮುತ್ತವೆ. ರಾಜ್ಯದಲ್ಲಿ ನಡೆದ ಮೂರು ಕ್ಷೇತ್ರಗಳ ಉಪಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿಗಳು ಪರಾಜಯಗೊಂಡ ಕಾರಣದಿಂದ ನಾವ್ಯಾರೂ ಎದೆಗುಂದಬೇಕಿಲ್ಲ. ನಿರೀಕ್ಷೆಯಂತೆ ಆಡಳಿತ ಪಕ್ಷ ಕಾಂಗ್ರೆಸ್ ಅಧಿಕಾರ ದುರುಪಯೋಗ, ಆಮಿಷಗಳು ಮತದಾರರ ದಿಕ್ಕು ತಪ್ಪಿಸುವಲ್ಲಿ ಪರಿಣಾಮ ಬೀರಿವೆ ಎಂಬುದು ನಿಸ್ಸಂಶಯ.

ಉಪಚುನಾವಣೆ ಸೋಲನ್ನು ನಾವು ಸಕಾರಾತ್ಮಕವಾಗಿ ಸ್ವೀಕರಿಸೋಣ, ಈ ಫಲಿತಾಂಶ ಭವಿಷ್ಯತ್ತಿನಲ್ಲಿ ನಮ್ಮ ಮುಂದಿರುವ ಸವಾಲುಗಳನ್ನು ಎಚ್ಚರಿಸುವ ಸಂಕೇತವೇ ಆಗಿದೆ ಎಂದು ಕಾರ್ಯಕರ್ತರಿಗೆ ತಿಳಿಸಿದ್ದಾರೆ. ಹಿಂದೆ ಸಿದ್ದರಾಮಯ್ಯ ಆಡಳಿತದಲ್ಲಿ ನಂಜನಗೂಡು ಹಾಗೂ ಗುಂಡ್ಲುಪೇಟೆಗೆ ನಡೆದ ಉಪಚುನಾಣೆಯಲ್ಲಿ ಕಾಂಗ್ರೆಸ್ ಭರ್ಜರಿ ಜಯ ಸಾಧಿಸಿತ್ತು, ಆ ನಂತರ ನಡೆದ ಸಾರ್ವತ್ರಿಕ ಚುನಾವಣೆಯಲ್ಲಿ ಹೀನಾಯ ಸೋಲು ಕಂಡಿದ್ದನ್ನು ನೋಡಿದ್ದೇವೆ. ಅಧಿಕಾರಕ್ಕಾಗಿ ಬೆನ್ನತ್ತಿ ರಾಜಕಾರಣ ಮಾಡುವ ಪಕ್ಷ ನಮ್ಮದಲ್ಲ, ಉದಾತ್ತ ಉದ್ದೇಶ ಹಾಗೂ ಗುರಿ ಇಟ್ಟುಕೊಂಡು, ಯೋಜಿತವಾಗಿ ಬೆಳೆದು, ಕೋಟ್ಯಂತರ ಸಮರ್ಪಣಾ ಕಾರ್ಯಕರ್ತರನ್ನು ರಾಷ್ಟ್ರ ಬದ್ಧತೆಗಾಗಿ ಸಜ್ಜುಗೊಳಿಸಿದ ಪಕ್ಷ.

ಸಿದ್ದರಾಮಯ್ಯ ಸರ್ಕಾರ ಹಲವು ಭ್ರಷ್ಟಾಚಾರದಲ್ಲಿ ಮುಳುಗಿ ಆಡಳಿತ ನಡೆಸುತ್ತಿದೆ, ಮಠ, ಮಂದಿರ ಹಾಗೂ ರೈತರ ಜಮೀನನ್ನು ವಕ್ಫ್ ಹೆಸರಿನಲ್ಲಿ ಕಬಳಿಸುವ ಕೆಲಸ ನಡೆದಿದೆ, ಇದೆಲ್ಲದರ ವಿರುದ್ಧ ಒಗ್ಗಟ್ಟಿನಿಂದ ಹೋರಾಟ ನಡೆಸಲು ಹೆಜ್ಜೆ ಹಾಕೋಣ ಎಂದಿದ್ದಾರೆ.

ಹೋರಾಟ ಕೈಬಿಡಿ, ಪಕ್ಷ ಬಲಪಡಿಸಲು ಒಗ್ಗಟ್ಟಿನಿಂದ ಕೆಲಸ ಮಾಡಿ

ಯತ್ನಾಳ್ ಬಣಕ್ಕೆ ಬಿ.ಎಸ್.ಯಡಿಯೂರಪ್ಪ ಮನವಿ

ಬೆಂಗಳೂರು: ಬಿಜಾಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ನೇತೃತ್ವದಲ್ಲಿ ಕೆಲ ಬಿಜೆಪಿ ನಾಯಕರ ಗುಂಪು ವಕ್ಫ್ ವಿಚಾರವಾಗಿ ಪ್ರತ್ಯೇಕ ಹೋರಾಟ ನಡೆಸುತ್ತಿದ್ದು, ಇದಕ್ಕೆ ವಿರೋಧ ವ್ಯಕ್ತಪಡಿಸಿದ ಬಿಜೆಪಿ ಹಿರಿಯ ನಾಯಕ ಬಿ.ಎಸ್. ಯಡಿಯೂರಪ್ಪ, ಹೋರಾಟ ಕೈಬಿಟ್ಟು ಪಕ್ಷ ಬಲಪಡಿಸಲು ಒಗ್ಗಟ್ಟಿನಿಂದ ಕೆಲಸ ಮಾಡುವಂತೆ ಮಂಗಳವಾರ ಮನವಿ ಮಾಡಿದ್ದಾರೆ.

ಮೂರು ಕ್ಷೇತ್ರಗಳ ವಿಧಾನಸಭಾ ಉಪಚುನಾವಣೆಯ ಸೋಲಿನಿಂದ ನಿರೀಕ್ಷೆ ಮೀರಿ ಹಿನ್ನಡೆಯಾಗಿದೆ. ಪಕ್ಷದ ಸೋಲಿನ ಜವಾಬ್ದಾರಿಯನ್ನು ಎಲ್ಲರೂ ಹೊರಬೇಕು ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹೇಳಿದ್ದಾರೆ.

ಪ್ರತ್ಯೇಕವಾಗಿ ಪ್ರತಿಭಟನೆ ಮಾಡುವುದನ್ನು ಬಿಟ್ಟು ನಮ್ಮೊಂದಿಗೆ ಒಗ್ಗಟ್ಟಿನಿಂದ ಕೆಲಸ ಮಾಡುವಂತೆ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಬಸನಗೌಡ ಪಾಟೀಲ್ ಯತ್ನಾಳ್ ಮತ್ತು ಇತರರಿಗೆ ಮನವಿ ಮಾಡಿದ್ದಾರೆ. ಹೀಗಿದ್ದರೂ ಅವರು ತಮ್ಮ ಸ್ವಾಭಿಮಾನದಿಂದ ಇಂತಹ ಕೆಲಸಗಳನ್ನು ಮಾಡುತ್ತಿದ್ದಾರೆ. ಇದು ಸರಿಯಲ್ಲ ಎಂದು ಯಡಿಯೂರಪ್ಪ ಹೇಳಿದರು.

ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಕ್ಷವನ್ನು ಬಲವರ್ಧನೆಗೊಳಿಸಲು ಈಗಲಾದರೂ ಮುಂದೆ ಬಂದು ಸಹಕರಿಸುವಂತೆ ಮನವಿ ಮಾಡುತ್ತೇನೆ. ರಾಜ್ಯದ ಪ್ರಸ್ತುತ ನಾಯಕತ್ವದೊಂದಿಗೆ ಒಗ್ಗಟ್ಟಿನಿಂದ ಕೆಲಸ ಮಾಡಲು ಯತ್ನಾಳ್ ಬಣ ಸಿದ್ಧವಿಲ್ಲ. ಈ ವಿಚಾರವನ್ನು ಹೈಕಮಾಂಡ್ ಗಮನಕ್ಕೆ ತರುತ್ತೀರಾ? ಎಂಬ ಪ್ರಶ್ನೆಗೆ ಉತ್ತರಿಸಿದ ಯಡಿಯೂರಪ್ಪ, "ನಾವು ನಮ್ಮ ಕರ್ತವ್ಯವನ್ನು ಮಾಡುತ್ತೇವೆ. ಉಳಿದದ್ದು ಅವರಿಗೆ ಮತ್ತು ಕೇಂದ್ರಕ್ಕೆ ಬಿಟ್ಟದ್ದು. ಹೈಕಮಾಂಡ್‌ಗೆ ಎಲ್ಲವೂ ಗೊತ್ತು ಎಂದರು.


ಯತ್ನಾಳ್ ನೇತೃತ್ವದ ಬಣದಲ್ಲಿ ಬಿಜೆಪಿ ಶಾಸಕರಾದ ರಮೇಶ್ ಜಾರಕಿಹೊಳಿ, ಬಿ ಪಿ ಹರೀಶ್, ಮಾಜಿ ಶಾಸಕರಾದ ಅರವಿಂದ ಲಿಂಬಾವಳಿ, ಕುಮಾರ್ ಬಂಗಾರಪ್ಪ, ಜಿ.ಎಂ. ಸಿದ್ದೇಶ್ವರ ಮತ್ತಿತರರು ಇದ್ದಾರೆ.

ಸಿಎಂ ಆಗೋಕೆ ಹೋರಾಟ ಮಾಡುತ್ತಿಲ್ಲ, ನಿಮಗ್ಯಾಕೆ ಭಯ, ಟೆನ್ಶನ್

ಬಿಎಸ್‌ವೈ, ವಿಜಯೇಂದ್ರ ವಿರುದ್ಧ ಯತ್ನಾಳ್ ವಾಗ್ದಾಳಿ



ಯತ್ನಾಳ್



ಬಿಎಸ್‌ವೈ

ಕಲಬುರಗಿ: ಬಿಜೆಪಿಯಲ್ಲಿನ ಭಿನ್ನಮತ ತಾರಕಕ್ಕೇರಿದ್ದು, ವಕ್ಫ್ ವಿರುದ್ಧ ಜನಜಾಗೃತಿ ಅಭಿಯಾನಕ್ಕೆ ಪ್ರತ್ಯೇಕವಾಗಿ ಚಾಲನೆ ನೀಡಿರುವ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮಾಜಿ ಸಿಎಂ ಯಡಿಯೂರಪ್ಪ, ವಿಜಯೇಂದ್ರ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ವಕ್ಫ್ ವಿರುದ್ಧದ ಹೋರಾಟ ಮಾಡುತ್ತಿರುವ ಬಗ್ಗೆ ಮಾತನಾಡಿರುವ ಯತ್ನಾಳ್, ಇಲ್ಲಿ ಯಾರೂ ಸಿಎಂ ಆಗೋಕೆ ಹೋರಾಟ ಮಾಡುತ್ತಿಲ್ಲ. ನಾವು ವಕ್ಫ್ ವಿರುದ್ಧ ಹೋರಾಟ ಮಾಡಿದರೆ ನಿಮಗ್ಯಾಕೆ ಭಯ, ಟೆನ್ಶನ್ ಎಂದು ಯಡಿಯೂರಪ್ಪ, ವಿಜಯೇಂದ್ರ ಅವರನ್ನು ಪ್ರಶ್ನಿಸಿದ್ದಾರೆ.

ವಕ್ಫ್ ವಿರುದ್ಧದ ಹೋರಾಟ ಅಧಿಕಾರ, ಅಂತಸ್ತು, ಹುದ್ದೆ ಮೇಲೆ ಕಣ್ಣಿಟ್ಟು ಆರಂಭಿಸಿದ್ದಲ್ಲ ಯಾರೂ ಸ್ವಾರ್ಥಕ್ಕಾಗಿ ವಕ್ಫ್ ವಿರುದ್ಧ ಹೋರಾಟ ನಡೆಸುತ್ತಿಲ್ಲ. ಯಾವುದೇ ಕುಟುಂಬವನ್ನು ಮುಗಿಸಲು ನಾವು ಹೋರಾಟ ಮಾಡುತ್ತಿಲ್ಲ ಎಂದು ವಿಜಯೇಂದ್ರ ವಿರುದ್ಧ ಪರೋಕ್ಷ ವಾಗ್ದಾಳಿ ನಡೆಸಿದ್ದಾರೆ. ನನ್ನ ಬಗ್ಗೆ ಕಠಿಣ ಕ್ರಮ ಕೈಗೊಳ್ತೇವೆ ಅಂತಾರೆ ಯಾಕೆ ಕ್ರಮ ಕೈಗೊಳ್ತಿರಾ? ಎಂದು ಯತ್ನಾಳ್ ವಿಜಯೇಂದ್ರ, ಬಿಎಸ್‌ವೈಗೆ ಸವಾಲು ಹಾಕಿದ್ದಾರೆ. ನಾವು ಕಲಬುರಗಿ ಬಳಿಕ ಬೆಳಗಾವಿಯಲ್ಲಿ ಬೃಹತ್ ಹೋರಾಟ ಮುಗಿಸಿ ದೆಹಲಿಗೆ ಹೋಗುತ್ತೇವೆ. ಡಿ. 3–4 ರಂದು ದೆಹಲಿಗೆ ಹೋಗಿ ವಕ್ಫ್ ವಿರುದ್ಧ ವರದಿ ನೀಡ್ತೇವೆ ಎಂದು ಯತ್ನಾಳ್ ಹೇಳಿದ್ದಾರೆ.

ಯಡಿಯೂರಪ್ಪ, ವಿಜಯೇಂದ್ರ ಸಿಎಂ ಮನೆಯಲ್ಲಿರುತ್ತಾರೆ!: ಬಿ.ವೈ.ವಿಜಯೇಂದ್ರ ಹೋರಾಟ ಮಾಡಲ್ಲ. ವಿಜಯೇಂದ್ರ ವಕ್ಫ್ ವಿರುದ್ಧ ಯಾವ ಹೋರಾಟ ಮಾಡಿದ್ದಾರೆ. ಯಾವ ರೈತರ ಮನವಿ ಸ್ವೀಕರಿಸಿದ್ದಾನೆ ತೋರಿಸಿ. ರಾತ್ರಿಯಾದ್ರೆ ಸಾಕು ಡಿಕೆ–ಸಿದ್ದರಾಮಯ್ಯ ಮನೆಯಲ್ಲಿ ಇರ್ತಾರೆ. ಮಾಜಿ ಸಿಎಂ ಯಡಿಯೂರಪ್ಪ ವಿರುದ್ಧ ನೂರೆಂಟು ಕೇಸ್ ಇದೆ. ಕಾಪಾಡೋ ಶಿವಪ್ಪ ಅಂತಾ ಡಿಸಿಎಂ ಮನೆಯಲ್ಲಿ ಇರ್ತಾರೆ. ಕಾಪಾಡೋ ಸಿದ್ದರಾಮಯ್ಯ ಅಂತಾ ಅವರ ಮನೆಯಲ್ಲಿಯೂ ಇರ್ತಾರೆ ಎಂದು ಯತ್ನಾಳ್ ವ್ಯಂಗ್ಯವಾಡಿದ್ದಾರೆ. ಮುಂದೆ ಟಿಕೆಟ್ ಕೊಡುವ ಅಧಿಕಾರ ನಮಗೆ ಬರುತ್ತೆ. ಹೈಕಮಾಂಡ್‌ಗೆ ನನ್ನ ವಿರುದ್ಧ ಪತ್ರ ಬರೆಯುತ್ತಿರುವುದು ಹೊಸದೇನೂ ಅಲ್ಲ. ನನ್ನ ವಿರುದ್ಧ ನೀಡಿರುವ ದೂರುಗಳೇ ಒಂದು ರೂಮ್ ತುಂಬಿವೆ. ಆದರೆ ನನ್ನನ್ನು ಏನು ಮಾಡುವುದಕ್ಕೆ ಆಗುವುದಿಲ್ಲ ಎಂದು ವಿಜಯೇಂದ್ರಗೆ ಯತ್ನಾಳ್ ಟಾಂಗ್ ನೀಡಿದ್ದಾರೆ.

ಮೈಸೂರಿನ ಬೀದಿಬದಿ ವ್ಯಾಪಾರಿಗಳಿಗೆ ಲೈಸೆನ್ಸ್ ನೀಡುವ ಕಾರ್ಯ ಆರಂಭ

ಆಹಾರ ಸುರಕ್ಷತೆ–ಗುಣಮಟ್ಟ ಇಲಾಖೆ ಅಧಿಕಾರಿಗಳಿಂದ ಕಾರ್ಯಾಚರಣೆ



ಮೈಸೂರಿನ ಬೀದಿಬದಿ ವ್ಯಾಪಾರಿಗಳಿಗೆ ಅಧಿಕಾರಿಗಳು ಲೈಸೆನ್ಸ್ ನೀಡುತ್ತಿರುವುದು.

ಮೈಸೂರು,ನ.26(ಬಿಎಲ್‌ಯು)– ಪ್ರತಿಯೊಬ್ಬ ವ್ಯಾಪಾರಿ ಲೈಸೆನ್ಸ್ ಪಡೆದುಕೊಳ್ಳುವುದನ್ನು ಕೇಂದ್ರ ಸರ್ಕಾರ ಕಡ್ಡಾಯ ಮಾಡಿರುವ ಹಿನ್ನೆಲೆಯಲ್ಲಿ ಮೈಸೂರಿನ ಹಣ್ಣು ಮತ್ತು ತರಕಾರಿ ಮಾರಾಟ ಮಾಡುವ ಬೀದಿಬದಿ ವ್ಯಾಪಾರಿಗಳಿಗೆ ಯಾವುದೇ ಶುಲ್ಕ ಪಡೆಯದೆ ಲೈಸೆನ್ಸ್ ನೀಡುವ ಕಾರ್ಯ ಆರಂಭಿಸಿದೆ.

ಈ ಹಿನ್ನೆಲೆಯಲ್ಲಿ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಮೈಸೂರಿನ ಪ್ರತಿಯೊಬ್ಬ ಬೀದಿಬದಿ ವ್ಯಾಪಾರಿಯನ್ನು ಭೇಟಿ ಮಾಡಿ ಆಧಾರ್ ಕಾರ್ಡ್ ಸೇರಿದಂತೆ ಇತರೆ ದಾಖಲಾತಿ ಪಡೆದು ಲೈಸೆನ್ಸ್ ನೀಡುತ್ತಿದ್ದಾರೆ.

ಪ್ರತಿಯೊಬ್ಬ ವ್ಯಾಪಾರಿಯನ್ನು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಕಾಯ್ದೆ 31ರ ವ್ಯಾಪ್ತಿಯಲ್ಲಿ ತರುವ ಉದ್ದೇಶದಿಂದ ಕೇಂದ್ರ ಸರ್ಕಾರ ಈ ಕಾರ್ಯ ಕೈಗೊಂಡಿದೆ. ಈಗಾಗಲೇ ಮೈಸೂರಿನ ಹಲವು ವ್ಯಾಪಾರಸ್ಥರಿಗೆ ಲೈಸೆನ್ಸ್ ನೀಡಲಾಗಿದ್ದು, ಶುಲ್ಕ ವಿಧಿಸಲಾಗಿದೆ. ಆದರೆ ಬೀದಿಬದಿ ವ್ಯಾಪಾರಿಗಳಿಗೆ ಮಾತ್ರ ಉಚಿತವಾಗಿ ಲೈಸೆನ್ಸ್ ನೀಡಲಾಗುತ್ತಿದೆ.

ಮೈಸೂರಿನ ಎಂ.ಜಿ.ರಸ್ತೆಯ ರೈತ ಸಂತೆಯ ಹಲವು ವ್ಯಾಪಾರಿಗಳಿಗೆ ಈಗಾಗಲೇ ಲೈಸೆನ್ಸ್ ನೀಡಲಾಗಿದೆ. ಆಧಾರ್ ಕಾರ್ಡ್ ಸೇರಿದಂತೆ ಇತರೆ ದಾಖಲಾತಿ ನೀಡಿರುವ ವ್ಯಾಪಾರಸ್ಥರು ಲೈಸೆನ್ಸ್ ಪಡೆದುಕೊಂಡಿದ್ದು, ಇನ್ನು ಹಲವು ವ್ಯಾಪಾರಿಗಳಿಗೆ ನೀಡುವ ಪ್ರಕ್ರಿಯೆ ಚಾಲ್ತಿಯಲ್ಲಿದೆ.

ಇಂದಿನಿಂದ ನಗರದ ಹೆಬ್ಬಾಳು ಸಂತೆಯಲ್ಲಿರುವ ವ್ಯಾಪಾರಿಗಳಿಗೂ ಪರವಾನಗಿ ನೀಡುವ ಕಾರ್ಯ ಆರಂಭಿಸಿದ್ದು, ವಾರದೊಳಗೆ ಇಲ್ಲಿನ ಎಲ್ಲಾ ವ್ಯಾಪಾರಿಗಳಿಗೆ ಲೈಸನ್ಸ್ ನೀಡಲಾಗುತ್ತದೆ ಎಂದು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಅಂಕಿತ ಅಧಿಕಾರಿ ಡಾ.ಎಸ್.ಎಲ್.ರವೀಂದ್ರ ತಿಳಿಸಿದರು.

ಆದರೆ ನಗರದ ಸಯ್ಯಾಜಿರಾವ್ ರಸ್ತೆಯ ಕೆ.ಆರ್.ಆಸ್ಪತ್ರೆ ಎದುರಿನ ರಸ್ತೆಯಲ್ಲಿರುವ ವ್ಯಾಪಾರಿಗಳು ಲೈಸೆನ್ಸ್ ಪಡೆಯಲು ನಿರಾಸಕ್ತಿ ತೋರಿಸುತ್ತಿದ್ದಾರೆ. ಇಲ್ಲಿ 300ಕ್ಕೂ ಹೆಚ್ಚು ವ್ಯಾಪಾರಿಗಳಿದ್ದು, ಪರವಾನಗಿ ಪಡೆದುಕೊಳ್ಳುವಂತೆ ಮನವೊಲಿಸಿದರು ಒಪ್ಪುತ್ತಿಲ್ಲ ಎಂದು ಹೇಳಿದರು.

ಕೆಲವೇ ದಿನದಲ್ಲಿ ಮೈಸೂರಿನಲ್ಲಿರುವ ಎಲ್ಲಾ ಬೀದಿಬದಿ ವ್ಯಾಪಾರಿಗಳಿಗೆ ಲೈಸೆನ್ಸ್ ನೀಡುವ ಕಾರ್ಯ ಪೂರ್ಣಗೊಳ್ಳುತ್ತದೆ ಎಂದು ಡಾ.ರವೀಂದ್ರ ತಿಳಿಸಿದರು.

ನಬಾರ್ಡ್ ನೆರವು ಕಡಿತ ವಿರೋಧಿಸಿ ಡಿಸೆಂಬರ್‌ನಲ್ಲಿ ರೈತರ ಪ್ರತಿಭಟನೆ

ಮೈಸೂರು, ನ.26(ಜಿಎ)–ಕೇಂದ್ರ ಸರ್ಕಾರದ ರೈತ ವಿರೋಧಿ ಧೋರಣೆಗಳ ಕಾರಣ ರಾಜ್ಯಕ್ಕೆ ನೀಡುವ ನೆರವಿನಲ್ಲಿ ನಬಾರ್ಡ್ ಶೇ.58ರಷ್ಟನ್ನು ಕಡಿತ ಮಾಡಿದೆ.



ಹೀಗಾಗಿ ಇದನ್ನು ವಿರೋಧಿಸಿ ಡಿಸೆಂಬರ್ ತಿಂಗಳಲ್ಲಿ ರಾಜ್ಯ ರೈತ ಸಂಘ ಬೆಂಗಳೂರಿನ ನಬಾರ್ಡ್ ಕಚೇರಿ ಎದುರು ಪ್ರತಿಭಟನೆ ನಡೆಸಲಿದೆ ಎಂದು ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಬಾರ್ಡ್ ನೆರವು ಕಡಿತವು ಎಂಡಿಸಿ ಬ್ಯಾಂಕ್‌ಗಳು, ಸಹಕಾರ ಸಂಘಗಳು ಹಾಗೂ ಇನ್ನಿತರ ಬ್ಯಾಂಕ್‌ಗಳ ಮೇಲೆ ಪರಿಣಾಮ ಬೀರುತ್ತವೆ. ಹೀಗಾಗಿ ರೈತರು ಸಾಲ ಪಡೆಯಲು ಸಾಧ್ಯವಾಗದೇ ಖಾಸಗೀ ವ್ಯಕ್ತಿಗಳ ಮೊರೆ ಹೋಗಬೇಕಾಗುತ್ತದೆ. ಇವುಗಳ ಬಡ್ಡಿ ದರ, ದಮನಕಾರಿ ನೀತಿಯಿಂದಾಗಿ ಈಗಾಗಲೇ ಬಹಳಷ್ಟು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಇದು ಮುಂದುವರಿಯುತ್ತದೆ ಎಂದು ಕಳವಳ ವ್ಯಕ್ತಪಡಿಸಿದರು.

ಡಿ.6ರಂದು ಬೆಂಗಳೂರಿನಲ್ಲಿ ರೈತ ಸಂಘದ ರಾಜ್ಯ ಕಾರ್ಯಕಾರಿಣಿ ಸಭೆ ನಡೆಯಲಿದ್ದು, ಯಾವಾಗ ನಬಾರ್ಡ್ ಕಚೇರಿ ಎದುರು ಪ್ರತಿಭಟನೆ ನಡೆಸಬೇಕೆಂಬುದನ್ನು ನಿರ್ಧರಿಸಲಾಗುವುದು ಎಂದರು.

ವಕ್ಫ್ ಎಂಬುದು ಅಲ್ಪಸಂಖ್ಯಾತರಿಗೆ ಸಂಬಂಧಿಸಿದ ಕಾನೂನು, ಸಂಸ್ಥೆ. ಇದರ ಆಸ್ತಿಯನ್ನು ಮುಸ್ಲಿಮರೇ ಹೆಚ್ಚು ಒತ್ತುವರಿ ಮಾಡಿಕೊಂಡಿದ್ದಾರೆ. ಆದರೆ ವಕ್ಫ್‌ನಿಂದಾಗಿ ರೈತರು ಜಮೀನು ಕಳೆದುಕೊಳ್ಳಲು ರೈತ ಸಂಘ ಬಿಡುವುದಿಲ್ಲ. ಈ ಕುರಿತಂತೆ ಸಿಎಂ ಹೇಳಿಕೆ ನೀಡಿದ್ದರೂ ಕಾಯಂ ಆಗಿ ರೈತರಿಗೆ ಹಕ್ಕುಪತ್ರ ನೀಡಬೇಕು. ಒಂದು ವೇಳೆ ಈ ರೀತಿ ಮಾಡದಿದ್ದಲ್ಲಿ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು. ಗೋಷ್ಠಿಯಲ್ಲಿ ಪಿ.ಮರಂಕಯ್ಯ, ಕುಮಾರ್, ನೇತ್ರಾವತಿ, ಮಹೇಶ್ ಉಪಸ್ಥಿತರಿದ್ದರು.

ಸಂಸ್ಕೃತ, ಕರಾಟೆ ಸ್ಪರ್ಧೆ



ಸದ್ವಿದ್ಯಾ ವಿದ್ಯಾಸಂಸ್ಥೆಯಲ್ಲಿ ನಡೆದ ವಿವಿಧ ಸಂಸ್ಕೃತ ಮತ್ತು ರಾಷ್ಟ್ರೀಯ ಓಪನ್ ಕರಾಟೆ ಚಾಂಪಿಯನ್‌ಶಿಪ್ ಸ್ಪರ್ಧೆಯಲ್ಲಿ ಮಹರ್ಷಿ ವಿದ್ಯಾಸಂಸ್ಥೆಯ ವಿದ್ಯಾರ್ಥಿಗಳು ವಿವಿಧ ಬಹುಮಾನಗಳನ್ನು ಪಡೆದಿದ್ದಾರೆ. ವಿಜೇತ ವಿದ್ಯಾರ್ಥಿಗಳೊಂದಿಗೆ ಸಂಸ್ಥೆಯ ವ್ಯವಸ್ಥಾಪಕ ವಿಶ್ವಸ್ಥ ಭವಾನಿಶಂಕರ್, ಸಂಯೋಜಕ ತೇಜಸ್ ಶಂಕರ್, ಪ್ರಾಚಾರ್ಯ ಗೋಪಾಲಸ್ವಾಮಿ, ಕುಮಾರ್ ಇತರರನ್ನು ಚಿತ್ರದಲ್ಲಿ ಕಾಣಬಹುದು.

ಗೊರುಚ ಅಂತರ ಕಾಲೇಜು ಸುಗಮ ಸಂಗೀತ ಸ್ಪರ್ಧೆ

ಮೈಸೂರು,ನ.26–ರೋಟರಿ ಮೈಸೂರು ಉತ್ತರ ವತಿಯಿಂದ ನ.29ರಂದು ಬೆಳಗ್ಗೆ 11 ಗಂಟೆಗೆ ವಿಜಯನಗರ ರೈಲ್ವೆ ಬಡಾವಣೆಯಲ್ಲಿರುವ ರೋಟರಿ ಭವನದಲ್ಲಿ ಕಾಲೇಜು ವಿದ್ಯಾರ್ಥಿಗಳಿಗೆ ಗೊರುಚ ಅಂತರ ಕಾಲೇಜು ಸುಗಮ ಸಂಗೀತ ಸ್ಪರ್ಧೆ ಏರ್ಪಡಿಸಲಾಗಿದೆ. ಸ್ಪರ್ಧೆಗಳು ಭಾವಗೀತೆ, ಜನಪದ ಗೀತೆ ಮತ್ತು ಚಿತ್ರಗೀತೆಗಳ ವಿಭಾಗದಲ್ಲಿ ನಡೆಸುತ್ತಿದ್ದು, ವಿಜೇತರಿಗೆ ಪ್ರಥಮ, ದ್ವಿತೀಯ, ತೃತೀಯ ಮತ್ತು ಸಮಾಧಾನಕರ ಬಹುಮಾನ, ಪ್ರಶಸ್ತಿ ಪತ್ರಗಳನ್ನು ನೀಡಲಾಗುವುದು. ಈ 3 ವಿಭಾಗಗಳಲ್ಲಿ ಹೆಚ್ಚು ಅಂಕ ಗಳಿಸಿದ ಕಾಲೇಜಿಗೆ ಪರ್ಯಾಯ ಪಾರಿತೋಷಕವನ್ನು ನೀಡಲಾಗುವುದು.

ರಾಜಕಾರಣಿಗಳಿಗಿಂತ ಅಧಿಕಾರಿಗಳ ಮೇಲೆ ಜನರಿಗೆ ಹೆಚ್ಚು ವಿಶ್ವಾಸ

ಚಾಮರಾಜನಗರ ಜಿಲ್ಲಾಧಿಕಾರಿ ಡಾ.ಶಿಲ್ಪನಾಗ್ ಅಭಿಮತ



ಮೈಸೂರಿನ ಕರ್ನಾಟಕ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ನಡೆದ ಕೆಎಎಸ್ ಪರೀಕ್ಷಾ ತರಬೇತಿ ಶಿಬಿರವನ್ನು ಚಾಮರಾಜನಗರ ಜಿಲ್ಲಾಧಿಕಾರಿ ಡಾ.ಶಿಲ್ಪನಾಗ್ ಉದ್ಘಾಟಿಸಿ, ಮಾತನಾಡಿದರು.

ಮೈಸೂರು, ನ.26(ಬಿಎಲ್‌ಯು)– ರಾಜಕಾರಣಿಗಳಿಗಿಂತ ಅಧಿಕಾರಿಗಳು ಮಾಡುವ ಕೆಲಸ–ಕಾರ್ಯಗಳ ಬಗ್ಗೆ ಜನರಿಗೆ ಹೆಚ್ಚು ವಿಶ್ವಾಸವಿದೆ ಎಂದು ಚಾಮರಾಜನಗರ ಜಿಲ್ಲಾಧಿಕಾರಿ ಡಾ.ಶಿಲ್ಪನಾಗ್ ಅಭಿಪ್ರಾಯಪಟ್ಟರು.

ಮೈಸೂರಿನ ಕರ್ನಾಟಕ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ಕೆಎಎಸ್ ಪರೀಕ್ಷಾ ತರಬೇತಿ ಶಿಬಿರದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಅಧಿಕಾರಿಗಳ ಬಗ್ಗೆ ಜನರಲ್ಲಿ ಗೌರವ ಭಾವನೆ ಇದೆ. ಈ ಹಿನ್ನೆಲೆಯಲ್ಲಿ ಜನರ ವಿಶ್ವಾಸ ಉಳಿಸಿಕೊಳ್ಳುವ ನಿಟ್ಟಿನಲ್ಲಿ ಪ್ರಾಮಾಣಿಕರಾಗಿ ಕೆಲಸ ಮಾಡಬೇಕು ಎಂದು ಸಲಹೆ ನೀಡಿದರು.

ಅಧಿಕಾರಿಗಳಿಗೆ ಸರ್ಕಾರದಿಂದ ದೊರೆಯುತ್ತಿರುವ ಸೌಲಭ್ಯಗಳ ಬಗ್ಗೆ ಜನರಲ್ಲಿ ಒಂದು ರೀತಿಯ ಭಾವನೆ ಇದೆ. ಅಧಿಕಾರಿಗಳು ಎಸಿ ಕಾರಿನಲ್ಲಿ ಓಡಾಡುತ್ತಾರೆ, ಮನೆ ಕಟ್ಟಿಕೊಂಡಿದ್ದಾರೆ ಎಂದೆಲ್ಲಾ ಮಾತನಾಡುತ್ತಾರೆ. ಆದರೆ ಅಧಿಕಾರಿಗಳಿಗಿರುವ ಒತ್ತಡದ ಕೆಲಸ ಬಹಳಷ್ಟು ಜನರಿಗೆ ತಿಳಿದಿಲ್ಲ ಎಂದು ಹೇಳಿದರು.

ನಾನು ಜಿಲ್ಲಾಧಿಕಾರಿಯಾಗಿ ಕೆಲಸ ಮಾಡುತ್ತಿರುವ ಚಾಮರಾಜನಗರದಲ್ಲಿ ತುಂಬಾ ಒತ್ತಡವಿದೆ. ಮೂಲೆ ಮೂಲೆಯಿಂದ ಜನರು ನನ್ನನ್ನು ನೋಡಲು ಬರುತ್ತಾರೆ. ಕೆಲವು ಕೆಲಸ ಕಾರ್ಯಗಳಿಗೆ ಅಪರ ಜಿಲ್ಲಾಧಿಕಾರಿಗಳನ್ನೆ ಭೇಟಿ ಮಾಡಿ ಎಂದು ಸಲಹೆ ನೀಡಿದರೂ ನನ್ನ ಮೇಲಿರುವ ನಂಬಿಕೆಯಿಂದ ನನ್ನನ್ನೆ ಭೇಟಿ ಮಾಡಲು ಕಾಯುತ್ತಾರೆ. ಹಾಗಾಗಿ ಜನರು ಇಟ್ಟಿರುವ ನಂಬಿಕೆ ಹಾಗೂ ಗೌರವವನ್ನು ನಾವು ಉಳಿಸಿಕೊಳ್ಳಬೇಕು ಎಂದು ಹೇಳಿದರು.

ವ್ಯವಸ್ಥೆಯಿಂದ ಹೊರಗೆ ಇದ್ದಾಗ ಎಲ್ಲಾ ವಿಚಾರಗಳ ಬಗ್ಗೆ ಟೀಕೆ ಮಾಡುತ್ತೇವೆ. ಕಸ ನೋಡಿ ಸ್ಥಳೀಯ ಸಂಸ್ಥೆಗಳನ್ನು ಬೈಯ್ಯುತ್ತೇವೆ, ರಸ್ತೆ ಸರಿ ಇಲ್ಲವೆಂದು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತೇವೆ. ಆದರೆ ನಾವೇ ವ್ಯವಸ್ಥೆ ಒಳಗೆ ಬಂದಾಗ ಜವಾಬ್ದಾರಿ ಮರೆಯಬಾರದು. ಅಧಿಕಾರ ಸಿಕ್ಕಾಗ ನಮಗಾದ ಅನುಭವದಲ್ಲಿ ಸಮಸ್ಯೆ ಪರಿಹಾರ ಮಾಡಲು ಮುಂದಾಗಬೇಕು ಎಂದು ಸಲಹೆ ನೀಡಿದರು.

ಈಗ ಉನ್ನತ ಮಟ್ಟದ ತರಬೇತಿ ನೀಡಲಾಗುತ್ತಿದೆ. ಇದನ್ನು ಸದುಪಯೋಗ ಮಾಡಿಕೊಳ್ಳಬೇಕು. ಕೆಪಿಎಸ್‌ಸಿ ಪರೀಕ್ಷೆ ಬರುವ ಮುನ್ನ ಅಭ್ಯರ್ಥಿಗಳಲ್ಲಿ ಇರುವ ಸಾಮಾಜಿಕ ಕಳಕಳಿ ಅಧಿಕಾರಿಯಾಗಿ ನೇಮಕವಾದ ಮೇಲೂ ಇರಬೇಕು ಎಂದು ಚಾ.ನಗರ ಜಿಲ್ಲಾಧಿಕಾರಿ ಡಾ.ಶಿಲ್ಪನಾಗ್ ಕಿವಿಮಾತು ಹೇಳಿದರು.

ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜ್, ಕರ್ನಾಟಕ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ, ರಿಜಿಸ್ಟ್ರಾರ್ ಪ್ರೊ.ಕೆ.ಬಿ.ಪ್ರವೀಣ, ಕೆಎಎಸ್ ಪರೀಕ್ಷಾ ತರಬೇತಿ ಶಿಬಿರದ ಸಂಯೋಜಕ ಜೈನಹಳ್ಳಿ ಸತ್ಯನಾರಾಯಣ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಡಿ.1ರಿಂದ ನಿರಾಶ್ರಿತರಿಗೆ ಹೊದಿಕೆ ವಿತರಣಾ ಅಭಿಯಾನ



ನಿರಾಶ್ರಿತರು ಹಾಗೂ ಅಸಹಾಯಕರಿಗೆ ಹೊದಿಕೆ ವಿತರಣಾ ಅಭಿಯಾನದ ಪ್ರಚಾರ ಸಾಮಗ್ರಿಗಳನ್ನು ಶಾಸಕ ಹರೀಶ್‌ಗೌಡರು ಬಿಡುಗಡೆ ಮಾಡಿದರು.

ಮೈಸೂರು,ನ.26–ಮೈಸೂರಿನ ಕೆಎಂಪಿಕೆ ಚಾರಿಟಬಲ್ ಟ್ರಸ್ಟ್ ವತಿಯಿಂದ ನಿರಾಶ್ರಿತರು ಹಾಗೂ ಅಸಹಾಯಕರಿಗೆ ಹೊದಿಕೆ ವಿತರಣಾ ಅಭಿಯಾನದ ಪ್ರಚಾರ ಸಾಮಗ್ರಿಗಳನ್ನು ಹುಣಸೂರು ರಸ್ತೆಯ ಜಲದರ್ಶಿನಿ ಅತಿಥಿ ಗೃಹದ ಆವರಣದಲ್ಲಿರುವ ಚಾಮರಾಜ ಕ್ಷೇತ್ರದ ಶಾಸಕ ಹರೀಶ್‌ಗೌಡ ಕಚೇರಿಯಲ್ಲಿ ಬಿಡುಗಡೆ ಮಾಡಿದರು.

ಬಳಿಕ ಮಾತನಾಡಿದ ಅವರು, ಸಾಂಸ್ಕೃತಿಕ ನಗರಿ ಎಲ್ಲರಿಗೂ ಆಶ್ರಯ ನೀಡಿದೆ. ಜೀವನದಲ್ಲಿ ವಿಧಿಯಾಟದಿಂದ ಕೆಲವರು ತೊಂದರೆಯಲ್ಲಿರುತ್ತಾರೆ. ಗಾಳಿ, ಮಳೆ, ಚಳಿ ಎನ್ನದೇ ಬಸ್ ನಿಲ್ದಾಣ, ರೈಲ್ವೇನಿಲ್ದಾಣ, ದೇವಸ್ಥಾನ, ಚಿತ್ರಮಂದಿರ ಸರ್ಕಾರಿ ಕಟ್ಟಡಗಳ ಮುಂಭಾಗ ರಾತ್ರಿ ವೇಳೆ ಆಶ್ರಯ ಪಡೆದಿರುತ್ತಾರೆ. ಮೈಸೂರಿನಲ್ಲಿ ಸಹಸ್ರಾರು ಸಂಖ್ಯೆಯಲ್ಲಿ ನಿರಾಶ್ರಿತರಿದ್ದು, ಮಾನವೀಯ ದೃಷ್ಟಿಯಿಂದ ಅವರಿಗೆ ಹೊದಿಕೆ ನೀಡುವ ಪುಣ್ಯ ಕಾರ್ಯವನ್ನು ಕೆಎಂಪಿಕೆ ಟ್ರಸ್ಟ್ ಆಯೋಜಿಸಿದೆ. ಈ ಕಾರ್ಯ ನಿಜಕ್ಕೂ ಶ್ಲಾಘನೀಯ ಎಂದು ಹೇಳಿದರು.

ಟ್ರಸ್ಟ್‌ನ ಅಧ್ಯಕ್ಷ ವಿಕ್ರಮ ಅಯ್ಯಂಗಾರ್, ಇಂದಿರಾ ಗಾಂಧಿ ಬ್ಲಾಕ್ ಅಧ್ಯಕ್ಷ ರವಿ ಮಂಚೇಗೌಡನ ಕೊಪ್ಪಲು, ಅರ್ಚಕರ ಸಂಘದ ಅಧ್ಯಕ್ಷ ವಿದ್ವಾನ್ ಕೃಷ್ಣಮೂರ್ತಿ, ಯುವ ಮುಖಂಡರಾದ ನವೀನ್, ರವಿಚಂದ್ರ, ಎಸ್.ಎನ್.ರಾಜೇಶ್, ಹರೀಶ್‌ನಾಯ್ಡು ಸೇರಿದಂತೆ ಮತ್ತಿತರರು ಈ ಸಂದರ್ಭ ಉಪಸ್ಥಿತರಿದ್ದರು.

ಹುಟ್ಟುಹಬ್ಬದ ಶುಭಾಶಯ....



ಮೈಸೂರು ಮಹಾನಗರಪಾಲಿಕೆಯ ಮಾಜಿ ಸದಸ್ಯರಾದ ಮಹದೇಶ್ ಅವರ ಹುಟ್ಟುಹಬ್ಬದ ಅಂಗವಾಗಿ ಅವರನ್ನು ಅಭಿನಂದಿಸಿ, ಶುಭಾಶಯ ಕೋರಲಾಯಿತು. ಈ ವೇಳೆ ಪಡುವಾರಹಳ್ಳಿ ಕೃಷ್ಣ, ದಿ ಮೈಸೂರು ಕೋ–ಆಪರೇಟಿವ್ ಬ್ಯಾಂಕಿನ ನಿರ್ದೇಶಕರಾದ ಎಸ್.ಆರ್.ರವಿಕುಮಾರ್, ಮಹದೇವು, ಡಾ.ನಾಗೇಶ್ ಮೂರ್ತಿ, ಪ್ರದೀಪ್, ಅರುಣಾ ಸುಹಾಸ್ ಗೌಡ ಇತರರು ಉಪಸ್ಥಿತರಿದ್ದರು.

ದಲಿತರು, ಅಲ್ಪಸಂಖ್ಯಾತರು, ಆದಿವಾಸಿಗಳು ಇನ್ನೂ ಭಯದ ನೆರಳಲ್ಲೇ ಬದುಕುತ್ತಿದ್ದಾರೆ

ಎಸ್‌ಡಿಪಿಐ ರಾಜ್ಯ ಪ್ರತಿನಿಧಿ ಸಭೆಯಲ್ಲಿ ರಾಷ್ಟ್ರೀಯ ಉಪಾಧ್ಯಕ್ಷ ವಿ.ಎಸ್.ಕಾಂಬ್ಳೆ ವಿಷಾದ



ಮೈಸೂರಿನ ವೈಟ್ ಪ್ಯಾಲೇಸ್‌ನಲ್ಲಿ ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ ವತಿಯಿಂದ ಕರ್ನಾಟಕ ರಾಜ್ಯದ 6ನೇ ರಾಜ್ಯ ಪ್ರತಿನಿಧಿ ಸಭೆ ನಡೆಯಿತು.

ಮೈಸೂರು,ನ.26–ಜಗತ್ತಿನಲ್ಲೇ ಸರ್ವ ಶ್ರೇಷ್ಠ ಸಂವಿಧಾನವನ್ನು ಭಾರತ ಹೊಂದಿದೆಯಾದರೂ, ದಲಿತರು, ಅಲ್ಪಸಂಖ್ಯಾತರು ಮತ್ತು ಆದಿವಾಸಿಗಳಿಗೆ ಇನ್ನೂ ಸ್ವಾತಂತ್ರ್ಯ ದೊರಕಿಲ್ಲ. ಕ್ಷಣ ಕ್ಷಣವೂ ಭಯದ ನೆರಳಲ್ಲೇ ಬದುಕುವಂತಾಗಿದೆ ಎಂದು ಎಸ್‌ಡಿಪಿಐ ರಾಷ್ಟ್ರೀಯ ಉಪಾಧ್ಯಕ್ಷ ವಿ.ಎಸ್.ಕಾಂಬ್ಳೆ ವಿಷಾದ ವ್ಯಕ್ತಪಡಿಸಿದರು.

ಮೈಸೂರಿನ ವೈಟ್ ಪ್ಯಾಲೇಸ್ ಸಭಾಂಗಣದಲ್ಲಿ ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ ಪಕ್ಷವರು ಏರ್ಪಡಿಸಿದ್ದ ಕರ್ನಾಟಕ ರಾಜ್ಯದ 6ನೇ ರಾಜ್ಯ ಪ್ರತಿನಿಧಿ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು.

ಸ್ವಾತಂತ್ರ್ಯ ಪೂರ್ವದ ಬ್ರಿಟಿಷ್ ಆಳ್ವಿಕೆಯಲ್ಲಿ ಮಹಿಳೆಯರಿಗೆ ಮತದಾನದ ಹಕ್ಕು ನಿರಾಕರಿಸಲಾಗಿತ್ತು. ಸ್ವಾತಂತ್ರ್ಯ ನಂತರ ಸಂವಿಧಾನ ಜಾರಿಯಾಗುತ್ತಿದ್ದಂತೆ ಮಹಿಳೆಯರಿಗೆ ಮತದಾನದ ಹಕ್ಕು ನೀಡುವುದರ ಜೊತೆಗೆ ಯಾವುದೇ ಧರ್ಮ, ಜಾತಿ, ಪಂಗಡ ಆರ್ಥಿಕ ಸ್ಥಿತಿಗತಿಗಳ ತಾರತಮ್ಯವಿಲ್ಲದೇ ಎಲ್ಲರಿಗೂ ಸಮಾನವಾದ ಹಕ್ಕು ನೀಡಲಾಗಿದೆ. ಇದರಿಂದ ನಮ್ಮ ದೇಶದ ಸಂವಿಧಾನ ಪ್ರಪಂಚದ ಯಾವುದೇ ದೇಶದ ಸಂವಿಧಾನಕ್ಕಿಂತ ಸರ್ವ ಶ್ರೇಷ್ಠವಾದುದು. ನಮ್ಮ ಸಂವಿಧಾನದ ಪೀಠಿಕೆಯಲ್ಲಿ ಭಾರತ ದೇಶದ ಎಲ್ಲಾ ಪ್ರಜೆಗಳಿಗೂ ಸಾಮಾಜಿಕ, ಆರ್ಥಿಕ, ರಾಜಕೀಯ ನ್ಯಾಯ– ಸಮಾನತೆಯನ್ನು ಘೋಷಿಸಲಾಗಿದೆ. ಅಲ್ಲದೇ ಅಭಿವ್ಯಕ್ತಿ, ನಂಬಿಕೆ, ಧರ್ಮ ಮತ್ತು ಉಪಾಸನೆಯ ಸ್ವಾತಂತ್ರ್ಯ ನೀಡಲಾಗಿದೆ. ಆದರೆ ಪ್ರಸ್ತುತ ದಿನಗಳಲ್ಲಿ ಅಲ್ಪಸಂಖ್ಯಾತರು, ದಲಿತರು ಮತ್ತು ಆದಿವಾಸಿ ಸಮುದಾಯ ಸೇರಿದಂತೆ ಅಶಕ್ತರಿಗೆ ಸ್ವಾತಂತ್ರ್ಯ, ಸಮಾನತೆ ಸಿಗುತ್ತಿಲ್ಲ. ಇದಕ್ಕೆ ನಮ್ಮ ರಾಜಕಾರಣಿಗಳು, ರಾಜಕೀಯ ಪಕ್ಷಗಳು ಕಾರಣವಾಗಿವೆ. ಈ ನಿಟ್ಟಿನಲ್ಲಿ ಎಸ್‌ಡಿಪಿಐ ಸಮಾನತೆ, ಸ್ವಾತಂತ್ರ್ಯ ಮತ್ತು ಭಯಮುಕ್ತ ಸಮಾಜ ನಿರ್ಮಾಣ ಮಾಡುವ ಉದ್ದೇಶವನ್ನು ಹೊಂದಿದೆ ಎಂದರು.

ಸ್ವಾತಂತ್ರ್ಯ ಪೂರ್ವದಲ್ಲಿ ಕಾನೂನು ರಚಿಸುವ ಮತ್ತು ಅದನ್ನು ನಿರಾಕರಿಸುವ ಅಧಿಕಾರ ಬ್ರಿಟಿಷರಿಗೆ ಇತ್ತು. ಆದರೆ ನಮ್ಮ ದೇಶದಲ್ಲಿ ಸಂವಿಧಾನ ಜಾರಿಯಾದ ಬಳಿಕ ಅದನ್ನು ನಿರಾಕರಿಸುವ ಹಕ್ಕು ಯಾರಿಗೂ ಇಲ್ಲ. ಆದರೆ ಆದಿವಾಸಿಗಳು, ಅಲ್ಪಸಂಖ್ಯಾತರು ಹಾಗೂ ದಲಿತರಿಗೆ ಅವರ ಹಕ್ಕುಗಳನ್ನು ನಿರಾಕರಣೆ ಮಾಡಲಾಗುತ್ತಿದೆ. ಇದನ್ನು ಪ್ರಶ್ನಿಸುವ ಧೈರ್ಯ ಅಶಕ್ತ ಸಮುದಾಯಕ್ಕೆ ಇಲ್ಲ. ಸಂವಿಧಾನ ಎಲ್ಲ ಹಕ್ಕುಗಳನ್ನು ನೀಡಿದ್ದರೂ ಇಂದಿಗೂ ತುಳಿತಕ್ಕೆ ಒಳಗಾದ ಸಮುದಾಯದವರು ಭಯದಿಂದಲೇ ಬದುಕುತ್ತಿದ್ದಾರೆ. ಎಸ್‌ಡಿಪಿಐ ಅಶಕ್ತ ಸಮುದಾಯದ ಹಕ್ಕುಗಳನ್ನು ಅವರಿಗೆ ಕೊಡಿಸಲು ಅವಿರತವಾಗಿ ಶ್ರಮಿಸುತ್ತಿದೆ ಎಂದು ಹೇಳಿದರು.

ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸಿ ಪ್ರಾಣ ತೆತ್ತ ಮುಸಲ್ಮಾನರು, ದಲಿತರು, ಆದಿವಾಸಿಗಳು ಮತ್ತು ಅನೇಕ ಹಿಂದುಳಿದ ವರ್ಗದ ಹೋರಾಟಗಾರರ ಹೆಸರನ್ನು ಕಡೆಗಣಿಸಲಾಗಿದೆ. ಆದರೆ, ಹೋರಾಟದಲ್ಲಿ ಭಾಗವಹಿಸದ ಹಲವಾರು ಮೇಲ್ವರ್ಗದ ಜನರು ದೇಶದ ಆಡಳಿತ ಚುಕ್ಕಾಣಿ ಹಿಡಿದು ಆಡಳಿತ ನಡೆಸುತ್ತಿರುವುದು ದುರ್ದೈವದ ಸಂಗತಿ ಎಂದು ತಿಳಿಸಿದರು.

ದೇಶದಲ್ಲಿ ಧರ್ಮ, ಜಾತಿ, ಭಾಷೆ, ಹೆಸರಲ್ಲಿ ಜನರ ಮಧ್ಯೆ ವಿಷವನ್ನು ಬಿತ್ತುವುದರ ಮೂಲಕ ಬಿಜೆಪಿ, ಒಡೆದು ಆಳುವ ನೀತಿಯನ್ನು ಅನುಸರಿಸುತ್ತಿದೆ. ಕಾಂಗ್ರೆಸ್ ಪಕ್ಷ ಇದರ ಹೊರತಾಗಿಲ್ಲ, ದೇಶವನ್ನು ಒಗ್ಗೂಡಿಸುವ ಪ್ರಯತ್ನವನ್ನು ಯಾರೂ ಮಾಡುತ್ತಿಲ್ಲ. ಸಣ್ಣ ಸಣ್ಣ ವಿಚಾರಕ್ಕೂ ದಲಿತರು, ಅಲ್ಪಸಂಖ್ಯಾತರನ್ನು ಹತ್ಯೆ ಮಾಡಲಾಗುತ್ತಿದೆ. ಈ ವಿಚಾರದಲ್ಲಿ ಸಂವಿಧಾನದ ಪೀಠಿಕೆಯಲ್ಲಿ ತಿಳಿಸಿರುವಂತೆ ಸಮಾನತೆ ಕಾಣಲಾಗುತ್ತಿಲ್ಲ, ವರ್ತಮಾನವು ಮತ್ತಷ್ಟು ಭಯಂಕರವಾಗಿದ್ದು ನಮ್ಮ ರಾಜಕೀಯ ಪಕ್ಷಗಳ ಆಯ್ಕೆಯನ್ನು ನಾವು ಬದಲಾಯಿಸಿಕೊಳ್ಳುವುದರ ಬಗ್ಗೆ ಮರು ಚಿಂತನೆ ನಡೆಸಬೇಕಾಗಿದೆ ಎಂದು ಅಭಿಪ್ರಾಯಪಟ್ಟರು.

ಎಸ್‌ಡಿಪಿಐ 6ನೇ ರಾಜ್ಯ ಪ್ರತಿನಿಧಿಗಳ ಸಭೆಗೆ ಅದ್ಧೂರಿಯಾಗಿ ಚಾಲನೆ ನೀಡಲಾಯಿತು. ಎಸ್‌ಡಿಪಿಐ ರಾಜ್ಯಾಧ್ಯಕ್ಷ ಅಬ್ದುಲ್ ಮಜೀದ್ ಧ್ವಜಾರೋಹಣ ನೆರವೇರಿಸಿದರು. ರಾಜ್ಯ ಉಸ್ತುವಾರಿ ಅಬ್ದುಲ್ ಮಜೀದ್ ಫೈಜಿ, ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಇಲಿಯಾಸ್ ಮಹಮ್ಮದ್, ರಾಷ್ಟ್ರೀಯ ಕಾರ್ಯದರ್ಶಿ ಆಲ್ಫೋನ್ಸೊ ಫ್ರಾಂಕೋ, ರಾಜ್ಯ ಘಟಕದ ಉಪಾಧ್ಯಕ್ಷ ದೇವನೂರು ಪುಟ್ಟನಂಜಯ್ಯ, ಪ್ರಧಾನ ಕಾರ್ಯದರ್ಶಿ ಭಾಸ್ಕರ್ ಪ್ರಸಾದ್ ವಿಷಯ ಮಂಡಿಸಿದರು. ಪಕ್ಷದ ಜಿಲ್ಲಾ ಘಟಕದ ಅಧ್ಯಕ್ಷ ರಫತ್‌ಖಾನ್, ರಾಜ್ಯ ಸಮಿತಿ ಸದಸ್ಯ ಅಮ್ಜದ್ ಖಾನ್, ಜಿಲ್ಲಾ ಘಟಕದ ಕಾರ್ಯದರ್ಶಿ ಫರ್ದೀನ್, ಜಿಲ್ಲಾ ಘಟಕದ ಉಪಾಧ್ಯಕ್ಷ ಎಸ್.ಸ್ವಾಮಿ ಇದ್ದರು.

ಕರ್ನಾಟಕ ರಾಜ್ಯ ರತ್ನ, ಸ್ವಾಮಿ ವಿವೇಕಾನಂದ ಪ್ರಶಸ್ತಿಗೆ ಅರ್ಜಿ

ಮೈಸೂರು,ನ.26–ಬೆಂಗಳೂರಿನ ಆತ್ಮಶ್ರೀ ಸಾಮಾಜಿಕ ಮತ್ತು ಸಾಂಸ್ಕೃತಿಕ ಸಂಘವು ಸಂಕ್ರಾಂತಿ ಹಬ್ಬ ಮತ್ತು ಸ್ವಾಮಿ ವಿವೇಕಾನಂದ ಜಯಂತಿ ಪ್ರಯುಕ್ತ ನಾಡಿನ ವಿವಿಧ ಕ್ಷೇತ್ರದ ಗಣ್ಯರಿಗೆ ಸ್ವಾಮಿ ವಿವೇಕಾನಂದ ಸದ್ಭಾವನಾ ಪ್ರಶಸ್ತಿ ಮತ್ತು ಕರ್ನಾಟಕ ರಾಜ್ಯ ರತ್ನ, ಯುವರತ್ನ, ಪರಿಸರ ರತ್ನ ಪ್ರಶಸ್ತಿಗಳನ್ನು ನೀಡಲು ಉದ್ದೇಶಿಸಿದೆ. ಈ ಸಂಬಂಧ ನಾಡಿನ ಸಾಹಿತ್ಯ, ಸಂಗೀತ, ಭರತನಾಟ್ಯ ಕ್ರೀಡೆ, ಉದ್ಯಮಿ, ರಂಗಭೂಮಿ, ಯೋಗ ಮುಂತಾದ ಕ್ಷೇತ್ರದ ಸಾಧಕರು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಡಿ.30 ಕೊನೆ ದಿನ. ಮಾಹಿತಿಗೆ ಮೊ.9448260417 ಸಂಪರ್ಕಿಸಬಹುದು.

ಅವಧಿ ವಿಸ್ತರಣೆ

ಮೈಸೂರು,ನ.26–ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಮೆಟ್ರಿಕ್ ನಂತರದ ಪಿಯುಸಿ ಮತ್ತು ಸಮಾನಂತರ ಮತ್ತು ಸಂಯೋಜಿತ ಉಭಯ ಪದವಿ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ 2024–25ನೇ ಸಾಲಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಶುಲ್ಕ ಮರುಪಾವತಿ, ಮತ್ತು ವಿದ್ಯಾಸಿರಿ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆ ಅವಧಿಯನ್ನು ನ.30ರವರೆಗೆ ವಿಸ್ತರಿಸಲಾಗಿದೆ. ಅಭ್ಯರ್ಥಿಗಳು https://ssp.postmatric.karnataka.gov.in/ನಲ್ಲಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ https://bcwd.karnataka.gov.in ಅಥವಾ ಸಹಾಯವಾಣಿ ಸಂ:8050770005, ಇಮೇಲ್ ವಿಳಾಸ bcwdhelpline @gmail.com ಅಥವಾ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ದೂ.ಸಂ: 1902, ಇಮೇಲ್ ವಿಳಾಸ postmatrichelp@karnataka.gov.in ಅನ್ನು ಸಂಪರ್ಕಿಸಬಹುದು.

ದೇಶ - ವಿದೇಶ

ಹಿಂದೂಗಳ ಮೇಲಿನ ಹಿಂಸಾಚಾರ ಖಂಡಿಸಿ ಸಿಲಿಕಾನ್ ವ್ಯಾಲಿಯಲ್ಲಿ ಒಗ್ಗಟ್ಟಿನ ರ್‍ಯಾಲಿ

ವಾಷಿಂಗ್ಟನ್: ಕೆನಡಾ ಹಾಗೂ ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲೆ ನಡೆಯುತ್ತಿರುವ ಹಿಂಸಾಚಾರವನ್ನು ಖಂಡಿಸಿ, ಸಿಲಿಕಾನ್ ವ್ಯಾಲಿಯಲ್ಲಿ ಭಾರತೀಯ ಅಮೆರಿಕನ್ನರು ಒಗ್ಗಟ್ಟಿನ ರ್‍ಯಾಲಿ ನಡೆಸಿದರು.



'ಖಲಿಸ್ತಾನಿ ಭಯೋತ್ಪಾದನೆಯನ್ನು ನಿಲ್ಲಿಸಿ, ಕೆನಡಾದಲ್ಲಿನ ಹಿಂದೂಗಳನ್ನು ರಕ್ಷಿಸಿ', 'ಇಸ್ಲಾಂ ಭಯೋತ್ಪಾದನೆಯನ್ನು ನಿಲ್ಲಿಸಿ, ಬಾಂಗ್ಲಾದೇಶದಲ್ಲಿನ ಹಿಂದೂಗಳನ್ನು ರಕ್ಷಿಸಿ' ಎಂಬ ಘೋಷಣೆಗಳು ಮಿಲ್ಪಿಟಾಸ್ ಸಿಟಿ ಹಾಲ್‌ನಲ್ಲಿ ನಡೆದ ಸಭೆಯಲ್ಲಿ ಮೊಳಗಿದವು.

ಅಲ್ಪಸಂಖ್ಯಾತ ಹಿಂದೂಗಳ ಮೇಲೆ ವಿವಿಧೆಡೆ ನಡೆಯುತ್ತಿರುವ ದಾಳಿಯನ್ನು ಖಂಡಿಸಿದ ಪ್ರಮುಖ ನಾಯಕರು, ಕೆನಡಾ ಮತ್ತು ಬಾಂಗ್ಲಾದೇಶ ಸರ್ಕಾರಗಳು ತಮ್ಮ ರಾಷ್ಟ್ರದಲ್ಲಿರುವ ಹಿಂದೂ ಅಲ್ಪಸಂಖ್ಯಾತರನ್ನು ರಕ್ಷಿಸುವ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಆಗ್ರಹಿಸಿದರು.

ಈ ಎರಡೂ ದೇಶದಲ್ಲಿ ನಡೆದಿರುವ ಮಾನವ ಹಕ್ಕುಗಳ ಉಲ್ಲಂಘನೆಯನ್ನು ಖಂಡಿಸುವಂತೆ ಅಮೆರಿಕದ ನಾಯಕರನ್ನು ಇದೇ ಸಂದರ್ಭದಲ್ಲಿ ಒತ್ತಾಯಿಸಿದರು.

ಗೂಗಲ್ ಮ್ಯಾಪ್ ಎಡವಟ್ಟು! ಅಪೂರ್ಣ ಸೇತುವೆ ಮೇಲೆ ಕಾರು ಚಲಾಯಿಸಿ ಮೂವರು ಸಾವು


ಬದೌನ್: ಮೂವರು ಸ್ನೇಹಿತರು ಗೂಗಲ್ ಮ್ಯಾಪ್ ನೆರವಿನಿಂದ ಕಾರು ಚಲಾಯಿಸಿಕೊಂಡು ಅಪೂರ್ಣ ಸೇತುವೆ ಮೇಲೆ ಹೋಗಿ, ಬಿದ್ದು ಮೃತಪಟ್ಟಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಉತ್ತರಪ್ರದೇಶ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.



ಗೂಗಲ್ ಮ್ಯಾಪ್ಸ್ ಇಂಡಿಯಾ ಹಾಗೂ ಉತ್ತರಪ್ರದೇಶದ ಲೋಕೋಪಯೋಗಿ ಇಲಾಖೆ ಎಂಜಿನಿಯರ್‌ಗಳ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಬದೌನ್ ಪೊಲೀಸರು ತಿಳಿಸಿದ್ದಾರೆ. ಸ್ನೇಹಿತನ ಮದುವೆ ಕಾರ್ಯಕ್ರಮಕ್ಕೆಂದು ರಾಯ್‌ಬರೇಲಿಗೆ ಕಾರಿನಲ್ಲಿ ತೆರಳುತ್ತಿದ್ದ ಮೂವರು ಸ್ನೇಹಿತರು ಗೂಗಲ್ ಮ್ಯಾಪ್ ನೆರವಿನಿಂದ ಬರೇಲಿ ಸಮೀಪ ರಾಮಗಂಗಾ ನದಿಗೆ ಅಡ್ಡಲಾಗಿ ನಿರ್ಮಿಸಿದ್ದ ಸೇತುವೆ ಬಳಸಿದ್ದಾರೆ. ಆದರೆ, ಆ ಸೇತುವೆ ಅಪೂರ್ಣವಾಗಿತ್ತು. ಇದರಿಂದ ನದಿಗೆ ರಭಸವಾಗಿ ಬಿದ್ದ ಕಾರು ಸಂಪೂರ್ಣ ಜಖಂಗೊಂಡಿತ್ತು. ಸ್ಥಳದಲ್ಲಿಯೇ ಮೂವರು ಮೃತಪಟ್ಟಿದ್ದರು. ಮೃತರನ್ನು ಫಾರೂಕಾಬಾದ್‌ನ ಸಹೋದರರಾದ ನಿತಿನ್ (30) ಅಜಿತ್ (30) ಮತ್ತು ಮೈನಪುರಿ ಜಿಲ್ಲೆಯ ಅಮಿತ್ ಎಂದು ಗುರುತಿಸಲಾಗಿದೆ.

ಇಮ್ರಾನ್ ಖಾನ್ ಬಿಡುಗಡೆಗೆ ಆಗ್ರಹಿಸಿ ಪ್ರತಿಭಟನೆ; 6 ಸಾವು, ಕಂಡಲ್ಲಿ ಗುಂಡು ಆದೇಶ


ಇಸ್ಲಾಮಾಬಾದ್: ಪಾಕಿಸ್ತಾನದ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಬಿಡುಗಡೆಗೆ ಆಗ್ರಹಿಸಿ, ಅವರ ಬೆಂಬಲಿಗರು ಕೈಗೊಂಡಿರುವ ಪ್ರತಿಭಟನಾ ಮೆರವಣಿಗೆ ಹಿಂಸಾಚಾರಕ್ಕೆ ತಿರುಗಿದೆ. ಮೆರವಣಿಗೆ ವೇಳೆ ನಡೆದ ಹಿಂಸಾಚಾರದಲ್ಲಿ ಇಬ್ಬರು ಪೊಲೀಸರು ಸೇರಿದಂತೆ ನಾಲ್ವರು ಅರೆಸೈನಿಕ ಸಿಬ್ಬಂದಿ ಮೃತಪಟ್ಟಿದ್ದು, 100ಕ್ಕೂ ಹೆಚ್ಚು ಭದ್ರತಾ ಸಿಬ್ಬಂದಿ ಗಾಯಗೊಂಡಿದ್ದಾರೆ ಎಂದು ಮಾಧ್ಯಮಗಳು ವರದಿ ಮಾಡಿವೆ. ಹಿಂಸಾಚಾರವನ್ನು ನಿಯಂತ್ರಿಸುವುದಕ್ಕಾಗಿ ಪಾಕ್ ಸೇನೆ 'ಕಂಡಲ್ಲಿ ಗುಂಡು' ಆದೇಶ ಹೊರಡಿಸಿದೆ.



ಬೆಲಾರಸ್‌ನ ಉನ್ನತ ಮಟ್ಟದ ನಿಯೋಗವು ಇಸ್ಲಾಮಾಬಾದ್‌ಗೆ ರಾಜತಾಂತ್ರಿಕ ಭೇಟಿ ನೀಡಿದ್ದು, ಪ್ರತಿಭಟನೆಯನ್ನು ಹತ್ತಿಕ್ಕಲು ಸರ್ಕಾರವು ನಿಷೇಧಾಜ್ಞೆ ಜಾರಿಗೊಳಿಸಿದೆ. ಹೆಚ್ಚುವರಿ ಭದ್ರತಾ ಪಡೆಗಳು ಸ್ಥಳದಲ್ಲಿ ಬೀಡುಬಿಟ್ಟಿವೆ. ಮೊಬೈಲ್ ಮತ್ತು ಇಂಟರ್‌ನೆಟ್ ಸೇವೆಗಳನ್ನು ಆಯ್ದ ಪ್ರದೇಶಗಳಲ್ಲಿ ಸಂಪೂರ್ಣವಾಗಿ ಸ್ಥಗಿತಗೊಳಿಸಲಾಗಿದೆ.

ಮೂರಕ್ಕಿಂತ ಹೆಚ್ಚು ಪೂರಿಗಳನ್ನು ಒಟ್ಟಿಗೆ ತಿಂದ ಬಾಲಕ, ಉಸಿರುಗಟ್ಟಿ ಸಾವು

ಹೈದರಾಬಾದ್: ಬಾಲಕನೊಬ್ಬ ಮೂರಕ್ಕಿಂತ ಹೆಚ್ಚು ಪೂರಿಗಳನ್ನು ಒಟ್ಟಾಗಿ ಬಾಯಿಗೆ ಹಾಕಿಕೊಂಡ ಪರಿಣಾಮ ಉಸಿರುಗಟ್ಟಿ ಸಾವನ್ನಪ್ಪಿರುವ ಹೃದಯ ವಿದ್ರಾವಕ ಘಟನೆ ಹೈದರಾಬಾದ್‌ನ ಶಾಲೆಯೊಂದರಲ್ಲಿ ನಡೆದಿದೆ.



ವಿದ್ಯಾರ್ಥಿ ಮಧ್ಯಾಹ್ನದ ಊಟ ಮಾಡುವಾಗ ಒಂದೇ ಬಾರಿಗೆ ಮೂರಕ್ಕಿಂತ ಹೆಚ್ಚು ಪೂರಿಗಳನ್ನು ಒಟ್ಟಿಗೆ ಬಾಯಿಗೆ ಹಾಕಿಕೊಂಡಿದ್ದ, ಉಸಿರಾಡಲು ಸಾಧ್ಯವಾಗದೆ ಸಾವನ್ನಪ್ಪಿದ್ದಾನೆ. ಹೈದರಾಬಾದಿನ ಶಾಲೆಯೊಂದರಲ್ಲಿ ಊಟದ ಸಮಯ, 6ನೇ ತರಗತಿ ವಿದ್ಯಾರ್ಥಿ ಎಲ್ಲರ ಜತೆ ಊಟಕ್ಕೆ ಕೂತಿದ್ದ ಒಂದೇ ಬಾರಿಗೆ ಎಲ್ಲಾ ಪೂರಿಗಳನ್ನು ತಿಂದಿದ್ದ. ಆದರೆ ಏಕಕಾಲಕ್ಕೆ ಹೆಚ್ಚಿನ ಪ್ರಮಾಣದ ಆಹಾರವನ್ನು ಏಕೆ ತಿಂದಿದ್ದಾನೆ ಎಂಬುದು ಇಲ್ಲಿವರೆಗೆ ತಿಳಿದುಬಂದಿಲ್ಲ. ಘಟನೆ ಸಂಬಂಧಿಸಿದಂತೆ ಮೃತ ವಿದ್ಯಾರ್ಥಿಯ ತಂದೆ ಪೊಲೀಸರಿಗೆ ನೀಡಿದ ದೂರಿನಲ್ಲಿ ತನ್ನ ಮಗ ಪೂರಿ ತಿನ್ನುವಾಗ ಉಸಿರುಗಟ್ಟಿ ಸಾವನ್ನಪ್ಪಿರುವ ಕುರಿತು ಶಾಲೆಯಿಂದ ಕರೆ ಬಂದಿದ್ದಾಗಿ ಹೇಳಿದ್ದಾರೆ. ತಕ್ಷಣ ಆಸ್ಪತ್ರೆಗೆ ಕರೆದೊಯ್ಯಿತಾದರೂ ಅಷ್ಟೊತ್ತಿಗಾಗಲೇ ಬಾಲಕ ಮೃತಪಟ್ಟಿದ್ದ ಎಂದು ವೈದ್ಯರು ದೃಢಪಡಿಸಿದ್ದಾರೆ.

ಟ್ರಂಪ್ ವಿರುದ್ಧದ ಚುನಾವಣಾ ಅಪರಾಧ ಪ್ರಕರಣ ವಜಾ

ವಾಷಿಂಗ್ಟನ್: ಅಮೆರಿಕದ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಡೊನಾಲ್ಡ್ ಟ್ರಂಪ್ ವಿರುದ್ಧ, 2020ರ ಚುನಾವಣಾ ಸೋಲಿನ ಹಿನ್ನೆಲೆಯಲ್ಲಿ ಚುನಾವಣೆ ಬಳಿಕದ ಹಿಂಸಾಚಾರಕ್ಕೆ ಕುಮ್ಮಕ್ಕು ನೀಡಿದ ಆರೋಪಕ್ಕೆ ಸಂಬಂಧಿಸಿದ ಪ್ರಕರಣವನ್ನು ಅಮೆರಿಕ ನ್ಯಾಯಾಲಯ ವಜಾ ಗೊಳಿಸಿದೆ.



ಟ್ರಂಪ್ ವಿರುದ್ಧ ಈ ಸಂಬಂಧ ಎರಡು ಪ್ರಕರಣಗಳ ತನಿಖೆ ಕೈಬಿಡಬೇಕು ಎಂದು ಕೋರಿ ಅಭಿಯೋಜಕರು ಸಲ್ಲಿಸಿದ್ದ ಮನವಿಯ ವಿಚಾರಣೆ ನಡೆಸಿದ ನ್ಯಾಯಾಲಯ ಈ ಆದೇಶ ನೀಡಿದೆ. ಹಾಲಿ ಅಧ್ಯಕ್ಷರ ವಿರುದ್ಧ ತನಿಖೆ ನಡೆಸುವುದನ್ನು ನಿಷೇಧಿಸುವುದು ನ್ಯಾಯಾಂಗ ಇಲಾಖೆಯ ನೀತಿಯಾಗಿರುವುದರಿಂದ ಪ್ರಕರಣ ಕೈಬಿಡುವಂತೆ ಕೋರಲಾಗಿತ್ತು. 2020ರ ಚುನಾವಣಾ ಸೋಲಿನ ಹಿನ್ನೆಲೆಯಲ್ಲಿ 2021ರ ಜನವರಿ 6ರಂದು ಟ್ರಂಪ್ ಬೆಂಬಲಿಗರು ಅಮೆರಿಕದ ಸಂಸತ್ ಭವನದ ಮೇಲೆ ನಡೆಸಿದ ದಾಳಿಗೆ ಟ್ರಂಪ್ ಕುಮ್ಮಕ್ಕು ನೀಡಿದ್ದರು ಎಂಬ ಆರೋಪದಲ್ಲಿ ಟ್ರಂಪ್ ಅವರನ್ನು ಹೊಣೆಗಾರರನ್ನಾಗಿ ಮಾಡುವ ಫೆಡರಲ್ ವ್ಯವಸ್ಥೆಯ ಪ್ರಯತ್ನಗಳು ಅಮೆರಿಕದ ಜಿಲ್ಲಾ ನ್ಯಾಯಾಧೀಶರಾದ ತಾನ್ಯಾ ಚುಟ್ಕನ್ ನೀಡಿದ ಈ ತೀರ್ಪಿನ ಮೂಲಕ ವಿಫಲವಾಗಿದೆ.

ಮೈಸೂರು ಮಿತ್ರ ಬುಧವಾರ 27 ನವೆಂಬರ್ 2024

ದೇಶದ ಟಾಪ್ 10 ಬಾಣಸಿಗರಲ್ಲಿ ಪಾಕ ಪ್ರವೀಣ

ನರೇನ್ ತಿಮ್ಮಯ್ಯಗೆ ದ್ವಿತೀಯ ಸ್ಥಾನ

ಕರಾವಳಿ ಭಕ್ಷ್ಯ ಸಂರಕ್ಷಿಸಿ, ಜನಪ್ರಿಯಗೊಳಿಸುವಲ್ಲಿ ಮಹತ್ವದ ಪಾತ್ರ



ನರೇನ್ ತಿಮ್ಮಯ್ಯ

ಮೈಸೂರು, ನ.26(ಪಿಎಂ)– ಕೊಡವ ಬಾಣಸಿಗ, ಬಾರಿಯಂಡ ನರೇನ್ ತಿಮ್ಮಯ್ಯ ದೇಶದ ಅಗ್ರಮಾನ್ಯ ಬಾಣಸಿಗರಲ್ಲಿ ಹೆಸರುವಾಸಿಯಾದವರು. ಪಾಕ ಪ್ರವೀಣರಾದ ಇವರು ಆಹಾರೋದ್ಯಮ ಕ್ಷೇತ್ರದಲ್ಲಿ ಬಾಣಸಿಗ ವೃತ್ತಿ ಸ್ವೀಕರಿಸಲು ಕೊಡವ ಸಮುದಾಯದ ಯುವ ಜನತೆ ಪ್ರೇರೇಪಣೆಯಾಗಿದ್ದಾರೆ.

ಹಾಸ್ಪಿಟಾಲಿಟಿ ಹಾರಿಜಾನ್ ಮ್ಯಾಗಜೀನ್ ವತಿಯಿಂದ ನ.9ರಂದು ಟಾಪ್ 10 ಬಾಣಸಿಗರ ಪ್ರಶಸ್ತಿ ಪ್ರದಾನ ಸಮಾರಂಭ ನವದೆಹಲಿಯ ಗುರ್ಗೋನ್‌ನ ಹ್ಯಾಟ್ ರೀಜೆನ್ಸಿಯಲ್ಲಿ ನಡೆಯಿತು. ಟಾಪ್ ಹೋಟೆಲ್ ಹಾಗೂ ರೆಸ್ಟೋರೆಂಟ್ ಬಾಣಸಿಗರು ವಿಭಾಗಗಳಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಯಿತು. ಈ ಪೈಕಿ ಬೆಂಗಳೂರಿನ ರೆಸಿಡೆನ್ಸಿ ರಸ್ತೆಯ ವಿವಂತ ಹೋಟೆಲ್‌ನ ಎಕ್ಸಿಕ್ಯೂಟಿವ್ ಬಾಣಸಿಗ ನರೇನ್ ತಿಮ್ಮಯ್ಯ ದೇಶದ ಟಾಪ್ 10 ಬಾಣಸಿಗರಲ್ಲಿ ದ್ವಿತೀಯ ಸ್ಥಾನಕ್ಕೆ ಭಾಜನರಾದರು.

ಕರಾವಳಿ ರೆಸ್ಟೋರೆಂಟ್‌ಗೆ ಸೆಲೆಬ್ರಿಟಿಗಳ ಭೇಟಿ

ಕರಾವಳಿ ರೆಸ್ಟೋರೆಂಟ್‌ನ ಆಹಾರದತ್ತ ಆಕರ್ಷಣೆ ಹೆಚ್ಚಾಗುತ್ತಿದ್ದು, ವಿಶ್ವದ ಅತ್ಯುತ್ತಮ ಭಾರತೀಯ ಬಾಣಸಿಗ ಗಗನ್ ಆನಂದ್ ಸಹ ಈ ರೆಸ್ಟೋರೆಂಟ್‌ಗೆ ಭೇಟಿ ನೀಡುವುದನ್ನು ಮರೆಯಲಿಲ್ಲ. ಅಂತಾರಾಷ್ಟ್ರೀಯ ಪ್ರಯಾಣಿಕರು, ಸೆಲೆಬ್ರಿಟಿಗಳು ತಪ್ಪದೇ ಕರಾವಳಿ ರೆಸ್ಟೋರೆಂಟ್‌ಗೆ ಭೇಟಿ ನೀಡುತ್ತಾರೆ. ತಿಮ್ಮಯ್ಯ ಮತ್ತು ಅವರ ತಂಡ ಈ ಎಲ್ಲಾ ಗ್ರಾಹಕರಿಂದ ಪಾಕ ವಿಧಾನದ ಒಳ್ಳೆಯ ಅಭಿಪ್ರಾಯ ತಿಳಿದುಕೊಳ್ಳುತ್ತಾರೆ. ದಕ್ಷಿಣ ಭಾರತದ ಅವಿಭಕ್ತ ಕುಟುಂಬಗಳು ತಪ್ಪದೇ ಈ ರೆಸ್ಟೋರೆಂಟ್‌ಗೆ ಬಂದು ವಿವಿಧ ಕರ‍್ರಿಗಳನ್ನು ಸವಿಯುತ್ತಾರೆ.

ವಿವಂತ ಹೋಟೆಲ್ಸ್‌ನ 'ಕರಾವಳಿ ಸೌತ್‌ವೆಸ್ಟ್ ಕೋಸ್ಟರ್ ರೆಸ್ಟೋರೆಂಟ್' ಮುಖ್ಯಸ್ಥರಾಗಿರುವ ಬಾಣಸಿಗ ನರೇನ್, ಕರಾವಳಿ ಭಕ್ಷ್ಯಗಳನ್ನು ಜನಪ್ರಿಯಗೊಳಿಸುವುದು ಹಾಗೂ ಸಾಂಪ್ರದಾಯಿಕ ಪಾಕವಿಧಾನಗಳನ್ನು ಸಂರಕ್ಷಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿದ್ದಾರೆ. ಋತುಮಾನಕ್ಕೆ ತಕ್ಕಂತೆ ಪದಾರ್ಥಗಳನ್ನು ಬಳಸುವಲ್ಲಿ ಕೌಶಲ ಹೊಂದಿದ್ದಾರೆ. ಕಡಲತಡಿಯಲ್ಲಿ ವಾಸಿಸುವ ಜನರ ಕೈರುಚಿ ಅರಿತು ಅದೇ ಮಾದರಿಯಲ್ಲಿ ಭಕ್ಷ್ಯಗಳನ್ನು ತಯಾರಿಸಲು ಸ್ಥಳೀಯರೊಂದಿಗೆ ಚರ್ಚಿಸಿ ಅವರ ಪಾಕ ವಿಧಾನಗಳನ್ನು ಕರಗತ ಮಾಡಿಕೊಳ್ಳುತ್ತಾ ಬಂದಿದ್ದಾರೆ. ತಾಯಂದಿರು ಮತ್ತು ಅಜ್ಜಿಯರ ಪಾಕ ವಿಧಾನ ಕಲೆಗಳನ್ನು ಕರಗತ ಮಾಡಿಕೊಂಡಿದ್ದಾರೆ. ನರೇನ್ ತಿಮ್ಮಯ್ಯ ಎಕನಾಮಿಕ್ ಟೈಮ್ಸ್‌ನ ಭಾರತದ ಟಾಪ್ 10 ಬಾಣಸಿಗರ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ.

ಕರಾವಳಿ ಸೌತ್‌ವೆಸ್ಟ್ ಕೋಸ್ಟಲ್ ರೆಸ್ಟೋರೆಂಟ್‌ನತ್ತ ಗ್ರಾಹಕರ ಆಕರ್ಷಣೆ ಇತ್ತೀಚಿನ ವರ್ಷಗಳಲ್ಲಿ ಹೆಚ್ಚಾಗುತ್ತಿದೆ. ಕರಾವಳಿ ರೆಸ್ಟೋರೆಂಟ್ ಏಷ್ಯಾದ 50 ಅತ್ಯುತ್ತಮ ರೆಸ್ಟೋರೆಂಟ್‌ಗಳ ಪಟ್ಟಿಯಲ್ಲಿ ಎರಡು ಬಾರಿ ಸ್ಥಾನ ಪಡೆದಿದೆ. ಮನೆಯ ಕೈರುಚಿ ಮಾದರಿಯಲ್ಲೇ ಸ್ಟೆಲ್ಲರ್ ಕರ‍್ರಿಸ್ ಅಂಡ್ ನೀರ್ ದೋಸೆ ಇಲ್ಲಿ ದೊರೆಯುತ್ತವೆ.

ಕರಾವಳಿಯಲ್ಲಿ ದೊರೆಯುವ ನೀರ್ ದೋಸೆ, ಕರ‍್ರಿಯ ರುಚಿಗೆ ಮನಸೋಲುವವರು ದಿನದಿಂದ ದಿನಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಈ ರೆಸ್ಟೋರೆಂಟ್‌ನತ್ತ ಮುಖ ಮಾಡುತ್ತಿದ್ದಾರೆ. ಎಸ್.ಪೆಲ್ಲೆಗ್ರಿನೋ ವತಿಯಿಂದ ಗುರುತಿಸಿರುವ ಏಷ್ಯಾದ 50 ಅತ್ಯುತ್ತಮ ರೆಸ್ಟೋರೆಂಟ್‌ಗಳಲ್ಲಿ ಕರಾವಳಿ ಸ್ಥಾನ ಪಡೆದಿದೆ.

ರಾಜಕಾಲುವೆ ಒತ್ತುವರಿ ಗುರುತಿಸಲು ತೀರ್ಮಾನ



ವಿರಾಜಪೇಟೆ ಪುರಸಭೆ ವಿಶೇಷ ಸಭೆ ಅಧ್ಯಕ್ಷೆ ಎಂ.ಕೆ.ದೇಚಮ್ಮ ಅಧ್ಯಕ್ಷತೆಯಲ್ಲಿ ನಡೆಯಿತು.

ವಿರಾಜಪೇಟೆ, ನ.26–ಪಟ್ಟಣ ವ್ಯಾಪ್ತಿಯ ತೋಡು, ರಾಜ ಕಾಲುವೆಗಳ ಸರ್ವೆ ನಡೆಸಿ, ಒತ್ತುವರಿ ಗುರುತಿಸಲು ಪುರಸಭೆ ವಿಶೇಷ ಸಭೆಯಲ್ಲಿ ತೀರ್ಮಾನಿಸಲಾಯಿತು.

ಮಂಗಳವಾರ ನಡೆದ ಪುರಸಭೆ ವಿಶೇಷ ಸಭೆಯಲ್ಲಿ ಮಾತನಾಡಿದ ಅಧ್ಯಕ್ಷೆ ಎಂ.ಕೆ.ದೇಚಮ್ಮ, ತೋಡು, ರಾಜ ಕಾಲುವೆ ಒತ್ತುವರಿ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಚರ್ಚೆಯಾಗುತ್ತಿದೆ. ಜೊತೆಗೆ ಪಟ್ಟಣದ ತಹಸೀಲ್ದಾರ್ ಕಚೇರಿಯಿಂದ ಕಾಲುವೆಗಳ ಸರ್ವೆ ಕಾರ್ಯ ನಡೆಸುವಂತೆ ನಿತ್ಯ ಒತ್ತಡ ಬರುತ್ತಿದೆ. ಈ ಹಿನ್ನೆಲೆಯಲ್ಲಿ ಸಾಧಕ–ಬಾಧಕ ಕುರಿತು ಚರ್ಚಿಸಲು ವಿಶೇಷ ಸಭೆ ನಡೆಸಲಾಗುತ್ತದೆ. ಎಲ್ಲಾ ಸದಸ್ಯರ ಅಭಿಪ್ರಾಯದಂತೆ ನಿರ್ಣಯ ಕೈಗೊಳ್ಳಲಾಗುವುದು ಎಂದರು.

ಇದೇ ವೇಳೆ ತೋಡು, ರಾಜ ಕಾಲುವೆಗಳ ಸರ್ವೆ ಕಾರ್ಯದ ಬಗ್ಗೆ ದೂರು ನೀಡಿರುವುದು ಯಾರು? ಎಂದು ಸದಸ್ಯರು ಪ್ರಶ್ನಿಸಿದರು. ಇದಕ್ಕೆ ಉತ್ತರಿಸಿದ ಸರ್ವೆ ಇಲಾಖೆ ಸಹಾಯಕ ನಿರ್ದೇಶಕ ಬಾನಂಗಡ ಅರುಣ್ ಕುಮಾರ್, ರಾಜ ಕಾಲುವೆ ಹಾಗೂ ತೋಡುಗಳ ಬಗ್ಗೆ ಹಿಂದಿನ ಎಡಿಎಲ್ಆರ್ ಅವಧಿಯಲ್ಲಿ ದೂರಿನ ಹಿನ್ನೆಲೆಯಲ್ಲಿ ಜಿಲ್ಲಾ ಸರ್ವೆ ನಿರ್ದೇಶಕರ ಆದೇಶದಂತೆ ಸಮೀಕ್ಷೆ ಮಾಡಲಾಗಿತ್ತು. ನಾನು ಅಧಿಕಾರ ಸ್ವೀಕರಿಸಿದ ಬಳಿಕ ಕಾಲುವೆ ಸರ್ವೆ ತಡೆ ಹಿಡಿಯಲಾಗಿದೆ. ಪುರಸಭೆ ಆದೇಶ ನೀಡಿದರೆ ಮಾತ್ರ ಸರ್ವೆ ಕಾರ್ಯ ಮುಂದುವರಿಸಲಾಗುವುದು. ವಿನಾ ಕಾರಣ ಕೆಲವರು ಬೆದರಿಕೆ ಹಾಕುತ್ತಿರುವುದು ಸರಿಯಲ್ಲ ಎಂದರು.

ಸದಸ್ಯ ಎಸ್.ಹೆಚ್.ಮತೀನ್ ಮಾತನಾಡಿ, ಸರ್ವೆ ನಡೆಸುವಂತೆ ತಹಸೀಲ್ದಾರ್ ಆದೇಶ ನೀಡಿದ್ದಾರೆ. ಗೊಂದಲ ಇರುವುದರಿಂದ ಸರ್ವೆ ಮುಂದೂಡಲಾಗಿದೆ. ಮಾಹಿತಿ ಹಕ್ಕುದಾರರು ದೂರು ನೀಡಿದರೆ ಅಧಿಕಾರಿಗಳು ಏಕೆ? ಅವರ ಮಾತನ್ನು ಕೇಳುವುದು ಎಂದು ಪ್ರಶ್ನಿಸಿದರು.

ಇದಕ್ಕೆ ತಹಸೀಲ್ದಾರ್ ರಾಮಚಂದ್ರ ಉತ್ತರಿಸಿ, ನಾವು ದೂರಿನಂತೆ ಕಾನೂನು ರೀತಿ ಸರ್ವೆ ಮಾಡಿ ವರದಿ ನೀಡುತ್ತೇವೆ. ನಂತರ ಒತ್ತುವರಿಯನ್ನು ಪುರಸಭೆ ತೆರವು ಮಾಡುವ ಬಗ್ಗೆ ನಿರ್ಣಯ ಕೈಗೊಳ್ಳಲಿ. ಆದರೆ, ಸರ್ವೆ ಮಾಡದೆ ಒತ್ತುವರಿ ಬಗ್ಗೆ ಹೇಗೆ ನಿರ್ಣಯ ಮಾಡಲು ಸಾಧ್ಯ ನಾನು ಯಾರ ಒತ್ತಡಕ್ಕೂ ಮಣಿದು ಕೆಲಸ ಮಾಡುತ್ತಿಲ್ಲ. ಸಚಿವರು ಸಭೆಯಲ್ಲಿ ಸೂಚನೆ ನೀಡಿದಂತೆ ತೋಡಿನ ಕಾಲುವೆಗಳ ಅಳತೆಗೆ ಸೂಚಿಸಿದ್ದೇನೆ ಎಂದರು.

ವಿಧಾನ ಪರಿಷತ್ ಸದಸ್ಯ ಸುಜಾ ಕುಶಾಲಪ್ಪ, ನಾಮನಿರ್ದೇಶಿತ ಸದಸ್ಯ ಕೆ.ಸಿ.ಶಬರೀಶ್ ಶೆಟ್ಟಿ ಮಾತನಾಡಿದರು. ವಿಶೇಷ ಸಭೆಯಲ್ಲಿ ಪುರಸಭೆ ಮುಖ್ಯಾಧಿಕಾರಿ ಚಂದ್ರಕುಮಾರ್, ಉಪಾಧ್ಯಕ್ಷೆ ಫಸೀಹಾ ತಬುಸಂ, ಸದಸ್ಯ ರಂಜಿಪೂಣಚ್ಚ, ಮಹ್ಮದ್ ರಾಫಿ, ಮಹದೇವ, ಜಲೀಲ್, ಶಾಹುಲ್ ಹಮೀದ್, ರಜನಿಕಾಂತ್, ಆಶಾ ಸುಬ್ಬಯ್ಯ, ಅಗಸ್ಟಿನ್ ಬೆನ್ನಿ, ಜಿ.ಜಿ.ಮೋಹನ್, ಡಿ.ಪಿ.ರಾಜೇಶ್, ಯಶೋಧಾ, ಜೂನ, ಅಸೀಫ್ ಮನ್ನಾ ಮತ್ತಿತರರು ಹಾಜರಿದ್ದರು.

ಹೆಜ್ಜೇನು ದಾಳಿಗೆ ತೆನೆ ಹಸು ಸಾವು



ಅರಮೇರಿ ಗ್ರಾಮದಲ್ಲಿ ಹೆಜ್ಜೇನು ದಾಳಿಗೆ ಹಸು ಮೃತಪಟ್ಟಿರುವುದು.

ಮಡಿಕೇರಿ, ನ.26– ಹೆಜ್ಜೇನು ದಾಳಿಗೆ ತೆನೆ (ಗಬ್ಬ) ಹಸು ಮೃತಪಟ್ಟ ಘಟನೆ ವಿರಾಜಪೇಟೆ ತಾಲೂಕಿನ ಅರಮೇರಿ ಗ್ರಾಮದಲ್ಲಿ ಮಂಗಳವಾರ ನಡೆದಿದೆ.

ವಿರಾಜಪೇಟೆ ತಾಲೂಕಿನ ಕದನೂರು ಗ್ರಾಮ ಪಂಚಾಯಿತಿಯ ಅರಮೇರಿ 4ನೇ ಮೈಲು ನಿವಾಸಿ ಸೋಮೆಯಂಡ ರೇಶಾ ತಿಮ್ಮಯ್ಯ ಅವರು ಗರ್ಭ ಧರಿಸಿದ್ದ ಹಸುವನ್ನು ಕೊಟ್ಟಿಗೆಯ ಅನತಿ ದೂರದಲ್ಲಿ ಮೇಯಲು ಬಿಟ್ಟಿದ್ದರು. ಸೋಮವಾರ ಸಂಜೆ ವೇಳೆಗೆ ಕಾರ್ಮಿಕರು ಹಸುವನ್ನು ಕೊಟ್ಟಿಗೆ ಸೇರಿಸಲು ಮುಂದಾದ ವೇಳೆ ಹಸು ಅಸ್ವಸ್ಥವಾಗಿರುವುದು ಪತ್ತೆಯಾಗಿದೆ. ಹಸುವಿನ ದೇಹದ ಮೇಲೆ ಕೆಂಪು ಬಣ್ಣದ ಗುರುತುಗಳು ಕಂಡು ಬಂದಿತ್ತು. ಹೆಜ್ಜೇನು ದಾಳಿ ನಡೆಸಿದೆ ಎಂದು ರೇಶಾ ತಿಮ್ಮಯ್ಯ ಪಶು ವೈದ್ಯರಿಗೆ ಮಾಹಿತಿ ನೀಡಿದ್ದರು. ಹಸು ಪರಿಶೀಲಿಸಿದ ವೈದ್ಯರು ಪ್ರಥಮ ಚಿಕಿತ್ಸೆ ನೀಡಿ ತೆರಳಿದ್ದರು. ಆದರೆ, ಮಂಗಳವಾರ ಬೆಳಗ್ಗೆ ಕೊಟ್ಟಿಗೆಯಲ್ಲಿ ಹಸು ಮೃತಪಟ್ಟಿದೆ.

ಹೊಸಕೋಟೆಯಲ್ಲಿ ಕಾಡಾನೆ ದಾಳಿಗೆ ಬೆಳೆ ನಾಶ

ಪೊನ್ನಂಪೇಟೆ, ನ.26–ಬಿಳುಗುಂದ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೊಸಕೋಟೆ ಗ್ರಾಮದ ಕಾಫಿ ತೋಟಗಳಿಗೆ ಸೋಮವಾರ ರಾತ್ರಿ ನುಗ್ಗಿದ ಕಾಡಾನೆಗಳ ಹಿಂಡು ಬೆಳೆಯನ್ನು ಸಂಪೂರ್ಣವಾಗಿ ನಾಶಗೊಳಿಸಿವೆ.

ಫಸಲಿಗೆ ಬಂದಿದ್ದ ಲಕ್ಷಾಂತರ ರೂ. ಮೌಲ್ಯದ ಕಾಫಿ, ಅಡಕೆ, ಬಾಳೆ, ತೆಂಗು ಬೆಳೆಗಳು ಕಾಡಾನೆಗಳ ದಾಳಿಗೆ ನಾಶವಾಗಿದ್ದು, ಬೆಳೆಗಾರರಿಗೆ ಅಪಾರ ಪ್ರಮಾಣದ ನಷ್ಟವಾಗಿದೆ. ಕಳೆದ ಮೂರು ದಿನಗಳಿಂದ ನಿರಂತರವಾಗಿ ಮುಂಜಾನೆ ತೋಟಗಳಿಗೆ ಕಾಡಾನೆಗಳ ಹಿಂಡು ಫಸಲಿಗೆ ನುಗ್ಗಿ 135ಕ್ಕೂ ಹೆಚ್ಚು ಅಡಕೆ ಮರವನ್ನು ಧ್ವಂಸಗೊಳಿಸಿವೆ ಎಂದು ಹೊಸಕೋಟೆಯ ತೋಟದ ಮಾಲೀಕ ಡಿ.ಹೆಚ್.ಸೂಫಿ ಹಾಜಿ ತಿಳಿಸಿದ್ದಾರೆ.

ತೋಟದಲ್ಲಿ ಆನೆಗಳು ಮನಸೋಇಚ್ಛೆ ಸಂಚರಿಸುವುದರಿಂದ ಕಾರ್ಮಿಕರು ತೋಟದ ಕೆಲಸಕ್ಕೆ ಬರಲು ಹಿಂದೇಟು ಹಾಕುತ್ತಿದ್ದಾರೆ. ಕಾಡಾನೆಗಳ ದಾಳಿಯಿಂದ ಬೆಳೆ ನಷ್ಟ ಅನುಭವಿಸುತ್ತಿರುವ ಬೆಳೆಗಾರರಿಗೆ ಕೂಡಲೇ ಸೂಕ್ತ ಪರಿಹಾರ ನೀಡಬೇಕು. ಕಾಡಾನೆಗಳ ನಿರಂತರ ಉಪಟಳವನ್ನು ನಿಯಂತ್ರಿಸಲು ಅರಣ್ಯ ಇಲಾಖೆ ತ್ವರಿತವಾಗಿ ಕ್ರಮ ಕೈಗೊಳ್ಳಬೇಕು ಎಂದು ಸೂಫಿ ಹಾಜಿ ಆಗ್ರಹಿಸಿದ್ದಾರೆ.



ಕಾಡಾನೆಗಳ ಹಾವಳಿಯಿಂದ ಸೂಫಿ ಹಾಜಿ ತೋಟದಲ್ಲಿ ಅಡಕೆ ಗಿಡ ನಾಶವಾಗಿರುವುದು.

ರಿಯಾಯಿತಿ ದರದಲ್ಲಿ ಕೃಷಿ ಯಂತ್ರೋಪಕರಣ

ಮಡಿಕೇರಿ ನ.26–ಪ್ರಸಕ್ತ ಸಾಲಿನಲ್ಲಿ ಸಾಮಾನ್ಯ ವರ್ಗದ ರೈತರಿಗೆ ಶೇ.50ರಷ್ಟು ರಿಯಾಯಿತಿ ದರದಲ್ಲಿ ಕೃಷಿ ಯಂತ್ರೋಪಕರಣ ನೀಡಲಾಗುವುದು.

ಆಸಕ್ತ ರೈತರು ತಮ್ಮ ವ್ಯಾಪ್ತಿಯ ರೈತ ಸಂಪರ್ಕ ಕೇಂದ್ರಕ್ಕೆ ಪಹಣಿ (ಆರ್‌ಟಿಸಿ), ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಪುಸ್ತಕ ಜೆರಾಕ್ಸ್, ಭಾವಚಿತ್ರ 100 ರೂ. ಛಾಪಾ ಕಾಗದ ದಾಖಲಾತಿಯೊಂದಿಗೆ ಅರ್ಜಿ ಸಲ್ಲಿಸಬೇಕು. ಕೃಷಿ ಉಪಕರಣಗಳಾದ ಮಿನಿ ಟ್ರ್ಯಾಕ್ಟರ್, ಪವರ್ ಟಿಲ್ಲರ್, ಕಲ್ಟಿವೇಟರ್, ರೋಟವೇಟರ್, ಎಂಬಿಪ್ಲೋ, ಡಿಸ್ಕ್‌ಪ್ಲೋ, ಕಳೆ ಕೊಚ್ಚುವ, ತೆಗೆಯುವ ಯಂತ್ರ ಹಿಟ್ಟು ಮಾಡುವ ಯಂತ್ರ, ಮೆಣಸಿನ ಕಾಯಿ ಪುಡಿ ಯಂತ್ರ ಹಾಗೂ ಎಣ್ಣೆ ಗಾಣಗಳನ್ನು ಶೇ.50ರ ಸಹಾಯಧನದಲ್ಲಿ ಸೋಮವಾರಪೇಟೆ ಹಾಗೂ ಕುಶಾಲನಗರ ತಾಲೂಕಿನ ರೈತರು ಪಡೆದುಕೊಳ್ಳುವಂತೆ ತಾಲೂಕು ಸಹಾಯಕ ಕೃಷಿ ನಿರ್ದೇಶಕ ಕೆ.ಪಿ.ವೀರಣ್ಣ ತಿಳಿಸಿದ್ದಾರೆ.

ಕೊಡಗಿನಲ್ಲಿ ಡ್ರೋಣ್ ಸರ್ವೇ ಆರಂಭ

ಮಡಿಕೇರಿ, ನ.26–ರಾಜ್ಯ ಸರ್ಕಾರ ಕಂದಾಯ ಇಲಾಖೆಯ ದಿಶಾಂಕ್ ತಂತ್ರಾಂಶ ಉನ್ನತೀಕರಣಕ್ಕಾಗಿ ಜಮೀನುಗಳ ಡ್ರೋಣ್ ಸರ್ವೆಗೆ ಮುಂದಾಗಿದೆ.

ಹಳೇ ಮೈಸೂರು ಭಾಗದಲ್ಲಿ ಈ ಸರ್ವೆ ಕಾರ್ಯ ಸಂಪೂರ್ಣವಾಗಿ ಮುಕ್ತಾಯವಾಗಿದ್ದು, ಇದೀಗ ಕೊಡಗು ಜಿಲ್ಲೆಯಲ್ಲಿ ಮಂಗಳವಾರದಿಂದ ಸರ್ವೆ ಕಾರ್ಯ ಆರಂಭಿಸಲಾಗುತ್ತಿದೆ. ಈ ಡ್ರೋಣ್ ಒಮ್ಮೆ ಹಾರಿಸಿದರೆ 3 ಕಿ.ಮೀ. ವ್ಯಾಪ್ತಿಯ ಜಮೀನುಗಳನ್ನು ಏಕಕಾಲಕ್ಕೆ ಸರ್ವೆ ನಡೆಸುತ್ತದೆ. ಜಮೀನುಗಳ ಸಂಪೂರ್ಣ ದಾಖಲೆಗಳು ದಿಶಾಂಕ್ ತಂತ್ರಾಂಶದ ಮೂಲಕ ಕಂದಾಯ ಇಲಾಖೆಯ ಅಧಿಕೃತ ದಾಖಲೆಗೆ ಸೇರ್ಪಡೆಯಾಗುತ್ತದೆ.



ಕೊಡಗು ಜಿಲ್ಲೆಯಲ್ಲಿ ಡ್ರೋಣ್ ಸರ್ವೆ ಕಾರ್ಯ ಆರಂಭಿಸಿರುವುದು.

ಆರ್‌ಟಿಸಿ ಸಂಖ್ಯೆ, ಜಮೀನು ಮಾಲೀಕರ ವಿವರ, ಒಟ್ಟು ವಿಸ್ತೀರ್ಣ, ಜಾಗದ ಸ್ಕೆಚ್(ನಕ್ಷೆ) ಸೇರಿದಂತೆ ಬಹುತೇಕ ಎಲ್ಲಾ ದಾಖಲಾತಿಗಳು ದಿಶಾಂಕ್ ತಂತ್ರಾಂಶದಲ್ಲಿ ದಾಖಲಾಗುತ್ತದೆ. ಇದೀಗ ಪೊನ್ನಂಪೇಟೆ ತಾಲೂಕಿನಲ್ಲಿ ಸರ್ವೇ ಕಾರ್ಯ ನಡೆಸಲಾಗುತ್ತಿದ್ದು, ಹಂತ ಹಂತವಾಗಿ ಕೊಡಗು ಜಿಲ್ಲೆಯಾದ್ಯಂತ ಸರ್ವೆ ಕಾರ್ಯ ನಡೆಸಲಾಗುತ್ತದೆ ಎಂದು ಸರ್ವೆ ಇಲಾಖೆ ಮೂಲಗಳು ಮಾಹಿತಿ ನೀಡಿವೆ. ಸರ್ಕಾರದಿಂದ ದೊರೆಯುವ ಸಬ್ಸಿಡಿ, ಕೃಷಿಕರಿಗೆ ಬ್ಯಾಂಕ್ ಸಾಲ ಸೇರಿದಂತೆ ವಿವಿಧ ಸೌಲಭ್ಯ ಪಡೆಯಲು ಕೂಡ ಇದು ಮುಂದಿನ ದಿನಗಳಲ್ಲಿ ಸಹಕಾರಿಯಾಗಲಿದೆ ಎಂದು ಹೇಳಲಾಗುತ್ತಿದೆ.

ಬಿಜೆಪಿ ಕಚೇರಿಯಲ್ಲಿ ಪ್ರತಿಜ್ಞಾ ವಿಧಿ ಬೋಧನೆ



ಚಾಮರಾಜನಗರ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಸಂವಿಧಾನ ಸಮರ್ಪಣಾ ದಿನ ಆಚರಿಲಾಯಿತು.

ಚಾಮರಾಜನಗರ, ನ.26– ನಗರದ ರಾಮಸಮುದ್ರ ಕುಲುಮೆ ರಸ್ತೆಯ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಸಂವಿಧಾನ ಸಮರ್ಪಣಾ ದಿನ ಆಚರಿಲಾಯಿತು.

ಇದ‌ಕ್ಕೂ ಮುನ್ನಾ ಬಿಜೆಪಿ ಮುಖಂಡರು ಡಾ.ಬಿ.ಆರ್.ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಿ, ಸಂವಿಧಾನ ಪೀಠಿಕೆ ಪ್ರತಿಜ್ಞಾ ವಿಧಿ ಬೋಧಿಸಿದರು.

ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ ಮಾತನಾಡಿ, ಭಾರತ ಸಂವಿಧಾನ ಜಗತ್ತಿನಲ್ಲಿ ಶ್ರೇಷ್ಠವಾಗಿದ್ದು, ಸರ್ವರಿಗೂ ಸಮಪಾಲು–ಸಮ ಬಾಳು ನೀಡಿದೆ. ಸಂವಿಧಾನ ರಚನೆ ಸ್ವರೂಪವೇ ಎಲ್ಲರನ್ನೂ ಒಳಗೊಳ್ಳುವ ಮೌಲ್ಯ ಆಧರಿಸಿದೆ. ಇದು ಜಗತ್ತಿನ ಶ್ರೇಷ್ಠ ಸಂವಿಧಾನವಾಗಿದ್ದು, ಜನರ ಆಚಾರ–ವಿಚಾರ, ಸಂಸ್ಕೃತಿಗೆ ಅಡ್ಡಿಪಡಿಸುವುದಿಲ್ಲ ಎಂದರು.

ಅರಕಲವಾಡಿ ನಾಗೇಂದ್ರ ಮಾತನಾಡಿದರು. ನಗರಸಭಾ ಅಧ್ಯಕ್ಷ ಸುರೇಶ್, ಬಿಜೆಪಿ ಓಬಿಸಿ ಮೋರ್ಚಾ ರಾಷ್ಟ್ರೀಯ ಕಾರ್ಯಕಾರಿಣಿ ಸದಸ್ಯ ನೂರೊಂದು ಶೆಟ್ಟಿ, ಮಾಜಿ ಅಧ್ಯಕ್ಷ ಆರ್.ಸುಂದರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೂಡ್ನಾಕೂಡು ಪ್ರಕಾಶ್, ವಕ್ತಾರ ಕಾಡಹಳ್ಳಿ ಕುಮಾರ್, ಉಪಾಧ್ಯಕ್ಷರಾದ ಶಿವು ವಿರಾಟ್, ಪದ್ಮ, ನಗರದ ಮಂಡಲಾಧ್ಯಕ್ಷ ಶಿವರಾಜ್, ಪ್ರಧಾನ ಕಾರ್ಯದರ್ಶಿ ಕೂಸಣ್ಣ, ಎಸ್‌ಟಿ ಮೋರ್ಚಾ ರಾಜ್ಯ ಕಾರ್ಯದರ್ಶಿ ಜಯಸುಂದರ್, ಜಿಲ್ಲಾಧ್ಯಕ್ಷ ಚಂದ್ರಶೇಖರ, ಪ್ರಧಾನ ಕಾರ್ಯದರ್ಶಿ ಮಹೇಶ್ ಬಸವಪುರ, ಉಪಾಧ್ಯಕ್ಷ ಬುಲೆಟ್ ಚಂದ್ರು, ಎಸ್‌ಸಿ ಮೋರ್ಚಾ ಜಿಲ್ಲಾಧ್ಯಕ್ಷ ಮೂಡಹಳ್ಳಿ ಮೂರ್ತಿ, ಪ್ರಧಾನ ಕಾರ್ಯದರ್ಶಿ ಮಾಂಬಳ್ಳಿ ರಾಮಣ್ಣ, ಆರ್.ವಿ.ಮಹದೇವಸ್ವಾಮಿ, ಆರ್.ಪುಟ್ಟಮಲ್ಲಪ್ಪ, ಚುಡಾ ಮಾಜಿ ಅಧ್ಯಕ್ಷ ಕುಣಗಾಲ ಶಾಂತಮೂರ್ತಿ ಇತರರು ಹಾಜರಿದ್ದರು.

ಸಂವಿಧಾನದಿಂದ ಪ್ರತಿಯೊಬ್ಬರಿಗೂ ಸಮಾನ ಅವಕಾಶ



ಚಾಮರಾಜನಗರ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಸಂವಿಧಾನ ಸಮರ್ಪಣಾ ದಿನಾಚರಣೆಯಲ್ಲಿ ಸಂವಿಧಾನ ಪೀಠಿಕೆ ಬೋಧಿಸಲಾಯಿತು.

ಚಾಮರಾಜನಗರ, ನ.26–ಡಾ.ಬಿ.ಆರ್.ಅಂಬೇಡ್ಕರ್ ರಚಿಸಿರುವ ಸಂವಿಧಾನದ ಮಹತ್ವವನ್ನು ದೇಶ ಪ್ರತಿಯೊಬ್ಬ ಪ್ರಜೆಯೂ ತಿಳಿದುಕೊಳ್ಳಬೇಕು ಎಂದು ಶಾಸಕ ಸಿ.ಪುಟ್ಟರಂಗಶೆಟ್ಟಿ ಹೇಳಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಮಂಗಳವಾರ ನಡೆದ ಸಂವಿಧಾನ ಸಮರ್ಪಣಾ ದಿನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಅಂಬೇಡ್ಕರ್ ಸಂವಿಧಾನ ರಚನಾ ಕರಡು ಸಮಿತಿ ಅಧ್ಯಕ್ಷರಾಗಿದ್ದು, ಸಂವಿಧಾನದ ರಚನೆಯಲ್ಲಿ ಪ್ರಮುಖ ಪಾತ್ರವಹಿಸಿದ್ದರು. ಅಂಬೇಡ್ಕರ್ ಸಂವಿಧಾನ ಮೂಲಕ ದೇಶದ ಪ್ರತಿ ನಾಗರಿಕರೂ ಬದುಕುವ ಸಮಾನ ಅವಕಾಶ ಕಲ್ಪಿಸಿಕೊಟ್ಟಿದ್ದಾರೆ ಎಂದರು.

ಕಾಂಗ್ರೆಸ್ ಜಿಲ್ಲಾಧ್ಯಕ್ಷ ಪಿ.ಮರಿಸ್ವಾಮಿ ಮಾತನಾಡಿ, ಅಂಬೇಡ್ಕರ್ ಭಾರತದ ಅಭಿವೃದ್ಧಿಗೆ ಪೂರಕವಾದ ಸುಭದ್ರ ಸಂವಿಧಾನ ರಚನೆ ಮಾಡಿ, ದೇಶಕ್ಕೆ ಅರ್ಪಣೆ ಮಾಡಿದ್ದಾರೆ. ಸಂವಿಧಾನದಲ್ಲಿ ಅಡಕವಾಗಿರುವ ವಿಧಿಗಳು ಸೇರಿದಂತೆ ಪ್ರಮುಖ ಅಂಶಗಳ ಮಹತ್ವವನ್ನು ನಾಗರಿಕರು ಅರಿತುಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಉಪಾಧ್ಯಕ್ಷ ಬಿ.ಕೆ.ರವಿಕುಮಾರ್, ಚುಡಾ ಅಧ್ಯಕ್ಷ ಮಹಮದ್ ಅಸ್ಗರ್, ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎ.ಎಸ್.ಗುರುಸ್ವಾಮಿ, ಕೆಪಿಸಿಸಿ ಸದಸ್ಯ ಸೈಯದ್ ರಫಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಆರ್.ಮಹದೇವ್, ನಗರಸಭೆ ಸದಸ್ಯರಾದ ಚಿನ್ನಮ್ಮ, ಕಲಾವತಿ, ಎಪಿಎಂಸಿ ಅಧ್ಯಕ್ಷ ಸೋಮೇಶ್, ಜಿಪಂ ಮಾಜಿ ಸದಸ್ಯರಾದ ರಮೇಶ್, ಕಾವೇರಿ ಶಿವಕುಮಾರ್, ತಾಪಂ ಮಾಜಿ ಸದಸ್ಯರಾದ ಪಿ.ಕುಮಾರ ನಾಯಕ್, ಪುಟ್ಟಸ್ವಾಮಿ, ನಸ್ರುಲ್ಲಾಖಾನ್, ಕರಿನಂಜನಪುರ ಸ್ವಾಮಿ, ಅಯೂಬ್ ಖಾನ್, ನಗರಸಭೆ ಮಾಜಿ ಸದಸ್ಯ ಪುಟ್ಟಸ್ವಾಮಿ, ಚಂಗುಮಣಿ, ಗ್ರಾಪಂ ಸದಸ್ಯರಾದ ಗೀತಾ ಸಿದ್ದರಾಜು, ಶೇಖರಪ್ಪ, ಅಪ್ಸರ್ ಅಹಮದ್, ಅಬ್ಬಾಸ್ ಪಾಲ್ಗೊಂಡಿದ್ದರು.

ಅಪ್ರಾಪ್ತೆಗೆ ಲೈಂಗಿಕ ದೌರ್ಜನ್ಯ: ಯುವಕನಿಗೆ 3 ವರ್ಷ ಜೈಲು

ಚಾಮರಾಜನಗರ, ನ.26– ಪ್ರೀತಿಸುವ ನೆಪದಲ್ಲಿ ಅಪ್ರಾಪ್ತೆ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿದ ಯುವಕನಿಗೆ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ 3 ವರ್ಷ ಜೈಲು ಶಿಕ್ಷೆ ವಿಧಿಸಿ ತೀರ್ಪು ನೀಡಿದೆ.

ಚಿತ್ರದುರ್ಗ ಜಿಲ್ಲೆ ಹಿರಿಯೂರು ತಾಲೂಕಿನ ಬ್ಯಾಡರಹಳ್ಳಿ ಗ್ರಾಮದ ಮಹಾಂತೇಶ್ ಶಿಕ್ಷೆಗೆ ಗುರಿಯಾದ ಅಪರಾಧಿ. ಈತ 2020ರ ನವೆಂಬರ್‌ನಲ್ಲಿ ಅಪ್ರಾಪ್ತೆಯನ್ನು ಫೋನ್ ಮೂಲಕ ಪರಿಚಯ ಮಾಡಿಕೊಂಡು, ಬಳಿಕ ಅಪಹರಿಸಿ ಲೈಂಗಿಕ ದೌರ್ಜನ್ಯ ನಡೆಸಿದ್ದ. ಈ ಸಂಬಂಧ ಚಾ.ನಗರ ಮಹಿಳಾ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು. ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ನ್ಯಾಯಾಧೀಶ ಎಸ್.ಜೆ.ಕೃಷ್ಣ ಅಪರಾಧಿಗೆ 3 ವರ್ಷ ಶಿಕ್ಷೆ, 15 ಸಾವಿರ ರೂ. ಪರಿಹಾರ ನೀಡಬೇಕೆಂದು ಆದೇಶಿಸಿದ್ದಾರೆ. ಸರ್ಕಾರದ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕ ಕೆ.ಯೋಗೇಶ್ ವಾದ ಮಂಡಿಸಿದ್ದರು.

ಏಕತೆಯಿಂದ ಎಲ್ಲರನ್ನು ಒಗ್ಗೂಡಿಸುವುದೇ ಸಂವಿಧಾನ

ವಿಚಾರ ಸಂಕಿರಣದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ.ಕವಿತಾ ಅಭಿಮತ

ಚಾಮರಾಜನಗರ, ನ.26–ವೈವಿಧ್ಯಮಯ ಸಂಸ್ಕೃತಿ ಹೊಂದಿರುವ ಭಾರತದಲ್ಲಿ ಪ್ರಜಾಸತ್ಯಾತ್ಮಕವಾಗಿ ಸಮಾನ ಅವಕಾಶ ನೀಡುವ ಮೂಲಕ ಏಕತೆಯಿಂದ ಎಲ್ಲರನ್ನು ಒಗ್ಗೂಡಿಸುವುದೇ ಸಂವಿಧಾನ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ.ಕವಿತಾ ಅಭಿಪ್ರಾಯಪಟ್ಟರು.

ನಗರದ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಸಂವಿಧಾನ ದಿನಾಚರಣೆ (ಸಂವಿಧಾನ ಸಮರ್ಪಣೆ ದಿನ) ಅಂಗವಾಗಿ ಆಯೋಜಿಸಿದ್ದ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದ ಅವರು, ಇಡೀ ವಿಶ್ವದಲ್ಲೇ ಭಾರತ ಬಹುದೊಡ್ಡ ಪ್ರಜಾಪ್ರಭುತ್ವ ದೇಶವಾಗಿ ಹೊರಹೊಮ್ಮಲು ಪರಮೋಚ್ಛ ಗ್ರಂಥ ಸಂವಿಧಾನವೇ ಕಾರಣ. ಅಸ್ಪೃಶ್ಯತೆಯ ಕ್ರೂರತೆ ಹಾಗೂ ಭೀಕರತೆಯಿಂದ ಜನರಲ್ಲಿ ಭಯ ಹುಟ್ಟಿಸಿದ್ದನ್ನು ಕಣ್ಣಾರೆ ಕಂಡಿದ್ದ ಡಾ.ಬಿ.ಆರ್.ಅಂಬೇಡ್ಕರ್ ಮಾದರಿ ಸಂವಿಧಾನ ರಚಿಸುವ ಮೂಲಕ ಎಲ್ಲಾ ವರ್ಗಗಳಿಗೂ ಸಮಾನ ಅವಕಾಶ ಒದಗಿಸಿ ಸಮಾಜದಲ್ಲಿ ಗೌರವಯುತವಾಗಿ ಬದುಕಲು ಅನುವು ಮಾಡಿಕೊಟ್ಟರು ಎಂದರು.



ಚಾಮರಾಜನಗರದ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ಆಯೋಜಿಸಿದ್ದ ವಿಚಾರ ಸಂಕಿರಣದಲ್ಲಿ ಅಂಬೇಡ್ಕರ್ ಭಾವಚಿತ್ರಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ.ಕವಿತಾ ಪುಷ್ಪಾರ್ಚನೆ ಸಲ್ಲಿಸಿದರು.

ಉಪನ್ಯಾಸ ನೀಡಿದ ಕೊಳ್ಳೇಗಾಲ ತಾಲೂಕು ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ ಮಹದೇವಕುಮಾರ್, ಪ್ರಜಾಪ್ರಭುತ್ವದ ಧರ್ಮಗ್ರಂಥ ಸಂವಿಧಾನವಾಗಿದೆ. ಸಂವಿಧಾನದಡಿ ಇಂದು ಸರ್ವತಂತ್ರ ಸ್ವತಂತ್ರ ಗಣರಾಜ್ಯವಾಗಿ ಭಾರತ ಹೊರಹೊಮ್ಮಿದೆ. ಸಮಾಜ ಸುಧಾರಣೆಗಾಗಿ ಹೋರಾಡಿದ ನಮ್ಮ ಪೂರ್ವಿಕರು, ದೇಶದ ಸಾಧು–ಸಂತರು, ಮಹನೀಯರೆಲ್ಲರ ಆದರ್ಶ ಮೌಲ್ಯಗಳನ್ನು ಸಂವಿಧಾನದಲ್ಲಿ ಅಂಬೇಡ್ಕರ್ ಅಡಕಗೊಳಿಸಿ ಎಲ್ಲರಿಗೂ ಸಮಾನತೆ ದೊರೆಯುವಂತೆ ಮಾಡಿದ್ದಾರೆ ಎಂದು ತಿಳಿಸಿದರು.

ನಗರಾಭಿವೃದ್ಧಿ ಜಿಲ್ಲಾ ಕೋಶ ಯೋಜನಾ ನಿರ್ದೇಶಕಿ ಸುಧಾ ಮಾತನಾಡಿದರು. ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಮುನಿರಾಜು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ ಪ್ರಸನ್ನ, ನಗರಸಭೆ ಪೌರಾಯುಕ್ತ ಎಸ್.ವಿ.ರಾಮದಾಸ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್.ಚಿದಂಬರ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪನಿರ್ದೇಶಕ ಯೋಗಾನಂದ, ಜಿಪಂ ಸಹಾಯಕ ಕಾರ್ಯದರ್ಶಿ ಶ್ರೀಕಂಠರಾಜೇ ಅರಸ್ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಗಾಯಕರಾದ ಸಿ.ಎಂ.ನರಸಿಂಹಮೂರ್ತಿ ಹಾಗೂ ಮಂಜುನಾಥ್ ತಂಡ ನಡೆಸಿಕೊಟ್ಟ ಭೀಮ ಗೀತೆ ಗಾಯನ ಗಮನ ಸೆಳೆಯಿತು. ವೇದಿಕೆ ಕಾರ್ಯಕ್ರಮಕ್ಕೂ ಮೊದಲು ಜಿಲ್ಲಾಡಳಿತ ಭವನ ಆವರಣದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆಗೆ ಗಣ್ಯರು ಮಾಲಾರ್ಪಣೆ ಮಾಡಿದರು.

> ದೇಶದಲ್ಲಿ ವಿಭಿನ್ನ ಧರ್ಮ, ಸಂಸ್ಕೃತಿಗಳಿವೆ. ಅವೆಲ್ಲವನ್ನು ಒಂದೇ ಚೌಕಟ್ಟಿನಡಿ ತರುವ ಕೆಲಸ ಸಂವಿಧಾನದಿಂದ ಮಾತ್ರ ಸಾಧ್ಯವಾಗಲಿದೆ. ಸಾಮಾಜಿಕ ಅಸಮಾನತೆಯಿಂದ ಕೂಡಿದ್ದ ಎಲ್ಲಾ ವರ್ಗಗಳಿಗೂ ಅವಕಾಶ, ಅನುಕೂಲ ಕಲ್ಪಿಸಲು ಸಂವಿಧಾನ ರಚನೆಯಂತಹ ಮಹತ್ಕಾರ್ಯವನ್ನು ಅಂಬೇಡ್ಕರ್ ಮಾಡಿದ್ದಾರೆ. ದೇಶದ ಪ್ರತಿಯೊಬ್ಬರು ಸಂವಿಧಾನದ ಬಗ್ಗೆ ಹೆಚ್ಚಿನ ಅರಿವು ಹೊಂದಬೇಕು. ಸಂವಿಧಾನದ ಆಶಯಗಳನ್ನು ಈಡೇರಿಸುವ ನಿಟ್ಟಿನಲ್ಲಿ ನಾವೆಲ್ಲರೂ ಸಂವಿಧಾನವನ್ನು ಗೌರವಿಸಬೇಕಾಗಿದೆ.
>
> -ಡಾ.ಬಿ.ಟಿ.ಕವಿತಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

ಕೋಟೆಕೆರೆ ಗ್ರಾಮದಲ್ಲಿ ಮಹದೇಶ್ವರ ಉತ್ಸವ



ಬೇಗೂರು ಸಮೀಪದ ಕೋಟೆಕೆರೆ ಗ್ರಾಮದಲ್ಲಿ ಮಹದೇಶ್ವರ ಸ್ವಾಮಿ ಉತ್ಸವ ವಿಜೃಂಭಣೆಯಿಂದ ನಡೆಯಿತು.

ಬೇಗೂರು, ನ.26–ಗುಂಡ್ಲುಪೇಟೆ ತಾಲೂಕಿನ ಬೇಗೂರು ಸಮೀಪದ ಕೋಟೆಕೆರೆ ಗ್ರಾಮದ ಶ್ರೀ ಮಹದೇಶ್ವರಸ್ವಾಮಿ ದೇವಾಲಯದಲ್ಲಿ ಕಡೇ ಕಾರ್ತಿಕ ಸೋಮವಾರ ಅಂಗವಾಗಿ ವಿಶೇಷ ಪೂಜೆ ಮತ್ತು ಕೊಂಡೋತ್ಸವ ವಿಜೃಂಭಣೆಯಿಂದ ನಡೆಯಿತು. ಗ್ರಾಮದ ಪ್ರಮುಖ ಬೀದಿಗಳಲ್ಲಿ ಉತ್ಸವ ನಡೆಯಿತು. ದೇವಾಲಯವನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಿ, ರಸ್ತೆಯಲ್ಲಿ ರಂಗೋಲಿ ಚಿತ್ತಾರ ಬಿಡಿಸಲಾಗಿತ್ತು.

ಗ್ರಾಪಂ ಉಪಚುನಾವಣೆ: ಗುರುಪ್ರಸಾದ್, ಶೋಭಗೆ ಜಯ

ಚಾಮರಾಜನಗರ, ನ.26–ತಾಲೂಕಿನ ಸಾಗಡೆ ಗ್ರಾಮ ಪಂಚಾಯಿತಿ 3ನೇ ಬ್ಲಾಕ್‌ಗೆ ನಡೆದ ಉಪ ಚುನಾವಣೆಯಲ್ಲಿ ಬಿಜೆಪಿ ಬೆಂಬಲಿತ ಎಸ್.ಆರ್.ಗುರುಪ್ರಸಾದ್ ಜಯಗಳಿಸಿದರು.

23ರಂದು ಉಪಚುನಾವಣೆ ನಡೆದಿದ್ದು, ಮಂಗಳವಾರ ತಹಸೀಲ್ದಾರ್ ಕಚೇರಿಯಲ್ಲಿ ನಡೆದ ಮತ ಎಣಿಕೆಯಲ್ಲಿ ಎಸ್.ಆರ್.ಗುರುಪ್ರಸಾದ್‌ಗೆ 467 ಮತ, ಬಸವಣ್ಣಗೆ 260 ಮತ ಬಂದಿದ್ದು, 26 ಮತ ತಿರಸ್ಕೃತವಾದವು. ಬಿಜೆಪಿ ಬೆಂಬಲಿತ ಎಸ್.ಆರ್.ಗುರುಪ್ರಸಾದ್ ಗೆಲುವು ಸಾಧಿಸಿದರು. ಇದೇ ವೇಳೆ ಗ್ರಾಪಂ ಸದಸ್ಯರಾದ ಕೃಷ್ಣಶೆಟ್ಟಿ, ದೀಪು, ನಾಗಪ್ಪ, ಕುಮಚಹಳ್ಳಿ ಸ್ವಾಮಿ, ರವಿಕುಮಾರ್, ಪಿಎಸಿಸಿ ಬ್ಯಾಂಕ್ ಉಪಾಧ್ಯಕ್ಷ ರಾಮನಾಯಕ, ನವೀನ್, ತೇಜ್, ಪ್ರದೀಪ, ಅರಸನಾಯಕ, ಚಿಕ್ಕರಂಗನಾಯಕ ಇತರರು ಹಾಜರಿದ್ದರು.

ಶೋಭಗೆ ಜಯ: ಚಾಮರಾಜನಗರ ತಾಲೂಕಿನ ಮಂಗಲ ಗ್ರಾಮ ಪಂಚಾಯಿತಿಯ 2ನೇ ಬ್ಲಾಕ್ (ಪರಿಶಿಷ್ಟ ಜಾತಿ ಮಹಿಳಾ ಮೀಸಲು) ನಡೆದ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿತ ಶೋಭ ಜಯಗಳಿಸಿದರು. 23ರಂದು ಉಪ ಚುನಾವಣೆ ನಡೆದಿದ್ದು, ಮಂಗಳವಾರ ನಡೆದ ಮತ ಎಣಿಕೆಯಲ್ಲಿ ಶೋಭಗೆ 394 ಮತ, ಶಾಂತಮ್ಮಗೆ 93 ಮತ ಬಂದವು. ಗ್ರಾಪಂ ಮಾಜಿ ಅಧ್ಯಕ್ಷ ಶಿವಣ್ಣ, ಮಹದೇವಸ್ವಾಮಿ, ಶಿವಣ್ಣ ಟೈಲ್ಸ್, ನವೀನ್, ಶಶಾಂಕ್, ಮಂಜು, ಯುವ ಕಾಂಗ್ರೆಸ್ ಜಿಲ್ಲಾ ಉಪಾಧ್ಯಕ್ಷ ನಾಗೇಂದ್ರ ನಾಯಕ, ಪ್ರಧಾನ ಕಾರ್ಯದರ್ಶಿಗಳಾದ ಶ್ರೀನಿವಾಸ, ಮಧು ಇತರರು ಹಾಜರಿದ್ದರು.

ಮಹಾರಾಷ್ಟ್ರ ಸಿಎಂ ಸ್ಥಾನಕ್ಕೆ ಏಕನಾಥ್ ಶಿಂಧೆ ರಾಜೀನಾಮೆ!



ಮಹಾರಾಷ್ಟ್ರ ಸಿಎಂ ಏಕನಾಥ್ ಶಿಂಧೆ ರಾಜೀನಾಮೆ ನೀಡುತ್ತಿರುವುದು

ಮುಂಬೈ: ಮಹಾರಾಷ್ಟ್ರ ವಿಧಾನಸಭೆ ಚುನಾವಣೆ ಮುಕ್ತಾಯದ ಬೆನ್ನಲ್ಲೇ ನೂತನ ಸರ್ಕಾರ ರಚನೆಗೆ ಅನುವು ಮಾಡಿಕೊಡುವ ನಿಟ್ಟಿನಲ್ಲಿ ಮಹಾರಾಷ್ಟ್ರ ಸಿಎಂ ಏಕನಾಥ್ ಶಿಂಧೆ ಮಂಗಳವಾರ ರಾಜೀನಾಮೆ ನೀಡಿದ್ದಾರೆ. ಮಹಾರಾಷ್ಟ್ರ ಸಿಎಂ ಏಕನಾಥ್ ಶಿಂಧೆ ಮುಂಬೈನ ರಾಜಭವನದಲ್ಲಿ ರಾಜ್ಯಪಾಲ ಸಿಪಿ ರಾಧಾಕೃಷ್ಣನ್ ಅವರನ್ನು ಭೇಟಿ ಮಾಡಿ ತಮ್ಮ ಸಿಎಂ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ. ಈ ವೇಳೆ ಉಪ ಮುಖ್ಯಮಂತ್ರಿಗಳಾದ ಅಜಿತ್ ಪವಾರ್ ಮತ್ತು ದೇವೇಂದ್ರ ಫಡ್ನವಿಸ್ ಕೂಡ ಇದ್ದರು.

ಮಹಾರಾಷ್ಟ್ರ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ, ಶಿವಸೇನೆ ಮತ್ತು ಎನ್‌ಸಿಪಿ ಒಳಗೊಂಡ ಮಹಾಯುತಿ ಮೈತ್ರಿಕೂಟ ಜಯಭೇರಿ ಬಾರಿಸಿದೆ. ಹೊಸ ಸಿಎಂ ಪ್ರಮಾಣ ವಚನ ಸ್ವೀಕರಿಸುವವರೆಗೆ ಹಂಗಾಮಿ ಮುಖ್ಯಮಂತ್ರಿಯಾಗಿ ಕಾರ್ಯನಿರ್ವಹಿಸುವಂತೆ ಶಿಂಧೆ ಅವರಿಗೆ ರಾಜ್ಯಪಾಲರು ಸೂಚಿಸಿದ್ದರು ಎನ್ನಲಾಗಿದೆ.

ಮಹಾರಾಷ್ಟ್ರ ವಿಧಾನಸಭೆಯ ಅವಧಿ ಇಂದಿಗೆ ಮುಕ್ತಾಯವಾಗಲಿದೆ ಬಿಜೆಪಿ, ಶಿಂಧೆ ನೇತೃತ್ವದ ಶಿವಸೇನೆ ಮತ್ತು ಅಜಿತ್ ಪವಾರ್ ಅವರ ಎನ್‌ಸಿಪಿಯ ಮಹಾಯುತಿ ಮೈತ್ರಿಕೂಟವು 288 ಸದಸ್ಯ ಬಲದ ವಿಧಾನಸಭೆಯಲ್ಲಿ 230 ಸ್ಥಾನಗಳನ್ನು ಗೆದ್ದು ಭಾರಿ ಗೆಲುವು ಸಾಧಿಸಿದ್ದರೂ, ಮುಂದಿನ ಸಿಎಂ ಯಾರಾಗಬೇಕೆಂಬುದರ ಬಗ್ಗೆ ಆಡಳಿತಾರೂಢ ಒಕ್ಕೂಟದ ನಾಯಕರಿಂದ ಒಮ್ಮತ ಬರಬೇಕಿದೆ

ಸಂವಿಧಾನ ದಿನ ಆಚರಣೆ



ಮೈಸೂರಿನ ಕುಕ್ಕರಹಳ್ಳಿ ಶಾಲೆಯಲ್ಲಿ 75ನೇ ಸಂವಿಧಾನ ದಿನ ಆಚರಿಸಲಾಯಿತು. ಕಾರ್ಯಕ್ರಮವನ್ನು ಮುಖ್ಯ ಅತಿಥಿ ಕಾಂಗ್ರೆಸ್‌ನ ಪ್ರಧಾನ ಕಾರ್ಯದರ್ಶಿ ಶ್ರೀನಿವಾಸ್ ಕುಮಾರ್ ಉದ್ಘಾಟಿಸಿದರು. ಮುಖ್ಯ ಶಿಕ್ಷಕರಾದ ಚಂದ್ರಶೇಖರ್, ಮಹೇಶ್, ಚಂದ್ರಮೋಹನ್, ವಿಶ್ವನಾಥ್, ಸುನಿಲ್ ಇದ್ದರು.

ಅಸ್ಸಾಂನಲ್ಲಿ 'ಉಲ್ಫಾ' ಮೇಲಿನ ನಿಷೇಧ ಇನ್ನೂ 5 ವರ್ಷ ವಿಸ್ತರಿಸಿದ ಕೇಂದ್ರ ಸರ್ಕಾರ

ಗುವಾಹಟಿ: ಭಾರತದಿಂದ ಅಸ್ಸಾಂ ಪ್ರತ್ಯೇಕಗೊಳಿಸುವ ಉದ್ದೇಶದ ಕೆಲಸ ಮುಂದುವರಿಕೆ ಮತ್ತು ಸುಲಿಗೆ, ಹಿಂಸಾಚಾರಕ್ಕಾಗಿ ಇತರ ದಂಗೆಕೋರ ಗುಂಪುಗಳೊಂದಿಗೆ ಸಂಪರ್ಕದಲ್ಲಿರುವುದಕ್ಕಾಗಿ ಬಂಡುಕೋರ ಸಂಘಟನೆ ಯುನೈಟೆಡ್ ಲಿಬರೇಶನ್ ಫ್ರಂಟ್ ಆಫ್ ಅಸೋಮ್ 'ಉಲ್ಫಾ' ಮೇಲಿನ ನಿಷೇಧವನ್ನು ಕೇಂದ್ರಸರ್ಕಾರ ಮತ್ತೆ ಐದು ವರ್ಷಗಳವರೆಗೆ ವಿಸ್ತರಿಸಿದೆ.

ಉಲ್ಫಾವನ್ನು 1990 ರಲ್ಲಿ ಮೊದಲ ಬಾರಿಗೆ ನಿಷೇಧಿತ ಸಂಘಟನೆ ಎಂದು ಘೋಷಿಸಲಾಗಿತ್ತು. ಅಂದಿನಿಂದ ನಿಷೇಧವನ್ನು ನಿಯತಕಾಲಿಕವಾಗಿ ವಿಸ್ತರಿಸಲಾಗಿದೆ. ಉಲ್ಫಾ ತನ್ನ ಎಲ್ಲಾ ಬಣಗಳು ಮತ್ತು ಮುಂಚೂಣಿ ಸಂಘಟನೆಗಳೊಂದಿಗೆ ಭಾರತದ ಸಾರ್ವಭೌಮತೆ ಮತ್ತು ಸಮಗ್ರತೆಗೆ ಹಾನಿಯಾಗುವಂತಹ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದೆ ಎಂದು ಕೇಂದ್ರ ಗೃಹ ಸಚಿವಾಲಯ ಅಧಿಸೂಚನೆಯಲ್ಲಿ ಹೇಳಿದೆ.

ಅಸ್ಸಾಂ ಅನ್ನು ಭಾರತದಿಂದ ಪ್ರತ್ಯೇಕಿಸುವುದು ತನ್ನ ಉದ್ದೇಶವೆಂದು ಉಲ್ಫಾ ಘೋಷಿಸಿದೆ. ತಮ್ಮ ಸಂಘಟನೆಗೆ ಹಣಕ್ಕಾಗಿ ಸುಲಿಗೆ ಮತ್ತು ಬೆದರಿಕೆಯನ್ನು ಮುಂದುವರೆಸಿದೆ. ಹಿಂಸಾಚಾರ ನಡೆಸಲು ಇತರ ಬಂಡಾಯ ಗುಂಪುಗಳೊಂದಿಗೆ ಸಂಪರ್ಕವನ್ನು ಹೊಂದಿದೆ ಎಂದು ಹೇಳಿದೆ.



ಅಸ್ಸಾಂನಲ್ಲಿ ನವೆಂಬರ್ 27, 2019 ರಿಂದ ಜುಲೈ 1, 2024 ರ ಅವಧಿಯಲ್ಲಿ ಹಲವಾರು ಸ್ಫೋಟಗಳು ಅಥವಾ ಸ್ಫೋಟಕ ಅಳವಡಿಕೆಯ ಹಲವಾರು ಪ್ರಕರಣಗಳು ಸೇರಿದಂತೆ 16 ಕ್ರಿಮಿನಲ್ ಪ್ರಕರಣಗಳಲ್ಲಿ ಭಾಗಿಯಾಗಿರುವ ಈ ಸಂಘಟನೆಯು ಅಕ್ರಮ ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳನ್ನು ಹೊಂದಿದೆ ಮತ್ತು ಅಸ್ಸಾಂನಾದ್ಯಂತ 2024ರ ಸ್ವಾತಂತ್ರ್ಯ ದಿನದವರೆಗೂ ಹಲವು ಸ್ಫೋಟಗಳನ್ನು ನಡೆಸಿದೆ ಎಂದು ಅಧಿಸೂಚನೆ ಹೇಳಿದೆ.

ಕಳೆದ ಐದು ವರ್ಷಗಳಲ್ಲಿ ಮೂರು ಉಲ್ಫಾ ಕಾರ್ಯಕರ್ತರು ಪೊಲೀಸ್ ಅಥವಾ ಭದ್ರತಾ ಪಡೆಗಳ ಕಾರ್ಯಾಚರಣೆಯಲ್ಲಿ ಹತ್ಯೆಯಾಗಿದ್ದಾರೆ. ಅದರ ಕಾರ್ಯಕರ್ತರ ವಿರುದ್ಧ 15 ಪ್ರಕರಣಗಳನ್ನು ದಾಖಲಿಸಲಾಗಿದ್ದು, ಮೂರು ಆರೋಪಪಟ್ಟಿಗಳನ್ನು ದಾಖಲಿಸಲಾಗಿದೆ ಮತ್ತು ಮೂರು ಕೇಡರ್‌ಗಳನ್ನು ವಿಚಾರಣೆಗೆ ಒಳಪಡಿಸಲಾಗಿದೆ ಎಂದು ಗೃಹ ಸಚಿವಾಲಯ ತಿಳಿಸಿದೆ.

ಬಾಂಗ್ಲಾದೇಶ ಪ್ರತಿಭಟನೆಯಲ್ಲಿ ಬಂಧಿತ ಇಸ್ಕಾನ್ ಗುರು ಕೃಷ್ಣದಾಸ್ ವಕೀಲರ ಹತ್ಯೆ

ಢಾಕಾ, ನ.26: ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲೆ ನಡೆಯುತ್ತಿದ್ದ ಹಿಂಸಾಚಾರ ವಿರುದ್ಧ ಹಿಂದೂಗಳ ಸಂಘಟಿಸಿ ಪ್ರತಿಭಟಿಸಿದ ಹಿಂದೂ ನಾಯಕ, ಇಸ್ಕಾನ್ ಗುರು ಚಿನ್ಮೋಯ್ ಕೃಷ್ಣ ದಾಸ್ ಬ್ರಹ್ಮಾಚಾರಿಯನ್ನು ಬಂಧಿಸಲಾಗಿದೆ. ದೇಶದ್ರೋಹದ ಆರೋಪ ಹೊರಿಸಿರುವ ಬಾಂಗ್ಲಾದೇಶದ ಮೊಹಮ್ಮದ್ ಯೂನಸ್ ಸರ್ಕಾರ ಕೃಷ್ಣದಾಸ್ ಬಂಧಿಸಿದೆ. ಕೃಷ್ಣ ದಾಸ್ ಬಂಧನದ ಬೆನ್ನಲ್ಲೇ ಬಿಡುಗಡೆಗಾಗಿ ಭಾರಿ ಪ್ರತಿಭಟನೆ ಆರಂಭಗೊಂಡಿದೆ. ಇಂದು ಕೃಷ್ಣದಾಸ್ ನ್ಯಾಯಲಕ್ಕೆ ಹಾಜರುಪಡಿಸಲಾಗಿತ್ತು ಆದರೆ ನ್ಯಾಯಾಲಯ ಜಾಮೀನು ನಿರಾಕರಿಸಲಾಗಿದೆ. ಇದರ ಬೆನ್ನಲ್ಲೇ ಕೋರ್ಟ್ ಹೊರಗಡೆ ನಡೆದ ಪ್ರತಿಭಟನೆಯಲ್ಲಿ ಕೃಷ್ಣದಾಸ್ ವಕೀಲರ ಹತ್ಯೆ ಮಾಡಲಾಗಿದೆ.

ಮಾಧ್ಯಮ ವರದಿ ಪ್ರಕಾರ, ಬಾಂಗ್ಲಾದೇಶ ನ್ಯಾಯಾಲಯದ ಹೊರಗೆ ಮಂಗಳವಾರ ನಡೆದ ಉಗ್ರ ಪ್ರತಿಭಟನೆಯಲ್ಲಿ ಹಿಂದೂ ಪೂಜಾರಿ ಚಿನ್ಮೋಯ್ ಕೃಷ್ಣ ದಾಸ್ ಅವರ ಪರ ವಕೀಲರೊಬ್ಬರನ್ನು ಹತ್ಯೆ ಮಾಡಲಾಗಿದೆ. ಚಿನ್ಮೋಯ್ ಕೃಷ್ಣ ದಾಸ್ ಅವರ ಬಂಧನವನ್ನು ವಿರೋಧಿಸಿ ಬಾಂಗ್ಲಾದೇಶದ ಚಟ್ಟೋಗ್ರಾಮ್ ನ್ಯಾಯಾಲಯದ ಹೊರಗೆ ಹೆಚ್ಚಿನ ಸಂಖ್ಯೆಯಲ್ಲಿ ಹಿಂದೂಗಳು ಜಮಾಯಿಸಿದ್ದರು. ಈ ವೇಳೆ ಪೊಲೀಸರು ಪ್ರತಿಭಟನಾಕಾರರ ಮೇಲೆ ಗುಂಡು ಹಾರಿಸಿದ್ದಾರೆ ಎಂದು ವರದಿಯಾಗಿದೆ.

ಬಾಂಗ್ಲಾದೇಶ ಸಮ್ಮಿಲಿತೋ ಸನಾತನ ಜಾಗರಣ ಜೋಟೆಯ ನಾಯಕ ಚಿನ್ಮೋಯ್ ಕೃಷ್ಣ ದಾಸ್ ಅವರನ್ನು ಜೈಲಿಗೆ ಕರೆದೊಯ್ಯುತ್ತಿದ್ದ ವಾಹನವನ್ನು ಬೆಂಬಲಿಗರು ತಡೆದಾಗ ಸೈಫುಲ್ ಇಸ್ಲಾಂ ಅಲಿಫ್ ಎಂಬ ವಕೀಲರು ಹತ್ಯೆಯಾಗಿದ್ದಾರೆ. ಪ್ರತಿಭಟನೆ ತೀವ್ರಗೊಳ್ಳುತ್ತಿದ್ದಂತೆ ಪೊಲೀಸರು ಜನಸಂದಣಿಯನ್ನು ಚದುರಿಸಲು ಸೌಂಡ್ ಗ್ರೆನೇಡ್‌ಗಳನ್ನು ಬಳಸಿದ್ದಾರೆ. ಈ ಹಿಂಸಾಚಾರದಲ್ಲಿ ಕನಿಷ್ಠ 7 ರಿಂದ 8 ಮಂದಿ ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿದ್ದಾರೆ.

ಬಂಧಿತ ಇಸ್ಕಾನ್ ಗುರೂಜಿ ಚಿನ್ಮೋಯ್ ಕೃಷ್ಣ ದಾಸ್ ಅವರ ಬೆಂಬಲಿಗರು ಮತ್ತು ಪೊಲೀಸರ ನಡುವೆ ನಡೆದ ಹಿಂಸಾತ್ಮಕ ಘರ್ಷಣೆಯ ಹಲವಾರು ವೀಡಿಯೊಗಳು ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡುತ್ತಿವೆ. ಚಿನ್ಮೋಯ್ ಕೃಷ್ಣ ದಾಸ್ ಅವರಿಗೆ ನ್ಯಾಯಾಲಯ ಜಾಮೀನು ನಿರಾಕರಿಸಿದ ನಂತರ ಈ ಗಲಭೆ ತೀವ್ರಗೊಂಡಿತು. ಪ್ರತಿಭಟನಾಕಾರರನ್ನು ಚದುರಿಸಲು ಪೊಲೀಸರು ಅವರ ಮೇಲೆ ಲಾಠಿ ಚಾರ್ಜ್ ಮಾಡಿದ್ದಾರೆ.

ಬಾಂಗ್ಲಾದೇಶ ಮಾಧ್ಯಮಗಳ ಪ್ರಕಾರ, ಪ್ರತಿಭಟನಾಕಾರರು ಹಿಂದೂ ನಾಯಕರನ್ನು ಕರೆದೊಯ್ಯುತ್ತಿದ್ದ ಜೈಲು ವಾಹನವನ್ನು ತಡೆದಾಗ ಹಿಂಸಾಚಾರ ನಡೆದಿದೆ ಎಂದಿದೆ ಸುಮಾರು ಮೂರು ಗಂಟೆಗಳ ಬಿಕ್ಕಟ್ಟಿನ ನಂತರ, ಪೊಲೀಸರು ಅಶ್ರುವಾಯು, ಸೌಂಡ್ ಗ್ರೆನೇಡ್‌ಗಳನ್ನು ಪ್ರತಿಭಟನೆ ಹತ್ತಿಕ್ಕಲಾಗಿದೆ ಎಂದು ವರದಿಯಾಗಿದೆ

ಸಂವಿಧಾನದ ಬಲದಿಂದಲೇ ಜಾತೀಯತೆ ಕಡಿಮೆಯಾಗುತ್ತಿದೆ

●ಮಹಾರಾಣಿ ಮಹಿಳಾ ಕಾಲೇಜಿನ ಡಾ॥ ಎಂ.ವಿಜಯಮ್ಮ ಅಭಿಮತ●ಭಾರತದ ಸಂವಿಧಾನ ಸರ್ವಶ್ರೇಷ್ಠವಾಗುವಲ್ಲಿ ಡಾ॥ ಅಂಬೇಡ್ಕರ್ ಪರಿಶ್ರಮವಿದೆ

ಮೈಸೂರು, ನ.26(ಎಸ್‌ಬಿಡಿ)– ಸಂವಿಧಾನದ ಬಲದಿಂದ ಜಾತೀಯತೆ ಕಡಿಮೆಯಾಗುತ್ತಿದೆ ಎಂದು ಮಹಾರಾಣಿ ಮಹಿಳಾ ಕಲಾ ಕಾಲೇಜಿನ ಪ್ರಾಂಶುಪಾಲರಾದ ಡಾ.ಎಂ.ವಿಜಯಮ್ಮ ಅಭಿಪ್ರಾಯಿಸಿದರು.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಡಾ.ಬಿ.ಆರ್.ಅಂಬೇಡ್ಕರ್ ಅಧ್ಯಯನ ಮತ್ತು ಸಂಶೋಧನಾ ಕೇಂದ್ರ ಹಾಗೂ ಮಹಾರಾಣಿ ಮಹಿಳಾ ಕಲಾ ಕಾಲೇಜು ಸಹಯೋಗದಲ್ಲಿ ಮುಕ್ತ ಗಂಗೋತ್ರಿಯ ಕಾವೇರಿ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ ಸಂವಿಧಾನ ದಿನಾಚರಣೆಯನ್ನು ಗಣ್ಯರೊಡಗೂಡಿ ಉದ್ಘಾಟಿಸಿ, ಮಾತನಾಡಿದರು.

ನಾನೂ ಜಾತೀಯತೆಯ ಬೇಗೆಯಲ್ಲಿ ಬೆಂದಿದ್ದೇನೆ. ಆದರೆ ಸಂವಿಧಾನದ ಬಲದಿಂದ ಇತ್ತೀಚೆಗೆ ಜಾತೀಯತೆ ಕಡಿಮೆಯಾಗುತ್ತಿದೆ. ಇಂತಹ ಶ್ರೇಷ್ಠ ಸಂವಿಧಾನ ನೀಡಿದ ಡಾ.ಬಿ.ಆರ್.ಅಂಬೇಡ್ಕರ್ ಅವರ ಸ್ಮರಣೆ ಒಂದು ದಿನಕ್ಕೆ ಸೀಮಿತವಾಗಬಾರದು. ಸಮ ಸಮಾಜಕ್ಕೆ ಭದ್ರ ಬುನಾದಿ ಹಾಕಿದ ಅವರನ್ನು ಜೀವನದ ಪ್ರತಿ ಕ್ಷಣವೂ ನೆನೆಯಬೇಕು ಎಂದರು.

ಡಾ.ಅಂಬೇಡ್ಕರ್ ಪುಣ್ಯಪುರುಷ ಹಾಗೂ ಯುಗಪುರುಷ. ಭಾರತ ಮಾತೆ ಮಡಿಲಲ್ಲಿ ಈ ಮಹಾನ್ ಚೇತನ ಜನಿಸಿದ್ದೇ ಪುಣ್ಯ. ಮಾನವತಾವಾದಿಯಾಗಿದ್ದ ಅವರು ಸ್ತ್ರೀಯರ ಬಗ್ಗೆ ಅಪರಿಮಿತ ಕರುಣೆ, ಗೌರವ ಹೊಂದಿದ್ದರು. ಸ್ತ್ರೀಯರಿಗೆ ವಾಕ್ ಸ್ವಾತಂತ್ರ್ಯವೂ ಇಲ್ಲದ ಸಂದರ್ಭದಲ್ಲಿ ಸಾಮಾಜಿಕ, ಧಾರ್ಮಿಕ, ಶೈಕ್ಷಣಿಕ, ರಾಜಕೀಯ ಸಮಾನತೆ ಬಗ್ಗೆ ಚಿಂತನೆ ಮಾಡಿದ್ದರು. ಎಲ್ಲಾ ಕ್ಷೇತ್ರದಲ್ಲೂ ಮಹಿಳೆಯರಿಗೆ ನಿಗದಿತ ಮೀಸಲಾತಿ ಸಿಕ್ಕಾಗ ಅಂಬೇಡ್ಕರ್ ಅವರ ಆಶಯ ಸಾಕಾರವಾಗುತ್ತದೆ ಎಂದು ಹೇಳಿದರು.



ಮೈಸೂರಿನ ಮುಕ್ತಗಂಗೋತ್ರಿಯ ಕಾವೇರಿ ಸಭಾಂಗಣದಲ್ಲಿ ನಡೆದ 'ಸಂವಿಧಾನ ದಿನಾಚರಣೆ'ಯನ್ನು ಗಣ್ಯರು ಉದ್ಘಾಟಿಸಿದರು.

ಸರ್ವಶ್ರೇಷ್ಠ ಸಂವಿಧಾನ: ಮುಕ್ತ ವಿವಿ ಕುಲಸಚಿವ ಪ್ರೊ.ಕೆ.ಬಿ.ಪ್ರವೀಣ್ ಮಾತನಾಡಿ, ಸ್ವಾತಂತ್ರ್ಯ ನಂತರ ನಮ್ಮದೇ ಆದ ಸಂವಿಧಾನ ಅಗತ್ಯ ಎದುರಾದಾಗ ಸಂವಿಧಾನ ರಚನಾ ಸಮಿತಿ ರಚನೆಯಾಯಿತು. ಕರಡು ಸಮಿತಿಯಲ್ಲಿದ್ದ ಸದಸ್ಯರು ಕಾರಣಾಂತರಗಳಿಂದ ದೂರ ಉಳಿದಾಗ ಡಾ.ಬಿ.ಆರ್.ಅಂಬೇಡ್ಕರ್ ಅವರೊಬ್ಬರೇ ಧೈರ್ಯವಾಗಿ ಸಮಿತಿ ಕಾರ್ಯವನ್ನು ಪೂರ್ಣಗೊಳಿಸಿದರು. 1949ರ ನ.19ರ ನಿರ್ಧಾರದಂತೆ ನ.26ರಂದು ಸರ್ವಶ್ರೇಷ್ಠ ಸಂವಿಧಾನವನ್ನು ಅರ್ಪಿಸಿಕೊಳ್ಳಲಾಯಿತು. ಆ ದಿನದ ಸ್ಮರಣೆಗಾಗಿ ಸಂವಿಧಾನ ದಿನ ಆಚರಿಸುತ್ತೇವೆ. ನಂತರ 1950ರ ಜ.26 ಸಂವಿಧಾನ ಜಾರಿಯಾದ ಹಿನ್ನೆಲೆಯಲ್ಲಿ ಅಂದು ಗಣರಾಜ್ಯೋತ್ಸವ ಆಚರಿಸುತ್ತೇವೆ ಎಂದು ತಿಳಿಸಿದರು.

ಡಾ.ಅಂಬೇಡ್ಕರ್ ಅವರು ಎಲ್ಲಾ ಧರ್ಮ ಗ್ರಂಥಗಳು, ಕಲೆ, ಸಂಸ್ಕೃತಿ, ಪರಂಪರೆ, ಆಚರಣೆ, ಧಾರ್ಮಿಕ ಸಂಪ್ರದಾಯ ಎಲ್ಲವನ್ನೂ ಅಧ್ಯಯನ ಮಾಡಿ, ಹಲವು ದೇಶಗಳ ಉತ್ತಮ ವಿಚಾರಗಳನ್ನು ಸಂಗ್ರಹಿಸಿಕೊಂಡು ತಮ್ಮ ವಿದ್ವತ್ತನ್ನೆಲ್ಲಾ ಧಾರೆ ಎರೆದು ಸಂವಿಧಾನ ರಚಿಸಿದ್ದಾರೆ. ಇದು ಪವಿತ್ರ ಗ್ರಂಥ, ಎಲ್ಲಾ ಕಾನೂನುಗಳ ಮೂಲ. ಬದಲಾವಣೆ ಅಗತ್ಯವಿದ್ದಾಗ ತಿದ್ದುಪಡಿ ಮಾಡಲಾಗಿದೆಯೇ ಹೊರತು ಸಂವಿಧಾನ ಗಟ್ಟಿಯಾಗಿದೆ. ದೇಶದ ಆಸ್ತಿಯಾಗಿರುವ ಯುವ ಜನತೆ ಸಂವಿಧಾನದ ಮಹತ್ವವನ್ನು ಅರ್ಥ ಮಾಡಿಕೊಳ್ಳಬೇಕು. ಸಂವಿಧಾನದ ಕಿರುಹೊತ್ತಿಗೆಯನ್ನಾದರೂ ಓದಿ, ಅರ್ಥೈಸಿಕೊಳ್ಳಬೇಕು. ಸಂವಿಧಾನ ಕುರಿತ ಕಾರ್ಯಾಗಾರಗಳನ್ನು ಹೆಚ್ಚಾಗಿ ನಡೆಸಬೇಕು ಎಂದು ಸಲಹೆ ನೀಡಿದರು.

ಬಹುಮಾನ ವಿತರಣೆ: ಇದೇ ವೇಳೆ ಕರ್ನಾಟಕ ರಾಜ್ಯ ಮುಕ್ತ ವಿವಿ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ಅವರು 'ಸಂವಿಧಾನ ದಿನಾಚರಣೆ' ಅಂಗವಾಗಿ ನಡೆಸಲಾದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ಆರ್.ಮಾನಸ (ಪ್ರಥಮ), ಗುರುಪಾದಪ್ಪ ಸುರೇಶ್ (ದ್ವಿತೀಯ), ತೇಜಸ್ವಿನಿ(ತೃತೀಯ) ಹಾಗೂ ಭಾಷಣ ಸ್ಪರ್ಧೆ ವಿಜೇತರಾದ ಗುರುಪಾದಪ್ಪ ಸುರೇಶ್(ಪ್ರ), ಪಿ.ಎಂ.ಕಿಶೋರ್(ದ್ವಿ) ಹಾಗೂ ಸಹನಾ(ತೃ) ಅವರಿಗೆ ನಗದು ಬಹುಮಾನ ಹಾಗೂ ಪ್ರಮಾಣ ಪತ್ರ ನೀಡಿದರು.

ಕಾರ್ಯಕ್ರಮದಲ್ಲಿ ಮುಕ್ತ ವಿವಿಯ ಹಣಕಾಸು ಅಧಿಕಾರಿ ಎಸ್.ಡಾ.ನಿರಂಜನ್‌ರಾಜ್, ಡಾ.ಬಿ.ಆರ್.ಅಂಬೇಡ್ಕರ್ ಅಧ್ಯಯನ ಮತ್ತು ಸಂಶೋಧನಾ ಕೇಂದ್ರದ ಸಂಯೋಜನಾಧಿಕಾರಿ ಡಾ.ಶಿವಕುಮಾರಸ್ವಾಮಿ, ಮಹಾರಾಣಿ ಮಹಿಳಾ ಕಲಾ ಕಾಲೇಜಿನ ಸಾಂಸ್ಕೃತಿಕ ವೇದಿಕೆ ಅಧ್ಯಾಪಕ ಕಾರ್ಯದರ್ಶಿ ಡಾ.ಜಿ.ಬಿ.ದೊರೆಸ್ವಾಮಿ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರಲ್ಲಿ ತೀವ್ರ ಗಸ್ತು ಕಾರ್ಯಾಚರಣೆ

2,211 ಐಎಂವಿ, 2,437 ಕೋಟ್ಪಾ, 3,197 ಪೆಟ್ಟಿ ಕೇಸ್ ದಾಖಲು

ಮೈಸೂರು, ನ 26(ಆರ್‌ಕೆ)– ಅಪರಾಧ ಪ್ರಕರಣಗಳನ್ನು ನಿಯಂತ್ರಿಸಲು ಕಟ್ಟುನಿಟ್ಟಿನ ಕ್ರಮಕ್ಕೆ ಮುಂದಾಗಿರುವ ಮೈಸೂರು ನಗರ ಪೊಲೀಸರು, ಸಂಜೆ–ರಾತ್ರಿ ತೀವ್ರ ಗಸ್ತು (ಫುಟ್ ಪಟ್ರೋಲಿಂಗ್) ಕಾರ್ಯಾಚರಣೆಯನ್ನು ತೀವ್ರಗೊಳಿಸಿದ್ದಾರೆ.

ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಮಾರ್ಗದರ್ಶನದಂತೆ ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಡಿಸಿಪಿ ಎಂ. ಮುತ್ತುರಾಜು ಹಾಗೂ ಅಪರಾಧ ಮತ್ತು ಸಂಚಾರ ವಿಭಾಗದ ಡಿಸಿಪಿ ಎಸ್. ಜಾಹ್ನವಿ ಅವರ ನೇತೃತ್ವದಲ್ಲಿ ಎಲ್ಲಾ ಉಪವಿಭಾಗಗಳ ಎಸಿಪಿಗಳು, ಎಲ್ಲಾ ಠಾಣೆಗಳ ಇನ್‌ಸ್ಪೆಕ್ಟರ್, ಸಬ್ ಇನ್‌ಸ್ಪೆಕ್ಟರ್‌ಗಳು ತಮ್ಮ ಸಿಬ್ಬಂದಿಗಳೊಂದಿಗೆ ತಮ್ಮ ವ್ಯಾಪ್ತಿಯಲ್ಲಿ ಕಾಲ್ನಡಿಗೆ ಮೂಲಕ ಪಾರ್ಕ್, ಆಸ್ಪತ್ರೆ, ದೇವಸ್ಥಾನ, ಬಸ್ ನಿಲ್ದಾಣ, ಮಾರುಕಟ್ಟೆ, ಪ್ರಮುಖ ವಾಣಿಜ್ಯ ಕೇಂದ್ರಗಳಿಗೆ ಭೇಟಿ ನೀಡಿ ಸಾರ್ವಜನಿಕರಿಗೆ ಪೊಲೀಸರ ಉಪಸ್ಥಿತಿ ಬಗ್ಗೆ ಜಾಗೃತಿ ಮೂಡಿಸುತ್ತಿದ್ದಾರೆ.

ನಗರ ಪೊಲೀಸ್ ಆಯುಕ್ತರಾಗಿ ಅಧಿಕಾರ ವಹಿಸಿಕೊಂಡ ಬಳಿಕ ಸೀಮಾ ಲಾಟ್ಕರ್ 'ಜನರಿರುವೆಡೆ ಪೊಲೀಸರು ಕಾಣಿಸಿಕೊಳ್ಳಬೇಕು' ಕಲ್ಪನೆಯೊಂದಿಗೆ 'ಈವ್ನಿಂಗ್ ಫುಟ್ ಪಟ್ರೋಲಿಂಗ್' ಕಾರ್ಯಾಚರಣೆಯನ್ನು ಪ್ರತೀದಿನ ಮೈಸೂರು ನಗರ ಪೊಲೀಸರು ತೀವ್ರಗೊಳಿಸಿದ್ದಾರೆ.



ಮೈಸೂರು ನಗರದಾದ್ಯಂತ ಸಂಜೆ ವೇಳೆ ತೀವ್ರಗಸ್ತು ಕಾರ್ಯಾಚರಣೆ ನಡೆಸುತ್ತಿರುವ ಪೊಲೀಸರು.

ಕಾರ್ಯಾಚರಣೆಯಲ್ಲಿ ಸಂಚಾರ ನಿಯಮ ಉಲ್ಲಂಘಿಸಿದವರ ವಿರುದ್ಧ 2,211 ಭಾರತೀಯ ಮೋಟಾರು ವಾಹನ ಕಾಯ್ದೆ ಪ್ರಕರಣ (ಐಎಂವಿ), 2,437 ಕೋಟ್ಪಾ ಹಾಗೂ 3,197 ಪೆಟ್ಟಿ ಕೇಸ್‌ಗಳನ್ನು ದಾಖಲಿಸಲಾಗಿದೆ ಎಂದು ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ಫುಟ್ ಪಟ್ರೋಲಿಂಗ್ ವೇಳೆ ಯುವಕರು, ಮಹಿಳೆಯರು, ಹಿರಿಯ ನಾಗರಿಕರು ಪೊಲೀಸರೊಂದಿಗೆ ತಮಗೆ ಎದುರಾಗುವ ಸಮಸ್ಯೆಗಳ ಬಗ್ಗೆ ಮಾಹಿತಿ ನೀಡುತ್ತಾರೆ. ನಾಗರಿಕರಿಂದ ಬಂದ ಸಲಹೆ–ಮಾರ್ಗದರ್ಶನಗಳೂ ಸಹ ಅಪರಾಧ ಕೃತ್ಯ ನಿಯಂತ್ರಣ ಮತ್ತು ಪತ್ತೆ ಕಾರ್ಯಕ್ಕೆ ಸಹಾಯವಾಗುವುದಲ್ಲದೆ, ಸಮಾಜ ಘಾತುಕ ಶಕ್ತಿಗಳ ಬಗ್ಗೆ ಸುಳಿವು ಲಭ್ಯವಾಗುತ್ತದೆ ಎಂದು ಅವರು ತಿಳಿಸಿದರು.

ಎಲ್ಲೆಂದರಲ್ಲಿ ಪೊಲೀಸರು ಲಭ್ಯವಾಗುವುದರಿಂದ ಧೈರ್ಯವಾಗಿ ಓಡಾಡಬಹುದು, ಎಷ್ಟೋ ಸಮಸ್ಯೆಗಳಿಗೂ ಪರಿಹಾರ ಸಿಗಲಿದೆ. ನಮ್ಮೊಂದಿಗೆ ಪೊಲೀಸರು ಮಾತನಾಡುವುದರಿಂದ ಆತ್ಮವಿಶ್ವಾಸ ಬಂದಿದ್ದು, ಜನಸ್ನೇಹಿ ಪೊಲೀಸ್ ವ್ಯವಸ್ಥೆ ಬಗ್ಗೆ ಸಾರ್ವಜನಿಕರು ಸಾಮಾಜಿಕ ಜಾಲತಾಣಗಳ ಮೂಲಕ ತಮ್ಮ ಅಭಿಪ್ರಾಯ ಹಂಚಿಕೊಳ್ಳುತ್ತಿದ್ದಾರೆ ಎಂದು ಪೊಲೀಸ್ ಆಯುಕ್ತರು ತಿಳಿಸಿದ್ದಾರೆ.

ಎಸ್‌ಡಿಪಿಐ ರಾಜ್ಯಾಧ್ಯಕ್ಷರಾಗಿ ಅಬ್ದುಲ್ ಮಜೀದ್ ಪುನರಾಯ್ಕೆ

ಮೈಸೂರು, ನ.26– ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ (ಎಸ್‌ಡಿಪಿಐ)ದ ರಾಜ್ಯಾಧ್ಯಕ್ಷರಾಗಿ ಅಬ್ದುಲ್ ಮಜೀದ್ ಪುನರಾಯ್ಕೆಯಾಗಿದ್ದಾರೆ.



ಮಜೀದ್

ಮೈಸೂರು ಬನ್ನಿಮಂಟಪದಲ್ಲಿರುವ ವೈಟ್ ಪ್ಯಾಲೆಸ್ ಸಭಾಂಗಣದಲ್ಲಿ ನಡೆದ ರಾಜ್ಯ ಸಮಿತಿ ಸಭೆಯಲ್ಲಿ 2024–27ನೇ ಸಾಲಿನ ನೂತನ ಪದಾಧಿಕಾರಿಗಳು ಚುನಾಯಿತರಾದರು. ಅಬ್ದುಲ್ ಮಜೀದ್ ಪುನರಾಯ್ಕೆಯೊಂದಿಗೆ ಉಪಾಧ್ಯಕ್ಷರಾಗಿ ಅಬ್ದುಲ್ ಹನ್ನಾನ್, ದೇವನೂರು ಪುಟ್ಟನಂಜಯ್ಯ, ಶಾಹಿದಾ ತಸ್ನೀಮ್, ಪ್ರಧಾನ ಕಾರ್ಯದರ್ಶಿಗಳಾಗಿ ಮುಜಾಹಿದ್ ಪಾಷಾ, ಮಜೀದ್ ತುಂಬೆ, ಬಿ.ಆರ್.ಭಾಸ್ಕರ್ ಪ್ರಸಾದ್, ಅಫ್ಸರ್ ಕೊಡ್ಲಿಪೇಟೆ, ಕಾರ್ಯದರ್ಶಿಗಳಾಗಿ ಅಫ್ಸರ್ ಕೆ.ಆರ್.ನಗರ, ಅಂಗಡಿ ಚಂದ್ರು, ಅಕ್ರಂ ಮೌಲಾನಾ, ರಂಜಾನ್ ಕಡಿವಾಲ್, ರಿಯಾಜ್ ಕಡಂಬು ಹಾಗೂ ಖಜಾಂಚಿಯಾಗಿ ಅಮ್ಜದ್ ಖಾನ್ ಆಯ್ಕೆಯಾದರು.

ದಲಿತರ ಬಿಡದ ದೇವಸ್ಥಾನ, ಶಾಲೆಗೆ ಬೀಗ ಹಾಕಿ: ನ್ಯಾ.ಕೃಷ್ಣ ಎಸ್.ದೀಕ್ಷಿತ್

ಬೆಂಗಳೂರು: ಯಾವ ಪ್ರದೇಶಗಳಲ್ಲಿ ದೇವಸ್ಥಾನ, ಕೆರೆ, ಶಾಲೆಗಳಿಗೆ ದಲಿತರನ್ನು ಬಿಡುವುದಿಲ್ಲವೋ ಅವುಗಳಿಗೆ ಬೀಗ ಹಾಕಿ. ನಮಗೆ ಇಲ್ಲದ್ದು ನಿಮಗೂ ಇಲ್ಲ ಎಂದು ಹೇಳಿ ಎಂದು ಹೈಕೋರ್ಟ್ ನ್ಯಾಯ ಮೂರ್ತಿ ಕೃಷ್ಣ ಎಸ್.ದೀಕ್ಷಿತ್ ಹೇಳಿದರು.



ಕರ್ನಾಟಕ ರಾಜ್ಯ ಪರಿಶಿಷ್ಟ ಜಾತಿ, ಪಂಗಡ ವಕೀಲರ ಸಂಘದ ಉದ್ಘಾಟನೆ ಹಾಗೂ 75ನೇ ಸಂವಿಧಾನ ಸಮರ್ಪಣಾ ದಿನಾಚರಣೆ ಸಮಾರಂಭದಲ್ಲಿ ಮಾತನಾಡಿದರು.

ಸಂವಿಧಾನಕ್ಕೆ 75 ವರ್ಷವಾದರೂ ಜಾತಿ ಬಗ್ಗೆ ಇನ್ನೂ ಮಾತನಾಡಲಾಗುತ್ತಿದೆ. ವ್ಯಕ್ತಿಯ ಪ್ರತಿಭೆಯಿಂದ ಕೃತಜ್ಞತೆ ಸಲ್ಲಿಸುವ ಮನೋಭಾವ ಬರಬೇಕು. ಜಾತಿ, ಧರ್ಮ ನೋಡಬಾರದು. ಶೋಷಿತ ಸಮುದಾಯದವರು ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ, ಭಾರತದ ರಾಷ್ಟ್ರಪತಿಯಾಗಿದ್ದಾರೆ. ಪ್ರಧಾನಿಯಾಗುವ ಕಾಲ ಬರಬೇಕು ಎಂದರು.

ಭಗವದ್ಗೀತೆ, ರಾಮಾಯಣ, ಮಹಾಭಾರತ, ವೇದಗಳನ್ನು ಮನೆಯಲ್ಲಿ ಪೂಜೆ ಮಾಡುತ್ತೇವೆ. ಆದರೆ, ಅವುಗಳನ್ನು ರಚಿಸಿದವರ ಸಮುದಾಯದವರನ್ನು ಮನೆಯೊಳಗೆ ಬಿಟ್ಟುಕೊಳ್ಳದಿರುವ ಮನಸ್ಥಿತಿ ಇನ್ನೂ ಇರುವುದು ವಿಪರ್ಯಾಸ ಎಂದರು.

ಮೈಸೂರಿನ ಉರಿಲಿಂಗಪೆದ್ದಿ ಮಹಾಸಂಸ್ಥಾನ ಮಠದ ಜ್ಞಾನಪ್ರಕಾಶ ಸ್ವಾಮೀಜಿ ಮಾತನಾಡಿ, ಡಾ.ಬಿ.ಆರ್.ಅಂಬೇಡ್ಕರ್ ಅವರು ಭಾರತೀಯರಿಗೆ ನೀಡಿದ ಸಂವಿಧಾನ ದಾಖಲೆ ಪುಸ್ತಕವಲ್ಲ. ಅದು ಭಾರತೀಯರ ಮನಸ್ಸಿನ ಸಂವೇದನೆ. ಯಾವುದೇ ದೇಶ ಧರ್ಮ ಆಧಾರಿತ, ಜಾತಿ ಆಧಾರಿತವಾದರೆ ಸ್ವಾತಂತ್ರ್ಯ ಕಳೆದುಕೊಳ್ಳುತ್ತದೆ. ವ್ಯಕ್ತಿ ಪೂಜೆ ಅಪಾಯಕಾರಿ. ಸರ್ವಾಧಿಕಾರಿ ಧೋರಣೆಯಿಂದ ದೇಶದ ಅಖಂಡತೆಗೆ ಧಕ್ಕೆಯಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಹೈಕೋರ್ಟ್ ನ್ಯಾಯಮೂರ್ತಿ ಕೆ.ಸೋಮಶೇಖರ್ ಮಾತನಾಡಿ, ಸಂವಿಧಾನದ ಬಗ್ಗೆ ನಮಗೆ ಎಷ್ಟು ಪ್ರಬುದ್ಧತೆ ಇದೆ ಎಂಬುದನ್ನು ಆತ್ಮಾವಲೋಕನ ಮಾಡಿಕೊಳ್ಳಲು ನವೆಂಬರ್ 26ರಂದು ಸಮರ್ಪಣಾ ದಿನ ಆಚರಿಸಲಾಗುತ್ತದೆ. ಸಂವಿಧಾನವನ್ನು ಅರಿತಿದ್ದರೆ ಎಷ್ಟು ತಿಳಿದಿದ್ದೇವೆ ಎಂಬುದು ಮುಖ್ಯ. ಅರಿವಿಲ್ಲದಿದ್ದರೆ ಕಲಿಯುವ ಪ್ರಯತ್ನವಾಗಬೇಕು. ಇದಕ್ಕೆಲ್ಲ ವಿದ್ಯೆ ಅಗತ್ಯ. ಜ್ಞಾನ ಎಂಬುದು ಯಾರೂ ಕದಿಯಲಾಗದ ಸಂಪತ್ತು. ಅದನ್ನು ಎಲ್ಲರೂ ಗಳಿಸಬೇಕು ಎಂದರು.

ಕರ್ನಾಟಕ ರಾಜ್ಯ ಪರಿಶಿಷ್ಟ ಜಾತಿ, ಪಂಗಡ ವಕೀಲರ ಸಂಘದ ಅಧ್ಯಕ್ಷ ಎಂ.ಮುನಿಯಪ್ಪ, ಅಖಿಲ ಭಾರತ ವಕೀಲರ ಸಂಘದ ಅಧ್ಯಕ್ಷ ಭಕ್ತವಚ್ಛಲ, ಹೈಕೋರ್ಟ್ ಹೆಚ್ಚುವರಿ ಅಡ್ವೊಕೇಟ್ ಜನರಲ್ ಎಸ್.ಎ.ಅಹಮದ್ ಉಪಸ್ಥಿತರಿದ್ದರು.

ಸೋತಾಗ ಮಾತ್ರ ಇವಿಎಂ ಟ್ಯಾಂಪರ್ಡ್, ಗೆದ್ದಾಗ ಇಲ್ಲ

ಬ್ಯಾಲೆಟ್ ಪೇಪರ್ ಕೋರಿದ್ದ ಅರ್ಜಿ ವಜಾಗೊಳಿಸಿದ ಸುಪ್ರೀಂಕೋರ್ಟ್

ನವದೆಹಲಿ: ಚುನಾವಣೆಗಳನ್ನು ಮತ್ತೆ ಬ್ಯಾಲೆಟ್ ಪೇಪರ್ ಮತದಾನದ ಮೂಲಕ ನಡೆಸಬೇಕು ಎಂದು ಕೋರಿ ಸಲ್ಲಿಸಲಾಗಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಸುಪ್ರೀಂ ಕೋರ್ಟ್ ಮಂಗಳವಾರ ವಜಾಗೊಳಿಸಿದೆ.

ಚುನಾವಣೆಯಲ್ಲಿ ಸೋತಾಗ ಮಾತ್ರ ಎಲೆಕ್ಟ್ರಾನಿಕ್ ಮತಯಂತ್ರ(ಇವಿಎಂ) ಟ್ಯಾಂಪರಿಂಗ್ ಆರೋಪಗಳು ಕೇಳಿಬರುತ್ತವೆ ಎಂದು ಸುಪ್ರೀಂಕೋರ್ಟ್ ಹೇಳಿದೆ.

ಬ್ಯಾಲೆಟ್ ಪೇಪರ್ ಬದಲು ಇವಿಎಂ ಜಾರಿಗೊಳಿಸಿದ ಕ್ರಮ ಪ್ರಶ್ನಿಸಿ ಡಾ.ಕೆ.ಎ.ಪೌಲ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ವಿಕ್ರಂನಾಥ್ ಮತ್ತು ನ್ಯಾಯಮೂರ್ತಿ ಪಿ.ಬಿ.ವರಾಳೆ ಅವರಿದ್ದ ವಿಭಾಗೀಯ ಪೀಠ, ಏನಾಗುತ್ತದೆ ಎಂದರೆ, ನೀವು ಚುನಾವಣೆಯಲ್ಲಿ ಗೆದ್ದಾಗ, ಇವಿಎಂಗಳನ್ನು ಟ್ಯಾಂಪರಿಂಗ್ ಮಾಡುವುದಿಲ್ಲ. ಆದರೆ ನೀವು ಚುನಾವಣೆಯಲ್ಲಿ ಸೋತಾಗ, ಇವಿಎಂಗಳನ್ನು ಟ್ಯಾಂಪರ್ ಮಾಡಲಾಗುತ್ತದೆ ಟೀಕಿಸಿದೆ.

ನಿಮ್ಮ ಬಳಿ ಆಸಕ್ತಿದಾಯಕ ಪಿಐಎಲ್‌ಗಳಿವೆ. ಈ ಅದ್ಭುತ ವಿಚಾರಗಳನ್ನು ನೀವು ಹೇಗೆ ಪಡೆಯುತ್ತೀರಿ? ಎಂದು ವಿಭಾಗೀಯ ಪೀಠ ಅರ್ಜಿದಾರ ಕೆಎ ಪೌಲ್ ಅವರನ್ನು ಪ್ರಶ್ನಿಸಿತು.

ಅರ್ಜಿದಾರರು ಮೂರು ಲಕ್ಷಕ್ಕೂ ಹೆಚ್ಚು ಅನಾಥರು ಮತ್ತು 40 ಲಕ್ಷ ವಿಧವೆಯರನ್ನು ರಕ್ಷಿಸಿದ ಸಂಸ್ಥೆಯ ಅಧ್ಯಕ್ಷರಾಗಿದ್ದಾರೆ. ನೀವು ಈ ರಾಜಕೀಯ ಕ್ಷೇತ್ರಕ್ಕೆ ಏಕೆ ಬರುತ್ತಿದ್ದೀರಿ? ನಿಮ್ಮ ಕೆಲಸದ ಕ್ಷೇತ್ರವು ತುಂಬಾ ವಿಭಿನ್ನವಾಗಿದೆ ಎಂದು ಪೀಠ ಪ್ರಶ್ನಿಸಿತು.

ಪೌಲ್ ಅವರು ತಾವು 150 ಕ್ಕೂ ಹೆಚ್ಚು ದೇಶಗಳಿಗೆ ಹೋಗಿರುವುದಾಗಿ ಹೇಳಿದ ನಂತರ, ಪ್ರತಿಯೊಂದು ರಾಷ್ಟ್ರಗಳು ಬ್ಯಾಲೆಟ್ ಪೇಪರ್ ಮತದಾನವನ್ನು ಹೊಂದಿವೆಯೇ ಅಥವಾ ಎಲೆಕ್ಟ್ರಾನಿಕ್ ಮತದಾನವನ್ನು ಬಳಸುತ್ತವೆಯೇ ಎಂದು ಪೀಠ ಪ್ರಶ್ನಿಸಿತು. ಈ ಹಿಂದೆ ರಾಜಕೀಯ ನಾಯಕರಾದ ಚಂದ್ರಬಾಬು ನಾಯ್ಡು ಸೋತಾಗ ಮತ್ತು ಜಗನ್‌ಮೋಹನ್ ರೆಡ್ಡಿ ಇತ್ತೀಚಿನ ಚುನಾವಣೆಗಳಲ್ಲಿ ಸೋತಾಗ ಒಬ್ಬರಿಗೊಬ್ಬರು ಇವಿಎಂಗಳನ್ನು ತಿರುಚಬಹುದು ಎಂದ ಆರೋಪ–ಪ್ರತ್ಯಾರೋಪ ಮಾಡಿದ್ದನ್ನು ಸ್ಮರಿಸಿದ ನ್ಯಾಯಾಧೀಶರು, ಅರ್ಜಿದಾರರ ವಾದವನ್ನು ತಳ್ಳಿಹಾಕಿದರು. ಚುನಾವಣೆಯಲ್ಲಿ ಗೆದ್ದರೆ ಇವಿಎಂಗಳನ್ನು ತಿರುಚಿಲ್ಲ, ಸೋತಾಗ ಇವಿಎಂಗಳನ್ನು ತಿರುಚಲಾಗುತ್ತದೆ ಎಂದು ಹೇಳಲಾಗುತ್ತದೆ. ಹೀಗಾಗಿ ಇಂಥ ವಾದ ಮಂಡಿಸಲು ಇದು ಸೂಕ್ತ ಜಾಗ ಅಲ್ಲ ಎಂದು ವಿಭಾಗೀಯ ಪೀಠ ಅರ್ಜಿಯನ್ನು ವಜಾಗೊಳಿಸಿತು.

ಬ್ಯಾಲೆಟ್ ಪೇಪರ್ ಮತದಾನದ ಹೊರತಾಗಿ, ಮತದಾನದ ಸಮಯದಲ್ಲಿ ಮತದಾರರಿಗೆ ಹಣ, ಮದ್ಯ ಅಥವಾ ಇತರ ವಸ್ತುಗಳನ್ನು ವಿತರಿಸಿದ್ದು ಕಂಡುಬಂದಲ್ಲಿ ಕನಿಷ್ಠ ಐದು ವರ್ಷಗಳವರೆಗೆ ಅಭ್ಯರ್ಥಿಗಳನ್ನು ಅನರ್ಹಗೊಳಿಸಲು ಚುನಾವಣಾ ಆಯೋಗಕ್ಕೆ ನಿರ್ದೇಶನ ನೀಡುವುದು ಸೇರಿದಂತೆ ಹಲವಾರು ನಿರ್ದೇಶನಗಳನ್ನು ಮನವಿಯಲ್ಲಿ ಕೋರಲಾಗಿತ್ತು.

ಡಾ.ಅಂಬೇಡ್ಕರ್ ರಚಿತ ಸಂವಿಧಾನ ನಮ್ಮ ಪ್ರಜಾಪ್ರಭುತ್ವ ಸೌಂದರ್ಯಕ್ಕೆ ಸಾಕ್ಷಿ

ಹೊಳೆನರಸೀಪುರ ಕಾನೂನು ಕಾಲೇಜು ಸಹಾಯಕ ಪ್ರಾಧ್ಯಾಪಕ ಡಾ.ಎಂ.ಕೆ.ಮಾಟೊಲ್ಲಿ ಅಭಿಮತ

ಮೈಸೂರು, ನ.26(ಎಸ್‌ಪಿಎನ್)– ಕಳೆದ 75 ವರ್ಷಗಳಿಂದ ಡಾ.ಬಿ.ಆರ್. ಅಂಬೇಡ್ಕರ್ ರಚಿತ ಸಂವಿಧಾನವನ್ನು ಭಾರತದ ಎಲ್ಲಾ ಪ್ರಜೆಗಳು ಗೌರವಿಸಿ, ಸುಂದರ ಬದುಕು ಕಟ್ಟಿಕೊಂಡಿರುವುದೇ ನಮ್ಮ ಪ್ರಜಾಪ್ರಭುತ್ವ ಸೌಂದರ್ಯಕ್ಕೆ ಸಾಕ್ಷಿ ಎಂದು ಹೊಳೆನರಸೀಪುರ ಕಾನೂನು ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಕಾನೂನು ಕಾಲೇಜು ಡಾ.ಎಂ.ಕೆ. ಮಾಟೊಲ್ಲಿ ಅಭಿಪ್ರಾಯಪಟ್ಟರು.

ಮೈಸೂರು ಶೇಷಾದ್ರಿ ಅಯ್ಯರ್ ರಸ್ತೆಯಲ್ಲಿನ ವಿದ್ಯಾವರ್ಧಕ ವಿದ್ಯಾಸಂಸ್ಥೆ ಆವರಣದಲ್ಲಿ ವಿದ್ಯಾವರ್ಧಕ ಕಾನೂನು ಕಾಲೇಜು ಮತ್ತು ಐಕ್ಯೂಎಸಿ ಸಹಯೋಗದೊಂದಿಗೆ ಆಯೋಜಿಸಿದ್ದ ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕಾನೂನು ವಿದ್ಯಾರ್ಥಿಗಳು ದೇಶದಲ್ಲಿ ನಡೆಯುತ್ತಿರುವ ಕಾನೂನು ಹೋರಾಟಗಳು, ಸಾಮಾಜಿಕ ಹೋರಾಟಗಳ ಬಗ್ಗೆ ಅಧ್ಯಯನ ಮಾಡಬೇಕು. ಇದರಿಂದ ಕಾನೂನು ವಿದ್ಯಾರ್ಥಿಗಳಿಗೆ ನ್ಯಾಯಾಲಯದಲ್ಲಿ ಯಾವುದೇ ರೀತಿ ವಾದ–ಪ್ರತಿವಾದಗಳು ನಡೆಯುತ್ತವೆ ಎಂಬುದು ಅರ್ಥವಾಗುತ್ತದೆ ಎಂದು ಸಲಹೆ ನೀಡಿದರು.

ಭಾರತಕ್ಕೆ ಸ್ವಾತಂತ್ರ್ಯ ಸಿಕ್ಕ ನಂತರ ಚದುರಿ ಹೋಗಿದ್ದ ಭಾರತೀಯ ಮನಸ್ಸುಗಳನ್ನು ಒಗ್ಗೂಡಿಸುವ ಕೆಲಸ ಮಾಡಿದ್ದು, ಸಂವಿಧಾನ. ತಳ ಸಮುದಾಯ, ಮಹಿಳೆಯರು, ಹಿಂದುಳಿದವರಿಗೆ ಆರ್ಥಿಕ, ಶೈಕ್ಷಣಿಕ, ಸಾಮಾಜಿಕ ಹಾಗೂ ಸಾಂಸ್ಕೃತಿಕವಾಗಿ ಸಂವಿಧಾನದ ಮೂಲಕ ರಕ್ಷಣೆ ಒದಗಿಸಬೇಕೆಂಬುದು ಸಂವಿಧಾನ ಕರಡು ಸಮಿತಿ ಅಧ್ಯಕ್ಷರಾಗಿದ್ದ ಅಂಬೇಡ್ಕರ್ ನೇತೃತ್ವದ ತಂಡದ ಸದಾಶಯವಾಗಿತ್ತು ಎಂದರಲ್ಲದೆ, ಭಾರತಕ್ಕೆ ಬ್ರಿಟಿಷರು, ಸ್ವಾತಂತ್ರ್ಯ ಕೊಟ್ಟರೂ ಅವರು ಬಿಟ್ಟು ಹೋದ ಕಾನೂನು, ಬ್ರಿಟಿಷರ ಆಡಳಿತ ವೈಖರಿಯಿಂದ ಹೊರಬರಲು ಸಾಧ್ಯವಾಗಿರಲಿಲ್ಲ. ಈ ಮನಸ್ಥಿತಿಯಿಂದ ಹೊರಬರಲು ಅಂಬೇಡ್ಕರ್ ರಚಿತ ಸಂವಿಧಾನ ಸಾಕಷ್ಟು ಕೊಡುಗೆ ನೀಡಿದೆ ಕೆಲ ಘಟನೆಗಳನ್ನು ಉಲ್ಲೇಖಿಸಿ ತಿಳಿಸಿದರು.



ವಿದ್ಯಾವರ್ಧಕ ಕಾನೂನು ಕಾಲೇಜಿನಲ್ಲಿ ಸಂವಿಧಾನ ದಿನಾಚರಣೆ ಕಾರ್ಯಕ್ರಮವನ್ನು ಗಿಡಕ್ಕೆ ನೀರು ಹಾಕುವ ಮೂಲಕ ಉದ್ಘಾಟಿಸಲಾಯಿತು.

ಸಾವಯವ ಅಂಶ: ನೆಹರು ಪ್ರಧಾನ ಮಂತ್ರಿಯಾಗಿದ್ದಾಗ ಹಿಂದೂ ಕೋಡ್ ಬಿಲ್, ಕೆಲ ಧರ್ಮವರ ವೈಯಕ್ತಿಕ ಕಾನೂನು ರಚನೆ, ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ನೀತಿಗಳನ್ನು ಸಂವಿಧಾನದ ಮೂಲಕ ಜಾರಿಗೊಳಿಸಿದ ನಮ್ಮ ಪ್ರಜಾಪ್ರಭುತ್ವ ವ್ಯವಸ್ಥೆಗೆ ಸಲ್ಲುತ್ತದೆ. ಕಾಲಕಾಲಕ್ಕೆ ಬಹುಸಂಖ್ಯಾತರ ಭಾವನೆ, ಆಶಯಗಳಿಗೆ ತಕ್ಕಂತೆ ಸಂವಿಧಾನಕ್ಕೆ ಬದಲಾವಣೆ ತರಬಹುದು ಎಂದು ಸಂಸತ್‌ನಲ್ಲಿ ಅಂಬೇಡ್ಕರ್ ಅವರೇ ಹೇಳಿಕೆ ನೀಡಿದ್ದಾರೆ. ಮುಂದುವರೆದು, ನನ್ನ ಸಂವಿಧಾನ 'ಸಾವಯವ' ಅಂಶಗಳನ್ನು ಒಳಗೊಂಡಿದೆ. ಇದನ್ನು ಜನರ ಆಶಯಗಳಿಗೆ ತಕ್ಕಂತೆ ಬಳಸಿ, ಕಾಲಕಾಲಕ್ಕೆ ತಿದ್ದುಪಡಿ ತಂದು ಸಂವಿಧಾನವನ್ನು ಗಟ್ಟಿಗೊಳಿಸಬೇಕು ಎಂಬ ಪ್ರಸಂಗವನ್ನು ಎಳೆಎಳೆಯಾಗಿ ಬಿಡಿಸಿದರು.


'ನಿರ್ಭಯ', 'ತ್ರಿಬಲ್ ತಲಾಖ್' ಹೋರಾಟ ಐತಿಹಾಸಿಕ: ನಿರ್ಭಯ ಪ್ರಕರಣದಲ್ಲಿ ಇಡೀ ದೇಶ ಒಂದಾಗಿ ನಮ್ಮ ಕಾನೂನಿನಲ್ಲಿ ಲೋಪವಿದೆ, ಇದನ್ನು ಸರಿಪಡಿಸುವ ಕೆಲಸವಾಗಬೇಕೆಂದು ದೇಶಾದ್ಯಂತ ದೊಡ್ಡ ಹೋರಾಟ ನಡೆಸಿತು. ಇದರ ಫಲವಾಗಿ ಒಂದು ವರ್ಷದ ಅವಧಿಯಲ್ಲೇ 'ಪೋಕ್ಸೋ' ಕಾಯ್ದೆ ರಚನೆಯಾಗಿ ಇತಿಹಾಸ ಸೃಷ್ಟಿಸಿತು. ಅಲ್ಲದೆ, ಕೆಲ ಮುಸ್ಲಿಂ ಮಹಿಳೆಯರು ಇನ್‌ಸ್ಟಂಟ್ ತ್ರಿಬಲ್ ತಲಾಖ್ ನಿರ್ಬಂಧಿಸುವಂತೆ ಸುಪ್ರೀಂ ಕೋರ್ಟ್ ಮೊರೆಹೋಗಿದ್ದರು. ಈ ಪ್ರಕರಣವನ್ನು ವಿಚಾರಣೆ ನಡೆಸಿದ ನ್ಯಾಯಾಲಯ, ಇನ್‌ಸ್ಟಂಟ್ ತ್ರಿಬಲ್ ತಲಾಖ್ ನಿರ್ಬಂಧಿಸುವಂತೆ ತೀರ್ಪು ನೀಡಿತ್ತು. ಈ ಅಂಶ ಸಂಸತ್‌ನಲ್ಲಿ ಚರ್ಚೆಯಾಗಿ ಕಾನೂನಾಗಿ ಜಾರಿಗೆ ಬಂತು. ಇಂತಹ ಬದಲಾವಣೆಯನ್ನು ಅಂಬೇಡ್ಕರ್ ಬಯಸಿದ್ದರು ಎಂದರು.

ವಿದ್ಯಾರ್ಥಿಗಳು ಹೊಸ ಕಾನೂನುಗಳ ಅಧ್ಯಯನ ಮುಖ್ಯ: ಇತ್ತೀಚೆಗೆ ಕೇಂದ್ರ ಸರ್ಕಾರ ಹಳೆಯ ಕಾನೂನಿಗೆ ತಿದ್ದುಪಡಿ ತಂದು(ಬಿಎನ್‌ಎಸ್, ಬಿಎನ್‌ಎನ್‌ಎಸ್, ಬಿಎಸ್‌ಎಲ್) ಹೊಸ ಕಾನೂನು ಜಾರಿಗೆ ತಂದಿದೆ ಜೊತೆಗೆ ಭಾರತದ ಆರ್ಥಿಕ ನೀತಿ ಬಲಪಡಿಸಲು ಹಳೆಯ ಆರ್ಥಿಕ ನೀತಿಗೆ ತಿಲಾಂಜಲಿ ನೀಡಿ, ಜಿಎಸ್‌ಟಿ ಕಾನೂನು ಜಾರಿಗೆ ಬಂದಿದೆ ಜನರ ಬದುಕಿನ ಮೇಲೆ ಪರಿಣಾಮ ಬೀರುವ ಕಾನೂನು ಅಂಶಗಳ ಬಗ್ಗೆ ವಿದ್ಯಾರ್ಥಿಗಳು ಅಧ್ಯಯನ ನಡೆಸಿ ತಿಳಿದುಕೊಳ್ಳಲು ಪ್ರಯತ್ನಿಸಬೇಕು ಎಂದು ಸಲಹೆ ನೀಡಿದರು.

ವೇದಿಕೆಯಲ್ಲಿ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪಗೌಡ, ಕಾರ್ಯದರ್ಶಿ ಪಿ.ವಿಶ್ವನಾಥ್, ಖಜಾಂಚಿ ಶ್ರೀಶೈಲ ರಾಮಣ್ಣವರ್, ಸಿಎಂಸಿ ಮುಖ್ಯಸ್ಥ ಎಸ್.ಶಿವಲಿಂಗಯ್ಯ, ಪ್ರಾಂಶುಪಾಲೆ ಡಾ.ಪಿ.ದೀಪು, ಸಂಚಾಲಕ ಡಾ.ಎಸ್.ಬಿ. ಬೋರೇಗೌಡ ಉಪಸ್ಥಿತರಿದ್ದರು.

ಸನ್ಮಾನಗಳಿಗಿಂತ ಹುಟ್ಟೂರಿನ ಅಭಿಮಾನ ದೊಡ್ಡದು

ಶಾಸಕ ಜಿ.ಡಿ.ಹರೀಶ್‌ಗೌಡ



ಕುಮಾರ್ ಅರಸೇಗೌಡರನ್ನು ಶಾಸಕ ಜಿ.ಡಿ.ಹರೀಶ್‌ಗೌಡ ಸನ್ಮಾನಿಸಿದರು.

ಹುಣಸೂರು, ನ.26– ಸಾಧನೆ ಮಾಡಿದಾಗ ಬೇರೆಡೆ ಸಿಗುವ ಸನ್ಮಾನಗಳಿಗಿಂತ ಹುಟ್ಟೂರಿನಲ್ಲಿ ಸಿಗುವ ಅಭಿಮಾನ ಎಲ್ಲದಕ್ಕೂ ಮಿಗಿಲಾದದು ಎಂದು ಶಾಸಕ ಜಿ.ಡಿ.ಹರೀಶ್‌ಗೌಡ ತಿಳಿಸಿದರು.

ತಾಲೂಕಿನ ಹಗನಹಳ್ಳಿ ಮಂಟಿಕೊಪ್ಪಲು ಗ್ರಾಮದಲ್ಲಿ ಇತ್ತೀಚಿಗೆ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ರಂಗ ಕಲಾವಿದ ಹಾಗೂ ಚಲನಚಿತ್ರ ಪೋಷಕ ನಟ ಕುಮಾರ್ ಅರಸೇಗೌಡರನ್ನು ಸನ್ಮಾನಿಸಿ ಮಾತನಾಡಿದ ಅವರು, ನಮಗೆ ಯಾವುದೇ ಪ್ರಶಸ್ತಿಗಳು ಸಿಕ್ಕರೂ ನಮ್ಮೂರಿನ ಸನ್ಮಾನ ಎಲ್ಲದಕ್ಕೂ ದೊಡ್ಡದು ಎಂದರು.

ಕುಮಾರ್ ಅರಸೇಗೌಡರನ್ನು ನಾವು ಬಾಲ್ಯದಿಂದಲೂ ನೋಡಿದ್ದೇನೆ. ಅವರು ಕಲೆಯನ್ನೇ ಸರ್ವಸ್ವವೆಂದು ಪೂಜಿಸುವ ಗುಣದವರು. ಆದ್ದರಿಂದ ಅವರು ಸಿನಿಮಾ, ನಾಟಕ, ಧಾರಾವಾಹಿಗಳಲ್ಲಿ, ಹಾಸ್ಯ ನಟನಾ ವಿಭಾಗದಲ್ಲಿ ಇನ್ನೂ ಹೆಚ್ಚಿನ ರೀತಿಯಲ್ಲಿ ಬೆಳೆದು ತಾಲೂಕಿಗೆ ಕೀರ್ತಿ ತರಲಿ ಎಂದರು.

ಗ್ರಾಮದ ಶಕುಂತಲಾ, ಗ್ರಾಪಂ ಅಧ್ಯಕ್ಷೆ ಸಿದ್ದಮ್ಮ, ಉಪಾಧ್ಯಕ್ಷ ವೆಂಕಟೇಶ್ ಆಚಾರ್, ಮಂಚೇಗೌಡ, ಸ್ವಾಮೀಗೌಡ, ಕುಮಾರ್, ರಾಜೇಗೌಡ ಹಾಗೂ ಗ್ರಾಮಸ್ಥರು ಇದ್ದರು.

ಅಂತರಸಂತೆಯಲ್ಲಿ 69ನೇ ಕನ್ನಡ ರಾಜ್ಯೋತ್ಸವ

ಕನ್ನಡಕ್ಕಾಗಿ ಶ್ರಮಿಸಿದವರನ್ನು ಸದಾ ನೆನೆಯುವವರು ಆಟೋ ಚಾಲಕರು: ಶಾಸಕ ಅನಿಲ್



ಅಂತರಸಂತೆಯಲ್ಲಿ ನಡೆದ 69ನೇ ಕನ್ನಡ ರಾಜ್ಯೋತ್ಸವ, ಪುನೀತ್ ರಾಜ್‌ಕುಮಾರ್ ಹಾಗೂ ಅಂಬಾರಿ ಆನೆ ಅರ್ಜುನನ ಸವಿನೆನಪು, ಸಂವಿಧಾನ ದಿನಾಚರಣೆ ಕಾರ್ಯಕ್ರಮವನ್ನು ಶಾಸಕ ಅನಿಲ್ ಉದ್ಘಾಟಿಸಿದರು.

ಹೆಚ್.ಡಿ.ಕೋಟೆ, ನ.26– ಕೇರಳ ಗಡಿಭಾಗದಲ್ಲಿರುವ ತಾಲೂಕಿನ ಅಂತರ ಸಂತೆ ಗ್ರಾಮದಲ್ಲಿ ಆಸ್ಪತ್ರೆ, ಪೊಲೀಸ್ ಠಾಣೆ, ಶಾಲೆ, ಕೆಇಬಿ ಕಟ್ಟಡಗಳ ನಿರ್ಮಾಣ ಸೇರಿದಂತೆ ಅನೇಕ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನ ನೀಡಲಾಗಿದೆ ಎಂದು ಶಾಸಕ ಅನಿಲ್ ತಿಳಿಸಿದರು.

ತಾಲೂಕಿನ ಅಂತರಸಂತೆಯಲ್ಲಿ ಜೈ ಭೀಮ್ ಆಟೋ ಚಾಲಕರು ಮತ್ತು ಮಾಲೀಕರ ಸಂಘದಿಂದ ಆಯೋಜಿಸಿದ್ದ 69ನೇ ಕನ್ನಡ ರಾಜ್ಯೋತ್ಸವ, ಪುನೀತ್ ರಾಜ್‌ಕುಮಾರ್ ಹಾಗೂ ಅಂಬಾರಿ ಆನೆ ಅರ್ಜುನನ ಸವಿನೆನಪು ಕಾರ್ಯಕ್ರಮ ಉದ್ಘಾಟಿಸಿ, ಸಂವಿಧಾನ ದಿನಾಚರಣೆ ಧ್ವಜಾ ರೋಹಣ ನೆರವೇರಿಸಿ ಮಾತನಾಡಿದ ಅವರು, ಪ್ರತಿವರ್ಷ ಅಂತರಸಂತೆ ಆಟೋ ಚಾಲಕರ ಸಂಘದವರು ಅರ್ಥಪೂರ್ಣವಾಗಿ ಕನ್ನಡ ರಾಜ್ಯೋತ್ಸವ ಆಚರಿಸಿಕೊಂಡು ಬರುತ್ತಿದ್ದು, ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡುತ್ತಿರುವುದು ಹೆಮ್ಮೆಯ ವಿಚಾರವಾಗಿದೆ. ಇದು ಗಡಿ ಭಾಗವಾದ್ದರಿಂದ ನೆರೆಯ ಕೇರಳ ರಾಜ್ಯದ ಪ್ರಭಾವ ಹೆಚ್ಚಾಗಿದೆ. ಆದ್ದರಿಂದ ಕನ್ನಡ ಉಳಿವಿಗಾಗಿ ಈ ಭಾಗದಲ್ಲಿ ಇಂತಹ ಕಾರ್ಯಕ್ರಮಗಳು ಹೆಚ್ಚು ನಡೆಯಬೇಕು. ಕನ್ನಡಕ್ಕಾಗಿ ಶ್ರಮಿಸಿದವರನ್ನು ಸದಾ ನೆನೆಯುವವರು ಆಟೋ ಚಾಲಕರು ಎಂಬುದಕ್ಕೆ ಅಂದಿನ ಶಂಕರ್‌ನಾಗ್ ಅವರಿಂದ ಹಿಡಿದು ಪುನೀತ್ ರಾಜ್‌ಕುಮಾರ್ ವರೆಗೂ ಸ್ಮರಿಸುತ್ತಿರುವುದು ಸಾಕ್ಷಿಯಾಗಿದೆ. ಕನ್ನಡ ಹಬ್ಬದ ಆಚರಣೆ ಎಂದಾಗ ಮೊದಲ ಸಾಲಿನಲ್ಲಿ ನಿಲ್ಲುವ ವರೇ ಆಟೋ ಚಾಲಕರು ಎಂದರು.

ಅರ್ಜುನ ಆನೆ ನಮ್ಮ ಕೋಟೆ ತಾಲೂಕಿನ ಹೆಮ್ಮೆ. 16 ಬಾರಿ ದಸರಾ ಮಹೋತ್ಸವದಲ್ಲಿ ಭಾಗಿಯಾಗಿ 9 ಬಾರಿ ಅಂಬಾರಿ ಹೊತ್ತು ನಮ್ಮ ತಾಲೂಕಿಗೆ ಕೀರ್ತಿ ತಂದಿದ್ದಾನೆ. ಇಂತಹ ಆನೆ ನಮ್ಮ ತಾಲೂಕಿನಲ್ಲಿತ್ತು ಎಂಬುದೇ ನಮ್ಮ ಭಾಗ್ಯ. ಆ ಆನೆಯನ್ನೂ ಇಂದು ನೆನೆದಿದ್ದಕ್ಕಾಗಿ ಧನ್ಯವಾದ ಅರ್ಪಿಸುತ್ತೇನೆ ಎಂದರು.

ಸಮಾಜದ ಕಟ್ಟಕಡೆ ವ್ಯಕ್ತಿಗೂ ಸಮಾನವಾಗಿ ಬದುಕುವ ಅವಕಾಶ ನೀಡಿರುವುದು ನಮ್ಮ ಸಂವಿಧಾನ. ಆದ್ದರಿಂದಲೇ ಇಂದು ನಾವು ಸಮಾನವಾಗಿ ಬದುಕುತ್ತಿದ್ದೇವೆ. ಸಂವಿಧಾನವನ್ನು ಪಾಲಿಸುವುದು ನಮ್ಮ ಕರ್ತವ್ಯ ಎಂದರು. ಇದೇ ವೇಳೆ ಅಂತರ ಸಂತೆಯ ತಾರಕ ವೃತ್ತದಿಂದ ಕನ್ನಡಾಂಬೆ ಭಾವಚಿತ್ರವನ್ನು ಮೆರವಣಿಗೆ ಮಾಡಲಾಯಿತು. ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿಯಲ್ಲಿ ಅತಿಹೆಚ್ಚು ಅಂಕಪಡೆದ ವಿದ್ಯಾರ್ಥಿಗಳನ್ನು ಅಭಿನಂದಿಸಲಾಯಿತು.

ಕಾರ್ಯಕ್ರಮದಲ್ಲಿ ಗ್ರಾಪಂ ಅಧ್ಯಕ್ಷೆ ರೇಖಾ ಗುರುಸ್ವಾಮಿ, ಉಪಾಧ್ಯಕ್ಷೆ ರೂಪ ಸುಬ್ರಹ್ಮಣ್ಯ, ಜೈ ಕರ್ನಾಟಕ ಸಂಘಟನೆ ರಾಜ್ಯ ಉಪಾಧ್ಯಕ್ಷ ಸತೀಶ್‌ಗೌಡ, ನಂಜನಗೂಡಿನ ಕೆಪಿಸಿಸಿ ಸಂಯೋಜಕ ಸೋಮೇಶ್, ಕಾಂಗ್ರೆಸ್ ಮುಖಂಡ ನಾಗನಹಳ್ಳಿ ಪ್ರದೀಪ್, ಯುವ ಮುಖಂಡ ನವೀನ್ ದಾಸ್, ವರ್ತಕರ ಸಂಘದ ಅಧ್ಯಕ್ಷ ಗೋವಿಂದರಾಜು, ಉಪಾಧ್ಯಕ್ಷ ಪ್ರದೀಪ್, ಅಕ್ರಮ ಸಕ್ರಮ ಸಮಿತಿ ಸದಸ್ಯ ಬಾಲಯ್ಯ, ಶ್ರೀನಿವಾಸ ವೈನ್ಸ್ ಮಾಲೀಕ ರಘುರಾಮ್, ಗ್ರಾಪಂ ಮಾಜಿ ಅಧ್ಯಕ್ಷರಾದ ಸುಬ್ರಹ್ಮಣ್ಯ, ಕಲೀಂಪಾಷ, ಸದಸ್ಯರಾದ ಮಾರುತಿ, ಪ್ರದೀಪ್, ಲೋಲಮ್ಮ ಕಾಂತನಾಯಕ, ಕವಿತಾ ಜಯಣ್ಣ, ಸೋಮೇಶ್, ನಸ್ರೀನ್ ತಾಜ್ ಅಪ್ಸರ್ ಖಾನ್, ಪುಟ್ಟಮಲ್ಲಿ ಸುರೇಶ್, ಜೈ ಭೀಮ್ ಆಟೋ ಚಾಲಕರು ಮತ್ತು ಮಾಲೀಕರ ಸಂಘದ ಅಧ್ಯಕ್ಷ ಶಿವ ಕುಮಾರ್, ಗೌರವಾಧ್ಯಕ್ಷ ಪ್ರಕಾಶ್ ಬುದ್ಧ, ಉಪಾಧ್ಯಕ್ಷ ಆನಂದ್, ಕಾರ್ಯ ದರ್ಶಿ ಜವರಾಜು, ಸದಸ್ಯರಾದ ಬಾಲ ಕೃಷ್ಣ, ರಂಗಸ್ವಾಮಿ, ಕೆ.ಸುರೇಶ್, ಮಹದೇವ ಸ್ವಾಮಿ, ನಂಜುಂಡಸ್ವಾಮಿ, ನಂಜಪ್ಪ, ಸಣ್ಣಮುದ್ದಯ್ಯ, ಎಸ್.ಕುಮಾರ್, ಮಂಜು, ನಾಗರಾಜು, ನಾಗೇಂದ್ರ, ಮಹೇಶ್, ರಾಜೇಶ್, ಸ್ವಾಮಿ, ಮೋಹನ್, ಅಜಯ್ ಇತರರಿದ್ದರು.

> ಮೈಸೂರು–ಮಾನಂದವಾಡಿ ಹೆದ್ದಾರಿ ಅಗಲೀಕರಣಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಹೆಚ್ಚಿನ ಅನುದಾನ ತಂದು ರಸ್ತೆ ಅಗಲೀಕರಣ ಮಾಡುವ ಉದ್ದೇಶವಿದೆ. ಜೊತೆಗೆ ಬಳ್ಳೆ ಆನೆ ಶಿಬಿರದಲ್ಲಿ ಅರ್ಜುನ ಆನೆ ಸ್ಮಾರಕ ನಿರ್ಮಾಣ ಕಾರ್ಯ ನಡೆಯುತ್ತಿದೆ. ಇನ್ನು ಸಂಚಾರಿ ಗಿರಿಜನ ಆಸ್ಪತ್ರೆ ಜೊತೆಗೆ ಪ್ರಾಥಮಿಕ ಆರೋಗ್ಯ ಕೇಂದ್ರ ತೆರೆಯಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದೇನೆ. ಈ ಬಗ್ಗೆ ಅಧಿವೇಶನದಲ್ಲಿ ಚರ್ಚಿಸುತ್ತೇನೆ.
>
> – ಅನಿಲ್, ಶಾಸಕ.

ವಾಲ್ಮೀಕಿ ಜಾತ್ರೆಗೆ ಆಗಮಿಸುವಂತೆ ಆಹ್ವಾನ



ಮೂಗೂರಿಗೆ ಪ್ರಸನ್ನಾನಂದ ಸ್ವಾಮೀಜಿ ಭೇಟಿ ನೀಡಿದರು.

ಮೂಗೂರು, ನ.26– ಸರ್ವ ಧರ್ಮಗಳ ಸಾಮರಸ್ಯ ಸಾರುವ ರಾಜನಹಳ್ಳಿ ವಾಲ್ಮೀಕಿ ಜಾತ್ರೆಗೆ ಸಮಸ್ತ ನಾಗರಿಕರು ಆಗಮಿಸಿ ಜಾತ್ರಾ ಮಹೋತ್ಸವ ಯಶಸ್ವಿಗೊಳಿಸುವಂತೆ ವಾಲ್ಮೀಕಿ ಗುರುಪೀಠದ ಪ್ರಸನ್ನಾನಂದ ಸ್ವಾಮೀಜಿ ಮನವಿ ಮಾಡಿದರು.

ಹರಿಹರದ ವಾಲ್ಮೀಕಿ ಜಾತ್ರಾ ಮಹೋತ್ಸವದ ಅಂಗವಾಗಿ ಜಿಲ್ಲಾ ಪ್ರವಾಸ ಕೈಗೊಂಡಿರುವ ಅವರು ಗ್ರಾಮದ ಮುಖಂಡರಾದ ಎಂ.ಡಿ.ಬಸವರಾಜು ಅವರ ನಿವಾಸಕ್ಕೆ ಭೇಟಿ ನೀಡಿ ಸುದ್ದಿಗಾರರೊಂದಿಗೆ ಮಾತನಾಡಿ, ಮುಂಬರುವ 2025ರ ಫೆ8, 9ರಂದು ಹರಿಹರದ ರಾಜನಹಳ್ಳಿಯಲ್ಲಿ ನಡೆಯುವ ವಾಲ್ಮೀಕಿ ಜಾತ್ರೆಯನ್ನು ಸಂಪನ್ನಗೊಳಿಸಲು ರಾಜ್ಯದ ಪ್ರತಿ ಜಿಲ್ಲೆ ಹಾಗೂ ತಾಲೂಕಿನಾದ್ಯಂತ ಪ್ರವಾಸ ಕೈಗೊಂಡು ಮುಖಂಡರನ್ನು ಭೇಟಿ ಮಾಡಲಾಗುತ್ತಿದೆ ಎಂದರು. ಇದೇ ವೇಳೆ ಎಂ.ಡಿ.ಬಸವರಾಜು ಅಭಿಮಾನಿ ಬಳಗದ ಪದಾಧಿಕಾರಿಗಳು ವಾಲ್ಮೀಕಿ ಗುರುಪೀಠದ ಪ್ರಸನ್ನಾನಂದ ಸ್ವಾಮೀಜಿ ಅವರನ್ನು ಸನ್ಮಾನಿಸಿದರು. ವಾಲ್ಮೀಕಿ ನಿಗಮದ ಮಾಜಿ ಅಧ್ಯಕ್ಷ ಹೆಚ್.ಸಿ.ಬಸವರಾಜು, ಮುಖಂಡರಾದ ಹೊನ್ನನಾಯಕ, ಎಂ.ಬಿ.ಸಾಗರ್, ಪುನೀತ್, ಪುಟ್ಟ ಮಾದನಾಯಕ, ಡೇರಿ ನಾಗೇಂದ್ರ, ಪುಟ್ಟರಾಜು, ರಂಗಸ್ವಾಮಿ, ಶಿವಣ್ಣ, ಶಂಕರ, ಸುರೇಶ್, ಸಾಗರ್, ಚಂದ್ರು ಇತರರಿದ್ದರು.

ಪ್ರತಿಯೊಬ್ಬರೂ ಸಂವಿಧಾನದ ಆಶಯ ಅರಿತುಕೊಳ್ಳಿ



ತಿ.ನರಸೀಪುರದಲ್ಲಿ ಸಂವಿಧಾನ ದಿನಾಚರಣೆ ನಡೆಯಿತು.

ತಿ.ನರಸೀಪುರ, ನ.26– ಇಂದು ರಾಜ್ಯಾದ್ಯಂತ ಸಂವಿಧಾನದ ಪೀಠಿಕೆ ವಾಚಿಸಲಾಗುತ್ತಿದೆ. ಇದರ ಮುಖ್ಯ ಉದ್ದೇಶ ನಾವು ಅದರಲ್ಲಿರುವ ಪ್ರತಿಯೊಂದು ಅಂಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಅದರಂತೆ ನಡೆದು ಸಮಾನತೆಯ ಸಮಾಜ ನಿರ್ಮಿಸಬೇಕು. ಹಾಗಾಗಿ ಪ್ರತಿಯೊಬ್ಬರೂ ಸಂವಿಧಾನದ ಆಶಯಗಳನ್ನು ಅರಿತು ಅದನ್ನು ಜೀವನದಲ್ಲಿ ಅಳವಡಿಸಿಕೊಳ್ಳಲು ಮುಂದಾಗಬೇಕು ಎಂದು ಪುರಸಭಾ ಸದಸ್ಯ ಸಿ.ಪ್ರಕಾಶ್ ತಿಳಿಸಿದರು.

ಪಟ್ಟಣದ ಪುರಸಭಾ ಕಚೇರಿಯಲ್ಲಿ ನಡೆದ ಸಂವಿಧಾನ ದಿನಾಚರಣೆಯಲ್ಲಿ ಸಂವಿಧಾನ ಪೀಠಿಕೆ ಭೋದಿಸಿ ಮಾತನಾಡಿದ ಅವರು, ಸಮಾಜದಲ್ಲಿ ಶಾಂತಿಯುತವಾಗಿ ಜೀವಿಸಲು, ಸಾಮಾಜಿಕ, ಆರ್ಥಿಕವಾಗಿ ಪ್ರಬಲರಾಗಿ ಬದುಕಲು, ಜನರಿಗೆ ನ್ಯಾಯ ಒದಗಿಸಲು ಸಂವಿಧಾನ ಅವಶ್ಯಕ. ರಾಷ್ಟ್ರದಲ್ಲಿ ಹಿಂದೂ, ಮುಸ್ಲಿಂ, ಕ್ರೈಸ್ತ ಸೇರಿದಂತೆ ಹಲವಾರು ಧರ್ಮಗಳ ಆಚರಣೆ ಚಾಲ್ತಿಯಲ್ಲಿದೆ. ಪ್ರತಿಯೊಂದು ಧರ್ಮವು ತಮ್ಮದೇ ಆದ ಧರ್ಮ ಗ್ರಂಥಗಳನ್ನು ಒಳಗೊಂಡಿವೆ. ಆದರೆ ಅದನ್ನೆಲ್ಲ ಮೀರಿದ ಎಲ್ಲಾ ಧರ್ಮದವರಿಗೂ ಅನ್ವಯಿಸುವ ರಾಷ್ಟ್ರೀಯ ಗ್ರಂಥವೇ ಸಂವಿಧಾನ. ಅದನ್ನು ಉಳಿಸಿ ಸಂರಕ್ಷಿಸುವುದು ಹಾಗೂ ಪಾಲಿಸುವುದು ನಮ್ಮ ಕರ್ತವ್ಯ ಎಂದರು.

ಪುರಸಭಾಧ್ಯಕ್ಷೆ ವಸಂತ ಶ್ರೀಕಂಠ, ಉಪಾಧ್ಯಕ್ಷೆ ರಾಜೇಶ್ವರಿ ರಾಘವೇಂದ್ರ, ಮುಖ್ಯಾಧಿಕಾರಿ ಬಿ.ವಸಂತ ಕುಮಾರಿ ಸಮುದಾಯ ಸಂಘಟಕರು, ಮಹದೇವ.ಕೆ, ವ್ಯವಸ್ಥಾಪಕ ಮಹೇಂದ್ರ, ಕಿರಿಯ ಆರೋಗ್ಯ ನಿರೀಕ್ಷಕ ಮಧು, ದ್ವಿತೀಯ ದರ್ಜೆ ಸಹಾಯಕ ರಾಜೇಂದ್ರ ಪ್ರಸಾದ್, ಕಂದಾಯ ಅಧಿಕಾರಿ ತ್ರಿವೇಣಿ, ಲೆಕ್ಕಿಗ ವಿನಯ್ ಕುಮಾರ್, ಜೂನಿಯರ್ ಪ್ರೋಗ್ರಾಮರ್ ಹರೀಶ್, ರವಿ, ಪ್ರಿಯಾಂಕಾ, ಪೌರ ಕಾರ್ಮಿಕರಾದ ಶಿವಣ್ಣ ಮಹದೇವ, ಸೋಮ, ರಾಜಶೇಖರ್ ಇತರೆ ಸಿಬ್ಬಂದಿ ಹಾಜರಿದ್ದರು.

ಕಲಾವಿದನಿಗೆ ಸಹಾಯಧನ ವಿತರಣೆ



ಸರಗೂರಿನಲ್ಲಿ ಅನಾರೋಗ್ಯದಿಂದ ಬಳಲುತ್ತಿರುವ ಕಲಾವಿದ ಭೀಮರಾಜು ಅವರಿಗೆ ಸಂಸದ ಸುನೀಲ್ ಬೋಸ್ ಅವರ ಆಪ್ತ ಲಕ್ಷ್ಮೀನಾರಾಯಣ್ ನೀಡಿದ ಸಹಾಯಧನವನ್ನು ಎಪಿಎಂಸಿ ಮಾಜಿ ಅಧ್ಯಕ್ಷ ಸಿದ್ದರಾಜು ವಿತರಿಸಿದರು. ಈ ವೇಳೆ ಆದಿ ಕರ್ನಾಟಕ ಸಮಾಜದ ಅಧ್ಯಕ್ಷ ಶಿವಣ್ಣ, ಕಾರ್ಯದರ್ಶಿ ಮಲ್ಲೇಶ್, ದೊಡ್ಡಭೈರ ಇನ್ನಿತರರಿದ್ದರು.

ಕಂಪಲಾಪುರ ಹಾಲಿನ ಡೇರಿ ಚುನಾವಣೆ

ಜೆಡಿಎಸ್ ಬೆಂಬಲಿತರ ಮೇಲುಗೈ

ಕಂಪಲಾಪುರ, ನ.26– ಇಲ್ಲಿನ ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಆಡಳಿತ ಮಂಡಳಿ ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತರು 7, ಕಾಂಗ್ರೆಸ್ ಬೆಂಬಲಿತರು ಮೂವರು ಆಯ್ಕೆಯಾಗಿದ್ದಾರೆ.

ಇಲ್ಲಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಬೆಳಗ್ಗೆ 9 ರಿಂದ ಸಂಜೆ 4 ರವರೆಗೆ ಮತದಾನ ನಡೆದು, ಮತ ಎಣಿಕೆ ನಡೆದು ಸಂಜೆ ವೇಳೆಗೆ ಫಲಿತಾಂಶ ಹೊರಬಿದ್ದಿತು. ಸಂಘದಲ್ಲಿ ಒಟ್ಟು 260 ಷೇರುದಾರರಿದ್ದು, 258 ಮಂದಿ ತಮ್ಮ ಹಕ್ಕು ಚಲಾವಣೆ ಮಾಡಿದರು.

ಸಾಮಾನ್ಯ ಕ್ಷೇತ್ರ ಕರೀಗೌಡ (176), ಕೆ.ಕೆ.ರವಿ (169), ಕೃಷ್ಣೇ ಗೌಡ(153), ಗಣೇಶ್(150), ಸಿ.ಎಲ್. ರಾಜೇಗೌಡ(134), ಹಿಂದುಳಿದ ವರ್ಗದ 'ಅ' – ಮಹಮ್ಮದ್ ನಜೀಬ್(132) , ಹಿಂದುಳಿದ ವರ್ಗದ 'ಬಿ' ತಮ್ಮಯ್ಯ (119), ಪಪಂ– ರಾಮಕೃಷ್ಣ (146) , ಮಹಿಳಾ ಮೀಸಲು ಲಕ್ಷ್ಮಿ (124), ಸುನಂದ(120) ಜಯ ಗಳಿಸಿದರು. ಚುನಾವಣಾಧಿಕಾರಿಯಾಗಿ ಸಹಕಾರ ಇಲಾಖೆ ಜೆ.ಹಿತೇಂದ್ರ ಕರ್ತವ್ಯ ನಿರ್ವಹಿಸಿದರು.

ಪಿರಿಯಾಪಟ್ಟಣ ಪೊಲೀಸರು ಬಿಗಿ ಬಂದೋಬಸ್ತ್ ಮಾಡಿದ್ದರು. ಫಲಿತಾಂಶ ಹೊರ ಬೀಳುತ್ತಿದ್ದಂತೆ ಅಭಿಮಾನಿಗಳು ಪಟಾಕಿ ಸಿಡಿಸಿ ಸಂಭ್ರಮಿಸಿದರು. ಈ ವೇಳೆ ಟಿಎಪಿಸಿಎಂಎಸ್ ನಿರ್ದೇಶಕ ಕೆ. ಕುಮಾರ್, ಪಿಎಸಿಎಸ್ ಅಧ್ಯಕ್ಷ ಸಂತೋಷ್, ನಿರ್ದೇಶಕ ಎಂ.ಲಕ್ಷ್ಮಣ್, ಪ್ರಕಾಶ್ ಗೌಡ, ಮಾಜಿ ಅಧ್ಯಕ್ಷ ಜಯಣ್ಣ, ರವಿ, ಡೇರಿ ಅಧ್ಯಕ್ಷ ಸ್ವಾಮಿ, ಗ್ರಾಪಂ ಮಾಜಿ ಅಧ್ಯಕ್ಷ ಆಸೀಫ್ ಖಾನ್, ಜೆಡಿಎಸ್ ಮುಖಂಡ ಸೂರಿ, ಹರೀಶ್, ಸಿಇಓ ಕಿಶೋರ್ ಮತ್ತು ಸಿಬ್ಬಂದಿ ಮತ್ತಿತರರಿದ್ದರು.



ಅಭ್ಯರ್ಥಿಗಳ ಅಭಿಮಾನಿಗಳ ಸಂಭ್ರಮಾಚರಣೆ ನಡೆಸಿದರು.

2.35 ಕೋಟಿ ವೆಚ್ಚದ ಕಾಮಗಾರಿಗೆ ಭೂಮಿಪೂಜೆ



ಹಂಡುವಿನಹಳ್ಳಿಯಲ್ಲಿ ಶಾಸಕ ದರ್ಶನ್ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನಡೆಸಿದರು.

ನಂಜನಗೂಡು, ನ.26– ತಾಲೂಕಿನ ಕನಕನಗರ, ಕತ್ವಾಡಿಪುರ, ಹಂಡುವಿನ ಹಳ್ಳಿ, ದೇಬೂರು, ಬ್ಯಾಳಾರು, ದೇವರಸನಹಳ್ಳಿ, ಹೊಸೂರು ಗ್ರಾಮಗಳಲ್ಲಿ ಮಂಗಳವಾರ ಶಾಸಕ ದರ್ಶನ್ 2.35 ಕೋಟಿ ವೆಚ್ಚದ ಸಿಸಿ ರಸ್ತೆ, ಸಮುದಾಯ ಭವನ, ಅಂಗನವಾಡಿ ಕಟ್ಟಡ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನಡೆಸಿದರು.

ತಾಲೂಕಿನ ದೇವರಸನಹಳ್ಳಿಯಲ್ಲಿ ಮಾತನಾಡಿದ ಶಾಸಕ ದರ್ಶನ್, ಸಿಎಂ ಸಿದ್ದರಾಮಯ್ಯನವರು ಕ್ಷೇತ್ರಕ್ಕೆ ನೀಡಿರುವ 25 ಕೋಟಿ ವಿಶೇಷ ಅನುದಾನದಲ್ಲಿ ಕ್ಷೇತ್ರದ ಹಲವು ಗ್ರಾಮಗಳಲ್ಲಿ ಮೂಲ ಸೌಕರ್ಯ ಒದಗಿಸುವ ಸಲುವಾಗಿ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ. ನಗರದಿಂದ ದೇವರಸನಹಳ್ಳಿ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಸಂಪೂರ್ಣ ಹಾಳಾಗಿದ್ದು, ರಸ್ತೆ ಕಾಮಗಾರಿಗಾಗಿ 12 ಕೋಟಿ ರೂ. ಅನುದಾನಕ್ಕಾಗಿ ಮನವಿ ಸಲ್ಲಿಸಲಾಗಿದೆ. ಡಿಸೆಂಬರ್ ತಿಂಗಳ ಅಧಿವೇಶನ ಮುಗಿದ ನಂತರ ಲೋಕೋಪಯೋಗಿ ಇಲಾಖೆಯಿಂದ ಅನುದಾನ ಬಿಡುಗಡೆಯಾಗಲಿದ್ದು ಗ್ರಾಮದ ಸಂಪರ್ಕ ರಸ್ತೆಯನ್ನು ಅಭಿವೃದ್ಧಿ ಪಡಿಸಲು ಬದ್ಧನಾಗಿದ್ದೇನೆ ಎಂದರು.

ತಾಲೂಕಿನ ಕತ್ವಾಡಿಪುರದಲ್ಲಿ 20 ಲಕ್ಷ ವೆಚ್ಚದ ಸಿಸಿ ರಸ್ತೆ ಮತ್ತು ಚರಂಡಿ, ಕನಕ ನಗರ ಗ್ರಾಮದಲ್ಲಿ 20 ಲಕ್ಷ, ಕಲ್ಲಹಳ್ಳಿಯಲ್ಲಿ 20 ಲಕ್ಷ, ಹಂಡುವಿನಹಳ್ಳಿಯಲ್ಲಿ 20 ಲಕ್ಷ ದೇಬೂರಲ್ಲಿ 20 ಲಕ್ಷ ಬ್ಯಾಳಾರು ಗ್ರಾಮದಲ್ಲಿ 30 ಲಕ್ಷ, ದೇವರಸನಹಳ್ಳಿಯಲ್ಲಿ 40 ಲಕ್ಷ, ಹೊಸೂರು ಗ್ರಾಮದಲ್ಲಿ 50 ಲಕ್ಷ ವೆಚ್ಚದಲ್ಲಿ ಸಿಸಿ ರಸ್ತೆ ಚರಂಡಿ ನಿರ್ಮಾಣವಾಗಲಿದೆ. ದೇವರಸನಹಳ್ಳಿಯಲ್ಲಿ 10 ಲಕ್ಷ ವೆಚ್ಚದಲ್ಲಿ ಒಕ್ಕಲಿಗ ಭವನಕ್ಕೆ ಗುದ್ದಲಿ ಪೂಜೆ ನೆರವೇರಿಸಿದ್ದು ಶೀಘ್ರ ಕಾಮಗಾರಿ ಪೂರ್ಣಗೊಂಡು ಜನರಿಗೆ ಅನುಕೂಲವಾಗಲಿದೆ ಎಂದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಕೇಶಮೂರ್ತಿ, ತಾಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹೇಶ್, ಮುಖಂಡರಾದ ನವೀನ್, ಪರಶಿವಮೂರ್ತಿ, ಮಹೇಶ್, ಹೆಚ್.ಜೆ. ಜಗದೀಶ್, ಮಹದೇವು, ಶ್ರೀನಿವಾಸಮೂರ್ತಿ, ನಾಗಣ್ಣ, ವಿಜಯ ಕುಮಾರ್, ಮೂರ್ತಿ, ಪಾಂಡು, ಶಿವ ರಾಜು, ಮುದ್ದುಮಾದಶೆಟ್ಟಿ, ನಾಗರಾಜು, ಅಶೋಕ, ದೊರೆಸ್ವಾಮಿ ನಾಯಕ, ಮಹದೇವು ಉಪಸ್ಥಿತರಿದ್ದರು.

ಆಟೋ ಚಾಲಕರ ಕನ್ನಡ ಪ್ರೇಮ ಇತರರಿಗೆ ಮಾದರಿ

ಪುರಸಭೆ ಮಾಜಿ ಅಧ್ಯಕ್ಷ ಟಿ.ಎಂ.ನಂಜುಂಡಸ್ವಾಮಿ



ತಿ.ನರಸೀಪುರದಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು.

ತಿ.ನರಸೀಪುರ, ನ.26– ಆಟೋ ಚಾಲಕರು ನಿಜವಾದ ಕನ್ನಡ ಪ್ರೇಮಿಗಳಾಗಿದ್ದು, ಅವರ ಕನ್ನಡ ಪ್ರೇಮ ಇತರರಿಗೆ ಮಾದರಿಯಾಗಲಿ ಎಂದು ಪುರಸಭೆ ಮಾಜಿ ಅಧ್ಯಕ್ಷ ಟಿ.ಎಂ.ನಂಜುಂಡಸ್ವಾಮಿ ತಿಳಿಸಿದರು.

ಪಟ್ಟಣದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಎದುರು ಶ್ರೀಗುಂಜಾ ನರಸಿಂಹಸ್ವಾಮಿ ಆಟೋ ಮಾಲೀಕರು ಮತ್ತು ಚಾಲಕರ ಸಂಘದಿಂದ ನಡೆದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಕನ್ನಡಾಂಬೆ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಅವರು ಮಾತನಾಡಿದರು.

ಭಾಷೆಗೆ ಬಡತನವಿಲ್ಲ ಬೇಕಿರುವುದು ಹೃದಯ ಶ್ರೀಮಂತಿಕೆ ಎಂಬುದನ್ನು ತೋರಿಸಿಕೊಟ್ಟವರು ಆಟೋ ಚಾಲಕರು. ಇವರ ಕನ್ನಡ ಪ್ರೇಮ ನಿಜಕ್ಕೂ ಮೆಚ್ಚುವಂತಾದ್ದು, ಕನ್ನಡ ಭಾಷೆಯನ್ನು ಕೇವಲ ನವೆಂಬರ್‌ನಲ್ಲಿ ಆಚರಿಸುವ ಕನ್ನಡಿಗರಾಗದೇ ವರ್ಷ ಪೂರ್ತಿ ಕನ್ನಡದ ಹಬ್ಬ ಆಚರಣೆ ಮಾಡಬೇಕಿದೆ. ತಮ್ಮ ಮಕ್ಕಳಿಗೆ ಪ್ರಾಥಮಿಕ ಹಂತದಲ್ಲೇ ಕನ್ನಡದಲ್ಲಿ ಶಿಕ್ಷಣ ಕೊಡಿಸುವ ಮೂಲಕ ಮಕ್ಕಳಲ್ಲಿ ಕನ್ನಡ ಭಾಷಾ ಪ್ರೇಮ ಮೂಡಿಸಬೇಕು ಎಂದರು.

ಇಂದು ಕರ್ನಾಟಕದಲ್ಲಿ ಕನ್ನಡ ಭಾಷೆ ಬಳಕೆಯಲ್ಲಿದೆ ಎಂದರೆ ಅದಕ್ಕೆ ಆಟೋ ಚಾಲಕರ ಕೊಡುಗೆ ಅಪಾರ. ಐಟಿ, ಬಿಟಿ ಉದ್ಯೋಗಿಗಳು ಕನ್ನಡಿಗರಾದರೂ ಕನ್ನಡ ಮಾತನಾಡಲು ಹಿಂಜರಿಯುತ್ತಾರೆ. ಆದರೆ ಆಟೋದವರು ಕನ್ನಡ ಭಾಷೆಗೆ ತಮ್ಮ ತಂದೆ ತಾಯಿಗೆ ನೀಡುವಷ್ಟು ಗೌರವ ನೀಡುತ್ತಿರುವುದು ನಿಜಕ್ಕೂ ಹೆಮ್ಮೆಯ ವಿಷಯ. ಗ್ರಾಮೀಣ ಪ್ರದೇಶದಲ್ಲಿ ಕನ್ನಡ ಭಾಷೆ ಹೆಚ್ಚು ಬಳಕೆಯಲ್ಲಿದೆ. ಸ್ವಂತ ಹಣದಲ್ಲಿ ಮನೆ ಹಬ್ಬದಂತೆ ಆಚರಿಸುವ ಚಾಲಕರ ಮಾತೃ ಭಾಷೆ ಮರೆಯಲಾಗದು ಎಂದು ಸ್ಮರಿಸಿದರು.

ಸದಸ್ಯ ತುಂಬಲ ಪ್ರಕಾಶ್ ಮಾತನಾಡಿ, ಇಂದು ಸಂವಿಧಾನ ದಿನಾಚರಣೆ ಅಂಗವಾಗಿ ನೀವು ರಾಜ್ಯೋತ್ಸವ ಆಚರಿಸುತ್ತಿರುವುದು ಸಂತೋಷದ ವಿಷಯ. ಪ್ರತಿಯೊಬ್ಬರಿಗೂ ಸಂವಿಧಾನವಿದ್ದರೆ ಅಧಿಕಾರ ಮತ್ತು ಅಭಿವೃದ್ಧಿಗೆ ಸಹಕಾರಿಯಾಗಲಿದೆ ಎಂದರು.

ಪುರಸಭಾಧ್ಯಕ್ಷೆ ವಸಂತ ಶ್ರೀಕಂಠ, ಸದಸ್ಯ ಬಾದಾಮಿ ಮಂಜು, ತಾಲೂಕು ಕುರುಬರ ಸಂಘದ ಕಾರ್ಯಾಧ್ಯಕ್ಷ ಮಾದೇಶ್, ಅನಾಥ ಶವಗಳ ಮುಕ್ತಿದಾತ ಡಾ.ಎಂ. ಮಾದೇಶ್, ಮುಖಂಡ ಶ್ರೀಕಂಠ, ಆಲಗೂಡು ರಾಜು, ಶ್ರೀಗುಂಜಾ ನರಸಿಂಹಸ್ವಾಮಿ ಆಟೋ ಚಾಲಕರು ಮತ್ತು ಮಾಲೀಕರ ಸಂಘದ ಅಧ್ಯಕ್ಷ ಶಂಕರ್, ಉಪಾಧ್ಯಕ್ಷ ಸುನೀಲ್, ಕಾರ್ಯದರ್ಶಿ ಎಸ್.ಮಹದೇವ ನಾಯಕ, ಖಜಾಂಚಿ ಮಹದೇವಸ್ವಾಮಿ, ಸಂಘಟನಾ ಕಾರ್ಯದರ್ಶಿ ಎನ್.ರವಿ, ಸಹ ನಿರ್ದೇಶಕ ಮಹೇಶ್, ನಿರ್ದೇಶಕರಾದ ಪ್ರಭಾಕರ್, ಸಿದ್ದರಾಜು, ಮಲ್ಲೇಶ್, ವಸಂತಕುಮಾರ, ಕೆಂಚ ಮಹೇಶ್, ಮಹದೇವ ಹಾಗೂ ಆಟೋ ಚಾಲಕರು ಮಾಲೀಕರು, ಅಭಿಮಾನಿಗಳು ಭಾಗವಹಿಸಿದ್ದರು.

> ಆಟೋ ಚಾಲಕರು ಶ್ರಮ ಜೀವಿಗಳಾಗಿದ್ದು, ಕನ್ನಡ ಭಾಷೆ ಮೇಲಿನ ಅವರ ಅಭಿಮಾನ ನಿಜಕ್ಕೂ ಶ್ಲಾಘನೀಯ. ಆಟೋ ಚಾಲಕರು ಮೊದಲು ಶಿಸ್ತು ಮೈಗೂಡಿಸಿಕೊಳ್ಳಬೇಕು. ಸಾರ್ವಜನಿಕರಿಂದ ಯಾವುದೇ ದೂರು ಬರದಂತೆ ನೋಡಿಕೊಳ್ಳಬೇಕು. ಪ್ರಯಾಣಿಕರನ್ನು ಗೌರವದಿಂದ ಕಾಣಬೇಕು. ಸ್ವಾಭಿಮಾನಿ ಬದುಕಿಗಾಗಿ ಪುರಸಭೆ ಅಧ್ಯಕ್ಷರು, ಸದಸ್ಯರು ಪುರಸಭೆ ವತಿಯಿಂದ ಆಟೋ ನಿಲ್ದಾಣ ಮಾಡಿಕೊಳ್ಳಲು ಸ್ಥಳ ಮಂಜೂರು ಮಾಡಿ ಕೊಡಬೇಕು.
>
> – ಬಿ.ಮರಯ್ಯ, ತಾಪಂ ಮಾಜಿ ಉಪಾಧ್ಯಕ್ಷ

ನಂಜನಗೂಡಲ್ಲಿ ಸ್ನೇಹಿತರಿಂದಲೇ ವ್ಯಕ್ತಿ ಕೊಲೆ

ನಂಜನಗೂಡು, ನ.26– ವ್ಯಕ್ತಿಯೋರ್ವನನ್ನು ಮಾರಕಾಸ್ತ್ರಗಳಿಂದ ಹತ್ಯೆ ಮಾಡಿರುವ ಘಟನೆ ನಗರದ ರೈಲ್ವೆ ಮೇಲ್ಸೇತುವೆ ಪಕ್ಕದ ಸರ್ವಿಸ್ ರಸ್ತೆಯಲ್ಲಿ ಮಂಗಳವಾರ ಜರುಗಿದೆ.

ನಗರದ ಚಾಮಲಾಪುರ ಹುಂಡಿ ಗ್ರಾಮದ ಮಾದೇಶ (55) ಹತ್ಯೆಯಾದವರು. ಗಾರೆ ಕೆಲಸ ಮಾಡಿಕೊಂಡಿದ್ದ ಈತ ಮಂಗಳವಾರ ಮಧ್ಯಾಹ್ನ ತನ್ನ ಮೂವರು ಸ್ನೇಹಿತರೊಂದಿಗೆ ನಗರದ ರೈಲ್ವೆ ಮೇಲ್ಸೇತುವೆ ಪಕ್ಕದ ಸರ್ವಿಸ್ ರಸ್ತೆಯಲ್ಲಿ ಪಾರ್ಟಿ ಮಾಡುತ್ತಿದ್ದರು. ಈ ವೇಳೆ ಕ್ಷುಲ್ಲಕ ಕಾರಣಕ್ಕೆ ಸ್ನೇಹಿತರ ನಡುವೆ ಜಗಳವಾಗಿದ್ದು, ಮಾದೇಶನ ಸ್ನೇಹಿತರೇ ಆತನ ತಲೆಗೆ ಮಾರಕಾಸ್ತ್ರಗಳಿಂದ ಹಲ್ಲೆ ಮಾಡಿದ್ದಾರೆ. ಬಳಿಕ ಕೆಳಗೆ ಬಿದ್ದವನ ತಲೆ ಮೇಲೆ ಕಲ್ಲು ಎತ್ತಿ ಹಾಕಿ ಕೊಲೆ ಮಾಡಿ ಪರಾರಿಯಾಗಿದ್ದಾರೆ. ದುಷ್ಕರ್ಮಿಗಳು ನನ್ನ ತಂದೆ ಕುತ್ತಿಗೆಗೆ ಟವಲ್ ಬಿಗಿದು, ಆಯುಧದಿಂದ ಹೊಡೆದು ಕೊಲೆಗೈದು ಪರಾರಿಯಾಗಿದ್ದು, ಆರೋಪಿಗಳನ್ನು ಪತ್ತೆ ಹಚ್ಚಿ ಶಿಕ್ಷೆಗೆ ಗುರಿ ಪಡಿಸಬೇಕೆಂದು ಮೃತನ ಪುತ್ರ ರಾಜು ಪಟ್ಟಣ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಇನ್ಸ್‌ಪೆಕ್ಟರ್ ಸುನೀಲ್ ಕುಮಾರ್ ಹಾಗೂ ಸಿಬ್ಬಂದಿ ಪರಿಶೀಲನೆ ನಡೆಸಿ ಶವವನ್ನು ಮರಣೋತ್ತರ ಪರೀಕ್ಷೆಗೆ ಒಳಪಡಿಸಿ, ತನಿಖೆ ಮುಂದುವರಿಸಿದ್ದಾರೆ. ಈ ಸಂಬಂಧ ನಂಜನಗೂಡು ಪಟ್ಟಣ ಠಾಣೆಯಲ್ಲಿ ದೂರು ದಾಖಲಾಗಿದೆ.

ದೇಶಕ್ಕೆ ಶ್ರೇಷ್ಠ ಸಂವಿಧಾನ ನೀಡಿದ ಅಂಬೇಡ್ಕರ್




ನಂಜನಗೂಡಲ್ಲಿ ನಡೆದ ವಿಚಾರ ಸಂಕಿರಣದಲ್ಲಿ ಶಾಸಕ ದರ್ಶನ್ ಮಾತನಾಡಿದರು.

ನಂಜನಗೂಡು, ನ.26– ವಿಭಿನ್ನ ಭಾಷೆ, ಸಂಸ್ಕೃತಿ, ಜಾತಿ ಹಾಗೂ ಧರ್ಮದ ಜನರನ್ನು ಒಳಗೊಂಡ ಭಾರತದ ಐಕ್ಯತೆಗೆ ನೆರವಾಗುವ ಶ್ರೇಷ್ಠ ಸಂವಿಧಾನವನ್ನು ಡಾ. ಅಂಬೇಡ್ಕರ್ ದೇಶಕ್ಕೆ ಕೊಡುಗೆ ನೀಡಿದ್ದಾರೆ ಎಂದು ಶಾಸಕ ದರ್ಶನ್ ತಿಳಿಸಿದರು.

ನಗರದ ಅಂಬೇಡ್ಕರ್ ಭವನದಲ್ಲಿ ಮಂಗಳವಾರ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿಯಿಂದ ಸಂವಿಧಾನ ಸಮರ್ಪಣೆ ದಿನದ ಸ್ಮರಣಾರ್ಥ ಆಯೋಜಿಸಿದ್ದ ಸಂವಿಧಾನದ ಆಶಯಗಳು ಮತ್ತು ಸಮ ಸಮಾಜದ ಕನಸುಗಳು ಎಂಬ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದರು.

ಸಂವಿಧಾನವನ್ನು ಸಮರ್ಪಿಸಿದ 1949ರ ನ.26 ದೇಶದ ಶೋಷಿತರ ಪಾಲಿನ ಜನ್ಮ ದಿನವಾಗಿದ್ದು, ಸರ್ವ ಜನರ ರಕ್ಷಣೆಗೆ ಸೂಕ್ತವಾದ ಸಂವಿಧಾನ ರಚಿಸಿದ ಅಂಬೇಡ್ಕರ್ ಅವರ ಆಶಯದಂತೆ ನಾವೆಲ್ಲರೂ ಸುಖೀ ಜೀವನ ನಡೆಸಲು ಸಂವಿಧಾನದಿಂದ ನಮಗೆ ಲಭ್ಯವಾಗಿರುವ ಹಕ್ಕು ಮತ್ತು ಕರ್ತವ್ಯಗಳ ಬಗ್ಗೆ ಅರಿವು ಹೊಂದಿರಬೇಕು. ಬದಲಾದ ಪರಿಸ್ಥಿತಿಯಲ್ಲಿ ದೇಶದ ಸಂವಿಧಾನ ರಕ್ಷಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು. ಮಾಜಿ ಶಾಸಕ ಕೇಶವ ಮೂರ್ತಿ ಮಾತನಾಡಿದರು. ಜಿಲ್ಲಾ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಕೆ. ದೀಪಕ್ ಸಂವಿಧಾನದ ಆಶಯಗಳು ಮತ್ತು ಸಮ ಸಮಾಜದ ಕನಸುಗಳು ಎಂಬ ವಿಷಯದ ಕುರಿತು ವಿಚಾರ ಮಂಡಿಸಿದರು. ಕಾರ್ಯಕ್ರಮದಲ್ಲಿ ಟಿಎಪಿಸಿಎಂಎಸ್ ಅಧ್ಯಕ್ಷ ಮಹೇಶ್, ದಸಂಸ ಜಿಲ್ಲಾ ಸಂಚಾಲಕ ಮಲ್ಲೇಶ್, ದಸಂಸ ತಾಲೂಕು ಸಂಚಾಲಕ ಸುರೇಶ್, ನಾರಾಯಣ್, ಶ್ರೀನಿವಾಸ್, ಅನಿಲ್, ಚಿಕ್ಕಣ್ಣ ಮತ್ತಿತರರಿದ್ದರು.

ಶಾಸಕ ಜಿಟಿಡಿಗೆ ಹುಟ್ಟುಹಬ್ಬದ ಶುಭಾಶಯ



ಶಾಸಕ ಜಿ.ಟಿ.ದೇವೇಗೌಡರಿಗೆ ಚಿತ್ರ ನಿರ್ಮಾಪಕ ಜಯಪುರ ಎಂ.ಮಹದೇವೇಗೌಡ ಮತ್ತು ಸಮಾಜ ಸೇವಕ ಎಸ್.ಶ್ರೀಕಾಂತ್ ಬೃಹತ್ ಹೂವಿನ ಹಾರ ಹಾಕಿ ಹುಟ್ಟುಹಬ್ಬದ ಶುಭಾಶಯ ಕೋರಿದರು.

ಬಿ. ಲಕ್ಷ್ಮಣಗೆ ಪಿಹೆಚ್.ಡಿ.



ಮೈಸೂರು: ಡಾ. ವೈ.ಬಿ. ಬಸವರಾಜು ಅವರ ಮಾರ್ಗದರ್ಶನದಲ್ಲಿ ಬಿ. ಲಕ್ಷ್ಮಣ ಅವರು ರಸಾಯನಶಾಸ್ತ್ರ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿ.ಎಚ್.ಡಿ ಪದವಿಗೆ ಅಂಗೀಕರಿಸಿದೆ.


ನಿಧನ



ಮಹದೇವಸ್ವಾಮಿ

ಮೂಗೂರು, ನ.26– ಗ್ರಾಮದ ಶ್ರೀರಾಮ ಕಾಲೋನಿ ನಿವಾಸಿ, ಗ್ರಾಪಂ ಮಾಜಿ ಅಧ್ಯಕ್ಷ ಮಹದೇವಸ್ವಾಮಿ ಅಲಿಯಾಸ್ ಮಾಧು (48) ಸೋಮವಾರ ರಾತ್ರಿ ನಿಧನರಾದರು. ಮೃತರು ಪತ್ನಿ ಗಾಯತ್ರಿ, ಇಬ್ಬರು ಪುತ್ರಿಯರು, ಸಹೋದರ ಬಾಬು ಜಗಜೀವನರಾಂ ತಾಲೂಕು ಮಾಜಿ ಅಧ್ಯಕ್ಷ ಎಂ.ಸಿದ್ದರಾಜು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮಂಗಳವಾರ ಮೃತರ ಜಮೀನಿನಲ್ಲಿ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ. ಹಲವು ಗಣ್ಯರು ಮೃತರ ಅಂತಿಮ ದರ್ಶನ ಪಡೆದರು.

ಶಿವಲಿಂಗಪ್ಪ



ಹುಲ್ಲಹಳ್ಳಿ, ನ.26– ಗ್ರಾಮದ ಪಿಎಸಿಎಸ್ ಮಾಜಿ ಅಧ್ಯಕ್ಷ ಶಿವಲಿಂಗಪ್ಪ (68) ಸೋಮವಾರ ರಾತ್ರಿ ನಿಧನರಾದರು. ಮೃತರು ಇಬ್ಬರು ಪುತ್ರರು, ಸೊಸೆಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಗ್ರಾಮದ ಕಪಿಲಾ ನದಿ ದಡದಲ್ಲಿ ಮಂಗಳವಾರ ಸಂಜೆ ನೆರವೇರಿತು.

ಮೈಸೂರು ಮಿತ್ರ

ಮೈಸೂರಲ್ಲಿ ಸಂವಿಧಾನ ದಿನಾಚರಣೆ

ಸಂವಿಧಾನ ದೇಶದ ಸಮಸ್ತ ಜನರಿಗೆ ಅನ್ವಯವಾಗುವ ಧರ್ಮಗ್ರಂಥ

- ಪಂಚಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಪುಷ್ಪ ಅಮರ್‌ನಾಥ್ ಅಭಿಮತ
- ಸಿದ್ದರಾಮಯ್ಯನವರ ಸರ್ಕಾರ ಸಂವಿಧಾನಕ್ಕೆ ಅನುಗುಣವಾಗಿ ಆಡಳಿತ ನಡೆಸುತ್ತಿದೆ



ಮೈಸೂರಿನ ಕಲಾಮಂದಿರದಲ್ಲಿ ಜಿಲ್ಲಾಡಳಿತದ ವತಿಯಿಂದ ಆಯೋಜಿಸಿದ್ದ ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಉಪಾಧ್ಯಕ್ಷೆ ಡಾ.ಪುಷ್ಪ ಅಮರನಾಥ್ ಡಾ.ಬಿ.ಆರ್.ಅಂಬೇಡ್ಕರ್ ಪುತ್ಥಳಿಗೆ ಪುಷ್ಪಾರ್ಚನೆ ಮೂಲಕ ಚಾಲನೆ ನೀಡಿದರು.

ಮೈಸೂರು,ನ.26(ಎಂಟಿವೈ)– ಎಲ್ಲಾ ಧರ್ಮಗಳಿಗೂ ಪ್ರತ್ಯೇಕ ಧರ್ಮಗ್ರಂಥ ಇದೆಯಾದರೂ, ಸಂವಿಧಾನ ಎಲ್ಲಾ ಧರ್ಮಗಳನ್ನು ಕಾಪಾಡುವ ಪವಿತ್ರ ಧರ್ಮ ಗ್ರಂಥವಾಗಿದೆ ಎಂದು ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಡಾ. ಪುಷ್ಪ ಅಮರನಾಥ್ ಬಣ್ಣಿಸಿದ್ದಾರೆ.

ಮೈಸೂರಿನ ಕಲಾಮಂದಿರದಲ್ಲಿ ಜಿಲ್ಲಾಡಳಿತ, ಜಿ.ಪಂ, ಮೈಸೂರು ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಆಯೋಜಿಸಲಾಗಿದ್ದ 'ಸಂವಿಧಾನ ದಿನಾಚರಣೆ' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಹಿಂದು ಧರ್ಮಕ್ಕೆ ಭಗವದ್ಗೀತೆ, ಕ್ರೈಸ್ತ ಧರ್ಮಕ್ಕೆ ಬೈಬಲ್, ಇಸ್ಲಾಂ ಧರ್ಮಕ್ಕೆ ಕುರಾನ್ ಧರ್ಮ ಗ್ರಂಥಗಳಿವೆ. ಆದರೆ, ದೇಶದಲ್ಲಿರುವ ಎಲ್ಲಾ ಜಾತಿ, ಧರ್ಮಗಳನ್ನು ಕಾಪಾಡುವ ಪವಿತ್ರ ಗ್ರಂಥವಾಗಿ ಸಂವಿಧಾನ ವಿದೆ. ಈ ಹಿನ್ನೆಲೆಯಲ್ಲಿ ಸಂವಿಧಾನದ ರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ ಎಂದರು.

ಡಾ.ಬಿ.ಆರ್.ಅಂಬೇಡ್ಕರ್ ಅವರು ಕೊಟ್ಟಂತಹ ಈ ಸಂವಿಧಾನದಲ್ಲಿ ಎಲ್ಲರಿಗೂ ಸಮಾನತೆಯ ಅವಕಾಶ ಕಲ್ಪಿಸಿದೆ. ಇದರಿಂದ ದೇಶದ ಬಡವರು, ದೀನ ದಲಿತರು, ಮಹಿಳೆಯರು ಹಾಗೂ ಸಮಾಜದಲ್ಲಿ ದನಿ ಇಲ್ಲದ ಜನರ ದನಿಯಾಗಿ ನಮ್ಮನ್ನು ಕಾಯುತ್ತಿರುವುದೇ ಸಂವಿಧಾನ. ನಮಗೆ ದೈವ ಗ್ರಂಥಸ್ವರೂಪಿಯೂ ಹಾಗೂ ರಾಷ್ಟ್ರೀಯ ಗ್ರಂಥವೂ ಆಗಿದೆ. ಈ ಹಿನ್ನೆಲೆಯಲ್ಲಿ ಸಂವಿಧಾನದ ಆಶಯವನ್ನು ಎಲ್ಲರೂ ಪಾಲಿಸಬೇಕು. ದೇಶದಲ್ಲಿ ಸಮಾನತೆ ಸ್ಥಾಪಿಸುವುದರೊಂದಿಗೆ ಶಾಂತಿಯುತ ವಾತಾವರಣ ನಿರ್ಮಿಸುವ ನಿಟ್ಟಿನಲ್ಲಿ ಎಲ್ಲರೂ ಕೈಜೋಡಿಸಬೇಕು ಎಂದು ತಿಳಿಸಿದರು.

ಸಂವಿಧಾನದ ಆಶಯದಂತೆ ಸರ್ಕಾರದ ಹೆಜ್ಜೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ಸಂವಿಧಾನದ ಆಶಯದಂತೆ ಕಾರ್ಯನಿರ್ವಹಿಸುತ್ತಿದೆ ಮಹಿಳೆಯರಿಗೆ ಸಮಾನತೆ ಕಲ್ಪಿಸುವ ನಿಟ್ಟಿನಲ್ಲಿ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಶಕ್ತಿಯೋಜನೆ, ಗೃಹಜ್ಯೋತಿ, ಗೃಹಲಕ್ಷ್ಮೀ, ಅನ್ನಭಾಗ್ಯ ಹಾಗೂ ಯುವನಿಧಿ ಯೋಜನೆ ಮಹಿಳೆಯರಿಗೆ ವರದಾನವಾಗಿ ಪರಿಣಮಿಸಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಕಾಲೇಜು ಅಭಿವೃದ್ಧಿ ಮಂಡಳಿಯ ನಿರ್ದೇಶಕ ಡಾ.ಡಿ.ಆನಂದ್ ಮಾತನಾಡಿ, ಪ್ರತಿ ವರ್ಷ ನ.26ರಂದು ಭಾರತದ ಸಂವಿಧಾನ ದಿನ ಆಚರಿಸಲಾಗುತ್ತದೆ. ಸಂವಿಧಾನ ದಿನದ ಪ್ರಾಮುಖ್ಯತೆಯನ್ನು ವಿದ್ಯಾರ್ಥಿಗಳಿಗೆ ತಿಳಿಸಿಕೊಡಲಾಗುತ್ತದೆ. ಇದರಿಂದ ಅವರಿಗೆ ಸಂವಿಧಾನದ ಮಹತ್ವ ತಿಳಿಯುವುದರೊಂದಿಗೆ ಜೀವನದಲ್ಲಿ ಅಳವಡಿಸಿಕೊಳ್ಳಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

ನಮ್ಮ ಸಂವಿಧಾನ ರಚಿಸಲು 7 ಜನರ ಒಳಗೊಂಡ ತಂಡ ರಚಿಸಲಾಗಿತ್ತು, ಸಂವಿಧಾನ ರಚನಾ ಸಭೆಯಲ್ಲಿ 6 ಜನರು ವಿವಿಧ ಕಾರಣಗಳಿಂದ ಸಕ್ರಿಯವಾಗಿ ಭಾಗ ವಹಿಸದಿದ್ದಾಗ, ಡಾ.ಬಿ.ಆರ್.ಅಂಬೇಡ್ಕರ್ ಸಂವಿಧಾನ ರಚನೆಯ ಹೊಣೆ ಹೊತ್ತರು. ದಿನದ 18 ಗಂಟೆಗಳ ಕಾಲ ಶ್ರಮವಹಿಸಿ, ಸತತ 2ವರ್ಷ 11ತಿಂಗಳು 17 ದಿನದಲ್ಲಿ ಬಡವರಿಗೆ, ಮಹಿಳೆಯರಿಗೆ, ಹಿಂದುಳಿದವರಿಗೆ ಹಾಗೂ ಸಮಾಜದ ಎಲ್ಲಾ ಜನರಿಗೂ ಉಪಯುಕ್ತವಾಗುವ ಸಂವಿಧಾನವನ್ನು ರಚಿಸಿದರು. ಈ ಕಾರಣದಿಂದಲೇ ಡಾ.ಬಿ.ಆರ್ ಅಂಬೇಡ್ಕರ್ ಅವರನ್ನು ಸಂವಿಧಾನದ ಶಿಲ್ಪಿ ಎಂದು ಕರೆಯಲಾಗುತ್ತದೆ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಆಶಾದ್ ಉರ್ ರಹಮಾನ್ ಶರೀಫ್, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ರಂಗೇಗೌಡ, ಉಪನಿರ್ದೇಶಕ ಜನಾರ್ಧನ್, ಸಾಮಾಜಿಕ ಹೋರಾಟಗಾರ ಅಹಿಂದ ಜವರೇಗೌಡ, ಸೋಮಯ್ಯ ಮಲೆಯೂರು, ವಾರ್ಡನ್ ಚಿಕ್ಕವೀರಯ್ಯ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ವಿದ್ಯಾರ್ಥಿ ನಿಲಯದ ನಿಲಯ ಪಾಲಕರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಯೋಗಾಚಾರ್ಯ ಕೃಷ್ಣಮಾಚಾರ್ಯರ 136ನೇ ಜಯಂತಿ ಆಚರಣೆ



ಮೈಸೂರಿನ ನಿವೇದಿತಾ ಪಾರ್ಕ್‌ನಲ್ಲಿ 'ಯೋಗಾಚಾರ್ಯ ಶ್ರೀ ಕೃಷ್ಣಮಾಚಾರ್ಯರ 136ನೇ ಜಯಂತಿ' ಆಚರಿಸಲಾಯಿತು.

ಮೈಸೂರು ನ26(ಎಸ್‌ಪಿಎನ್)– ಮೈಸೂರು ನಿವೇದಿತ ನಗರ ಪಾರ್ಕ್‌ನಲ್ಲಿರುವ ಅನುಭವ ಮಂಟಪದಲ್ಲಿ ಉತ್ತಿಷ್ಠ ಭಾರತ ಪ್ರತಿಷ್ಠಾನ ಹಾಗೂ ಹಿಮಾಲಯ ಪ್ರತಿಷ್ಠಾನ 'ಯೋಗಾಚಾರ್ಯ ಶ್ರೀ ಕೃಷ್ಣಮಾಚಾರ್ಯರ 136ನೇ ಜಯಂತಿ' ಯನ್ನು ಆಚರಿಸಲಾಯಿತು.

ಈ ವೇಳೆ ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್ ಮಾತನಾಡಿ, ಭಾರತದ ಯೋಗವನ್ನು ಪ್ರಪಂಚಕ್ಕೆ ಪರಿಚಯಿಸಿದ ಗ್ಯಾರಲ್ಲಿ ಯೋಗಗುರು ಕೃಷ್ಣಮಾಚಾರ್ಯರಿಗೆ ಸಲ್ಲುತ್ತದೆ. ಇಂದು ಪ್ರಪಂಚವೇ ಯೋಗವನ್ನು ಅಳವಡಿಸಿಕೊಳ್ಳುತ್ತಿರುವ ಸಂದರ್ಭದಲ್ಲಿ ಇದಕ್ಕೆ ಕಾರಣೀಭೂತರಾದ ತಿರುಮಲೆ ಕೃಷ್ಣಮಾಚಾರ್ಯ, ಬಿ.ಕೆ.ಎಸ್. ಅಯ್ಯಂಗಾರ್, ಪಟ್ಟಾಭಿ ಜೋಯಿಸ್ ಅವರನ್ನು ಮೈಸೂರಿನ ಜನತೆ ಸ್ಮರಿಸಿಕೊಳ್ಳಬೇಕು. ಅಲ್ಲದೆ, ಪತ್ರಪುಸ್ತಕಗಳಲ್ಲಿ ಯೋಗ ವಿಷಯವನ್ನು ಅಳವಡಿಸಿದ ಕೀರ್ತಿ ಕೃಷ್ಣಮಾಚಾರ್ಯರಿಗೆ ಸಲ್ಲುತ್ತದೆ. ಅಂತೆಯೇ ಮೈಸೂರಿಗೆ ಯೋಗನಗರಿ ಎಂಬ ವಿಶೇಷಣೆ ಬರಲು ಇವರ ಕೊಡುಗೆ ಸೇರಿದೆ ಎಂದರು.

ಈ ವೇಳೆ ಹಿಮಾಲಯ ಪ್ರತಿಷ್ಠಾನದ ಅಧ್ಯಕ್ಷ ಎನ್.ಅನಂತ, ಉತ್ತಿಷ್ಠ ಭಾರತ ಪ್ರತಿಷ್ಠಾನದ ಕಾರ್ಯದರ್ಶಿ ಎಂ.ವಿ.ನಾಗೇಂದ್ರ ಬಾಬು, ಯೋಗ ಶಿಕ್ಷಕ ಬಿ. ಶ್ರೀನಾಥ್, ವಿಪ್ರಮುಖಂಡ ಕೆ.ರಘುರಾಂ ವಾಜಪೇಯಿ, ನಗರ ಪಾಲಿಕೆ ಮಾಜಿ ಸದಸ್ಯ ಜಗದೀಶ್, ಕೆ.ವಿ.ಮಲ್ಲೇಶ್, ಮುಖಂಡರಾದ ಹರ್ಷವರ್ಧನ, ವಿಭವ್ ಭಾರದ್ವಾಜ್ ಮುಂತಾದವರಿದ್ದರು.

ಸ್ವಾಭಿಮಾನದ ಕೊರತೆಯಿಂದ ಜನರ ಮನ ಮುಟ್ಟುವಲ್ಲಿ ಸೋತ ಕನ್ನಡ

ಮೈಸೂರು ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್ ವಿಷಾದ



ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ರೋಟರಿ ಸಭಾಂಗಣದಲ್ಲಿ ಸುವರ್ಣ ರಾಜ್ಯ ಶಿವಾರ್ಚಕ ಪ್ರಗತಿಪರ ಸಂಘದ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಆದರ್ಶ ಅಣ್ಣ ತಮ್ಮಂದಿರನ್ನು ಅಭಿನಂದಿಸಲಾಯಿತು.

ಮೈಸೂರು, ನ.26(ಜಿಎ)–ಸ್ವಾಭಿಮಾನದ ಕೊರತೆಯಿಂದ ಕನ್ನಡ ಎಲ್ಲರ ಮನ ಮುಟ್ಟುವಲ್ಲಿ ಸೋತಿದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ರೋಟರಿ ಸಭಾಂಗಣದಲ್ಲಿ ಸುವರ್ಣ ರಾಜ್ಯ ಶಿವಾರ್ಚಕ ಪ್ರಗತಿಪರ ಸಂಘದ ವತಿಯಿಂದ ಕನ್ನಡ ರಾಜ್ಯೋತ್ಸವ ಹಾಗೂ ಆದರ್ಶ ಅಣ್ಣ ತಮ್ಮಂದಿರ ಅಭಿನಂದನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕನ್ನಡ ಭಾಷೆಯು ಬಹಳ ಪ್ರಾಚೀನವಾಗಿದ್ದು, ಇಂಗ್ಲಿಷ್ ಪಿಳಿ ಪಿಳಿ ಕಣ್ಣು ಬಿಡುವ ಮುಂಚೆ ಕನ್ನಡದಲ್ಲಿ ಹತ್ತಾರು ಗ್ರಂಥಗಳು ಬಂದಿತು. ಆದರೆ, ಇಂದು ನಮ್ಮ ಸ್ವಾಭಿಮಾನದ ಹೀನತೆಯಿಂದ ಕನ್ನಡ ಎಲ್ಲರ ಮನಮುಟ್ಟುವಲ್ಲಿ ಸೋತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಕೆಲವರು ಇಂಗ್ಲಿಷ್ ಅನ್ನದ ಭಾಷೆ ಎಂದು ತಿಳಿದುಕೊಂಡಿದ್ದಾರೆ. ಅದು ತಪ್ಪು. ಆದರೆ ಕನ್ನಡವೇ ಮಾತೃ ಭಾಷೆ, ಅನ್ನದ ಭಾಷೆ, ಸಂಸ್ಕೃತಿಯ ಭಾಷೆ ಸೇರಿದಂತೆ ಎಲ್ಲವೂ ಆಗಿದೆ. ವಿಶ್ವದ ಬೇರೆ ಬೇರೆ ಭಾಗದವರು ಕನ್ನಡ ಭಾಷೆ ಕಲಿತು ಕನ್ನಡದ ಪರಂಪರೆಯನ್ನು ಮತ್ತೊಂದೆಡೆ ಕನ್ನಡವನ್ನು ಅನುವಾದ ಮಾಡಿ ಹಿರಿಮೆ ಹೆಚ್ಚಿಸಿದ್ದಾರೆ. ವಿದೇಶಿಗರು ಕನ್ನಡವನ್ನು ಕಲಿತು ವಿಶ್ವಕ್ಕೆ ಮಿಗಿಲಾದ ಭಾಷೆ ಕನ್ನಡ ಎಂದು ಮೆಚ್ಚಿದ್ದಾರೆ ಎಂದರು.

ಶ್ರೀ ಮಾಯಕಾರ ಗುರುಕುಲ ಸಂಸ್ಥಾಪಕ ವಿದ್ವಾನ್ ಮೂಗೂರು ಮಧು ದೀಕ್ಷಿತ್ ಮಾತನಾಡಿ, ಮನೆಗಳಿಂದಲೇ ಕನ್ನಡದ ಅಭಿಮಾನ ಆರಂಭವಾಗಬೇಕು. ಮಕ್ಕಳಿಗೆ ಸಂಡೇ, ಮಂಡೇಯನ್ನು ಪರಿಚಯಿಸುತ್ತಿದ್ದೇವೆ. ಆದರೆ, ಪಂಚಾಂಗವನ್ನು ಪರಿಚಯಿಸಲು ಮುಂದಾಗುತ್ತಿಲ್ಲ. ಕನ್ನಡವನ್ನು ಉಳಿಸುವ ಬದಲು ಬಳಸಿ, ಬ್ಯಾಂಕ್ ಸೇರಿದಂತೆ ಇತರೆ ಸ್ಥಳಗಳಲ್ಲಿ ಕನ್ನಡದಲ್ಲಿ ವ್ಯವಹರಿಸಿ ಕನ್ನಡದಲ್ಲಿಯೇ ಸಹಿ ಮಾಡಿ ಎಂದರು.

ಕಾರ್ಯಕ್ರಮದಲ್ಲ ಆದರ್ಶ ಅಣ್ಣ ತಮ್ಮಂದಿರು ಎಂದು ಶಿವಾರ್ಚಕ ಶಿವಮಲ್ಲಪ್ಪ, ಶಿವಾರ್ಚಕ ನಾಗರಾಜು, ಶಿವಾರ್ಚಕ ಮಹೇಶ್ ಮತ್ತು ಪ್ರಸಾದ್ ಅವರನ್ನು ಅಭಿನಂದಿಸಲಾಯಿತು. ಈ ವೇಳೆ ಮೂಗೂರು ನಂಜುಂಡಸ್ವಾಮಿ, ಎಂ.ಚಂದ್ರಶೇಖರ್, ನಾಗರಾಜು, ಬಸವಣ್ಣ, ವಿಜಯ್ ರಾಜ್, ಪ್ರಭುಸೂರ್ಯ, ಡಿ.ಪಿ.ಕೆ.ಪರಮೇಶ್, ಸಂಘದ ಅಧ್ಯಕ್ಷ ಬನ್ನೂರು ನಾಗರಾಜು ಮತ್ತಿತರರು ಉಪಸ್ಥಿತರಿದ್ದರು.

ಅರ್ಜಿ ಆಹ್ವಾನ

ಮೈಸೂರು,ನ.26– 2024–25 ನೇ ಸಾಲಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ(ವಿಮಾ) ಯೋಜನೆ ಹಿಂಗಾರು ಹಂಗಾಮಿನಲ್ಲಿ ಘೋಷಿಸಲಾಗಿದೆ.

ಮೈಸೂರು ತಾಲೂಕಿನ ವರುಣ, ಜಯಪುರ, ಇಲವಾಲ ಹೋಬಳಿಗಳಿಗೆ ಟೊಮೆಟೊ ಬೆಳೆ ಆಯ್ಕೆಯಾಗಿದ್ದು, ಪ್ರತಿ ಹೆಕ್ಟೇರ್ ಗೆ ವಿಮಾ ಮೊತ್ತ ರೂ.141500 ಗಳಿಗೆ ರೈತರು ಪಾವತಿಸಬೇಕಾದ ವಿಮಾ ಕಂತಿನ ಮೊತ್ತ ರೂ.7075 ಆಗಿರುತ್ತದೆ. ಈ ಯೋಜನೆಯಡಿ ಬೆಳೆ ಸಾಲ ಪಡೆಯದ ರೈತರು ನಿಗದಿತ ಅರ್ಜಿಯೊಂದಿಗೆ ಪ್ರಸಕ್ತ ಸಾಲಿನ ಪಹಣಿ, ಆಧಾರ್ ಮತ್ತು ಸ್ವಯಂ ಘೋಷಿತಾ ಬೆಳೆ ವಿವರಗಳನ್ನು ಹತ್ತಿರದ ಬ್ಯಾಂಕ್, ಗ್ರಾಮ್ ಒನ್/ನಾಗರೀಕ ಸೇವಾ ಕೇಂದ್ರದಲ್ಲಿ ವಿಮಾ ಕಂತನ್ನು ಡಿ.16 ರೊಳಗೆ ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಹೆಚ್ಚಿನ ಮಾಹಿತಿಗಾಗಿ ಮೊ.ಸಂ:9986086262 ಸಂಪರ್ಕಿಸಿ.

ರಾಷ್ಟ್ರ ಪರಿವರ್ತನೆ ಮಾಡಿದ 'ಜ್ಞಾನದ ಹೊತ್ತಿಗೆ ಸಂವಿಧಾನ'

ಚಿಂತಕ ಪ್ರೊ॥ ಮುಜಾಫರ್ ಅಸಾದಿ ಅಭಿಮತ



ಮೈಸೂರಿನ ಕೇಂದ್ರೀಯ ಆಹಾರ ತಂತ್ರಜ್ಞಾನ ಮತ್ತು ಸಂಶೋಧನಾ ಸಂಸ್ಥೆ(ಸಿಎಫ್‌ಟಿಆರ್‌ಐ)ನಲ್ಲಿ ಎಸ್‌ಸಿ, ಎಸ್‌ಟಿ ನೌಕರರ ಕ್ಷೇಮಾಭಿವೃದ್ಧಿ ಸಂಘ ಆಯೋಜಿಸಿದ್ದ ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ಚಿಂತಕ ಪ್ರೊ.ಮುಜಾಫರ್ ಅಸಾದಿ ಡಾ.ಬಿ.ಆರ್.ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು.

ಮೈಸೂರು,ನ.26(ಎಂಟಿವೈ)– ಜಾಗೃತಿ ಗ್ರಂಥವಾಗಿರುವ ಸಂವಿಧಾನ ರಾಷ್ಟ್ರದ ಸ್ಥಿತಿಯನ್ನು ಪರಿವರ್ತನೆ ಮಾಡಿದ ಜ್ಞಾನದ ಹೊತ್ತಿಗೆಯೂ ಆಗಿದೆ ಎಂದು ಚಿಂತಕ ಪ್ರೊ.ಮುಜಾಫರ್ ಅಸಾದಿ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಕೇಂದ್ರೀಯ ಆಹಾರ ತಂತ್ರ ಜ್ಞಾನ ಮತ್ತು ಸಂಶೋಧನಾ ಸಂಸ್ಥೆ (ಸಿಎಫ್‌ಟಿಆರ್‌ಐ)ನಲ್ಲಿ ಎಸ್‌ಸಿ, ಎಸ್‌ಟಿ ನೌಕರರ ಕ್ಷೇಮಾಭಿವೃದ್ಧಿ ಸಂಘ ಆಯೋಜಿಸಿದ್ದ ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಮ್ಮ ಸಂವಿಧಾನ ದೇಶದ ಪ್ರತಿಯೊಬ್ಬ ಪ್ರಜೆಯನ್ನು ಸಬಲೀಕರಣಗೊಳಿಸುವ ಗುರಿ ಮತ್ತು ಆಶಯ ಹೊಂದಿದೆ. ಭಾರತವು ಜಾಗತಿಕ ಆರ್ಥಿಕ ಶಕ್ತಿಯಾಗಿ ರೂಪಗೊಳ್ಳಲು ಸಂವಿಧಾನದಿಂದ ಸಾಧ್ಯ. ಆದ್ದರಿಂದ ಇದನ್ನು ಪ್ರತಿಯೊಬ್ಬರು ಓದಿ ಅರ್ಥೈಸಿಕೊಳ್ಳಬೇಕು. ನಮ್ಮ ಸಂವಿಧಾನ ವೈವಿಧ್ಯಗಳ ಸಂಗಮವಾಗಿದ್ದು, ಅದು ಕಾರ್ಯಾಂಗ, ಶಾಸಕಾಂಗ ಮತ್ತು ನ್ಯಾಯಾಂಗ ಹೀಗೆ ಸರ್ಕಾರ ಮೂರು ಅಂಗಗಳ ವ್ಯವಸ್ಥೆ ಮಾಡಿದೆ. ಸಂವಿಧಾನವು ಪ್ರತಿ ಅಂಗದ ಅಧಿಕಾರದ ವ್ಯಾಪ್ತಿಯನ್ನು ನೀಡುವುದಲ್ಲದೆ ಅವುಗಳ ಜವಾಬ್ದಾರಿಯನ್ನೂ ಖಚಿತಗೊಳಿಸುತ್ತದೆ ಎಂದು ತಿಳಿಸಿದರು.

ಜಮೀನುದಾರರು, ವ್ಯಾಪಾರಿಗಳ ವಶದಲ್ಲಿದ್ದಂತಹ ಭೂಮಿಯು ಬಡವರು, ರೈತರಿಗೆ ಸಿಗುವಂತಹ ಕಾಯ್ದೆ ಅನುಷ್ಠಾನದಲ್ಲಿ ಸಂವಿಧಾನ ಆಶಯ ಅಡಗಿದೆ. ಕಾರ್ಮಿಕರ ಹಕ್ಕುಗಳನ್ನು ರಕ್ಷಿಸಿದೆ. ಮಹಿಳೆಯರು ಸೇರಿದಂತೆ ಸಮಾಜದ ಪ್ರತಿಯೊಬ್ಬರ ಹಕ್ಕುಗಳನ್ನು ರಕ್ಷಿಸಿ, ಸ್ವಾತಂತ್ರ್ಯವನ್ನು ಕಲ್ಪಿಸಿಕೊಟ್ಟಿದೆ ಹೀಗಾಗಿ, ಸಂವಿಧಾನವೇ ಭಾರತೀಯ ಜೀವಾಳವಾಗಿದೆ. ಪೂನಾ ಒಪ್ಪಂದ, ಮಹಾತ್ಮ ಗಾಂಧೀಜಿ–ನೆಹರೂ ಅವರೊಂದಿಗೆ ಸಂವಾದ, ಚರ್ಚೆಗಳು ಸೇರಿದಂತೆ ಅಂಬೇಡ್ಕರ್ ಅವರ ಎಲ್ಲ ಭಾಷಣಗಳು, ಬರಹಗಳು, ಚಿಂತನೆಗಳು ಜ್ಞಾನದ ಜ್ಯೋತಿಯಾಗಿದೆ. ಅವುಗಳನ್ನು ಓದಿದರೆ ಪ್ರತಿಯೊಬ್ಬರು ಪ್ರಬುದ್ಧ ಭಾರತೀಯರಾಗುತ್ತಾರೆ ಎಂದರು.

ಕಾರ್ಯಕ್ರಮದಲ್ಲಿ ಸಿಎಫ್‌ಟಿಆರ್‌ಐ ಸಂಸ್ಥೆಯ ನಿರ್ದೇಶಕಿ ಪ್ರೊ.ಶ್ರೀದೇವಿ ಅನ್ನಪೂರ್ಣ ಸಿಂಗ್, ಆಡಳಿತ ನಿರ್ವಹಣಾಧಿಕಾರಿ ಕೆ.ರವಿಕುಮಾರ್, ಎಸ್‌ಸಿ ಎಸ್‌ಟಿ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಶಿವಸ್ವಾಮಿ ಉಪಸ್ಥಿತರಿದ್ದರು.

ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಕಾರ್ಮಿಕ ಸಂಘಟನೆಗಳಿಂದ ಪ್ರತಿಭಟನೆ

ಉಭಯ ಸರ್ಕಾರಗಳು ರೈತರು, ಕಾರ್ಮಿಕರ ವಿರೋಧಿ ನೀತಿ ಅನುಸರಿಸುತ್ತಿವೆ: ಆಕ್ರೋಶ



ರೈತರು ಹಾಗೂ ಕಾರ್ಮಿಕರ ಹಿತ ಕಾಯುವಂತೆ ಸಂಯುಕ್ತ ಹೋರಾಟ ಕರ್ನಾಟಕ ಹಾಗೂ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿಯ ಕಾರ್ಯಕರ್ತರು ಮಂಗಳವಾರ ಮೈಸೂರಲ್ಲಿ ಪ್ರತಿಭಟನಾ ಮೆರವಣಿಗೆ ನಡೆಸಿದರು.

ಮೈಸೂರು, ನ.26(ಎಂಟಿವೈ)– ರೈತರು ಹಾಗೂ ಕಾರ್ಮಿಕರು ಎದುರಿಸುತ್ತಿರುವ ಸಮಸ್ಯೆಗಳನ್ನು ಬಗೆಹರಿಸುವುದೂ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ಸಂಯುಕ್ತ ಹೋರಾಟ ಕರ್ನಾಟಕ ಹಾಗೂ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿಯ ಕಾರ್ಯಕರ್ತರು ಮೈಸೂರಲ್ಲಿ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿದರು.

ಮೈಸೂರಿನ ಪುರಭವನದ ಆವರಣದಿಂದ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿಯ ಕಾರ್ಯಕರ್ತರು ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ಪ್ರತಿಭಟನಾ ಮೆರವಣಿಗೆ ಆರಂಭಿಸಿ ದೊಡ್ಡಗಡಿಯಾರ ವೃತ್ತ, ಸಯ್ಯಾಜಿರಾವ್ ರಸ್ತೆ, ಇರ್ವಿನ್ ರಸ್ತೆ, ಅಶೋಕ ರಸ್ತೆ ಮೂಲಕ ಮಹಾತ್ಮ ಗಾಂಧಿ ವೃತ್ತ ತಲುಪಿದರು. ಬಳಿಕ ಕೆಲಕಾಲ ಪ್ರತಿಭಟನಾ ಸಭೆ ನಡೆಸಿ, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ರೈತ ಹಾಗೂ ಕಾರ್ಮಿಕ ವಿರೋಧಿ ನೀತಿ ಅನುಸರಿಸುತ್ತಿವೆ. ರೈತರು, ಕೃಷಿ ಹಾಗೂ ಕಾರ್ಮಿಕರಿಗೆ ಮಾರಕವಾದ ಕಾಯ್ದೆಗಳನ್ನು ಹಿಂಪಡೆಯದೆ ದೌರ್ಜನ್ಯ ಎಸಗುತ್ತಿವೆ ಎಂದು ಕಿಡಿಕಾರಿದರು.

ಕೇಂದ್ರ ಸರ್ಕಾರ ಕೃಷಿಕರು ಮತ್ತು ರೈತರ ಹಿತಕಾಯಲು ಮುಂದಾಗಬೇಕು. ಎಲ್ಲಾ ಬೆಳೆಗಳಿಗೂ ಬೆಂಬಲ ಬೆಲೆ ನೀಡಬೇಕು. ರೈತ ಹಾಗೂ ಕಾರ್ಮಿಕರ ಪರವಾದ ಕಾನೂನು ರೂಪಿಸಬೇಕು. ರೈತರಿಗೆ ಬೆಂಬಲ ಬೆಲೆಯನ್ನು ಕಾನೂನು ಬದ್ಧವಾಗಿ ಖಾತರಿಪಡಿಸಬೇಕು. ನಾಲ್ಕು ಕಾರ್ಮಿಕ ಸಂಹಿತೆಗಳನ್ನು ರದ್ದುಗೊಳಿಸಿ, ಕಾರ್ಮಿಕರ ಗುತ್ತಿಗೆ ಅಥವಾ ಹೊರಗುತ್ತಿಗೆಯನ್ನು ಕೊನೆಗಾಣಿಸಬೇಕು.

ರಾಷ್ಟ್ರೀಯ ಕನಿಷ್ಠ ವೇತನ ತಿಂಗಳಿಗೆ 26 ಸಾವಿರ ರೂ. ನಿಗದಿ ಮಾಡಬೇಕು. ತಿಂಗಳಿಗೆ 10 ಸಾವಿರ ರೂ. ಪಿಂಚಣಿ ನೀಡಬೇಕು. ಸಂಘಟಿತ, ಅಸಂಘಟಿತ, ಗುತ್ತಿಗೆ ಕಾರ್ಮಿಕರು ಮತ್ತು ಕೃಷಿ ವಲಯ ಸೇರಿದಂತೆ ಎಲ್ಲಾ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ನೀಡಬೇಕು. ಸಾಲಬಾಧೆ ಮತ್ತು ಆತ್ಮಹತ್ಯೆಗಳನ್ನು ಕೊನೆಗಾಣಿಸಲು ರೈತರು ಮತ್ತು ಕೃಷಿ ಕಾರ್ಮಿಕರಿಗೆ ಸಮಗ್ರ ಸಾಲ ಮನ್ನಾ ಹಾಗೂ ಕಡಿಮೆ ಬಡ್ಡಿದರದಲ್ಲಿ ಸಾಲ ನೀಡುವ ವ್ಯವಸ್ಥೆ ಜಾರಿಗೊಳಿಸಬೇಕು. ವಿವೇಚನೆಯಿಲ್ಲದ ಭೂ ಸ್ವಾಧೀನವನ್ನು ನಿಲ್ಲಿಸುವಂತೆ ಒತ್ತಾಯಿಸಿದರು.

ರಕ್ಷಣಾ ವಿಭಾಗ, ರೈಲ್ವೆ, ಆರೋಗ್ಯ, ಶಿಕ್ಷಣ, ವಿದ್ಯುತ್ ಇಲಾಖೆ ಸೇರಿದಂತೆ ಸಾರ್ವಜನಿಕ ವಲಯದ ಉದ್ಯಮಗಳನ್ನು ಹಾಗೂ ಸಾರ್ವಜನಿಕ ಸೇವೆಗಳನ್ನು ಖಾಸಗೀಕರಣಗೊಳಿಸುವ ಹುನ್ನಾರದಿಂದ ಕೇಂದ್ರ ಸರ್ಕಾರ ಹಿಂದೆ ಸರಿಯಬೇಕು. ಬೆಳೆ ಹಾಗೂ ಜಾನುವಾರುಗಳಿಗೆ ಸಮಗ್ರ ಸಾರ್ವಜನಿಕ ವಲಯದ ವಿಮಾ ಯೋಜನೆ, ಬೆಳೆ ವಿವಾ ಮತ್ತು ಗೇಣಿದಾರ ರೈತರಿಗೆ ಎಲ್ಲಾ ಸೌಲಭ್ಯ ದೊರೆಯುವಂತೆ ಮಾಡಬೇಕು. ಪಡಿತರ ವಿತರಣೆಯನ್ನು ಬಲಪಡಿಸಿ, ಎಲ್ಲರಿಗೂ ಗುಣಮಟ್ಟದ ಆಡಳಿತ ಮತ್ತು ಶಿಕ್ಷಣ ಒದಗಿಸಲು ಕಾರ್ಯಪ್ರವೃತ್ತರಾಗಬೇಕು. ಕನಿಷ್ಠ ಕೂಲಿಯನ್ನು 31 ಸಾವಿರಕ್ಕೆ ಹೆಚ್ಚಿಸಬೇಕು. ಕೆಲಸದ ಅವಧಿಯನ್ನು 8 ಗಂಟೆಯಿಂದ 12 ಗಂಟೆಗೆ ಏರಿಸಿರುವ ಕೇಂದ್ರ ಹಾಗೂ ರಾಜ್ಯ ಸರ್ಕಾರದ ನೀತಿ ಖಂಡನೀಯ, ಹಿಂದಿನಂತೆ 8 ಗಂಟೆಯಷ್ಟೇ ಕೆಲಸ ನಿರ್ವಹಿಸಲು ಆದೇಶಿಸಬೇಕು. ಬಡ ಸಾಗುವಳಿ ರೈತರಿಗೆ ಹಕ್ಕುಪತ್ರ ವಿತರಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಸಂಚಾಲಕ ಜಗದೀಶ್ ಸೂರ್ಯ, ಮುಖಂಡರಾದ ಪಿ.ಮರಂಕಯ್ಯ, ಉಗ್ರ ನರಸಿಂಹೇಗೌಡ, ಕಲ್ಲಳ್ಳಿ ಕುಮಾರ್, ದೇವದಾಸ್, ಬಾಲಾಜಿರಾವ್, ಚೌಡಳ್ಳಿ ಜವರಯ್ಯ, ಹೆಚ್.ಎಂ.ಬಸವರಾಜು, ಮುದ್ದುಕೃಷ್ಣ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಪ್ರಭುತ್ವ (ಕ) + ಮರ್ಯಾದೆ ಪ್ರಶ್ನೆ (ಕ)	2+2 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಜೀಬ್ರಾ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಕಂಗುವಾ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ವಿಶ್ವಂ (ತೆ)	4 ಪ್ರದರ್ಶನಗಳು
ಗಾಯಿತ್ರಿ	
ಭೈರತಿ ರಣಗಲ್ (ಕ)	4 ಪ್ರದರ್ಶನಗಳು
ರಾಜಕಮಲ್	
ಅಮರನ್ (ತ)	4 ಪ್ರದರ್ಶನಗಳು
ಸಂಗಂ	
ಭೈರತಿ ರಣಗಲ್ (ಕ)	4 ಪ್ರದರ್ಶನಗಳು
ಲಿಡೋ	
ಸಂಗೊಳ್ಳಿ ರಾಯಣ್ಣ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಅಮರನ್ (ತ)	4 ಪ್ರದರ್ಶನಗಳು
ಪ್ರಭಾ	
ಬಘೀರಾ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಕಂಗುವಾ (3ಡಿ) (ತ): ಬೆ.10ಕ್ಕೆ, ಮ.1ಕ್ಕೆ, ರಾ.7.15ಕ್ಕೆ, ಅಮರನ್ (ತ): ಸಂ.4ಕ್ಕೆ, ಆನಂದ್ ಶ್ರೀಬಾಲ (ಮ): ರಾ.10.20ಕ್ಕೆ.
ಸ್ಕ್ರೀನ್ 2	ಅಮರನ್ (ತ): ಬೆ.9.40ಕ್ಕೆ, ಮ.1ಕ್ಕೆ, ಬಘೀರ (ಕ): ಸಂ.4.15ಕ್ಕೆ, ಗ್ಲಾಡಿಯೇಟರ್ 2 (ಇಂ): ರಾ.7.20ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 3	ದಿ ಸಬರ್‌ಮತಿ ರಿಪೋರ್ಟ್ (ಹಿಂ): ಬೆ.10.35ಕ್ಕೆ, ರಾ.7.15ಕ್ಕೆ, ಬಘೀರ (ಕ): ಮ.1.10ಕ್ಕೆ, ಲಕ್ಕಿ ಭಾಸ್ಕರ್ (ಮ): ಸಂ.4.15ಕ್ಕೆ, ಮಟ್ಕಾ (ತೆ): ರಾ.9.55ಕ್ಕೆ.
ಸ್ಕ್ರೀನ್ 4	ಭೈರತಿ ರಣಗಲ್ (ಕ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಬಘೀರ (ಕ): ಬೆ.10ಕ್ಕೆ, ಮ.3.55ಕ್ಕೆ, ಕಂಗುವಾ (ಕ): ಮ.1ಕ್ಕೆ, ಕಂಗುವಾ (ತ): ಸಂ.6.55ಕ್ಕೆ, ಅಮರನ್ (ತ): ರಾ.9.50ಕ್ಕೆ.
ಸ್ಕ್ರೀನ್ 2	ಅಮರನ್ (ಕ): ಬೆ.10.30ಕ್ಕೆ, ಭೈರತಿ ರಣಗಲ್ (ಕ): ಮ.1.45ಕ್ಕೆ, ಸಂ.4.25ಕ್ಕೆ, ರಾ.7.05ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಭೈರತಿ ರಣಗಲ್ (ಕ): ಬೆ.10ಕ್ಕೆ, ಸಂ.6.30ಕ್ಕೆ, ಅಮರನ್ (ಕ): ಮ.12.40ಕ್ಕೆ, ಕಂಗುವಾ (3ಡಿ)(ತ): ಮ.3.55ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಕಂಗುವಾ (ತ): ಬೆ.10.30ಕ್ಕೆ, ಸಂ.5.20ಕ್ಕೆ, ಅಮರನ್ (ತ): ಮ.2.10ಕ್ಕೆ, ಅಮರನ್ (ಕ): ರಾ.8.15ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ಸಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮೈಸೂರು ರೇಸ್

3ನೇ ದಿನ, ಬುಧವಾರ, 27–11–2024

ಇಂದಿನ ರೇಸ್‌ಗೆ ನಮ್ಮ ಆಯ್ಕೆ

ಮೊದಲನೇ ರೇಸ್ ಮಧ್ಯಾಹ್ನ 2.00 ಗಂಟೆಗೆ

I. ಫ್ಲೇಮ್ ಅಂಡ್ ಗ್ಲೋರಿ ಪ್ಲೇಟ್ ಡಿ2–1100 ಮೀ. ರೇಟೆಡ್ 00 ರಿಂದ 25. ಮಧ್ಯಾಹ್ನ 2ಕ್ಕೆ
1. ದಿ ಅರ್ಟರಿ 2. ಅರಿಗಟೊ 3. ಪೋಲಾರ್ ಕ್ವೀನ್

II. ಸಹ್ಯಾದ್ರಿ ಪ್ಲೇಟ್–1400 ಮೀ. ರೇಟೆಡ್ 20 ರಿಂದ 45. ಮ.2.30ಕ್ಕೆ
1. ವರ್ಲ್ಡ್ ಲಿ ವೈಸ್ 2. ಫ್ರೀ ಸ್ಪಿರಿಟೆಡ್ 3. ಸ್ಕ್ವೇರ್‌ಕಟ್

III ಫ್ಲೇಮ್ ಅಂಡ್ ಗ್ಲೋರಿ ಪ್ಲೇಟ್ ಡಿ1–1100 ಮೀ. ರೇಟೆಡ್ 00 ರಿಂದ 25.ಮ.3.00ಕ್ಕೆ
1. ಆರ್‌ಮಾಮೆಂಟ್ 2 ಕಲಾಸಿಂಕೋವ್ 3. ಎಪ್‌ಸಮ್‌ಡೌನ್ಸ್

IV. ಸಂಗಮ್ ಪ್ಲೇಟ್ ಡಿ2–1200 ಮೀ. ರೇಟೆಡ್ 40 ರಿಂದ 65. ಮ.3.30ಕ್ಕೆ
1. ಶಿ ಈಸ್ ಅನ್ ಸ್ಟಾಪಬಲ್ 2. ಎಮರಾಲ್ಡ್ ಕ್ವೀನ್ 3. ಟವರ್ ಕ್ರೆಸ್ಟ್

V. ಡಾ. ರಾಜೇಂದ್ರಪ್ರಸಾದ್ ಮೆಮೋರಿಯಲ್ ಟ್ರೋಫಿ–1600 ಮೀ. ರೇಟೆಡ್ 60 ಮತ್ತು ಮೇಲ್ವರ್ಗ. ಮ.4.00ಕ್ಕೆ
1. ಆಭೂಷನ್ 2. ರೈಸ್ ಎ ಬಕ್ 3. ದಿ ಗೋಲ್ಡ್ ಸ್ಟಾರ್

VI. ಬಂಡೀಪುರ ಪ್ಲೇಟ್ –1100 ಮೀ. ರೇಟೆಡ್ 20 ರಿಂದ 45. ಸಂಜೆ 4.30ಕ್ಕೆ
1. ಟೈಮರ್ಸ್ ಪ್ಲಾನೆಟ್ 2. ರೆಡ್ ಹಿಲ್ಸ್ 3. ಮಾರ್ಕ್ ಒನ್

VII. ಸಂಗಮ್ ಪ್ಲೇಟ್ ಡಿ1– 1200 ಮೀ. ರೇಟೆಡ್ 40 ರಿಂದ 65. ಸಂ.5.00ಕ್ಕೆ
1 ದಿ ಫ್ಲೈಯಿಂಗ್ ಫೀಟ್ 2 ಎಕ್ಸಾಸ್ಟಬಲ್ 3. ಜೆಮಿನಿ

ದಿನದ ಅತ್ಯುತ್ತಮ	ಆಭೂಷನ್
ಡಬ್ಬಲ್	ವರ್ಲ್ಡ್ ಲಿ ವೈಸ್, ದಿ ಫ್ಲೈಯಿಂಗ್ ಫೀಟ್
ಜಾಕ್‌ಪಾಟ್	3, 4, 5, 6 ಮತ್ತು 7
ಮಿನಿ ಜಾಕ್‌ಪಾಟ್	4, 5, 6 ಮತ್ತು 7
I ಟ್ರಿಬಲ್	2, 3 ಮತ್ತು 4
II ಟ್ರಿಬಲ್	5, 6 ಮತ್ತು 7
ಎಕ್ಸ್‌ಆಕ್ಟ್	1 ರಿಂದ 7

ಟಿಪ್‌ಸ್ಟರ್ ಪಿಜಿಸಿ

ಎಂ.ಎಸ್. ಯೋಗೇಶ್‌ಗೆ ಪಿಎಚ್.ಡಿ



ಮೈಸೂರು, ನ. 26– ಡಾ. ಎನ್. ಆನಂದೇಗೌಡ ಅವರ ಮಾರ್ಗದರ್ಶನದಲ್ಲಿ ಎಂ.ಎನ್. ಯೋಗೇಶ್ ಅವರು ರಾಜ್ಯಶಾಸ್ತ್ರ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ತಮಿಳುನಾಡಿನಲ್ಲಿ ಭಾರಿ ಮಳೆ, ಕರಾವಳಿಯಲ್ಲಿ ರೆಡ್ ಅಲರ್ಟ್; ಕರ್ನಾಟಕದಲ್ಲೂ ವರ್ಷಧಾರೆ ಸಾಧ್ಯತೆ!

ಫೆಂಗಲ್ ಚಂಡಮಾರುತ ಆತಂಕ



ಚೆನ್ನೈ: ಬಂಗಾಳಕೊಲ್ಲಿಯಲ್ಲಿ ವಾಯು ಭಾರ ಕುಸಿತದಿಂದಾಗಿ ಸೃಷ್ಟಿಯಾಗಿರುವ ಫೆಂಗಲ್ ಚಂಡಮಾರುತ ತಮಿಳುನಾಡಿನತ್ತ ಧಾವಿಸಿದ್ದು, ಪರಿಣಾಮ ತಮಿಳುನಾಡು ಕರಾವಳಿಯಾದ್ಯಂತ ಭಾರಿ ಮಳೆ ಸುರಿಯುತ್ತಿದೆ.

ಇನ್ನು ಕೆಲವೇ ಗಂಟೆಗಳಲ್ಲಿ ತಮಿಳುನಾಡು ಕರಾವಳಿಗೆ ಫೆಂಗಲ್ ಚಂಡಮಾರುತ ಅಪ್ಪಳಿಸಲಿದ್ದು, ತಮಿಳುನಾಡಿನಾದ್ಯಂತ ಭಾರಿ ಮಳೆ ಸುರಿಯುತ್ತಿದೆ. ಹವಾಮಾನ ಇಲಾಖೆಯು ತಮಿಳುನಾಡು ಮತ್ತು ಪುದುಚೇರಿಯ ಹಲವು ಭಾಗಗಳಿಗೆ ಹವಾಮಾನ ಎಚ್ಚರಿಕೆ ನೀಡಿದ್ದು, ತಮಿಳುನಾಡು ಕರಾವಳಿ ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಣೆ ಮಾಡಲಾಗಿದೆ. ಮುಂದಿನ ನಾಲ್ಕೈದು ದಿನಗಳಲ್ಲಿ ಭಾರಿ ಮಳೆಯಾಗಲಿದ್ದು, ಭಾರತೀಯ ಹವಾಮಾನ ಇಲಾಖೆ ತಮಿಳುನಾಡಿನ ನಾಲ್ಕು ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಣೆ ಮಾಡಿದೆ. ಇಂದು ಅಂದರೆ ನ.26 ರಂದು ಇತರ ಹಲವು ಜಿಲ್ಲೆಗಳಿಗೆ ಹಳದಿ ಅಲರ್ಟ್ ಘೋಷಿಸಿದೆ. ನ.27ರಂದು ತಮಿಳುನಾಡಿನ ಎರಡು ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಿಸಿದೆ.

ಹವಾಮಾನ ಇಲಾಖೆ ಮೂಲಗಳ ಪ್ರಕಾರ ನವೆಂಬರ್ 27 ರಂದು ಚಂಡಮಾರುತವಾಗಿ ತೀವ್ರಗೊಳ್ಳಲಿದ್ದು, ನಂತರ ಇದು ಉತ್ತರ–ವಾಯುವ್ಯದ ಕಡೆಗೆ ತಮಿಳುನಾಡು ಕರಾ ವಳಿಯ ಕಡೆಗೆ ಚಲಿಸುತ್ತದೆ. ನಂತರದ 2 ದಿನಗಳಲ್ಲಿ ಶ್ರೀಲಂಕಾ ಕರಾವಳಿಯಲ್ಲೂ ಮಳೆಯಾಗಲಿದೆ. ನವೆಂಬರ್ 26 ಮತ್ತು 27 ರಂದು ತಮಿಳುನಾಡು ಮತ್ತು ಪುದುಚೇರಿಯ ಹಲವು ಭಾಗಗಳಲ್ಲಿ ಹೆಚ್ಚಿನ ಮಳೆಯಾಗಲಿದೆ. ಆಂಧ್ರಪ್ರದೇಶಕ್ಕೂ ಮಳೆಯ ಎಚ್ಚರಿಕೆಯನ್ನು ನೀಡಲಾಗಿದ್ದು, ನವೆಂಬರ್ 26 ರಿಂದ 29 ನಡುವೆ ಮಳೆಯಾಗಲಿದೆ. ನಾಗಪಟ್ಟಣಂ, ತಿರುವರೂರ್ ಮತ್ತು ಮೈಲಾಡುತುರೈ ಜಿಲ್ಲೆಗಳಿಗೆ ಮತ್ತು ಕಾರೈಕಲ್ ಪ್ರದೇಶಕ್ಕೆ ನ.26 ರಂದು ಐಎಂಡಿ ರೆಡ್ ಅಲರ್ಟ್ ಘೋಷಿಸಿದ್ದು, ಈ ನಾಲ್ಕು ಜಿಲ್ಲೆಗಳಲ್ಲಿ ಹಲವೆಡೆ ಅತಿ ಹೆಚ್ಚು ಮಳೆಯಾಗುವ ಸಾಧ್ಯತೆಯಿದೆ.


ನ.27ಕ್ಕೆ ಮೈಲಾಡುತುರೈ, ಕಡಲೂರು ಮತ್ತು ಕಾರೈಕಲ್ ಪ್ರದೇಶದಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದೆ. ಚೆಂಗಲ್ಪಟ್ಟು, ವಿಲ್ಲುಪುರಂ, ಕಡಲೂರು, ಪುದುಕೊಟ್ಟೈ, ಅರಿಯಲೂರು, ತಂಜಾವೂರು, ಕಡಲೂರು ಮತ್ತು ಶಿವಗಂಗೈ ಮತ್ತು ರಾಮನಾಥಪುರದಲ್ಲಿ ನ.26 ರಂದು ಅತಿ ಹೆಚ್ಚು ಮಳೆಯಾಗುವ ಸಾಧ್ಯತೆಯಿದ್ದು, ಆರೆಂಜ್ ಅಲರ್ಟ್ ಘೋಷಿಸಲಾಗಿದೆ.

ಚೆಂಗಲ್ಪಟ್ಟು, ವಿಲ್ಲುಪುರಂ, ಅರಿಯಲೂರು, ತಂಜಾವೂರು, ತಿರುವರೂರು, ಮತ್ತು ನಾಗಪಟ್ಟಣಂ ಜಿಲ್ಲೆಗಳಲ್ಲಿ ನ.27 ರಂದು ಅತಿ ಹೆಚ್ಚು ಮಳೆಯಾಗುವ ಸಾಧ್ಯತೆಯಿದ್ದು, ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ಘೋಷಿಸಿದೆ.

ಕರ್ನಾಟಕದಲ್ಲೂ 'ವರ್ಷಧಾರೆ': ತಮಿಳುನಾಡು ಮಾತ್ರವಲ್ಲದೇ ನೆರೆಯ ಕರ್ನಾಟಕದಲ್ಲೂ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ. ಚಂಡಮಾರುತ ಪರಿಣಾಮ ಬೆಂಗಳೂರಿನ ಮೇಲೂ ಗೋಚರಿಸಲಿದ್ದು, ಮುಂದಿನ ಮೂರು ದಿನಗಳ ಕಾಲ ಮಳೆಯಾಗುವ ಸಾಧ್ಯತೆ ಇದೆ.

ಮುಸ್ಲಿಮರಿಗೆ ಮತದಾನದ ಹಕ್ಕು ಇಲ್ಲದಂತೆ ಮಾಡಬೇಕು

ಚಂದ್ರಶೇಖರ ಸ್ವಾಮೀಜಿ ಹೇಳಿಕೆ



ಚಂದ್ರಶೇಖರ ಸ್ವಾಮೀಜಿ

ಬೆಂಗಳೂರು: ಮುಸ್ಲಿಮರಿಗೆ ಮತದಾನದ ಹಕ್ಕು ಇಲ್ಲದಂತೆ ಮಾಡಬೇಕು ಮತ್ತು ದೇಶದಲ್ಲಿ ವಕ್ಫ್ ಮಂಡಳಿಯೇ ಇಲ್ಲದಂತೆ ಮಾಡಬೇಕು ಎಂದು ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಚಂದ್ರಶೇಖರ ಸ್ವಾಮೀಜಿ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ. ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಭಾರತೀಯ ಕಿಸಾನ್ ಸಂಘದ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಮಂಗಳವಾರ ಪಾಲ್ಗೊಂಡು ಮಾತನಾಡಿದ ಅವರು, ರೈತರ ಜಮೀನು ಉಳಿಸಲು ಎಲ್ಲರೂ ಒಂದಾಗಿ ಹೋರಾಟ ನಡೆಸುವ ತುರ್ತು ಸಂದರ್ಭ ಎದುರಾಗಿದೆ.

ಸರ್ಕಾರ ಹೋದರೂ ತೊಂದರೆ ಇಲ್ಲ. ವಕ್ಫ್ ಮಂಡಳಿ ರದ್ದು ಮಾಡುವ ನಿರ್ಧಾರ ತೆಗೆದುಕೊಳ್ಳಬೇಕು. ದೇಶದಲ್ಲಿ ವಕ್ಫ್ ಮಂಡಳಿಯೇ ಇಲ್ಲದಂತೆ ಮಾಡಬೇಕು. ವಕ್ಫ್ ಮಂಡಳಿಯೇ ಇಲ್ಲದಂತೆ ಮಾಡಿದರೆ ಆಗ, ಭಾರತೀಯರೆಲ್ಲರೂ ನೆಮ್ಮದಿಯಿಂದ ಇರಲು ಸಾಧ್ಯ ಎಂದೂ ಹೇಳಿದರು. ವಕ್ಫ್ ಆಸ್ತಿ ವಿವಾದದ ಹಿನ್ನೆಲೆಯಲ್ಲಿ ರೈತರು ಮತ್ತು ಅವರ ಭೂಮಿಯ ರಕ್ಷಣೆಗೆ ಎಲ್ಲರೂ ಒಗ್ಗಟ್ಟಾಗಬೇಕು. ಮುಸ್ಲಿಂ ಸಮುದಾಯಕ್ಕೆ ಮತದಾನದ ಹಕ್ಕು ಇಲ್ಲದಿರುವ ಕಾನೂನು ತರಬೇಕು. ಬೇರೆಯವರ ಭೂಮಿಯನ್ನು ಕಸಿದುಕೊಳ್ಳುವುದು ಧರ್ಮವಲ್ಲ. ಮೊದಲು ವಕ್ಫ್ ಬೋರ್ಡ್ ಇಲ್ಲದಂತೆ ನೋಡಿಕೊಳ್ಳಬೇಕು. ರೈತರಿಗೆ ಆಗುತ್ತಿರುವ ಅನ್ಯಾಯದ ವಿರುದ್ಧ ಎಲ್ಲರೂ ಹೋರಾಟ ಮಾಡಬೇಕು... ವಕ್ಫ್ ಬೋರ್ಡ್ ಯಾರಿಗೆ ಬೇಕಾದ್ರೂ ಭೂಮಿ ಕೊಡಬಹುದು ಅಂತಾರೆ. ಅದೊಂದು ದೊಡ್ಡ ಅನ್ಯಾಯ... ಯಾರೋ ಬೇರೆಯವರ ಭೂಮಿ ಕಬಳಿಸುವುದು ಧರ್ಮವಲ್ಲ... ಹಾಗಾಗಿ, ರೈತರ ಜಮೀನು ಅವರ ಬಳಿಯೇ ಉಳಿಯುವಂತೆ ಎಲ್ಲರೂ ಹೋರಾಡಬೇಕು ಎಂದರು.

ಅಂತೆಯೇ ರೈತರು ಅನ್ನದಾತರು.. ಅವರು ಆಹಾರವನ್ನು ಉತ್ಪಾದಿಸುವವರು. ಆದ್ದರಿಂದ ಅವರನ್ನು ಉಳಿಸಬೇಕು ಮತ್ತು ಬೆಳೆಸಬೇಕು. ಅವರ ಭೂಮಿ ಮತ್ತು ಆಸ್ತಿಯನ್ನು ಯಾರೂ ಕಸಿದುಕೊಳ್ಳದಂತೆ ನೋಡಿಕೊಳ್ಳಬೇಕು. ಮುಸ್ಲಿಂ ಸಮುದಾಯಕ್ಕೆ ಮತದಾನದ ಅಧಿಕಾರ ಇಲ್ಲದ ಕಾನೂನು ತರಬೇಕು. ಪಾಕಿಸ್ತಾನದಲ್ಲಿ ಇತರೆ ಧರ್ಮೀಯರಿಗೆ ಅಲ್ಲಿ ಮತ ಹಾಕುವ ಅಧಿಕಾರವಿಲ್ಲ. ಅದೇ ರೀತಿ ಭಾರತದಲ್ಲೂ ಮುಸ್ಲಿಮರಿಗೆ ಮತದಾನದ ಹಕ್ಕು ಇಲ್ಲದಂತೆ ಮಾಡಬೇಕು. ಅವರಿಗೆ ಮತದಾನದ ಹಕ್ಕು ಇಲ್ಲದಂತೆ ಮಾಡಿದರೆ ಆಗ ರಾಜಕಾರಣಿಗಳು ಯಾವುದೇ ರೀತಿಯ ಓಲೈಕೆ ರಾಜಕಾರಣ ಮಾಡುವುದಿಲ್ಲ. ಅವರು ತಮ್ಮಷ್ಟಕ್ಕೇ ಉಳಿಯುತ್ತಾರೆ ಮತ್ತು ಎಲ್ಲರೂ ಶಾಂತಿಯುತವಾಗಿ ಉಳಿಯಬಹುದು ಎಂದರು.

ರೈತರ ಪರ ಹೋರಾಡಲು ಎಲ್ಲರೂ ಒಂದಾಗಬೇಕು ಎಂದು ಹೇಳಿದ ಶ್ರೀಗಳು, ಈ ವಿಚಾರದಲ್ಲಿ (ವಕ್ಫ್) ಎಲ್ಲರೂ ಒಗ್ಗಟ್ಟಾಗಿ ನಿಲ್ಲಬೇಕು, ಸರ್ಕಾರ ಬಿದ್ದರೂ ಯಾವುದೇ ಸಮಸ್ಯೆ ಇಲ್ಲ, ನಮ್ಮ ರೈತರನ್ನು ಉಳಿಸಿ–ಬೆಳೆಸಬೇಕು, ಅದು ನಮ್ಮ ಮುಖ್ಯ ಗುರಿಯಾಗಬೇಕು. ನಮ್ಮ ಉದ್ದೇಶದಲ್ಲಿ ನಾವು ವಿಜಯಶಾಲಿಯಾಗಲು ಸಂಕಲ್ಪ ಮಾಡಬೇಕು, ರೈತರ ಭೂಮಿ ರೈತರೊಂದಿಗೆ ಉಳಿಯಬೇಕು ಎಂದರು. ಅಂದಹಾಗೆ ತಮ್ಮ ಜಮೀನುಗಳನ್ನು ವಕ್ಫ್ ಆಸ್ತಿ ಎಂದು ಗುರುತಿಸಲಾಗಿದೆ ಎಂದು ಕರ್ನಾಟಕದ ಕೆಲವು ಭಾಗಗಳಲ್ಲಿ ರೈತರು ಮತ್ತು ಇತರರು ಆರೋಪಿಸಿದ ನಂತರ, ವಿವಿಧ ರೈತ ಗುಂಪುಗಳು, ಸಂಘಟನೆಗಳು ಮತ್ತು ಪ್ರತಿಪಕ್ಷ ಬಿಜೆಪಿಯಿಂದ ಪ್ರತಿಭಟನೆಗಳು ನಡೆದಿವೆ. ಆರಂಭದಲ್ಲಿ ವಿಜಯಪುರ ಜಿಲ್ಲೆಯ ಒಂದು ಭಾಗದ ರೈತರಿಂದ ತಮ್ಮ ಜಮೀನುಗಳನ್ನು ವಕ್ಫ್ ಆಸ್ತಿ ಎಂದು ಗುರುತಿಸಲಾಗಿದೆ ಎಂಬ ಆರೋಪವಿತ್ತು.

ಬಳಿಕ ರಾಜ್ಯದ ಇತರ ಕೆಲವು ಸ್ಥಳಗಳಿಂದ ಮತ್ತು ಮಠಗಳಂತಹ ಕೆಲವು ಸಂಸ್ಥೆಗಳು ಮತ್ತು ಧಾರ್ಮಿಕ ಸಂಸ್ಥೆಗಳಿಂದಲೂ ಇಂತಹ ಆರೋಪಗಳು ಬಂದವು. ಈ ಕುರಿತ ಗೊಂದಲ ಹೆಚ್ಚಾಗುತ್ತಿದ್ದಂತೆಯೇ ಎಚ್ಚೆತ್ತ ಸಿಎಂ ಸಿದ್ದರಾಮಯ್ಯ, ಅವರು ರೈತರಿಗೆ ನೀಡಿರುವ ಎಲ್ಲಾ ನೋಟಿಸ್‌ಗಳನ್ನು ತಕ್ಷಣವೇ ಹಿಂಪಡೆಯುವಂತೆ ಅಧಿಕಾರಿಗಳಿಗೆ ಸೂಚಿಸಿದ್ದರು ಮತ್ತು ಯಾವುದೇ ಸೂಚನೆಯಿಲ್ಲದೆ ಭೂದಾಖಲೆಗಳಲ್ಲಿ ಯಾವುದೇ ಅನಧಿಕೃತ ತಿದ್ದುಪಡಿಗಳನ್ನು ಸಹ ರದ್ದುಗೊಳಿಸಬೇಕು ಎಂದು ಆದೇಶಿಸಿದ್ದರು.

ಪೊಲೀಸ್ ವಶದಲ್ಲಿರುವ ಆರೋಪಿಗಳಿಗೆ ದಿನ ಆಹಾರ ಭತ್ಯೆ 150 ರೂ.ಗೆ ಹೆಚ್ಚಳ

ಮೈಸೂರು, ನ.26(ಎಸ್‌ಪಿಎನ್)– ಪೊಲೀಸ್ ವಶದಲ್ಲಿರುವ ಆರೋಪಿಗಳಿಗೆ ದಿನದ ಆಹಾರಭತ್ಯೆ(ಲಾಕಪ್ ಕಾಂಟಿಂಜೆನ್ಸಿ) ದರವನ್ನು 75 ರೂ.ಗಳಿಂದ 150 ರೂ.ಗಳಿಗೆ ಪರಿಷ್ಕರಿಸಿ ರಾಜ್ಯ ಸರ್ಕಾರ ಆದೇಶಿಸಿದೆ. ಆಹಾರ ಭತ್ಯೆಯನ್ನು ಹೆಚ್ಚಿಸುವ ಬಗ್ಗೆ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಶಿಫಾರಸ್ಸಿನ ಮೇರೆಗೆ ರಾಜ್ಯದ ಎಲ್ಲಾ ಠಾಣೆಗಳಿಗೆ ಅನ್ವಯವಾಗುವಂತೆ ದರ ಹೆಚ್ಚಿಸಿದೆ.

ಪ್ರಸ್ತುತ ನಿತ್ಯ ಬಳಕೆಯ ದಿನಸಿ ವಸ್ತುಗಳು ಏರಿಕೆಯಾಗಿರುವ ಹಿನ್ನೆಲೆಯಲ್ಲಿ ಈಗ ನೀಡುತ್ತಿರುವ 75 ರೂಗಳಲ್ಲಿ ಆರೋಪಿಗಳಿಗೆ ಪ್ರತಿ ದಿನ ಆಹಾರ ಒದಗಿಸಲು ಸಾಧ್ಯವಾಗದೆ ತನಿಖಾಧಿಕಾರಿಗಳೇ ತಮ್ಮ ಸ್ವಂತ ಹಣದಿಂದ ಆರೋಪಿಯ ಊಟದ ವೆಚ್ಚವನ್ನು ಭರಿಸುತ್ತಿದ್ದರು. ಇದರಿಂದ ತನಿಖಾ ಹಂತದಲ್ಲಿ ಆರೋಪ ಪತ್ತೆ ಹಚ್ಚುವ ಕಾರ್ಯದಲ್ಲಿ ತೊಡಕುಂಟಾಗುವುದು ಕಂಡು ಬಂದ ಹಿನ್ನೆಲೆಯಲ್ಲಿ ಪೊಲೀಸ್ ವಶದಲ್ಲಿರುವ ಆರೋಪಿಗಳಿಗೆ ಪೌಷ್ಟಿಕಾಂಶಯುಕ್ತ ಆಹಾರ ಒದಗಿಸಲು ಹಳೆಯ ದರ 75 ರೂ.ಗಳಿಂದ 300 ರೂ.ಗಳಿಗೆ ಹೆಚ್ಚುಸುವಂತೆ ಶಿಫಾರಸ್ಸು ಮಾಡಿತ್ತು. ಇದನ್ನು ಪರಿಷ್ಕರಿಸಿರುವ ರಾಜ್ಯ ಸರ್ಕಾರ 150 ರೂ. ನಿಗದಿಪಡಿಸಿ ಒಳಾಡಳಿತ ಇಲಾಖೆ (ಪೊಲೀಸ್ ವೆಚ್ಚ) ಆದೇಶಿಸಿದೆ.

ಭಾರತದಲ್ಲಿ ಕರಾಳ ಅಧ್ಯಾಯ ಬರೆದ 26/11 ಮುಂಬೈ ರಕ್ಕಸ ದಾಳಿಗೆ 16 ವರ್ಷ

ಹುತಾತ್ಮರಿಗೆ ಭಾವಪೂರ್ಣ ಶ್ರದ್ಧಾಂಜಲಿ



ಮುಂಬೈ: ಭಾರತದಲ್ಲಿ ಕರಾಳ ಅಧ್ಯಾಯ ಬರೆದ 26/11 2008ರ ಮುಂಬೈ ಭಯೋತ್ಪಾದಕ ದಾಳಿಗೆ 16 ವರ್ಷಗಳು ಕಳೆದಿದ್ದು, ಅಮಾಯಕ ಜನರು, ಹುತಾತ್ಮ ಯೋಧರನ್ನು ಕಳೆದುಕೊಂಡ ಕರಾಳ ದಿನವನ್ನು ದೇಶದ ಜನತೆ ನೆನೆಯುತ್ತಿದೆ.

ದಾಳಿಯ ವೇಳೆ ಉಗ್ರರ ವಿರುದ್ಧ ಹೋರಾಡಿ ತ್ಯಾಗ ಮಾಡಿದ ಹುತಾತ್ಮರಿಗೆ ಮಹಾರಾಷ್ಟ್ರ ರಾಜ್ಯಪಾಲ ಸಿ.ಪಿ.ರಾಧಾಕೃಷ್ಣನ್ ಮತ್ತು ಮುಖ್ಯಮಂತ್ರಿ ಏಕನಾಥ್ ಶಿಂಧೆ ಮಂಗಳವಾರ ಪುಷ್ಪನಮನ ಸಲ್ಲಿಸಿದ್ದಾರೆ. ಮುಂಬೈನ ಪೊಲೀಸ್ ಆಯುಕ್ತರ ಕಚೇರಿ ಆವರಣದಲ್ಲಿರುವ ಹುತಾತ್ಮ ಸ್ಮಾರಕದಲ್ಲಿ ಯೋಧರು ಮತ್ತು ಪೊಲೀಸರಿಗೆ ಪುಷ್ಪನಮನ ಸಲ್ಲಿಸಿದರು. ಈ ವೇಳೆ ಉಪಮುಖ್ಯಮಂತ್ರಿಗಳಾದ ದೇವೇಂದ್ರ ಫಡ್ನವೀಸ್, ಅಜಿತ್ ಪವಾರ್ ಹಾಗೂ ಹಿರಿಯ ಪೊಲೀಸ್ ಅಧಿಕಾರಿಗಳು ಹಾಜರಿದ್ದರು. ರಾಷ್ಟ್ರಪತಿ ದ್ರೌಪದಿ ಮುರ್ಮು ಕೂಡ ಹುತಾತ್ಮರಿಗೆ ಶ್ರದ್ಧಾಂಜಲಿ ಸಲ್ಲಿಸಿದ್ದಾರೆ. ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ನವೆಂಬರ್ 26, 2008ರಂದು ಮುಂಬೈನಲ್ಲಿ ನಡೆದ ಹೇಡಿತನದ ಭಯೋತ್ಪಾದನಾ ದಾಳಿಯ ವಾರ್ಷಿಕೋತ್ಸವದಂದು ಇಡೀ ರಾಷ್ಟ್ರದೊಂದಿಗೆ ಸೇರಿ ಪ್ರಾಣ ಕಳೆದುಕೊಂಡ ವೀರ ಹೃದಯಿಗಳಿಗೆ ಶ್ರದ್ಧಾಂಜಲಿ ಸಲ್ಲಿಸುತ್ತೇನೆ, ಕುಟುಂಬಗಳೊಂದಿಗೆ ಒಗ್ಗಟ್ಟನ್ನು ವ್ಯಕ್ತಪಡಿಸುತ್ತೇನೆಂದು ಹೇಳಿದ್ದಾರೆ.

ಜನರ ಜೀವ ರಕ್ಷಿಸುವ ಸಂದರ್ಭದಲ್ಲಿ ಹುತಾತ್ಮರಾದ ವೀರ ಯೋಧರಿಗೆ ಗೌರವ ಸಲ್ಲಿಸುತ್ತೇನೆ. ಭಯೋತ್ಪಾದನೆಯನ್ನು ಎಲ್ಲಾ ರೂಪಗಳಲ್ಲಿ ಸೋಲಿಸಲು ಭಾರತ ಬದ್ಧವಾಗಿದೆ ಎಂದು ತಿಳಿಸಿದ್ದಾರೆ. ಇದರಂತೆ ವೀರ ಯೋಧರಿಗೆ ಕೇಂದ್ರ ಸಚಿವ ಅಮಿತ್ ಶಾ ಹಾಗೂ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರೂ ಶ್ರದ್ಧಾಂಜಲಿ ಸಲ್ಲಿಸಿದ್ದಾರೆ. ಪಾಕಿಸ್ತಾನದ ಕರಾಚಿಯಿಂದ ಸಮುದ್ರ ಮಾರ್ಗದ ಮೂಲಕ ಬಂದಿದ್ದ 10 ಮಂದಿ ಲಷ್ಕರ್–ಇ–ತೊಯ್ಬಾ ಉಗ್ರರು 2008ರ ನ.26ರಂದು ಮುಂಬೈನ ತಾಜ್ ಹೋಟೆಲ್, ಶಿವಾಜಿ ಟರ್ಮಿನಲ್ ಸೇರಿದಂತೆ 12 ಸ್ಥಳಗಳ ಮೇಲೆ ದಾಳಿ ನಡೆಸಿದ್ದರು. ಈ ದಾಳಿಯಲ್ಲಿ ವಿದೇಶಿಗರೂ ಸೇರಿದಂತೆ 174 ಮಂದಿ ನಾಗರಿಕರು ಸಾವನ್ನಪ್ಪಿದ್ದರು.

ಸಮುದ್ರ ಮಾರ್ಗದಿಂದ ಬಂದ ಈ ದುಷ್ಕರ್ಮಿಗಳು ತಾಜ್ ಮಹಲ್ ಹೋಟೆಲ್, ಒಬೇರಾಯ್ ಹೋಟೆಲ್, ಲಿಯೋಪೋಲ್ಡ್ ಕೆಫೆ, ನಾರಿಮನ್ ಹೌಸ್, ಛತ್ರಪತಿ ಶಿವಾಜಿ ರೈಲ್ವೆ ಟರ್ಮಿನಸ್ ಮೊದಲಾದ ಕಡೆ ಮನಬಂದಂತೆ ಬಂದೂಕು ಮತ್ತು ಬಾಂಬಿನ ಮೂಲಕ ದಾಳಿ ನಡೆಸಿದರು. ಒಟ್ಟು ನಾಲ್ಕು ದಿನಗಳ ಕಾಲ ದಾಳಿ ನಡೆಸಿದ್ದರು.

ಈ ದುರ್ಘಟನೆಯಲ್ಲಿ ಆರು ಮಂದಿ ಅಮೆರಿಕಾದ ನಾಗರಿಕರು, ಹಲವು ವಿದೇಶೀಯರೂ ಸೇರಿದಂತೆ 166 ಜನರು ಸಾವಿಗೀಡಾಗಿದ್ದರು. 300ಕ್ಕೂ ಅಧಿಕ ಜನರು ಗಾಯಾಳುಗಳಾಗಿದ್ದರು. ಭಾರತದ ಇತಿಹಾಸದಲ್ಲಿ ಕರಾಳ ಅಧ್ಯಾಯ ಆಗಿತ್ತು. ಇಂದಿಗೆ ಆ ಘಟನೆ ನಡೆದು 16 ವರ್ಷಗಳು ಕಳೆದಿವೆ. ಗಾಯ ಮಾಸಿದರೂ, ಗಾಯದ ಗುರುತುಗಳು ಹಾಗೇ ಇವೆ. ಇಂದಿಗೂ ಉಗ್ರರು ತಮ್ಮ ಕ್ರೌರ್ಯ ಮೆರೆಯುತ್ತಿದ್ದಾರೆ.

2008 ನ.21ರಂದು ಪಾಕಿಸ್ತಾನದ 10 ಮಂದಿ ಉಗ್ರರು ಬೋಟ್ ಮೂಲಕ ಭಾರತದತ್ತ ಪ್ರಯಾಣಿಸಿದ್ದರು. ಗುರುತು ಮರೆಸಿಕೊಂಡು ಮುಂಬೈಯನ್ನು ಪ್ರವೇಶಿಸಿದ ಉಗ್ರರು ಮೂರು ದಿನಗಳ ಕಾಲ ಹೋಟೆಲ್, ರೈಲ್ವೆ ನಿಲ್ದಾಣ, ಆಸ್ಪತ್ರೆ, ಯಹೂದಿ ಸಮುದಾಯ ಕೇಂದ್ರ ಸೇರಿದಂತೆ 10ಕ್ಕೂ ಹೆಚ್ಚು ಕಡೆ ಬಾಂಬ್ ಮತ್ತು ಗುಂಡಿನ ದಾಳಿ ನಡೆಸಿದರು. ಒಟ್ಟು 174 ಜನರ ಸಾವಿಗೆ ಕಾರಣರಾದರು. ದಾಳಿಯಲ್ಲಿ 300ಕ್ಕೂ ಹೆಚ್ಚು ಜನರು ಗಾಯಗೊಂಡರು.

ತಾಜ್, ಒಬೇರಾಯ್‌ನಂತಹ ಹೋಟೆಲ್‌ಗಳು ಉಗ್ರರ ಗುಂಡಿನ ದಾಳಿ ಮತ್ತು ಬಾಂಬ್ ಬ್ಲಾಸ್ಟ್‌ಗೆ ಹೊತ್ತಿ ಉರಿದವು. ಜನರು ಉಗ್ರರ ಕಪಿಮುಷ್ಟಿಯಲ್ಲಿ ನರಳಿ ಅಕ್ಷರಶಃ ನರಕ ದರ್ಶನ ಕಂಡರು.ರಕ್ಷಣೆಗೆ ಹೋದ ನಮ್ಮ ಸೈನಿಕರು ಕೂಡ ಹುತಾತ್ಮರಾದರು. ದಾಳಿ ವಿಚಾರ ತಿಳಿಯುತ್ತಲೇ ಜನರ ರಕ್ಷಣೆಗೆ ಆಗಮಿಸಿದ ಪೊಲೀಸ್ ಅಧಿಕಾರಿಗಳಾದ ಹೇಮಂತ್ ಕರ್ಕರೆ, ವಿಜಯ್ ಸಾಲಸ್ಕರ್, ಅಶೋಕ್ ಕಾಮ್ಟೆ ಮತ್ತು ತುಕಾರಾಮ್ ಓಂಬ್ಳೆ ಮತ್ತು ಯೋಧ ಸಂದೀಪ್ ಉನ್ನಿ ಕೃಷ್ಣನ್ ಉಗ್ರರಿಂದ ಹತರಾದರು. ಈ ಉಗ್ರಗಾಮಿ ಕೃತ್ಯವನ್ನು ಇಡೀ ವಿಶ್ವವೇ ಖಂಡಿಸಿತ್ತು.

ಉಗ್ರರು ಹಾರಿಸಿದ ಗುಂಡುಗಳು ಎದೆಯನ್ನು ಸೀಳಿದರೂ ಅಪ್ರತಿಮ ಶೌರ್ಯ ತೋರಿದ ತುಕಾರಾಮ್ ಕೊನೆಯುಸಿರೆಳೆಯುವ ಹಂತದಲ್ಲಿದ್ದರೂ ಕಸಬ್‌ನ ಮೇಲೆ ಗುಂಡು ಹಾರಿಸಿ, ಆತನನ್ನು ಸೆರೆಹಿಡಿಯುವಂತೆ ಮಾಡಿದರು.

ಈ ಕಾರಣಕ್ಕಾಗಿ ಭಾರತ ಸರ್ಕಾರವು 2009ರಲ್ಲಿ ಓಂಬ್ಳೆಗೆ ಅಶೋಕ ಚಕ್ರ ಗೌರವ ನೀಡಿತು. ತಾಜ್ ಹೋಟೆಲ್, ರೈಲು ನಿಲ್ದಾಣಗಳು ಮತ್ತು ಪ್ರವಾಸಿ ತಾಣಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿ 58 ಜನರನ್ನು ಬಲಿ ಪಡೆದಿದ್ದ ಅಜ್ಮಲ್ ಕಸಬ್‌ನನ್ನು 2012 ನವೆಂಬರ್ 21ರಂದು ಪುಣೆಯ ಯೆರವಾಡ ಜೈಲಿನಲ್ಲಿ ಗಲ್ಲಿಗೇರಿಸಲಾಯಿತು.